ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಮೇ 14 ಬುಧವಾರ 2025

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 28 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಹಾಸನ ಮಿತ್ರ

ಹಾಸನದಲ್ಲಿ ಬುದ್ಧ ಜಯಂತಿ ಆಚರಣೆ

ನೀತಿವಂತರಾಗಿರಿ, ಮಾರಕವಾಗಬೇಡಿ: ಎಂ.ಚಂದ್ರೇಗೌಡ



ಹಾಸನಾಂಬ ಕಲಾಕ್ಷೇತ್ರದಲ್ಲಿ ಭಗವಾನ್ ಬುದ್ಧ ಜಯಂತಿ ಆಚರಿಸಲಾಯಿತು.

ಹಾಸನ: ಮಹನೀಯರ ಮಾತಿನಂತೆ ಎಲ್ಲರೂ ನೀತಿವಂತರಾಗಿರಬೇಕು, ಸನ್ಮಾರ್ಗದಲ್ಲಿ ನಡೆಯಬೇಕೆಂಬುದ ಮರೆತು ಮಾರಕವಾಗಿ ನಡೆಯುತ್ತಿದ್ದೇವೆ ಎಂದು ನಗರಸಭೆ ಅಧ್ಯಕ್ಷ ಎಂ.ಚಂದ್ರೇಗೌಡ ಬೇಸರ ವ್ಯಕ್ತಪಡಿಸಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಜಿಲ್ಲಾಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸುಮಾರು 6ನೇ ಶತಮಾನ ಎರಡು ಸಾವಿರ ವರ್ಷಗಳ ಹಿಂದೆ ಬುದ್ಧ ಆಡಿದ ಮಾತುಗಳು ಇಂದಿಗೂ ಪ್ರಸ್ತುತ. ಆ ರೀತಿ ನಾವು ಬದುಕು ಸಾಗಿಸಬೇಕಾಗಿದೆ. ಸರಿಯಾದ ಕ್ರಿಯೆ, ಆಲೋಚನೆ, ದೃಷ್ಟಿ, ಸವಿಸ್ತಾರವಾದ ಚಿಂತನೆ, ಏಕಾಗ್ರತೆ, ಜೀವನ ಉಪಾಯ ಇಂತಹ ಅಷ್ಟ ಮಾರ್ಗಗಳನ್ನು ಬುದ್ಧ ಹಾಕಿಕೊಟ್ಟಿದ್ದಾರೆ ಎಂದು ಕಿವಿಮಾತು ಹೇಳಿದರು.

ಬೆಂಗಳೂರಿನ ಅಕ್ಕ ಐ.ಎ.ಎಸ್. ಅಕಾಡೆಮಿ ಮುಖ್ಯಸ್ಥ ಡಾ.ಶಿವಕುಮಾರ್ ಮಾತನಾಡಿದರು. ಧಮ್ಮ ಬೋಧಿ ಮತ್ತು ಬಿಕ್ಕು ಸಂಘದ ಪೂಜ್ಯ ಬಿಕ್ಕು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಭಗವಾನ್ ಬುದ್ಧ ಜಯಂತಿ ಅಂಗವಾಗಿ ಕಲಾಭವನದ ಆವರಣದಲ್ಲಿ ಹೊಯ್ಸಳ ಚಿತ್ರಕಲಾ ಪರಿಷತ್ತಿನ ಚಿತ್ರಕಲಾ ಪ್ರದರ್ಶನವನ್ನು ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ, ಜಿಲ್ಲಾ ಪಂಚಾಯತ್ ಉಪನಿರ್ದೇಶಕ ಚಂದ್ರಶೇಖರ್, ದಮ್ಮಾಚಾರಿ, ಭಾರತೀಯ ಬೌದ್ಧ ಮಹಾಸಭಾ ಅಧ್ಯಕ್ಷ ಬಸವರಾಜು, ಬೌದ್ಧ ಮಹಾಸಭಾ ಜಿಲ್ಲಾಧ್ಯಕ್ಷ ಮಲ್ಲಯ್ಯ ಬೌದ್ಧ, ಎನ್.ಬಿ.ವೀರಭದ್ರಯ್ಯ, ಅನಂತಸ್ವಾಮಿ, ತೋಟೇಶ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ದೂದ್ ಪೀರ್, ಜಿಲ್ಲಾ ಸರಕಾರಿ ನೌಕರರ ಸಂಘದ ಖಜಾಂಚಿ ಕೆ.ಆರ್.ಹೇಮಂತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಹೆಚ್.ಪಿ.ತಾರನಾಥ್, ಹೆಚ್.ಎಲ್.ಮಲ್ಲೇಶ್‌ಗೌಡ ಇತರರಿದ್ದರು.

ಲಕ್ಷ್ಮಿನರಸಿಂಹ ಸ್ವಾಮಿಯ ಬ್ರಹ್ಮ ರಥೋತ್ಸವ



ಜಾವಗಲ್: ಜಾವಗಲ್‌ನಲ್ಲಿರುವ ಲಕ್ಷ್ಮೀನರಸಿಂಹಸ್ವಾಮಿ ಬ್ರಹ್ಮ ರಥೋತ್ಸವ ನೂರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ಹಗಲು ನಿತ್ಯೋತ್ಸವ ಸೇವೆಯೊಂದಿಗೆ ಆರಂಭವಾದ ಲಕ್ಷ್ಮೀನರಸಿಂಹ ಸ್ವಾಮಿಯ ಧಾರ್ಮಿಕ ವಿಧಿ ವಿಧಾನಗಳು ಗರುಡ ಧ್ವಜಾರೋಹಣ, ಶೇಷವಾಹನೋತ್ಸವ, ಚಂದ್ರಮಂಡಲೋತ್ಸವ, ಪ್ರಹ್ಲಾದ ಪರಿಪಾಲನೋತ್ಸವ, ಗರುಡೋತ್ಸವ, ಕಲ್ಯಾಣೋತ್ಸವ, ಗಜವಾಹನೋತ್ಸವ, ಸೂರ್ಯ ಮಂಡಲೋತ್ಸವ, ಶಾಂತೋತ್ಸವ, ಅಷ್ಟಾವಧಾನ ಸೇವೆ, ಮಹಾ ನೈವೇದ್ಯ, ಪೂರ್ವಕ ಮಹಾ ಮಂಗಳಾರತಿ ಹೀಗೆ ಆರು ದಿನಗಳ ಕಾಲ ದೇವಾಲಯದಲ್ಲಿ ಅನೇಕ ಧಾರ್ಮಿಕ ವಿಧಿ ವಿಧಾನಗಳನ್ನು ನೆರವೇರಿಸಲಾಯಿತು.

ಕೊನೆಗೆ ಅಲಂಕೃತಗೊಂಡ ರಥದಲ್ಲಿ ಲಕ್ಷ್ಮೀನರಸಿಂಹ ಸ್ವಾಮಿಯ ಉತ್ಸವ ಮೂರ್ತಿಯನ್ನು ಇರಿಸಲಾಯಿತು. ನಂತರ ಭಕ್ತರು ಬ್ರಹ್ಮ ರಥೋತ್ಸವವನ್ನು ಶ್ರದ್ಧಾಭಕ್ತಿಯಿಂದ ಎಳೆದು ಧನ್ಯತಾ ಭಾವ ಮೆರೆದು, ಸಂಭ್ರಮಿಸಿದರು. ರಥೋತ್ಸವಕ್ಕೆ ಆಗಮಿಸಿದ್ದ ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ನಿಧನ



ಆರ್.ಪುರುಷೋತ್ತಮ್

ಮೈಸೂರು, ಮೇ 13– ಯೂನಿವರ್ಸಿಟಿ ಸ್ಕೂಲ್ ಆಫ್ ಡಿಸೈನ್‌ನ ಮೈಸೂರು ಸ್ಕೂಲ್ ಆಫ್ ಆರ್ಕಿಟೆಕ್ಚರ್ ಸಂಸ್ಥೆ ಆಡಳಿತಾಧಿಕಾರಿ ಹಾಗೂ ಪಡುವಾರಹಳ್ಳಿ ನಿವಾಸಿ ಆರ್. ಪುರುಷೋತ್ತಮ್ (45) ಮಂಗಳವಾರ ನಿಧನರಾದರು.

ಮೃತರು ತಂದೆ–ತಾಯಿ, ಪತ್ನಿ ದಿವ್ಯ, ಇಬ್ಬರು ಸಹೋದರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆಯನ್ನು ಮದ್ದೂರಿನ ಹುಲಿಯೂರು ದುರ್ಗಾ ಸಮೀಪದ ಹುಟ್ಟೂರಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವಿ.ವಸಂತ ಬಾಯಿ



ಮೈಸೂರಿನ ಬೋಗಾದಿ ನಿವಾಸಿ ಹಾಗೂ ಡಿ. ದೇವರಾಜ ಅರಸು ರಸ್ತೆಯಲ್ಲಿರುವ ವಸಂತ್ ಗ್ರಾಫಿಕ್ಸ್‌ನ ದಿವಂಗತ ಬಿ. ವಿಠ್ಠಲ್ ಲಾಲ್ ಅವರ ಪತ್ನಿ ವಿ.ವಸಂತ ಬಾಯಿ (84) ಸೋಮವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು, ಮರಿಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಇವರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ಮಂಗಳವಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶ್ರೀಮತಿ ಉಮಾ



ಆಕಾಶವಾಣಿ ನಿವೃತ್ತ ಕಾರ್ಯಕ್ರಮ ಅಧಿಕಾರಿ ಹಾಗೂ ಅಭಿರುಚಿ ಬಳಗದ ಕಾರ್ಯದರ್ಶಿ ಎನ್.ವಿ.ರಮೇಶ್ ಅವರ ಪತ್ನಿ ಶ್ರೀಮತಿ ಉಮಾ ಮಂಗಳವಾರ ಬೆಳಗ್ಗೆ ಕುವೆಂಪುನಗರದ ತಮ್ಮ ಸ್ವಗೃಹದಲ್ಲಿ ನಿಧನರಾದರು. ಮೃತರು ಪತಿ ಎನ್.ವಿ.ರಮೇಶ್ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಶಾಂತಿವನದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಎಸ್.ಕೃಷ್ಣಮೂರ್ತಿ

ಮೈಸೂರು ನಗರ ವೀರನಗೆರೆ ನಿವಾಸಿ ಎಸ್.ಕೃಷ್ಣಮೂರ್ತಿ (75) ಮಂಗಳವಾರ ನಿಧನರಾದರು. ಮೃತರ ಅಂತ್ಯಕ್ರಿಯೆ ಇಂದು ಮಧ್ಯಾಹ್ನ 1 ಗಂಟೆಗೆ ಎನ್.ಆರ್. ಮೊಹಲ್ಲಾದ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರು ಪತ್ನಿ ಮೀನಾಕ್ಷಿ, ಪುತ್ರರಾದ ರಾಘವೇಂದ್ರ, ರಂಜನ್, ಪ್ರಸನ್ನ ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ.

ಪಂಡಿರ ವನಜಾ ತಿಮ್ಮಯ್ಯ

ಮೈಸೂರಿನ ಹೂಟಗಳ್ಳಿ ಹೌಸಿಂಗ್ ಬೋರ್ಡ್, ಕೃಷ್ಣ ಬೇಕರಿ ರಸ್ತೆ, ಈಸ್ಟ್ ವೆಸ್ಟ್ ಸ್ಕೂಲ್ ಸಮೀಪದ ಮನೆ ನಂ.92/ಸಿ ನಿವಾಸಿ ದಿವಂಗತ ತಿಮ್ಮಯ್ಯ ಅವರ ಪತ್ನಿ, ಪಂಡಿರ ವನಜಾ ತಿಮ್ಮಯ್ಯ (72) ಮಂಗಳವಾರ ಬೆಳಗ್ಗೆ ನಿಧನರಾದರು.

ಮೃತರು ಮಕ್ಕಳಾದ ಪ್ರವೀಣ್ ಮತ್ತು ಪವಿತ್ರ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ವಿಜಯನಗರ 4ನೇ ಹಂತದಲ್ಲಿರುವ ಮುಕ್ತಿಧಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜಯದೇವ ಹೃದ್ರೋಗ ಸಂಸ್ಥೆಯ ಸಾವಿರಕ್ಕೂ ಅಧಿಕ ನರ್ಸ್‌ಗಳ ಕಾಯಂಗೆ ಚಿಂತನೆ

●ಸಂಸ್ಥೆ ನಿರ್ದೇಶಕ ಡಾ.ರವೀಂದ್ರನಾಥ್ ಮಾಹಿತಿ ●ಆಸ್ಪತ್ರೆ ಯಶಸ್ವಿ ಕಾರ್ಯನಿರ್ವಹಣೆಗೆ ನರ್ಸ್‌ಗಳ ಜವಾಬ್ದಾರಿ ಹಿರಿದು ●ಆಸ್ಪತ್ರೆಯಲ್ಲಿ ವಿಶ್ವ ದಾದಿಯರ ದಿನಾಚರಣೆ

ಮೈಸೂರು,ಮೇ 13(ಎಂಟಿವೈ)– ಜಯದೇವ ಸಂಸ್ಥೆಗೆ ಒಳ್ಳೆಯ ಹೆಸರು ಬರಲು ನರ್ಸ್‌ಗಳ ನಿಸ್ವಾರ್ಥ ಸೇವೆ ಕಾರಣವಾಗಿದ್ದು, ಸಂಸ್ಥೆಯಲ್ಲಿ 10 ವರ್ಷದಿಂದ ಸೇವೆ ಸಲ್ಲಿಸುತ್ತಿರುವ ಒಂದು ಸಾವಿರ ದಾದಿಯರನ್ನು ಕಾಯಂ ಮಾಡಲು ಸರ್ಕಾರ ಚಿಂತಿಸುತ್ತಿದೆ ಎಂದು ಜಯದೇವ ಹೃದ್ರೋಗ ಮತ್ತು ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ. ಕೆ.ಎಸ್. ರವೀಂದ್ರನಾಥ್ ತಿಳಿಸಿದ್ದಾರೆ.

ಮೈಸೂರಿನ ಕೆಆರ್‌ಎಸ್ ರಸ್ತೆಯ ಜಯದೇವ ಹೃದ್ರೋಗ ಮತ್ತು ವಿಜ್ಞಾನ ಸಂಸ್ಥೆಯ ಆವರಣದಲ್ಲಿ ಆಯೋಜಿಸಿದ್ದ ವಿಶ್ವ ದಾದಿಯರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನರ್ಸ್‌ಗಳಿಗೆ ಶುಭ ಹಾರೈಸಿ ಮಾತನಾಡಿದ ಅವರು, ಇಂದು ಜಯದೇವ ಆಸ್ಪತ್ರೆ ರಾಜ್ಯ ಮಾತ್ರವಲ್ಲದೇ ದೇಶದ ಜನರ ಮನೆ ಮಾತಾಗಿದೆ. ಆಸ್ಪತ್ರೆಯಲ್ಲಿ ಹೃದ್ರೋಗಕ್ಕೆ ಚಿಕಿತ್ಸೆ ಪಡೆದ ಅಪಾರ ಸಂಖ್ಯೆಯ ರೋಗಿಗಳು, ಸಾರ್ವಜನಿಕರು ಆಸ್ಪತ್ರೆಯ ಬಗ್ಗೆ ಪ್ರಶಂಸೆ ವ್ಯಕ್ತಪಡಿಸುತ್ತಿದ್ದಾರೆ. ಇದಕ್ಕೆಲ್ಲಾ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ದಾದಿಯರ ನಿಸ್ವಾರ್ಥ ಸೇವೆ ಕಾರಣ. ಆಸ್ಪತ್ರೆಯ ಸಿಬ್ಬಂದಿ ರೋಗಿಗಳು ಹಾಗೂ ಅವರ ಪೋಷಕರೊಂದಿಗೆ ನಗುಮುಖದ ಸೇವೆ ಕಲ್ಪಿಸುತ್ತಿದ್ದಾರೆ. ಹಾಗಾಗಿ ಆಸ್ಪತ್ರೆಗೆ ಒಳ್ಳೆಯ ಹೆಸರು ಬಂದಿದೆ ಎಂದರು.

ಜಯದೇವ ಆಸ್ಪತ್ರೆ ಎಂದರೆ ಜನರಲ್ಲಿ ನಂಬಿಕೆ ಇದ್ದು, ಅದನ್ನು ಪ್ರತಿಯೊಬ್ಬ ಸಿಬ್ಬಂದಿ ಉಳಿಸಿಕೊಳ್ಳಬೇಕು. ಜಯದೇವ ಆಸ್ಪತ್ರೆಗಳಲ್ಲಿ ಸುಮಾರು ಒಂದು ಸಾವಿರ ದಾದಿಯರು ಗುತ್ತಿಗೆ ಆಧಾರದಲ್ಲಿ ಕಳೆದ 10 ವರ್ಷದಿಂದ ಸೇವೆ ಸಲ್ಲಿಸುತ್ತಿದ್ದಾರೆ. ಅವರನ್ನು ಕಾಯಂ ಮಾಡಲು ಸರ್ಕಾರ ಚಿಂತನೆ ನಡೆಸಿದೆ. ನಿಮಗೆ ಈಗಾಗಲೇ ಹೆರಿಗೆ ರಜೆ 6 ತಿಂಗಳಿಗೆ ಹೆಚ್ಚಿಸಿದ್ದೇವೆ. ಪಿಎಫ್ ನೀಡುತ್ತಿದ್ದೇವೆ. ವಿಮಾ ಸೌಲಭ್ಯದ ವ್ಯವಸ್ಥೆ ಮಾಡಲಾಗಿದೆ. ನರ್ಸ್‌ಗಳು ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ನೀವು ವೈದ್ಯರಿಗಿಂತ ಹೆಚ್ಚಿನ ಸಮಯ ರೋಗಿಗಳೊಂದಿಗೆ ಕಳೆಯುವುದರಿಂದ ಪ್ರೀತಿಯಿಂದ ನೋಡಿಕೊಳ್ಳಿ. ದಾದಿಯರಿಗೆ ಪ್ರಪಂಚದಾದ್ಯಂತ ಸೇವೆ ಮಾಡಲು ಬೇಡಿಕೆ ಇದೆ. ಎಲ್ಲಿದ್ದರೂ ಚೆನ್ನಾಗಿ ಕೆಲಸ ಮಾಡಿ ಎಂದು ಶುಭ ಹಾರೈಸಿದರು.

ಇದೇ ವೇಳೆ ವೈದ್ಯಕೀಯ ಅಧೀಕ್ಷಕ ಡಾ. ಕೆ.ಎಸ್.ಸದಾನಂದ ಮಾತನಾಡಿ, ಮೈಸೂರಿನ ಜಯದೇವ ಆಸ್ಪತ್ರೆಯಲ್ಲಿ ಪ್ರತಿದಿನ ಸಾವಿರಾರು ಮಂದಿ ತಪಾಸಣೆಗೆಂದು ಬರುತ್ತಿದ್ದಾರೆ. ಮೈಸೂರು ಮಾತ್ರವಲ್ಲದೆ, ಮಂಡ್ಯ, ಚಾಮರಾಜನಗರ, ಕೊಡಗು ಹಾಗೂ ಹಾಸನವೂ ಸೇರಿದಂತೆ ವಿವಿಧ ಜಿಲ್ಲೆಗಳಿಂದಲೂ ರೋಗಿಗಳು ಆಸ್ಪತ್ರೆಗೆ ಬರುತ್ತಿದ್ದಾರೆ. ಆಸ್ಪತ್ರೆಯಲ್ಲಿ 2024ರಲ್ಲಿ 19,047 ಕ್ಯಾತ್ ಲ್ಯಾಬ್, 11,375 ಜನರಿಗೆ ಆಂಜಿಯೋಗ್ರಾಂ ಮಾಡಲಾಗಿದೆ.

6267 ಜನರಿಗೆ ಆಂಜಿಯೋಪ್ಲಾಸ್ಟಿ, 892 ರೋಗಿಗಳಿಗೆ ಸರ್ಜರಿ ಮಾಡಲಾಗಿದೆ. 2,32,129 ಜನ ಹೊರ ರೋಗಿಗಳಾಗಿ ಚಿಕಿತ್ಸೆ ಪಡೆದಿದ್ದಾರೆ. 20286 ಮಂದಿ ಒಳರೋಗಿಗಳಾಗಿ ಚಿಕಿತ್ಸೆ ಪಡೆದಿದ್ದಾರೆ. 1,82,963 ಜನರಿಗೆ ಇಸಿಜಿ, 8594 ರೋಗಿಗಳಿಗೆ ಟಿಎಂಟಿ ಮಾಡಲಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಜಯದೇವ ಆಸ್ಪತ್ರೆಯ ಆರ್ಥಿಕ ಸಲಹೆಗಾರರಾದ ಅವಿನಾಶ್ ಜೆರಾಲ್ಡ್, ಆರ್.ಎಂ.ಓ. ಡಾ.ಪಶುಪತಿ, ಡಾ.ದಿನೇಶ್, ಡಾ.ಜಯಪ್ರಕಾಶ್, ಡಾ.ಶ್ರೀನಾಥ್, ಡಾ.ಜಯಶೀಲನ್, ಡಾ.ರಶ್ಮಿ, ಡಾ.ದೇವರಾಜ್, ಯೋಗಲಕ್ಷ್ಮಿ, ಹರೀಶ್ ಕುಮಾರ್, ಪಿಆರ್‌ಓ ವಾಣಿಮೋಹನ್, ಚಂಪಕಮಾಲಾ ಹಾಗೂ ಆಸ್ಪತ್ರೆಯ ಇಂಜಿನಿಯರ್‌ಗಳು ಉಪಸ್ಥಿತರಿದ್ದರು.



ಮೈಸೂರಿನ ಕೆಆರ್‌ಎಸ್ ರಸ್ತೆಯಲ್ಲಿನ ಜಯದೇವ ಹೃದ್ರೋಗ–ವಿಜ್ಞಾನ ಸಂಸ್ಥೆಯ ಆವರಣದಲ್ಲಿ ಆಯೋಜಿಸಿದ್ದ ವಿಶ್ವ ದಾದಿಯರ ದಿನಾಚರಣೆ ಕಾರ್ಯಕ್ರಮವನ್ನು ಸಂಸ್ಥೆಯ ನಿರ್ದೇಶಕ ಡಾ.ಕೆ.ಎಸ್.ರವೀಂದ್ರನಾಥ್ ಉದ್ಘಾಟಿಸಿದರು.

ಅರ್ಜಿ ಆಹ್ವಾನ

ಮೈಸೂರು, ಮೇ 13– ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆ, ಕಾಲೇಜು (ಆಂಗ್ಲ ಮಾಧ್ಯಮ)/ ಮೊರಾರ್ಜಿದೇಸಾಯಿ ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ಅತಿಥಿ ಶಿಕ್ಷಕರ, ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಮೇ 19 ರೊಳಗೆ ಜಿಲ್ಲಾ ಕಚೇರಿಗೆ, ಸಂಬಂಧಪಟ್ಟ ಶಾಲೆಗಳಿಗೆ, ತಾಲೂಕು ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಿ ಅರ್ಜಿ ಪಡೆದು ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕಾಗಿದ್ದು, https://dom.karnataka.gov.in ಮೂಲಕ ಪಡೆಯಬಹುದು. ಮಾಹಿತಿಗೆ ದೂ.ಸಂಖ್ಯೆ: 0821–2422088/89510 87207/8762864253, 9741209826, 8277775750, 9620750 935, 6362661474 ಸಂಪರ್ಕಿಸಿ.

ಕಣ್ಣಿನ ತಪಾಸಣಾ ಶಿಬಿರ

ಮೈಸೂರು, ಮೇ 13– ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಮೇ 15ರಿಂದ 31ರವರೆಗೆ ಕಣ್ಣಿನ ದೃಷ್ಟಿಗೆ ಸಂಬಂಧಿಸಿದ ವಿಶೇಷ ಬೇಸಿಗೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಶಿಬಿರವು ಬೆಳಗ್ಗೆ 9ರಿಂದ ಸಂಜೆ 4.30ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 9448584801, ದೂ. 0821–2548231 ಸಂಪರ್ಕಿಸಬಹುದು.

ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ 80 ಹಾಸಿಗೆಯ ಡಾರ್ಮೆಟರಿ ನಿರ್ಮಾಣ

ರೋಗಿಗಳೊಂದಿಗೆ ಬರುವವರ ವಾಸ್ತವ್ಯಕ್ಕೆ ಅವಕಾಶ

ಮೈಸೂರು, ಮೇ13(ಎಂಟಿವೈ)– ಜಯದೇವ ಹೃದ್ರೋಗ ಆಸ್ಪತ್ರೆಗೆ ರೋಗಿಗಳೊಂದಿಗೆ ಬರುವ ಪೋಷಕರ ಅನುಕೂಲಕ್ಕಾಗಿ 4.5 ಕೋಟಿ ರೂ. ವೆಚ್ಚದಲ್ಲಿ ನಾಲ್ಕು ಅಂತಸ್ತಿನ 80 ಹಾಸಿಗೆಯುಳ್ಳ ಡಾರ್ಮೆಟರಿ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ ಎಂದು ಜಯದೇವ ಹೃದ್ರೋಗ ಮತ್ತು ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಕೆ.ಎಸ್.ರವೀಂದ್ರನಾಥ್ ತಿಳಿಸಿದ್ದಾರೆ.

ಮೈಸೂರಿನ ಕೆಆರ್‌ಎಸ್ ರಸ್ತೆಯ ಜಯದೇವ ಹೃದ್ರೋಗ ಮತ್ತು ವಿಜ್ಞಾನ ಸಂಸ್ಥೆಯ ಆವರಣದಲ್ಲಿ ನಿರ್ಮಿಸುತ್ತಿರುವ ಡಾರ್ಮೆಟರಿ ಕಾಮಗಾರಿ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ವಿವಿಧ ಬಗೆಯ ಹೃದ್ರೋಗ ಸಮಸ್ಯೆಗೆ ಒಳಗಾದ ರೋಗಿಗಳೊಂದಿಗೆ ಬರುವ ಪೋಷಕರಿಗೆ ವಾಸ್ತವ್ಯಕ್ಕೆ ಸ್ಥಳಾವಕಾಶದ ತೊಂದರೆ ಇತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿಶೇಷ ಆಸಕ್ತಿಯಿಂದ ಮೈಸೂರಲ್ಲಿ ನಿರ್ಮಾಣವಾಗಿರುವ ಜಯದೇವ ಆಸ್ಪತ್ರೆಯಲ್ಲಿ ಇದುವರೆಗೂ ಸಾವಿರಾರು ಮಂದಿ ಹೃದ್ರೋಗಿಗಳು ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಅಲ್ಲದೆ, ಆಸ್ಪತ್ರೆಗೆ ಬರುವ ರೋಗಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಇದೀಗ ರೋಗಿಗಳೊಂದಿಗೆ ಬರುವ ಪೋಷಕರ ವಾಸ್ತವ್ಯಕ್ಕೆ ಡಾರ್ಮೆಟರಿ ನಿರ್ಮಿಸಲಾಗುತ್ತಿದೆ ಎಂದರು.

4 ಅಂತಸ್ತಿನಲ್ಲಿ 4.5 ಕೋಟಿ ರೂ. ವೆಚ್ಚದಲ್ಲಿ ಡಾರ್ಮೆಟರಿ ಕಾಮಗಾರಿ ಆರಂಭವಾಗಿದ್ದು, ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಕಟ್ಟಡದ ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಸೂಚಿಸಲಾಗಿದ್ದು, ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ತಿಳಿಸಲಾಗಿದೆ. ಈ ಕಟ್ಟಡದಲ್ಲಿ 80 ಹಾಸಿಗೆ ವ್ಯವಸ್ಥೆ ಮಾಡಲಾಗುತ್ತದೆ. ಆಸ್ಪತ್ರೆಯಲ್ಲಿರುವ ರೋಗಿಗಳ ಪೋಷಕರು, ಪಾಲಕರು ಈ ಡಾರ್ಮೆಟರಿ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ. ಮೈಸೂರಿನ ಜಯದೇವ ಆಸ್ಪತ್ರೆಗೆ ಮೈಸೂರು ಮಾತ್ರವಲ್ಲದೆ, ಬೇರೆ ಬೇರೆ ಜಿಲ್ಲೆಗಳಿಂದಲೂ ಬರುವ ರೋಗಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಡಾರ್ಮೆಟರಿ ಅಗತ್ಯವಿತ್ತು. ಆ ಕಾರಣದಿಂದ ಕಾಮಗಾರಿ ಆರಂಭಿಸಲಾಗಿದೆ ಎಂದರು.

ಈ ವೇಳೆ ವೈದ್ಯಕೀಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ್, ಆರ್ಥಿಕ ಸಲಹೆಗಾರರಾದ ಅವಿನಾಶ್ ಜೆರಾಲ್ಡ್, ಡಾ. ದಿನೇಶ್, ಡಾ.ಪಶುಪತಿ, ಡಾ.ದೇವರಾಜ್, ಹರೀಶ್‌ಕುಮಾರ್ ಇತರರು ಉಪಸ್ಥಿತರಿದ್ದರು.



ಮೈಸೂರಿನ ಜಯದೇವ ಆಸ್ಪತ್ರೆ ಆವರಣದಲ್ಲಿ ರೋಗಿಗಳ ಪೋಷಕರ ವಾಸ್ತವ್ಯಕ್ಕಾಗಿ ನಿರ್ಮಿಸುತ್ತಿರುವ ಡಾರ್ಮೆಟರಿ ಕಾಮಗಾರಿಯನ್ನು ಜಯದೇವ ಹೃದ್ರೋಗ–ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಕೆ.ಎಸ್.ರವೀಂದ್ರನಾಥ್ ಪರಿಶೀಲಿಸಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.05.2025 ಬುಧವಾರ, ಮಳೆ ನಕ್ಷತ್ರ: ಕೃತ್ತಿಕ 11.05.2025 ರಿಂದ 24.05.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ,
ತಿಥಿ: ಬಿದಿಗೆ, ನಕ್ಷತ್ರ: ಅನೂರಾಧ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಆರ್ಟ್ ಆಫ್ ಲಿವಿಂಗ್ :** ವ್ಯಸನಮುಕ್ತ, ಕ್ವಿಟ್ ಟೊಬ್ಯಾಕೋ ಕಾರ್ಯಕ್ರಮ, ಸ್ಥಳ: ಆರ್ಟ್ ಆಫ್ ಲಿವಿಂಗ್ ಆಶ್ರಮ, ಬೆಳಗ್ಗೆ 7 ರಿಂದ.

■ **ಪುಸ್ತಕಂ ಶ್ರೀ ಸಂತಾನ ಗೋಪಾಲಕೃಷ್ಣಸ್ವಾಮಿ ದೇವಸ್ಥಾನ :** ಬೆಳಗ್ಗೆ 5.30 ರಿಂದ ದ್ವಾರಾರ್ಚನ, ಚತುಸ್ಥಾನಾರ್ಚನ, ಪೂರ್ಣಾಹುತಿ, ಮಹಾಕುಂಭ ಪ್ರೋಕ್ಷಣ, ಮಹಾನಿವೇದನ, ಶ್ರೀಜೀಯರ್ ಸ್ವಾಮಿಗಳ ಆಶೀರ್ವಚನ, ಸೇವಾರ್ಥಿಗಳಿಗೆ ಮರ್ಯಾದೆ, ಆಚಾರ್ಯಾದೀನಾಂ ಸನ್ಮಾನ, ಶಾತ್ತುಮುರೈ, ತೀರ್ಥಪ್ರಸಾದ ವಿನಿಯೋಗ, 6.30 ರಿಂದ ತಿರುವೀಧಿ ಉತ್ಸವ, ಸ್ಥಳ: ದೇವಸ್ಥಾನ, ಚಾಮರಾಜ ಮೊಹಲ್ಲಾ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಆರೋಗ್ಯಾಯುಷ್ಯ ಆರೋಗ್ಯ ವರ್ಧಕ ಶಿಬಿರ ಮತ್ತು ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗದಿಂದ ಕಣ್ಣಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ವಿಶೇಷ ಬೇಸಿಗೆ ಆರೋಗ್ಯ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ಶ್ರೀ ವಾಸುದೇವ ಮಹಾರಾಜ್ ಫೌಂಡೇಷನ್ :** ವಿಶ್ವ ಅಮ್ಮನ ದಿನಾಚರಣೆ ಅಂಗವಾಗಿ ಮಾತಾ ವಿಜಯಕುಮಾರಿ ವಿ. ರಾವ್ ಪ್ರಶಸ್ತಿ ಪ್ರದಾನ, ಮಾತೆಗೆ ಪುಷ್ಪಾರ್ಚನೆ : ಹಿರಿಯ ಸಮಾಜ ಸೇವಕ ಡಾ. ಕೆ. ರಘುರಾಂ ವಾಜಪೇಯಿ, ಪ್ರಶಸ್ತಿ ಪ್ರದಾನ : ಸಂಸ್ಕೃತ ವಿದುಷಿ ಡಾ. ಕೆ. ಲೀಲಾಪ್ರಕಾಶ್, ಅಧ್ಯಕ್ಷತೆ : ಯೋಗ ನರಸಿಂಹಸ್ವಾಮಿ ದೇವಸ್ಥಾನದ ಮುಖ್ಯ ಆಡಳಿತಗಾರ ಎನ್. ಶ್ರೀನಿವಾಸನ್, ಉಪಸ್ಥಿತರು : ಕಾಂಗ್ರೆಸ್ ಮುಖಂಡ ಎನ್.ಎಂ. ನವೀನ್ ಕುಮಾರ್, ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದ ಸಿಇಓ ಕೆ.ಆರ್. ಯೋಗನರಸಿಂಹನ್, ಸ್ಥಳ: ಜಿಲ್ಲಾ ಪತ್ರಕರ್ತರ ಭವನ, ತ್ಯಾಗರಾಜ ರಸ್ತೆ, ಮಧ್ಯಾಹ್ನ 12ಕ್ಕೆ.

■ **ಗಂಗೋತ್ರಿ ಗೆಳೆಯರ ಬಳಗ ಟ್ರಸ್ಟ್ :** ಕುರುಕ್ಷೇತ್ರ ಅಥವಾ ಶ್ರೀಮದ್ ಭಗವತ್ ಗೀತೋಪದೇಶ ಸುಂದರ ಪೌರಾಣಿಕ ನಾಟಕ, ಉದ್ಘಾಟನೆ : ಶಾಸಕ ಜಿ.ಟಿ. ದೇವೇಗೌಡ, ಮುಖ್ಯ ಅತಿಥಿಗಳು : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಕುಲಪತಿ ಪ್ರೊ. ಶರಣಪ್ಪ ಹಲಸೆ, ವಾಣಿಜ್ಯ ತೆರಿಗೆಗಳ ನಿವೃತ್ತ ಉಪ ಆಯುಕ್ತ ರಮೇಶ ನರಸಯ್ಯ, ಉಪಸ್ಥಿತರು : ಭೂ ಸ್ವಾಧೀನಾಧಿಕಾರಿ ಡಾ. ಎನ್.ಸಿ. ವೆಂಕಟರಾಜು, ಹೆಚ್.ಟಿ. ಪ್ರಭಾಕರ, ಉಪ ಆಯುಕ್ತರಾದ ಮಹಾದೇವ, ಬಿ.ಕೆ. ರುದ್ರಪ್ಪ, ಅಧ್ಯಕ್ಷತೆ : ಗಂಗೋತ್ರಿ ಗೆಳೆಯರ ಬಳಗದ ಅಧ್ಯಕ್ಷ ಪ್ರೊ. ಎಲ್.ಪಿ. ಮೋಹನ್ ಕುಮಾರ್, ಸ್ಥಳ: ಕಲಾಮಂದಿರ, ಮಧ್ಯಾಹ್ನ 2ಕ್ಕೆ.

■ **ಡಾ. ಕೆ. ಕೃಷ್ಣಮೂರ್ತಿ ಸಂಶೋಧನಾ ಪ್ರತಿಷ್ಠಾನ, ಶ್ರೀ ವಾಸುದೇವ ಮಹಾರಾಜ್ ಫೌಂಡೇಷನ್ :** ಆದಿಗುರು ಶ್ರೀ ಶಂಕರಾಚಾರ್ಯರು ಮತ್ತು ಶ್ರೀ ರಾಮಾನುಜಾಚಾರ್ಯರ ಜಯಂತ್ಯುತ್ಸವ, ಉದ್ಘಾಟನೆ : ಹಿರಿಯ ಸಮಾಜ ಸೇವಕ ಡಾ. ಕೆ. ರಘುರಾಂ ವಾಜಪೇಯಿ, ಶ್ರೀ ಶಂಕರರು ಹಾಗೂ ರಾಮಾನುಜರ ಕುರಿತು : ಸಂಸ್ಕೃತ ವಿದುಷಿ ಡಾ. ಕೆ. ಲೀಲಾಪ್ರಕಾಶ್ ಅವರಿಂದ ಪ್ರವಚನ, ಅಧ್ಯಕ್ಷತೆ : ಕಾಂಗ್ರೆಸ್ ಮುಖಂಡ ಎನ್.ಎಂ. ನವೀನ್ ಕುಮಾರ್, ಉಪಸ್ಥಿತರು : ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದ ಸಿಇಓ ಕೆ.ಆರ್. ಯೋಗನರಸಿಂಹನ್, ಸ್ಥಳ: ಶ್ರೀರಾಮಮಂದಿರ, ಜಯನಗರ, ಸಂಜೆ 5.30ಕ್ಕೆ.

■ **ರೋಟರಿ ಮೈಸೂರು ಮಿಡ್‌ಟೌನ್ :** ರೋಟರಿ ಮೈಸೂರು ಮಿಡ್‌ಟೌನ್ ವೀನಸ್ ಶ್ರಮಜೀವಿ ಪ್ರಶಸ್ತಿ ಪ್ರದಾನ ಸಮಾರಂಭ, ಮುಖ್ಯ ಅತಿಥಿಗಳು : ಸೇಫ್ ವ್ಹೀಲ್ಸ್ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕ ಬಿ.ಎಸ್. ಪ್ರಶಾಂತ್, ಪ್ರಶಸ್ತಿ ಪುರಸ್ಕೃತರು : ಸಹಾಯಕ ಸಬ್ ಇನ್ಸ್‌ಪೆಕ್ಟರ್ ವಿ.ಆರ್. ಶೇಷಾದ್ರಿ, ಸ್ವಯಂ ಸೇವಕ ಸಂಚಾರಿ ವಾರ್ಡನ್ ಅ. ಮಹೇಶ್ವರ, ಸ್ಥಳ: ರೋಟರಿ ಕೇಂದ್ರ, ಜೆಎಲ್‌ಬಿ ರಸ್ತೆ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ರಂಗ ದಿಗ್ಗಜರು–ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮರೆಯಬಾರದ ಮಹನೀಯರು, ಲೇಖನ –ಎಸ್. ರಾಮನಾಥ್, ನಿರೂಪಣೆ–ಉಮೇಶ್. ಎಸ್.ಎಸ್., ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ನಿತಿನ್ ರಾಜಾರಾಮ್ ಶಾಸ್ತ್ರೀ, ವ್ಯಾಖ್ಯಾನ–ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಚಿತ್ರಗೀತೆಗಳು, 9.00 ವಿಶೇಷ ಹಿಂದಿ ವಾರ್ತೆ, 9.10 ವಿಶೇಷ ಇಂಗ್ಲೀಷ್ ವಾರ್ತೆ, 9.20 ಮನೋನಂದನ ಪ್ರಾಯೋಜಿತ ಮಾನಸಿಕ ಆರೋಗ್ಯ ಕಾರ್ಯಕ್ರಮ, ಪ್ರಾಯೋಜಕರು: ಪ್ರೇರಣಾ ಆಸ್ಪತ್ರೆ ಮತ್ತು ಪ್ರೇರಣಾ ಫರ್ಟಿಲಿಟಿ ಮೈಸೂರು, ವಿಷಯ : ಮಿತಿಮೀರಿದ ಮಾಹಿತಿ ಪ್ರಹಾರದಿಂದ ಮಾನಸಿಕ ಆರೋಗ್ಯದ ಮೇಲೆ ದುಷ್ಪರಿಣಾಮ, ಭಾಗವಹಿಸುವ ತಜ್ಞರು–ಡಾ. ಅಭಿಜಿತ್. ಹೆಚ್.ಆರ್, ಮಾನಸಿಕ ಆರೋಗ್ಯ ತಜ್ಞರು. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಮೈಸೂರು ಎಂ. ನಾಗರಾಜು –ವೈಯೋಲಿನ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ: ನಾಗಮಂಗಲ ತಾಲೂಕು ಕಂಚಿನಕೋಟೆಯ ಅನ್ನಪೂರ್ಣ ಮತ್ತು ಸಂಗಡಿಗರಿಂದ ಭೈರವನ ಹಾಡು, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು–ಕೆ.ಬಿ. ಸುನೀತಾ ಆಚಾರ್ಯ, 2.40 ಚಿತ್ರಗೀತೆಗಳು, 3.00 ವಿಶೇಷ ಹಿಂದಿ ವಾರ್ತೆಗಳು, 3.10 ವಿಶೇಷ ಇಂಗ್ಲೀಷ್ ವಾರ್ತೆಗಳು, 3.20 ಕನ್ನಡ ಚಿತ್ರಗೀತೆಗಳು, 4.00 ಮಹಿಳಾರಂಗ–ಬದುಕು ಜಟಕಾಬಂಡಿ, ಭಾಗವಹಿಸುವವರು–ಸ್ವಯಂ ಉದ್ಯೋಗದಲ್ಲಿ ತೊಡಗಿರುವ ಅನ್ನಪೂರ್ಣ ಮತ್ತು ಅವರ ಪತಿಯೊಂದಿಗೆ ಸಂದರ್ಶನ, ಪ್ರಸ್ತುತಿ : ಜಾಂಪಣ್ಣ ಆಶೀಹಾಳ್, 4.45 ಹಿಂದಿ ಪಾಠ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಮೇವು ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಪಶು ಆಹಾರ ಉತ್ಪಾದನೆ ಹಾಗೂ ನಿರ್ವಹಣೆ ಈ ಕುರಿತು ಪಶು ವೈದ್ಯರಾದ ಡಾ. ಚನ್ನೇಗೌಡ ಅವರೊಂದಿಗೆ, ಸಂದರ್ಶನ. ಸಂದರ್ಶಕರು :ಎನ್. ಕೇಶವಮೂರ್ತಿ, 7.45 ನಕ್ಷತ್ರ ಲೋಕ–ಸಿನಿ ಸೆಲೆಬ್ರಿಟಿಗಳೊಂದಿಗೆ ಮಾತುಕತೆ, 8.00 ವಿಶೇಷ ಹಿಂದಿ ವಾರ್ತೆಗಳು, 8.10 ವಿಶೇಷ ಇಂಗ್ಲೀಷ್ ವಾರ್ತೆಗಳು, 8.20 ಹಿಂದಿ ಚಿತ್ರಗೀತೆಗಳು, 9.15 ವಿಶೇಷ ಸಂವಾದ ಕಾರ್ಯಕ್ರಮ, 10.00 ಸುದ್ದಿ ಆಧಾರಿತ ವಿಶೇಷ ಕಾರ್ಯಕ್ರಮ, ಸುಖಿಯೋಮೆ–ಇದರ ಧ್ವನಿ ಮುದ್ರಣ, 10.25 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಮೇ 14 ಬುಧವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 28 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

'ಆಪರೇಷನ್ ಸಿಂಧೂರ' ವಿಚಾರವಾಗಿ ಸೋಮವಾರ ದೇಶವನ್ನುದ್ದೇಶಿಸಿ ಭಾಷಣದ ಬಳಿಕ ಮಂಗಳವಾರ ಪಂಜಾಬ್ ಆದಂಪುರ್‌ನ ವಾಯುನೆಲೆಯಲ್ಲಿ

ಯೋಧರಿಗೆ ಮೋದಿ ಸಲ್ಯೂಟ್



- ಯೋಧರ ಶೌರ್ಯವನ್ನು ಕೊಂಡಾಡಿದ ಪ್ರಧಾನಿ; ಮೊಳಗಿದ ಭಾರತ್ ಮಾತಾ ಕೀ ಜೈ
- ಭಯೋತ್ಪಾದಕರಿಗೆ ಯಾವುದೇ ಸ್ಥಳ ಸುರಕ್ಷಿತವಲ್ಲ ಎಂಬುದನ್ನು ಸಾಬೀತು ಮಾಡಿದ್ದೀರಿ
- ಈ ಕಾರ್ಯಾಚರಣೆ ಯಶಸ್ಸು ಭಾರತದ ಆತ್ಮವಿಶ್ವಾಸ, ಭಾರತೀಯರ ಏಕತೆ ಹೆಚ್ಚಿಸಿದೆ

ಪಂಜಾಬ್, ಮೇ 13– 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಯಶಸ್ಸು ಭಾರತದ ಆತ್ಮವಿಶ್ವಾಸ ಹಾಗೂ ಭಾರತೀಯರ ಏಕತೆಯನ್ನು ಹೆಚ್ಚಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ.

'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಕುರಿತು ದೇಶವನ್ನುದ್ದೇಶಿಸಿ ಮಾತನಾಡಿದ ಬೆನ್ನಲ್ಲೇ ಪ್ರಧಾನಿ ಮೋದಿ, ಮಂಗಳವಾರ ಬೆಳಗ್ಗೆ ದಿಢೀರ್ ಪಂಜಾಬ್‌ನಲ್ಲಿರುವ ಆದಂಪುರ ವಾಯುನೆಲೆಗೆ ಭೇಟಿ ನೀಡಿ ಯೋಧರೊಂದಿಗೆ ಮಾತುಕತೆ ನಡೆಸಿ, ಅವರ ಶೌರ್ಯವನ್ನು ಕೊಂಡಾಡಿದ್ದಾರೆ.

'ಆಪರೇಷನ್ ಸಿಂಧೂರ' ಸಾಮಾನ್ಯ ಮಿಲಿಟರಿ ಕಾರ್ಯಾಚರಣೆಯಲ್ಲ. ಇದು ಭಾರತದ ನೀತಿ, ಉದ್ದೇಶ ಹಾಗೂ ನಿರ್ಣಾಯಕತೆಯ ಸಂಗಮ. ನಮ್ಮ ಹೆಣ್ಣು ಮಕ್ಕಳ ಸಿಂಧೂರ ಅಳಿಸಿದವರಿಗೆ ಭಾರತ ತಕ್ಕ ಪಾಠ ಕಲಿಸಿದೆ. ಭಾರತೀಯ ವಾಯು ಪಡೆ, ದೇಶ ಹೆಮ್ಮೆ ಪಡುವಂತೆ ಮಾಡಿದೆ. ನಿಮ್ಮ(ಸೈನಿಕರು) ಶೌರ್ಯದ ಪ್ರತಿಧ್ವನಿ ವಿಶ್ವದೆಲ್ಲೆಡೆ ಕೇಳಿ ಬರುತ್ತಿದೆ ನಿಮ್ಮ ಶೌರ್ಯದ ಕಥೆಗಳು ಇತಿಹಾಸದಲ್ಲಿ ಶಾಶ್ವತವಾಗಿ ಉಳಿಯುತ್ತವೆ. 'ಆಪರೇಷನ್ ಸಿಂಧೂರ' ಕಾರ್ಯಾಚರಣೆಯ ಯಶಸ್ಸು ಪ್ರತಿಯೊಬ್ಬ ಯೋಧನಿಗೆ ಸಲ್ಲುತ್ತದೆ. ನಮ್ಮ ಭೂಸೇನೆ, ವಾಯುಪಡೆ ಮತ್ತು ನೌಕಾಪಡೆಯ ಎಲ್ಲಾ ಸಿಬ್ಬಂದಿಗೆ ನನ್ನ ಸಲ್ಯೂಟ್ ಎಂದು ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ■ 6ನೇ ಪುಟಕ್ಕೆ

ಮುಗಿಲು ಮುಟ್ಟಿದ 'ಭಾರತ್ ಮಾತಾ ಕಿ ಜೈ'

ಆದಂಪುರ ವಾಯುನೆಲೆಯಲ್ಲಿ ಪ್ರಧಾನಿ ಮೋದಿ ಅವರು ಸೈನಿಕರನ್ನು ಭೇಟಿಯಾದ ಸಂದರ್ಭದಲ್ಲಿ 'ಭಾರತ್ ಮಾತಾ ಕಿ ಜೈ' ಘೋಷಣೆ ಮುಗಿಲು ಮುಟ್ಟಿತ್ತು. 'ಭಾರತ್ ಮಾತಾ ಕಿ ಜೈ' ಘೋಷಣೆ ಕೂಗುವ ಮೂಲಕ ಭಾರತೀಯ ಸೇನೆಯ ಪರಾಕ್ರಮವನ್ನು ಮೋದಿ ಕೊಂಡಾಡಿದರು. ಈ ವೇಳೆ ಸೈನಿಕರ ಒಕ್ಕೊರಲಿನ ಜೈಕಾರ ಮಾರ್ದನಿಸಿತ್ತು. 'ಭಾರತೀಯ ಸೇನೆ 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಮೂಲಕ 'ಭಾರತ್ ಮಾತಾ ಕಿ ಜೈ' ಘೋಷಣೆಯ ತಾಕತ್ತನ್ನು ಇಡೀ ಜಗತ್ತು ನೋಡುವಂತೆ ಮಾಡಿದೆ. 'ಭಾರತ್ ಮಾತಾ ಕಿ ಜೈ' ಎಂಬುದು ಕೇವಲ ಘೋಷಣೆಯಲ್ಲ. ಇದು ನಮ್ಮ ಸೈನಿಕರು ದೇಶಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸುವುದಾಗಿ ಮಾಡಿರುವಂತಹ ಪ್ರತಿಜ್ಞೆ' ಎಂದು ಮೋದಿ ಹೆಮ್ಮೆಯಿಂದ ಹೇಳಿದರು.



'ಆಪರೇಷನ್ ಸಿಂಧೂರ' ಯಶಸ್ಸಿನ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಅವರು ಮಂಗಳವಾರ ಪಂಜಾಬ್‌ನ ಆದಂಪುರ ವಾಯುನೆಲೆಗೆ ತೆರಳಿ, ಯೋಧರ ಭೇಟಿಯಾಗಿ, ಅವರ ಶೌರ್ಯವನ್ನು ಪ್ರಶಂಸಿಸಿದರು.

ಇನ್ನೋವಾ ಮೇಲೆ ಉರುಳಿದ ಕಂಟೆನರ್; ಚಾಲಕ ಸಾವು; ಏಳು ಮಂದಿಗೆ ಗಾಯ



ಇನ್ನೋವಾದಲ್ಲಿ ಸಿಕ್ಕಿಹಾಕಿಕೊಂಡ ಚಾಲಕನ ದೇಹವನ್ನು ಹೊರತೆಗೆಯಲು ಹರಸಾಹಸ.

ನಂಜನಗೂಡು, ಮೇ 13– ಇನ್ನೋವಾ ಕಾರಿನ ಮೇಲೆ ಕಂಟೆನರ್ ಮಗುಚಿ ಬಿದ್ದ ಪರಿಣಾಮ ಸ್ಥಳದಲ್ಲೇ ಕಾರು ಚಾಲಕ ಸಾವನ್ನಪ್ಪಿ, ಒಂದೇ ಕುಟುಂಬದ 7 ಮಂದಿ ಗಾಯಗೊಂಡಿರುವ ಘಟನೆ ತಾಲೂಕಿನ ಸಿಂಧುವಳ್ಳಿಪುರದ ಬಳಿ ಬೆಂಗಳೂರು–ನೀಲಗಿರಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಮಂಗಳವಾರ ಸಂಭವಿಸಿದೆ.

ಕಾರು ಚಾಲಕ ದಿನೇಶ್(32) ಸಾವನ್ನಪ್ಪಿದರೆ, ಮಂಡ್ಯದ ಸುಭಾಷ್ ನಗರ ನಿವಾಸಿಗಳಾದ ತೇಜುಕುಮಾರ್, ಇತನ ಪತ್ನಿ ಆಕರ್ಷಿತ, ಪುತ್ರ ರುಶಾಂತ್, ಸಹೋದರ ಕುಶಾಲ್, ಪತ್ನಿ ಮಾನಸ, ಪುತ್ರಿ ರಿತಾನ್ಯ, ತೇಜುಕುಮಾರ್ ಚಿಕ್ಕಮ್ಮನ ಮಗಳು ಮಧುಶ್ರೀ ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡು ■ 6ನೇ ಪುಟಕ್ಕೆ

ಪಹಲ್ಗಾಮ್ ದಾಳಿಯ 3 ಉಗ್ರರ ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಇನಾಮು!

ಶ್ರೀನಗರ: ಇತ್ತೀಚೆಗೆ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದ ಮೂವರು ಉಗ್ರರ ಪೋಸ್ಟರ್‌ಗಳನ್ನು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಬಿಡುಗಡೆಗೊಳಿಸಿದ್ದು, ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಇನಾಮು ನೀಡುವುದಾಗಿ ಘೋಷಣೆ ಮಾಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏಪ್ರಿಲ್ 22ರಂದು ಪ್ರವಾಸಿಗರನ್ನು ಗುರಿಯಾಗಿಸಿ ಉಗ್ರರು ನಡೆಸಿದ ದಾಳಿಯಲ್ಲಿ 26 ಮಂದಿ ಮೃತಪಟ್ಟು, ಹಲವರು ಗಾಯಗೊಂಡಿದ್ದರು. ಉಗ್ರರ ದಾಳಿಯ ಬೆನ್ನಲ್ಲೇ ಭಾರತ ಹಾಗೂ ಪಾಕಿಸ್ತಾನದ ನಡುವೆ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ. ಇದರ ಬೆನ್ನಲ್ಲೇ ದಾಳಿಯಲ್ಲಿ ಭಾಗಿಯಾಗಿದ್ದ ಭಯೋತ್ಪಾದಕರನ್ನು ಪತ್ತೆ ಹಚ್ಚಲು ಜಮ್ಮು ಮತ್ತು ಕಾಶ್ಮೀರ ಪೊಲೀಸರು



ಮೂವರು ಶಂಕಿತ ಪಾಕ್ ಉಗ್ರರ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಿದ್ದಾರೆ.

ಪೋಸ್ಟರ್‌ನಲ್ಲಿರುವ ಉಗ್ರರ ಕುರಿತು ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಘೋಷಿಸಿದ್ದಾರೆ. ಜೊತೆಗೆ ಸುಳಿವು ಕೊಟ್ಟವರ ಮಾಹಿತಿಯನ್ನು ಗೌಪ್ಯವಾಗಿಡಲಾಗುವುದು ಎಂದೂ ಭರವಸೆ ನೀಡಿದ್ದಾರೆ. ಇದಕ್ಕೂ ಮೊದಲು ಲಷ್ಕರ್–ಎ–ತೊಯ್ಬಾ (ಎಲ್‌ಇಟಿ)ಗೆ ಸೇರಿದ ಮೂವರು ■ 6ನೇ ಪುಟಕ್ಕೆ

ಕಾಶ್ಮೀರದ ಶೋಪಿಯಾನ್‌ನಲ್ಲಿ ಎನ್‌ಕೌಂಟರ್; ಸೇನೆ ಗುಂಡಿಗೆ 3 ಎಲ್‌ಇಟಿ ಉಗ್ರರು ಬಲಿ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ಶೋಪಿಯಾನ್ ಜಿಲ್ಲೆಯಲ್ಲಿ ಭಾರತೀಯ ಸೇನಾಪಡೆ ಎನ್‌ಕೌಂಟರ್ ನಡೆಸಿದ್ದು, ಲಷ್ಕರ್–ಇ–ತೊಯ್ಬಾ ಉಗ್ರ ಸಂಘಟನೆಯ ಮೂವರು ಉಗ್ರರನ್ನು ಹತ್ಯೆ ಮಾಡಿದೆ ಎಂದು ಮಂಗಳವಾರ ತಿಳಿದುಬಂದಿದೆ. ಶೋಪಿಯಾನ್ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಜಮ್ಮು ಮತ್ತು ಕಾಶ್ಮೀರ ಪೊಲೀಸರು, ಭಾರತೀಯ ಸೇನೆ ಹಾಗೂ ಸಿಆರ್‌ಪಿಎಫ್ ಪಡೆ ಜಂಟಿಯಾಗಿ ಕಾರ್ಯಾಚರಣೆ ನಡೆಸುತ್ತಿದ್ದವು. ಭದ್ರತಾ ಪಡೆಗಳು ಶಂಕಿತರ ಸ್ಥಳಕ್ಕೆ ತೆರಳುತ್ತಿದ್ದಂತೆಯೇ ■ 6ನೇ ಪುಟಕ್ಕೆ

ಮೇ 27ರಂದು ರಾಜ್ಯಕ್ಕೆ ಮುಂಗಾರು ಪ್ರವೇಶ

16 ವರ್ಷದ ಬಳಿಕ 4 ದಿನ ಮುನ್ನ ರಾಜ್ಯಕ್ಕೆ ಮಳೆರಾಯ; ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆ ಸುಳಿವು

ಮೈಸೂರು, ಮೇ 13(ಬಿಎಲ್‌ಯು)– ಈ ವರ್ಷ ನೈರುತ್ಯ ಮುಂಗಾರು ನಾಲ್ಕು ದಿನ ಮುಂಚಿತವಾಗಿಯೇ ಕರ್ನಾಟಕವನ್ನು ಪ್ರವೇಶಿಸಲಿದೆ. ಕಳೆದ 16 ವರ್ಷದ ಬಳಿಕ ಈ ಬಾರಿ ನೈರುತ್ಯ ಮುಂಗಾರು ಮಾರುತ ಮುಂಚಿತವಾಗಿ ರಾಜ್ಯ ಪ್ರವೇಶಿಸುತ್ತಿದ್ದು, ರೈತರ ಮೊಗದಲ್ಲಿ ಮಂದಹಾಸ ಮೂಡಿದೆ.

ಸಮೃದ್ಧ ಮಳೆಯಾದರೆ ರೈತರಷ್ಟೆ ಅಲ್ಲ ನಾಡಿನಲ್ಲಿ ನೆಮ್ಮದಿ ಮನೆ ಮಾಡುತ್ತದೆ. ಮಳೆಯಾಗದಿದ್ದರೆ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಲಿದೆ.

ಈ ವರ್ಷ ಕರ್ನಾಟಕಕ್ಕೆ ಸಮೃದ್ಧ ಮಳೆಯಾಗಲಿದೆ ಎಂದು ಈಗಾಗಲೇ ಹವಾಮಾನ ಇಲಾಖೆ ಮುನ್ಸೂಚನೆ



ನೀಡಿದೆ. 837 ಮಿಲಿ ಮೀಟರ್ ವಾಡಿಕೆ ಮಳೆಯಾದರೆ, ಈ ಬಾರಿ ಇದಕ್ಕೂ ಹೆಚ್ಚು ಮಳೆಯಾಗುತ್ತದೆ ಎಂದು ಮೈಸೂರಿನ ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ತಾಂತ್ರಿಕ ಅಧಿಕಾರಿ ಡಾ.ಜಿ.ವಿ.ಸುಮಂತ್ ಕುಮಾರ್ ತಿಳಿಸಿದ್ದಾರೆ.

ಮಾರ್ಚ್, ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಪೂರ್ವ ಮುಂಗಾರು ವಾಡಿಕೆಯಂತೆ 137.4 ಮಿಲಿ ಮೀಟರ್ ■ 6ನೇ ಪುಟಕ್ಕೆ

ಹೆಚ್ಚುವರಿ ಎಸ್–400 ಕ್ಷಿಪಣಿ ಒದಗಿಸುವಂತೆ ರಷ್ಯಾಕ್ಕೆ ಭಾರತ ಮನವಿ

ನವದೆಹಲಿ: ಪಾಕ್ ವಿರುದ್ಧದ 'ಆಪರೇಷನ್ ಸಿಂಧೂರ' ಸೇನಾ ಕಾರ್ಯಾಚರಣೆ ಯಶಸ್ಸಿನ ಬೆನ್ನಲ್ಲೇ ಹೆಚ್ಚುವರಿ ಅತ್ಯಾಧುನಿಕ ಎಸ್–400 ಟ್ರಯಂಫ್ ಕ್ಷಿಪಣಿ ವ್ಯವಸ್ಥೆಯನ್ನು ಒದಗಿಸುವಂತೆ ರಷ್ಯಾಕ್ಕೆ ಭಾರತ ಮನವಿ ಮಾಡಿದೆ.

ಭಾರತದ ಮನವಿಯನ್ನು ರಷ್ಯಾ ಶೀಘ್ರವೇ ಪೂರೈಸುವ ಸಾಧ್ಯತೆ ಇದೆ ಎಂದು ಸುದ್ದಿಸಂಸ್ಥೆ 'ಸ್ಪುಟ್ನಿಕ್ ಇಂಡಿಯಾ' ವರದಿ ಮಾಡಿದೆ. 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಭಾರತೀಯ ಪಡೆಗಳು ಎಸ್–400 ಟ್ರಯಂಫ್ ಕ್ಷಿಪಣಿ ವ್ಯವಸ್ಥೆ, ಬರಾಕ್–8 ಹಾಗೂ ಆಕಾಶ್ ಕ್ಷಿಪಣಿಗಳನ್ನು ಬಳಸುತ್ತಿವೆ.

ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ದಾಳಿಗೆ ಪ್ರತ್ಯುತ್ತರ ನೀಡಲು ಭಾರತವು ಮೇ 7ರಂದು 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಆರಂಭಿಸಿದೆ. ಪಾಕಿಸ್ತಾನ ಪಡೆಗಳು ಭಾರತದ ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿ ಕ್ಷಿಪಣಿಗಳಿಂದ ದಾಳಿ ನಡೆಸುವ ಮೂಲಕ ಉದ್ವಿಗ್ನತೆ ಸೃಷ್ಟಿಗೆ ಯತ್ನಿಸಿದವು. ಆದರೆ, ಅತ್ಯಾಧುನಿಕ ಕ್ಷಿಪಣಿ ವ್ಯವಸ್ಥೆಗಳನ್ನು ಬಳಸುವ ಮೂಲಕ ಭಾರತವು ಶತ್ರು ಪಾಳಯದ ದಾಳಿಯನ್ನು ಸಮರ್ಥವಾಗಿ ತಡೆಯುತ್ತಿದೆ ಎಂದು ಮೂಲಗಳು ತಿಳಿಸಿವೆ.

ಭಾರತೀಯ ಸಶಸ್ತ್ರ ಪಡೆಗಳ ಬೆಂಬಲಿಸಿ ನಾಳೆ ಬೆಂಗಳೂರಲ್ಲಿ; ನಂತರ ರಾಜ್ಯಾದ್ಯಂತ ತಿರಂಗ ಯಾತ್ರೆ

ಬೆಂಗಳೂರು: ಆಪರೇಷನ್ ಸಿಂಧೂರ ಮತ್ತು ಸಶಸ್ತ್ರ ಪಡೆಗಳಿಗೆ ಬೆಂಬಲ ಸೂಚಿಸಲು ಬೆಂಗಳೂರಿನಲ್ಲಿ ತಿರಂಗ ಯಾತ್ರೆಯನ್ನು ಮೇ 15 ರಂದು ನಡೆಸಲಾಗುವುದು ಎಂದು ಬಿಜೆಪಿ ನಾಯಕ ಮತ್ತು ವಿರೋಧ ಪಕ್ಷದ ನಾಯಕ (ಎಲ್‌ಒಪಿ) ಆರ್. ಅಶೋಕ ಮಂಗಳವಾರ ಹೇಳಿದ್ದಾರೆ.



ಆರ್. ಅಶೋಕ

ಅದಾದ ಒಂದು ವಾರದ ಬಳಿಕ ರಾಜ್ಯದಲ್ಲಿ ಅಭಿಯಾನ ನಡೆಯಲಿದೆ. ಇದು ರಾಜಕೀಯೇತರ ಅಭಿಯಾನವಾಗಿದ್ದು, ಸಾರ್ವಜನಿಕರು ಭಾಗವಹಿಸುವಂತೆ ಒತ್ತಾಯಿಸಿದರು. ಆಪರೇಷನ್ ಸಿಂಧೂರ ಮತ್ತು ಸಶಸ್ತ್ರ ಪಡೆಗಳಿಗೆ ನಮ್ಮ ಬೆಂಬಲ ಸೂಚಿಸಲು, ನಾವು ಕರ್ನಾಟಕದಾದ್ಯಂತ ತಿರಂಗ ಯಾತ್ರೆಯನ್ನು ನಡೆಸುತ್ತೇವೆ. ಬೆಂಗಳೂರಿನಲ್ಲಿ, ನಾವು ಮೇ 15ರಂದು ಮತ್ತು ಅದರ ನಂತರ ಕರ್ನಾಟಕದ ಉಳಿದ ಸ್ಥಳಗಳಲ್ಲಿ ತಿರಂಗ ಯಾತ್ರೆಯನ್ನು ನಡೆಸುತ್ತೇವೆ. ಇದು ರಾಜಕೀಯೇತರವಾಗಿದ್ದು, ಎಲ್ಲ ಜನರು ಇದರಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಮೂಲಗಳ ಪ್ರಕಾರ, ಮೇ 13ರಿಂದ ಮೇ 23ರವರೆಗೆ ದೇಶದಾದ್ಯಂತ ಬಿಜೆಪಿ ಈ ಅಭಿಯಾನವನ್ನು ನಡೆಸಲಿದೆ.

ಸಂಬಿತ್ ಪಾತ್ರ, ಬಿಜೆಪಿ ಪ್ರಧಾನ ಕಾರ್ಯದರ್ಶಿ ವಿನೋದ್ ತಾವ್ಡೆ ಮತ್ತು ತರುಣ್ ಚುಗ್ ಸೇರಿದಂತೆ ಹಿರಿಯ ಬಿಜೆಪಿ ನಾಯಕರು ತಿರಂಗ ಯಾತ್ರೆಯನ್ನು ಸಂಯೋಜಿಸಲಿದ್ದಾರೆ. ಪ್ರಮುಖ ಕೇಂದ್ರ ಸಚಿವರು, ಬಿಜೆಪಿ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಪಕ್ಷದ ಹಿರಿಯ ನಾಯಕರು ದೇಶದ ವಿವಿಧ ಭಾಗಗಳಲ್ಲಿ ಮೆರವಣಿಗೆಗಳನ್ನು ಮುನ್ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಈ ತಿರಂಗಾ ಯಾತ್ರೆಯಲ್ಲಿ ಮಾಜಿ ಸೈನಿಕರು, ಸಾಮಾಜಿಕ ಕಾರ್ಯಕರ್ತರು ಮತ್ತು ಪ್ರಮುಖ ಸಾಮಾಜಿಕ ವ್ಯಕ್ತಿಗಳು ಭಾಗವಹಿಸಲಿದ್ದಾರೆ.

ಈ ಅಭಿಯಾನದ ಭಾಗವಾಗಿ, ಆಪರೇಷನ್ ಸಿಂಧೂರದ ಯಶಸ್ಸನ್ನು ಎತ್ತಿ ತೋರಿಸಲು ಬಿಜೆಪಿ ದೇಶದಾದ್ಯಂತ ಪತ್ರಿಕಾ ಗೋಷ್ಠಿಗಳನ್ನು ಆಯೋಜಿಸುತ್ತದೆ. ಹೆಚ್ಚಿನ ಪ್ರೇಕ್ಷಕರನ್ನು ತಲುಪಲು ಪಕ್ಷವು ಸಾಮಾಜಿಕ ಮಾಧ್ಯಮ ಪ್ರಭಾವಿಗಳನ್ನು ಸಹ ಬಳಸಿಕೊಳ್ಳುತ್ತದೆ ಎಂದು ಮೂಲಗಳು ತಿಳಿಸಿವೆ.

ಕದನ ವಿರಾಮ ವಿಚಾರದಲ್ಲಿ ಕಾಂಗ್ರೆಸ್‌ನ ಒಡಕು ಮಾತು ಸರಿಯಲ್ಲ

ಬೆಂಗಳೂರು ಮೇ 13 (ಕೆಎಂಶಿ)– ಕದನ ವಿರಾಮ ಘೋಷಣೆಯಾದ ಸಮಯದಲ್ಲಿ ಕಾಂಗ್ರೆಸ್ ನಾಯಕರ ಒಡಕು ಮಾತುಗಳು ಶೋಭೆ ತರುವುದಿಲ್ಲ ಎಂದು ರಾಜ್ಯ ಬಿಜೆಪಿ ಇಂದಿಲ್ಲಿ ಟೀಕಿಸಿದೆ.

ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ, ಮಾಜಿ ಉಪಮುಖ್ಯಮಂತ್ರಿ ಡಾ. ಅಶ್ವತ್ಥ್‌ನಾರಾಯಣ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಭಾರತ–ಪಾಕ್ ಯುದ್ಧಕ್ಕೆ ಸಂಬಂಧಿಸಿದಂತೆ ಕೇಂದ್ರದ ನಿರ್ಧಾರ ಮತ್ತು ನಮ್ಮ ಸೈನಿಕರ ಶೌರ್ಯವನ್ನು ಇಡೀ ರಾಷ್ಟ್ರ ಕೊಂಡಾಡುತ್ತಿದ್ದರೆ, ಕಾಂಗ್ರೆಸ್ ನಾಯಕರು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿ, ಇದೇ ವಿಷಯಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕರ ವಿರುದ್ಧ ಹರಿಹಾಯ್ದಿದ್ದಾರೆ.

ಮುಂದುವರೆದು ಮಾತನಾಡಿದ ಅಶೋಕ್ ಮತ್ತು ಅಶ್ವತ್ಥ ನಾರಾಯಣ, ಕಾಂಗ್ರೆಸ್ ನಾಯಕರು ಒಡಕು ಮಾತುಗಳನ್ನು ಆಡಬಾರದು. ಯುದ್ಧಕ್ಕೆ ಮುನ್ನ ಶಾಂತಿಯ ಮಾತು ಆಡುತ್ತಾರೆ, ಕದನ ವಿರಾಮವಾದಾಗ ಯುದ್ಧ ನಿಲ್ಲಿಸಿದ್ದೇಕೆ ಎಂದು ಪ್ರಶ್ನಿಸುತ್ತಾರೆ.


ಜೊತೆಗೆ ಅಧಿವೇಶನ ನಡೆಸಬೇಕೆಂದು ಕೇಳುತ್ತಾರೆ. ಆದರೆ ಇದು ಅಧಿವೇಶನ ನಡೆಸುವ ಸಮಯವಲ್ಲ. ನಮ್ಮ ಯೋಧರು ಸಾಕ್ಷಿಗಳನ್ನು ನೀಡಿದ್ದಾರೆ. ಇನ್ನು ಮುಂದೆ ಯಾರೂ ಸಾಕ್ಷಿ ಕೇಳಬಾರದು. ಪಾಕ್ ಆಕ್ರಮಿತ ಕಾಶ್ಮೀರವನ್ನು ವಾಪಸ್ ಪಡೆಯುವ ಬಗ್ಗೆ, ಸಿಂಧೂ ನದಿ ಒಪ್ಪಂದದ ಬಗ್ಗೆ ಪ್ರಧಾನಿ ಮೋದಿ ಈಗಾಗಲೇ ಸ್ಪಷ್ಟ ಸಂದೇಶ ನೀಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್‌ನವರು ರಾಜಕಾರಣ ಮಾಡುವುದು ಬಿಟ್ಟು ಯೋಧರಿಗೆ ಬೆಂಬಲ ನೀಡಬೇಕು. ಈ ಹಿಂದೆ ಪಿಒಕೆ ಬಿಟ್ಟುಕೊಟ್ಟಿದ್ದು, ಮುಂಬೈ ದಾಳಿ ಮೊದಲಾದವುಗಳ ಬಗ್ಗೆ ನಾವೇನೂ ಪ್ರಶ್ನೆ ಮಾಡುತ್ತಿಲ್ಲ. ಈ ಘಟನೆಗೆ ಇಂದಿರಾ ಗಾಂಧಿಯವರ ಹೋಲಿಕೆ ಮಾಡುವ ಅಗತ್ಯವಿಲ್ಲ. ಬಾಂಗ್ಲಾದೇಶದ ರಚನೆಯಾಯಿತು ಎನ್ನುವುದಾದರೆ ಪಿಒಕೆ ಯಾಕೆ ಬಿಟ್ಟಿದ್ದೀರಿ ಎಂಬ ಪ್ರಶ್ನೆ ಬರುತ್ತದೆ. ಆದರೆ ಇದರ ಬಗ್ಗೆ ನಾವ್ಯಾರೂ ಮಾತಾಡುತ್ತಿಲ್ಲ. ಇಂತಹ ಮಾತನಾಡಲು ಇದು ಸಮಯವೂ ಅಲ್ಲ ಎಂದರು.

ಸಿಎಂ ಸಿದ್ದರಾಮಯ್ಯ ಮೊದಲಿನಿಂದಲೂ ಯುದ್ಧ ಬೇಡ ಎಂದರು. ಕಾಂಗ್ರೆಸ್ ಪಕ್ಷ ಶಾಂತಿ ಎಂದು ಟ್ವೀಟ್ ಮಾಡಿತ್ತು. ಈ ನಡುವೆ ಸಚಿವ ಕೃಷ್ಣ ಭೈರೇಗೌಡ ಉಲ್ಟಾ ಮಾತಾಡುತ್ತಿದ್ದಾರೆ. ಇಲ್ಲಿ ನಾವು ಏನೇ ಮಾತಾಡಿದರೂ ಭಾರತೀಯ ಸೇನೆಯ ಅಧಿಕಾರಿಗಳು ತೀರ್ಮಾನ ಮಾಡುತ್ತಾರೆ. ಕದನ ವಿರಾಮ ಕೂಡ ಸೇನಾಧಿಕಾರಿಗಳು ಕೈಗೊಂಡ ತೀರ್ಮಾನವಾಗಿದೆ. ಕದನ ವಿರಾಮಕ್ಕೆ ಯಾರದ್ದೇ ಮಧ್ಯಸ್ಥಿಕೆ ಇರಲಿಲ್ಲ ಎಂದು ಪ್ರಧಾನಿ ಮೋದಿ ಸ್ಪಷ್ಟಪಡಿಸಿದ್ದಾರೆ. ಯಾರದ್ದೇ ಮಧ್ಯಸ್ಥಿಕೆಯನ್ನು ಭಾರತ ಒಪ್ಪಲ್ಲ ಎಂದರು.

ಪ್ರಧಾನಿ ನಿವಾಸದ ಮೇಲೆ ಬಾಂಬ್ ದಾಳಿ ಹೇಳಿಕೆ; ನವಾಜ್ ಜೈಲುಪಾಲು

ಬೆಂಗಳೂರು ಮೇ 13 (ಕೆಎಂಶಿ)– ಪ್ರಧಾನಿ ನರೇಂದ್ರ ಮೋದಿ ನಿವಾಸದ ಮೇಲೆ ಬಾಂಬ್ ದಾಳಿ ಮಾಡಬೇಕೆಂದು ವಿಡಿಯೋ ಹಾಕಿದ್ದ ನವಾಜ್ ಜೈಲು ಪಾಲಾಗಿದ್ದಾನೆ. ಮೋದಿ ನಿವಾಸದ ಮೇಲೆ ಬಾಂಬ್ ದಾಳಿ ಮಾಡಬೇಕೆಂದು ಆಕ್ಷೇಪಾರ್ಹ ಹೇಳಿಕೆ ನೀಡಿರುವ ವಿಡಿಯೋವನ್ನು ಪಬ್ಲಿಕ್ ಸರ್ವೆಂಟ್ ಎಂಬ ಸಾಮಾಜಿಕ ಮಾಧ್ಯಮಗಳಲ್ಲಿ ಹರಿಬಿಟ್ಟಿದ್ದನು. ಪೊಲೀಸರು ತಕ್ಷಣವೇ ನವಾಜ್‌ನನ್ನು ವಶಕ್ಕೆ ತೆಗೆದುಕೊಂಡು ವಿಚಾರಣೆ ನಡೆಸಿ, ಆತನನ್ನು ಜೈಲಿಗೆ ಕಳುಹಿಸಿದ್ದಾರೆ.



ವೈರಲ್ ಆಗಿರುವ ವಿಡಿಯೋದಲ್ಲಿ ಭಾರತ–ಪಾಕಿಸ್ತಾನ ಯುದ್ಧದಲ್ಲಿ ತೊಡಗಿವೆ ಹೀಗಿದ್ದೂ, ಪ್ರಧಾನಿಯವರ ನಿವಾಸದ ಮೇಲೆ ಇನ್ನೂ ಯಾಕೆ ಬಾಂಬ್ ದಾಳಿ ಮಾಡಿಲ್ಲ ಎಂದು ಪ್ರಶ್ನಿಸಿದ್ದಾನೆ.

ಜನರು ಶಾಂತಿಯುತವಾಗಿ ಬದುಕುತ್ತಿದ್ದಾಗ, ಯುದ್ಧದ ಪರಿಸ್ಥಿತಿಯನ್ನು ಪ್ರಧಾನಿಯವರೇ ಸೃಷ್ಟಿಸಿದ್ದಾರೆ. ಮೊದಲು ಅವರ ನಿವಾಸದ ಮೇಲೆ ಬಾಂಬ್ ದಾಳಿ ಮಾಡಬೇಕು ಎಂದಿದ್ದ.

ನಕ್ಕರೆ ಅದೇ ಸ್ವರ್ಗ

ಒಂದು ಲಾರಿ ಕೆಟ್ಟು ಹೋಗಿತ್ತು. ಅದನ್ನು ಎಳೆದುಕೊಂಡು ಹೋಗಲು ಮತ್ತೊಂದು ಲಾರಿ ಸಹಾಯದಿಂದ ಹಗ್ಗ ಹಾಕಿ ಎಳೆದುಕೊಂಡು ಹೋಗ್ತಾ ಇದ್ದರು.

ಇದನ್ನು ನೋಡಿದ ಗುಂಡ : ಒಂದು ಹಗ್ಗ ತಗೊಂಡು ಹೋಗೋಕೆ ಎರಡು ಲಾರಿ ಬೇಕಾಯಿತು ಇವರಿಗೆ ಅಂತ ನಕ್ಕ

ಮೈಸೂರು ಮಿತ್ರ

ಬುಧವಾರ, 14 ಮೇ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಯಾರಾದರೂ ನಿಮ್ಮ ಅರ್ಹತೆಯ ಬಗ್ಗೆ ಸಂದೇಹಪಟ್ಟರೆ ಬೇಸರ ಮಾಡಬೇಡಿ. ಯಾಕೆಂದರೆ, ಜನ ಚಿನ್ನದ ಪರಿಶುದ್ಧತೆಯ ಬಗ್ಗೆ ಸಂದೇಹಿಸುತ್ತಾರೆಯೇ ಹೊರತು ಕಬ್ಬಿಣದ್ದಲ್ಲ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕುಂಬಳಕಾಯಿ ಕಳ್ಳ ಅಂದರೆ ಹೆಗಲು ಮುಟ್ಟಿ ನೋಡಿಕೊಂಡನಂತೆ

ನಿಮ್ಮ ಪತ್ರಗಳು

■ ಐಪಿಎಲ್‌ಗೆ ಆತುರವೇಕೆ?

ಮಾನ್ಯರೆ,

ಭಾರತ–ಪಾಕ್ ನಡುವೆ ನಡೆಯುತ್ತಿರುವ ಸಂಘರ್ಷದ ಕಾರಣ ಮೊನ್ನೆ ಧರ್ಮ ಶಾಲಾದಲ್ಲಿ ನಡೆಯುತ್ತಿದ್ದ ಪಂದ್ಯವನ್ನು ಆಕಸ್ಮಿಕವಾಗಿ ಪಾಕ್ ಏನಾದರೂ ಕ್ಷಿಪಣಿ ದಾಳಿ ಮಾಡಿದರೆ ಅಪಾರ ಜೀವ ಹಾನಿಯಾಗಬಹುದು ಎಂಬ ಮುನ್ನೆಚ್ಚರಿಕೆ ಕ್ರಮವಾಗಿ ಸರ್ಕಾರ ಫ್ಲಡ್‌ಲೈಟ್‌ಗಳನ್ನು ಆರಿಸಿ ಪಂದ್ಯ ಅರ್ಧದಲ್ಲೇ ನಿಲ್ಲುವಂತೆ ಮಾಡಿತ್ತು. ಆದರೆ ಇದನ್ನು ಅರಿತಿದ್ದರೂ ನೇರಪ್ರಸಾರ ಮಾಡುತ್ತಿದ್ದ ಸ್ಟಾರ್ ಸ್ಪೋರ್ಟ್ಸ್ ವಾಹಿನಿ, ತಾಂತ್ರಿಕ ಕಾರಣದಿಂದ ಪಂದ್ಯ ಸ್ಥಗಿತಗೊಂಡಿದೆ ಎಂದು ಹೇಳಿತು.

ಉದ್ವಿಗ್ನತೆಯ ಕಾರಣದಿಂದ ಐಪಿಎಲ್ ಅನ್ನು ಮುಂದೂಡಲಾಗಿತ್ತು. ಇದೀಗ ನಿನ್ನೆ ಕದನ ವಿರಾಮ ಘೋಷಣೆಯಾದ ಬೆನ್ನಲ್ಲೇ ಬಿಸಿಸಿಐ, ಐಪಿಎಲ್ ಆಡಳಿತ ಮಂಡಳಿಯೊಂದಿಗೆ ಚರ್ಚಿಸಿ ಉಳಿದ ಪಂದ್ಯಗಳನ್ನು ದಕ್ಷಿಣ ಭಾರತದ ಚೆನ್ನೈ, ಬೆಂಗಳೂರು ಮತ್ತು ಹೈದರಾಬಾದ್‌ನಲ್ಲಿ ನಡೆಸುವ ಸಾಧ್ಯತೆ ಇದೆ ಎಂದು ತಿಳಿಸಿದೆ.

ಆದರೆ ಕದನ ವಿರಾಮ ಘೋಷಣೆ ಬೆನ್ನಲ್ಲೇ ಮತ್ತೆ ದಾಳಿ ಮಾಡಿದ ಪಾಕಿಸ್ತಾನವನ್ನು ಯಾವ ಕಾರಣಕ್ಕೂ ನಂಬಲು ಸಾಧ್ಯವಿಲ್ಲ. ಹೀಗಿರುವಾಗ ಹಣದ ಹೊಳೆಯಲ್ಲಿ ತೇಲುತ್ತಿರುವ, ಐಪಿಎಲ್, ಬಿಸಿಸಿಐಗಳು ಕೇವಲ ಲಾಭದ ದೃಷ್ಟಿ ನೋಡದೆ ಆಟಗಾರರ, ಪ್ರೇಕ್ಷಕರ ಪ್ರಾಣದ ಜೊತೆ ಚೆಲ್ಲಾಟವಾಡುವುದನ್ನು ಬಿಟ್ಟು, ಸಂಪೂರ್ಣ ಶಾಂತಿ ನೆಲೆಸುವವರೆಗೆ ಐಪಿಎಲ್ ಅನ್ನು ಸ್ಥಗಿತಗೊಳಿಸಲಿ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ಚಾ.ಬೆಟ್ಟದ ಚಪ್ಪಲಿ ಸ್ಟ್ಯಾಂಡ್ ಬಳಿ ನೀರಿನ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ಮೈಸೂರಿನ ನಾಡದೇವತೆ ಚಾಮುಂಡೇಶ್ವರಿ ಬೆಟ್ಟದಲ್ಲಿ ಬರಲಿರುವ ಆಷಾಢ ಶುಕ್ರವಾರದ ಆರಂಭಕ್ಕೆ ಈಗಲೇ ಸಿದ್ಧತೆ ಮಾಡಿಕೊಳ್ಳಲು ಮೈಸೂರು ನಗರ ಪೊಲೀಸ್ ಆಯುಕ್ತರು ಒಂದು ಸಭೆ ನಡೆಸಿ ಪೂರ್ವಭಾವಿ ಸಿದ್ಧತೆ ಪ್ರಾರಂಭ ಮಾಡಿರುವುದು ಸ್ವಾಗತಾರ್ಹ. ಇಲ್ಲಿ ಮಾಮೂಲಿ ದಿನಗಳಲ್ಲೇ ಸಾಕಷ್ಟು ಭಕ್ತರು ತಾಯಿಯ ದರ್ಶನ ಪಡೆಯಲು ಬರುತ್ತಾರೆ. ಹೀಗಿರುವಾಗ ಆಷಾಢ ಶುಕ್ರವಾರ ಕೇಳುವುದೇ ಬೇಡ.

ಆದರೆ ಈ ದಿನಗಳನ್ನೂ ಸೇರಿಕೊಂಡು ದಿನನಿತ್ಯ ತಾಯಿಯ ದರ್ಶನ ಮಾಡುವುದು ನಮ್ಮ ನಮ್ಮ ಚಪ್ಪಲಿ ಮುಟ್ಟಿಕೊಂಡೆ ಎಂಬ ಅನಿವಾರ್ಯತೆ ಸೃಷ್ಟಿಸಿದ ಜಿಲ್ಲಾಡಳಿತ ಹಾಗೂ ಚಾಮುಂಡಿಬೆಟ್ಟದ ಆಡಳಿತ ಸಮಿತಿಗೆ ಧಿಕ್ಕಾರವಿರಲಿ. ಚಾಮುಂಡೇಶ್ವರಿ ದೇವಿಯ ಬಳಿ ಇರುವ ಚಪ್ಪಲಿ ಸ್ಟ್ಯಾಂಡ್‌ನಲ್ಲಿ ಚಪ್ಪಲಿ ಬಿಟ್ಟ ಮೇಲೆ ಕೈ ತೊಳೆಯಲು ನೀರು ಒದಗಿಸದಿರುವುದು ಈ ಧಿಕ್ಕಾರಕ್ಕೆ ಕಾರಣ.

ಇದೇ ಅಂಕಣದಲ್ಲಿ ಈ ಹಿಂದೆ ಇದರ ಬಗ್ಗೆ ಪ್ರಸ್ತಾಪಿಸಿ ಚಪ್ಪಲಿ ಬಿಟ್ಟ ಮೇಲೆ ಕೈ ತೊಳೆಯಲು ನೀರು ಒದಗಿಸಬಹುದು ಎಂಬ ನಿರೀಕ್ಷೆ ಬಗ್ಗೆ ಸರ್ಕಾರ ಗಣನೆಗೆ ತೆಗೆದುಕೊಳ್ಳದಿರುವುದು ವಿಷಾದನೀಯ. ನಿರ್ವಹಣೆ ಇಲ್ಲದೇ ಅಲ್ಲೇ ಪಕ್ಕದ ಅಂಗಡಿಯಲ್ಲಿ ನೀರಿನ ಬಾಟಲಿ ತೆಗೆದುಕೊಂಡು ದೇವರ ದರ್ಶನ ಮಾಡಬೇಕಾದ ಬೇಜವಾಬ್ದಾರಿ ಅಧಿಕಾರಿಗಳಿಗೆ ಬುದ್ಧಿ ನೀಡು ತಾಯೆ. ಈ ಬಗ್ಗೆ ಸಂಬಂಧಿಸಿದವರು ಸಕಾರಾತ್ಮಕವಾಗಿ ಸ್ಪಂದಿಸುವರೇ?

–ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು

■ ಮಹಿಳೆಯರ ಗೌರವ ಕಾಪಾಡಿ

ಮಾನ್ಯರೆ,

ಈಗ ಎಲ್ಲೆಲ್ಲೂ ಮೊಬೈಲ್ ಯುಗವಾಗಿದೆ. ಮೊಬೈಲ್ ಇಲ್ಲದೆ ಯಾವ ಕೆಲಸವು ಅಸಾಧ್ಯ ಎನ್ನುವಂತೆ ಆಗಿದೆ. ಮೊಬೈಲ್‌ನಿಂದ ಉಪಯೋಗ ಹಾಗೂ ದುರುಪಯೋಗವು ಎರಡು ನಡೆಯುತ್ತಿದೆ. ಮೊಬೈಲ್‌ನಲ್ಲಿ ಇರುವಂಥ ಸಾಮಾಜಿಕ ಮಾಧ್ಯಮವಾದ facebook ನಲ್ಲಿ ಹೆಣ್ಣು ಮಕ್ಕಳ ಗೌರವಕ್ಕೆ ಧಕ್ಕೆ ಬರುವಂತಹ ಕೆಲಸ ನಡೆಯುತ್ತಿದೆ. ಹೆಣ್ಣು ಮಕ್ಕಳ ಅಶ್ಲೀಲ ದೃಶ್ಯಗಳು ಸಂಭಾಷಣೆಗಳು ಹಾಕುತ್ತಾರೆ. ಅದಕ್ಕೆ ತಕ್ಕ ಹಾಗೆ ಅಶ್ಲೀಲ ಕಾಮೆಂಟ್‌ಗಳು ಬರುತ್ತವೆ. ಇದು ಎಲ್ಲಾ ಹೆಣ್ಣು ಮಕ್ಕಳ ಗೌರವಕ್ಕೆ ಧಕ್ಕೆ ಬರುವಂತಹ ವಿಷಯವಾಗಿದೆ. ಹರೆಯದ ಮಕ್ಕಳನ್ನು ಅಡ್ಡ ದಾರಿಗೆ ಹಿಡಿಯುವಂತಾಗಿದೆ. ಆದ್ದರಿಂದ ಸಮಾಜ ಸೇವಕರು, ಮಹಿಳಾ ಹೋರಾಟಗಾರರು ಇತ್ತ ಗಮನ ಹರಿಸಿ ಇಂತಹ ದೃಶ್ಯಗಳನ್ನು ಹಾಕುವರನ್ನು ಬಂಧಿಸಿ ಶಿಕ್ಷೆ ನೀಡಿ ಎಚ್ಚರಿಕೆ ನೀಡಬೇಕಾಗಿದೆ. ಹೆಣ್ಣು ಮಕ್ಕಳನ್ನು ಇಂಥ ಅಶ್ಲೀಲ ದೃಶ್ಯಗಳಿಗೆ ಬಳಸುತ್ತಾರೆ. ಅಲ್ಲದೆ ಈ ವಿಷಯಗಳು ಆ ಹೆಣ್ಣು ಮಕ್ಕಳಿಗೆ ತಿಳಿಯುತ್ತದೋ ಇಲ್ಲವೋ ನಮಗೆ ತಿಳಿಯುವುದಿಲ್ಲ. ಆದ್ದರಿಂದ ಇಂತಹ ದೃಶ್ಯಗಳನ್ನು ಹಾಕಿ ಎಲ್ಲ ಹೆಣ್ಣು ಮಕ್ಕಳ ಗೌರವಕ್ಕೆ ಧಕ್ಕೆ ತರಬೇಡಿ.

–ಎಂ. ಎಸ್. ಉಷಾ ಪ್ರಕಾಶ್, ಲೇಖಕಿ ಹಾಗೂ ಕವಯಿತ್ರಿ, ಮೈಸೂರು.

■ ಪ್ರತಿ ಹೆಣ್ಣು ಪತಿ ಅಥವಾ ಪ್ರೇಮಿಯಿಂದ ಕಪಾಳಕ್ಕೆ ಏಟು ತಿಂದಿರುತ್ತಾಳೆ

ಮಾನ್ಯರೆ,

ಬಂಜಗೆರೆ ಜಯಪ್ರಕಾಶ್ ಅವರು 'ಇಡೀ ವಿಶ್ವದಲ್ಲಿ ಪ್ರತಿ ಹೆಣ್ಣು ಪತಿ ಅಥವಾ ಪ್ರೇಮಿಯಿಂದ ಕಪಾಳಕ್ಕೆ ಏಟು ತಿಂದಿರುತ್ತಾಳೆ' ಎಂದು ಅಧ್ಯಯನದ ವರದಿ ಹೇಳಿದೆ ಎಂಬ ಹೇಳಿಕೆ ಓದಿ ದಿಗ್ಭ್ರಮೆ ಆಯಿತು. ಪತ್ನಿಯ ಮೇಲೆ ಕೈ ಮಾಡದ ಅನೇಕ ಪುರುಷರು (ನನ್ನನ್ನೂ ಸೇರಿದಂತೆ) ಇದ್ದಾರೆ. ಗಂಡ ಹೆಂಡತಿ ನಡುವೆ ಹಲವು ವಿಚಾರವಾಗಿ ವಾಗ್ಯುದ್ಧ ನಡೆದರೂ ಕಪಾಳಮೋಕ್ಷ ಹಂತಕ್ಕೆ ಕೆಲವರಷ್ಟೇ ಹೋಗಬಹುದು. ಜಯಪ್ರಕಾಶ್ ಸಹ ಆ ವರದಿಯ ಹೇಳಿಕೆಗೆ ಅಪವಾದ ಎಂಬುದನ್ನು ಸ್ಪಷ್ಟಪಡಿಸಿದ್ದರೆ ಚೆನ್ನಾಗಿತ್ತು. **–ಲಕ್ಷ್ಮಣ್ ಗೋರ್ಲಕಟ್ಟೆ, ಬೋಗಾದಿ, ಮೈಸೂರು.**

■ ಹಾಳಾಗಿರುವ ರಸ್ತೆ ಸರಿಪಡಿಸಿ

ಮಾನ್ಯರೆ,

ಚಾಮರಾಜನಗರ ಜಿಲ್ಲೆ ಒಂದು ಐತಿಹಾಸಿಕ ಸ್ಥಳ. ಈ ಜಿಲ್ಲೆಯಲ್ಲಿ ಹಲವು ಪುರಾತನ ಕಾಲದ ದೇವಾಲಯಗಳಿವೆ. ಈ ದೇವಾಲಯಗಳು ಹಾಗೂ ವನಸಿರಿ ಸಂಪತ್ತು ನೋಡಲು ಬೇರೆ ಬೇರೆ ರಾಜ್ಯಗಳಿಂದ ಪ್ರವಾಸಿಗರು ಮೈಸೂರು ಕಡೆ ತೆರಳುತ್ತಾರೆ. ಆದರೆ ಕೊಳ್ಳೇಗಾಲ ತಾಲೂಕು ಕಡೆಯಿಂದ 'ಮೋಳಗನಕಟ್ಟೆ' ಮಾರ್ಗವಾಗಿ ಚಿಕ್ಕಲೂರು ದೇವಾಲಯಕ್ಕೆ ಹೋಗಬೇಕಾದರೆ ರಸ್ತೆ ತುಂಬಾ ಹಾಳಾಗಿದ್ದು ಹಳ್ಳ ಕೊಳ್ಳಗಳಿಂದ ಕೂಡಿದೆ. ಪ್ರವಾಸಿಗರು, ವಾಹನ ಸವಾರರು ಹಾಗೂ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗಿದೆ. ಇದರಿಂದಾಗಿ ಪ್ರವಾಸಿಗರ ಸಂಖ್ಯೆ ಕುಂಟಿತವಾಗಿದೆ. ಕೊಳ್ಳೇಗಾಲದಿಂದ ಮಲೈ ಮಹದೇಶ್ವರನ ಬೆಟ್ಟ, ಬಿಳಿಗಿರಿ ರಂಗನಬೆಟ್ಟ, ಗಗನಚುಕ್ಕಿ ಬರಚುಕ್ಕಿ ಹಾಗೂ ಇತರ ದೇವಾಲಯಗಳಿಗೆ ಬರುವ ಭಕ್ತಾದಿಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಆದುದರಿಂದ ಕೊಳ್ಳೇಗಾಲದಿಂದ ಚಿಕ್ಕಲೂರು ಮಾರ್ಗವಾಗಿ ಹೋಗುವ ರಸ್ತೆ ಸರಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಈ ಮೂಲಕ ಮನವಿ.

–ಸಿದ್ದಲಿಂಗೇಗೌಡ, ಹೈರಿಗೆ, ಹೆಚ್.ಡಿ. ಕೋಟೆ ತಾ.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ತಸ್ಮಾದ್ ಯುಧ್ಯಸ್ವ ಭಾರತ



ಸಾಮ, ದಾನ, ಭೇದ, ದಂಡ ಎಂಬವು ಚತುರುಪಾಯಗಳು– ಎಂದರೆ ರಾಜಕಾರಣದ ನಾಲ್ಕು ಉಪಾಯಗಳು. ಕೆಲವರು ಇದನ್ನು ತಪ್ಪಾಗಿ ಚತುರೋಪಾಯಗಳು ಎಂದು ಹೇಳುವುದುಂಟು. ಚತುರರು ಮಾಡುವ ಉಪಾಯಗಳು ಎಂಬ ಅರ್ಥದಲ್ಲಿ ಚತುರೋಪಾಯಗಳು ಎಂಬ ಪದ ಸರಿಯಾಗಬಹುದು. ನಾಲ್ಕನೆಯ ಉಪಾಯವಾದ ದಂಡವನ್ನು ಮಿಕ್ಕ ಮೂರು ಉಪಾಯಗಳೂ ವಿಫಲವಾದಾಗ ಮಾತ್ರ ಬಳಸಬೇಕು. ಮಹಾಭಾರತದಲ್ಲಿ ಶ್ರೀ ಕೃಷ್ಣನು ದುರ್ಯೋಧನನಿಗೆ ಸಾಮೋಪಾಯವನ್ನು ಅವಲಂಬಿಸಿ ಯುದ್ಧವು ಎರಡು ಪಕ್ಷಗಳಿಗೂ ಎಷ್ಟು ಹಾನಿಯನ್ನುಂಟು ಮಾಡುವುದೆಂದು ತಿಳಿಸಿ ಯುದ್ಧವನ್ನು ತಡೆಯಲು ಯತ್ನಿಸಿದನು. ಅದನ್ನು ದುರ್ಯೋಧನನು ತಿರಸ್ಕರಿಸಿದನು. ದಾನೋಪಾಯವನ್ನು ಆಶ್ರಯಿಸಿ ಕೃಷ್ಣನು–

ಇಂದ್ರಪ್ರಸ್ಥಂ ವೃಕಪ್ರಸ್ಥಂ ಜಯಂತಂ ವಾರಣಾವತಮ್ ।
ಪ್ರಯಚ್ಛ ಚತುರೋ ಗ್ರಾಮಾನ್ ಕಂಚಿ ದೇಕಂ ಚಪಂಚಮಮ್ ।

ಎಂದು ಹೇಳಿದನು. ಇಂದ್ರಪ್ರಸ್ಥ, ವೃಕಪ್ರಸ್ಥ, ಜಯಂತ್, ವಾರಣಾವತ್ ಎಂಬ ನಾಲ್ಕು ಪಟ್ಟಣಗಳನ್ನು ಮತ್ತೆ ನಿನಗೆ ಇಷ್ಟವಾದ ಯಾವುದಾದರೂ ಒಂದು ಗ್ರಾಮವನ್ನೂ ಐದು ಜನ ಪಾಂಡವರಿಗೆ ಕೊಡು. ಮಿಕ್ಕ ಸಮಸ್ತ ಕುರುರಾಜ್ಯವನ್ನು ನಿನಗೇ ಕೊಡುತ್ತೇವೆ, ವಿನಾಶಕಾರಿಯಾದ ಯುದ್ಧವು ಬೇಡ ಎಂಬುದು ಶ್ರೀ ಕೃಷ್ಣನ ಸಲಹೆಯಾಗಿತ್ತು. ದುರ್ಯೋಧನನು ಅದಕ್ಕೂ ಒಪ್ಪಲಿಲ್ಲ. ರಾಜ್ಯವೆಲ್ಲಾ ನನ್ನದೇ, ಪಾಂಡವರಿಗೆ ಸೂಜಿಮೊನೆಯಷ್ಟು ನೆಲವನ್ನೂ ನಾನು ಕೊಡುವುದಿಲ್ಲವೆಂದನು. ಭೇದೋಪಾಯವನ್ನು ಉಪಯೋಗಿಸಿ ಕರ್ಣನಿಗೆ ಅವನ ಜನ್ಮ ವೃತ್ತಾಂತವನ್ನು ತಿಳಿಸಿ 'ನೀನು ಪಾಂಡವರ ಅಣ್ಣ, ಕುಂತಿಯ ಹಿರಿಯ ಪುತ್ರ. ದುರ್ಯೋಧನನ ಪಕ್ಷವನ್ನು ಬಿಟ್ಟು ಪಾಂಡವ ಪಕ್ಷಕ್ಕೆ ಬಂದು ಬಿಡು. ಆಗ ದಿಕ್ಕೆಟ್ಟು ದುರ್ಯೋಧನನು ಯುದ್ಧವನ್ನೇ ಮಾಡುವುದಿಲ್ಲ. ನೀನು ಕುರು ಸಾಮ್ರಾಜ್ಯದ ಚಕ್ರವರ್ತಿಯೇ ಆಗಬಹುದು' ಎಂದು ಪ್ರಲೋಭನೆಯನ್ನೊಡ್ಡುತ್ತಾನೆ. ಆದರೆ ಈ ಭೇದ ಉಪಾಯವೂ ಸಫಲವಾಗುವುದಿಲ್ಲ. ಕರ್ಣನು ದುರ್ಯೋಧನನ ಪಕ್ಷವನ್ನು ತ್ಯಜಿಸಿ ಬರಲು ಒಪ್ಪುವುದಿಲ್ಲ. ಮೂರು ಉಪಾಯಗಳೂ ಸೋತಾಗ ವಿಧಿಯಿಲ್ಲದೆ ಕೃಷ್ಣನು ದಂಡೋಪಾಯವಾದ ಯುದ್ಧವನ್ನು ಮಾಡಲು ಸಮ್ಮತಿಸುತ್ತಾನೆ. ಯುದ್ಧದ ಪ್ರಾರಂಭದಲ್ಲೇ ಕೈಚೆಲ್ಲಿ ಕೂತ ಅರ್ಜುನನನ್ನು ಹುರಿದುಂಬಿಸಲು ಕೃಷ್ಣನು ಭಗವದ್ಗೀತೆಯನ್ನು ಉಪದೇಶಿಸುತ್ತಾನೆ. ಅಲ್ಲಿ ಬರುವ ಮಾತು 'ತಸ್ಮಾದ್ ಯುಧ್ಯಸ್ವ ಭಾರತ'.

ಭಗವದ್ಗೀತೆಯಲ್ಲಿ ಅರ್ಜುನನನ್ನು ಭಾರತ ಎಂದು ಹಲವು ಬಾರಿ ಸಂಬೋಧಿಸಲಾಗಿದೆ. ಭಾರತ ಎಂದರೆ ಭರತನ ವಂಶದಲ್ಲಿ ಹುಟ್ಟಿದವನು ಎಂದು ಅರ್ಥ. 'ಭರತವಂಶ ಸಂಜಾತನೆ, ಈ ಕಾರಣದಿಂದ ನೀನು ಯುದ್ಧ ಮಾಡು, ಹೋರಾಡು' ಎಂಬುದು ತಾತ್ಪರ್ಯ. ಎರಡನೆಯ ಅಧ್ಯಾಯದ ಹದಿನೆಂಟನೆಯ ಶ್ಲೋಕದಲ್ಲಿ ಈ ಮಾತು ಬಂದಿದೆ.

ಇಂದು ಪಾಕಿಸ್ಥಾನವು ದೌರ್ಜನ್ಯವನ್ನು ತೋರಿಸಿ ನಮ್ಮ ದೇಶದ ಮುಗ್ಧ ನಾಗರಿಕರನ್ನು ಹಿಂಸಾವಾದಿಗಳ ಮೂಲಕ ಕೊಲ್ಲುತ್ತಿರುವುದರಿಂದ ಭಗವದ್ಗೀತೆಯ ವಾಕ್ಯದಲ್ಲಿ 'ಭಾರತ' ಎಂಬ ಪದಕ್ಕೆ ಭಾರತ ಭೂಮಿಯ ಪ್ರಜೆ ಎಂದರ್ಥ. ದೇಶಕ್ಕೆ, ಧರ್ಮಕ್ಕೆ, ನ್ಯಾಯಕ್ಕೆ ಅಪಾಯ ಬಂದಿರುವ ಕ್ಷಣದಲ್ಲಿ ಪ್ರತಿಯೊಬ್ಬ ಭಾರತೀಯನಿಗೂ ಕೊಡುತ್ತಿರುವ ಕರೆ 'ತಸ್ಮಾದ್ ಯುಧ್ಯಸ್ವ ಭಾರತ'. ಯುದ್ಧಕ್ಕೆ ಪ್ರತಿಯೊಬ್ಬ ಭಾರತೀಯನು ಸಿದ್ಧನಾಗಿರಬೇಕು. ಬ್ರಿಟಿಷರು ಭಾರತವನ್ನು ಆಳುತ್ತಿದ್ದಾಗ ಅವರನ್ನು ಹೊಡೆದೋಡಿಸಲು ಎಲ್ಲಾ ಭಾರತೀಯರೂ ಟೊಂಕಕಟ್ಟಿ ಯುದ್ಧಕ್ಕೆ ಸನ್ನದ್ಧರಾಗಿ ನಿಂತಿದ್ದರು. ಇಂದು ಅಂತಹ ಸನ್ನಿವೇಶವು ಮತ್ತೆ ಬಂದಿದೆ.

ಕದನ ವಿರಾಮ, ಶಾಂತಿ ಎಂದು ಪಾಕಿಸ್ಥಾನವು ಹೇಳುತ್ತಿದ್ದರೂ ಅದರ ಮನಸ್ಸಿನಲ್ಲಿರುವುದೇ ಬೇರೆ. ಭಾರತದ ಸೇನೆಯ ಪೆಟ್ಟಿಗೆ ಪೆಟ್ಟಿಗೆ ತತ್ತರಿಸಿ ಅದು ಕದನ ವಿರಾಮದ ಮಾತನ್ನು ಆಡುತ್ತಿದೆ. ಆದರೆ ಯುದ್ಧ ಸಾಮಗ್ರಿಗಳು ಸಿಕ್ಕಿದರೆ ಅದು ರಾಗವನ್ನು ಬದಲಾಯಿಸುತ್ತದೆ. ಉಗ್ರವಾದಿಗಳನ್ನು ಸಾಕಿ ಭಾರತಕ್ಕೆ ಕಳುಹಿಸುವ ಅದರ ದುಷ್ಟಬುದ್ಧಿ ಯಾವಾಗಲೂ ಇರುವುದೇ. ಆದ್ದರಿಂದ ಕದನ ವಿರಾಮವನ್ನು ಒಪ್ಪಿಕೊಂಡಿದ್ದರೂ ಭಾರತವು ಸದಾ ಎಚ್ಚರಿಕೆಯಿಂದ ಯುದ್ಧಕ್ಕೆ ಸಿದ್ಧರಾಗಿಯೇ ಇರಬೇಕಾಗುತ್ತದೆ.

ಮಹಾಭಾರತದ ಯುದ್ಧವು ಜನಸಾಮಾನ್ಯರ ಮೇಲೆ, ಹೆಂಗಸರ ಮತ್ತು ಮಕ್ಕಳ ಮೇಲೆ ನೇರವಾಗಿ ಅಪಾಯವನ್ನು ಒಡ್ಡಲಿಲ್ಲ. ಏಕೆಂದರೆ ಆ ಯುದ್ಧ ರಣಾಂಗಣಕ್ಕೆ ಸೀಮಿತವಾಗಿತ್ತು. ಪಾಂಡವರಾಗಲಿ ಕೌರವರಾಗಲಿ ಊರಿಗೆ ಹೋಗಿ ಸ್ತ್ರೀಯರನ್ನು ಹೊಡೆದರು, ಕೊಂದರು ಎಂಬ ಮಾತು ಮಹಾಭಾರತದಲ್ಲಿಲ್ಲ. ರಾಮಾಯಣದ ಯುದ್ಧದಲ್ಲೂ ಅಂತಹ ಮಾತೇ ಇಲ್ಲ. ಆದರೆ ಇಂದಿನ ಯುದ್ಧದ ಸ್ಥಿತಿಯೇ ಬೇರೆ. ಈಗ ಯುದ್ಧ ರಣಾಂಗಣಕ್ಕೆ ಸೀಮಿತವಲ್ಲ. ಭಾರತವು ಪಾಕಿಸ್ಥಾನದ ನಾಗರಿಕರನ್ನು ಮುಟ್ಟದೆ ಕೇವಲ ಉಗ್ರರನ್ನು ಕೊಂದು ಸಂಯಮವನ್ನು ಮೆರೆಸಿದೆ. ಶತ್ರುವಿಗೆ ಆ ಪರಿಜ್ಞಾನವಿಲ್ಲ. ಆದ್ದರಿಂದ ನಮ್ಮ ಎಚ್ಚರಿಕೆ ದ್ವಿಗುಣವಾಗಿರಬೇಕು.

ಮಹಾಭಾರತದ ಯುದ್ಧ ಕೇವಲ ಬಾಹ್ಯ ಯುದ್ಧವಾಗಿರಲಿಲ್ಲ. ಮನುಷ್ಯನ ಒಳಗೆ ನಡೆಯುವ ಯುದ್ಧವನ್ನು ಒಳಗೊಂಡಿತ್ತು.

ಕೃಷ್ಣನ ಮಾತನ್ನು ಗಮನವಿಟ್ಟು ನೋಡೋಣ–

ಕಾಮ ಏಷ ಕ್ರೋಧ ಏಷ ರಜೋಗುಣಸಮುದ್ಭವಃ।
ಮಹಾಶನೋ ಮಹಾಪಾಪ್ಮಾ ವಿದ್ಧ್ಯೇನಮಿಹ ವೈರಿಣಮ್ ॥
"ಕಾಮವೂ ಕ್ರೋಧವೂ ರಜೋಗುಣದಿಂದ ಹುಟ್ಟಿವೆ. (3–37)

ಕಾಮಕ್ಕೆ, ಎಂದರೆ ದುರಾಶೆಗೆ ಹಸಿವು ಹೆಚ್ಚು. ಅದನ್ನು ತೃಪ್ತಿಪಡಿಸಲು ಆಗದು. ಕ್ರೋಧವು ಮಹಾಪಾಪಿ. ಅದು ಮನುಷ್ಯನಿಂದ ಏನನ್ನಾದರೂ ಮಾಡಿಸುತ್ತದೆ. ಇವುಗಳನ್ನೇ ನಿನ್ನ ನಿಜವಾದ ಶತ್ರು ಎಂದು ತಿಳಿದುಕೋ" ದುರ್ಯೋಧನ, ದುಶ್ಯಾಸನ ಮುಂತಾದ ಹೊರಗಿನ ಶತ್ರುಗಳನ್ನು ಗೆಲ್ಲುವುದು ಸುಲಭ. ಒಳಗಿನ ಶತ್ರುಗಳಾದ ಕಾಮ–ಕ್ರೋಧಗಳನ್ನು ಗೆಲ್ಲುವುದು ಕಷ್ಟ.

ತಸ್ಮಾತ್ ತ್ವಮಿಂದ್ರಿಯಾಣ್ಯಾದೌ ನಿಯಮ್ಯ ಭರತರ್ಷಭ।
ಪಾಪ್ಮಾನಂ ಪ್ರಜಹಿ ಹ್ಯೇನಂ ಜ್ಞಾನವಿಜ್ಞಾನನಾಶನಮ್ ॥ (3–41)

ವಿಜ್ಞಾನವನ್ನೂ ನಾಶಪಡಿಸುವ ಕಾಮ–ಕ್ರೋಧಗಳನ್ನು ಕೊಲ್ಲು. ಈ ಅಂತರ್ಯುದ್ಧದ ಬಗೆಗೆ ಭಗವದ್ಗೀತೆಯಲ್ಲಿ ಮತ್ತೆ ಮತ್ತೆ ಹೇಳಲಾಗಿದೆ. ಪ್ರಸ್ತುತದಲ್ಲೂ ಭಾರತ ದೇಶವು ಅಂತಶ್ಶತ್ರುಗಳನ್ನು ಮೊದಲು ಹತೋಟಿಯಲ್ಲಿಡಬೇಕು.

ಯುದ್ಧವು ಯಾವ ಸಮಸ್ಯೆಗೂ ಶಾಶ್ವತ ಪರಿಹಾರವಲ್ಲ. ಅದು ಹೊಸ ಸಮಸ್ಯೆಗಳನ್ನೂ ಸೃಷ್ಟಿಸಬಹುದು. ಇದನ್ನು ಪಾಕಿಸ್ಥಾನವು ಅರಿತುಕೊಳ್ಳಬೇಕು. ಉಗ್ರವಾದಿಗಳಿಗೆ, ಹಿಂಸಾವಾದಿಗಳಿಗೆ ಆಶ್ರಯವನ್ನು ಪೋಷಣೆ ಕೊಡುವುದನ್ನು ನಿಲ್ಲಿಸಬೇಕು. ಸ್ನೇಹದಿಂದ ದೊರಕುವ ಫಲವು ದ್ವೇಷದಿಂದ ಸಿಕ್ಕುವುದಿಲ್ಲ. ಎಲ್ಲ ರಾಷ್ಟ್ರಗಳೂ ಅನ್ಯೋನ್ಯಾ ವಲಂಬಿಗಳಾಗಿ ಬದುಕಬೇಕಾದ ಪ್ರಪಂಚದಲ್ಲಿ ಶತ್ರುತ್ವವು ಸ್ವಹಿತವನ್ನೂ ಹಾಳು ಮಾಡುತ್ತದೆ ಎಂಬುದನ್ನು ಪಾಕಿಸ್ಥಾನದ ನಾಯಕರು ತಿಳಿದುಕೊಂಡರೆ ಆ ರಾಷ್ಟ್ರಕ್ಕೆ ಕ್ಷೇಮ.

ವಿಶ್ವದ ಅನೇಕ ದೇಶಗಳು ಇಂದು ಯುದ್ಧ ಸಾಮಗ್ರಿಗಳಿಗೆ, ಶಸ್ತ್ರಾಸ್ತ್ರಗಳಿಗೆ, ಸೇನೆಗಳಿಗೆ ಮಾಡುತ್ತಿರುವ ವೆಚ್ಚ ಅಪಾರ. ಅದೇ ಹಣವನ್ನು ವಿದ್ಯಾಭ್ಯಾಸಕ್ಕೆ, ಆರೋಗ್ಯ ಸಂರಕ್ಷಣೆಗೆ, ಪರಿಸರದ ಅಭಿವೃದ್ಧಿಗೆ ಬಳಸಿಕೊಂಡರೆ ಪ್ರಪಂಚವು ಹೆಚ್ಚು ಸುಂದರವಾಗುವುದಿಲ್ಲವೆ? ಮನುಷ್ಯರು ಹೋರಾಡಬೇಕಾಗಿರುವುದು ಪ್ರಕೃತಿ ವಿಕೋಪಗಳಾದ ಭೂಕಂಪ, ಪ್ರವಾಹ, ಕ್ಷಾಮ, ಪಿಡುಗು–ಇತ್ಯಾದಿಗಳಿಗೆ ವಿರುದ್ಧವಾಗಿ ಅದನ್ನು ಬಿಟ್ಟು ತಮ್ಮೊಳಗೇ ಹೊಡೆದಾಡಿಕೊಂಡು ತಮ್ಮನ್ನೂ ಜಗತ್ತನ್ನೂ ಹಾಳು ಮಾಡಿಕೊಂಡರೆ ಅದು ಮೂರ್ಖತ್ವದ ಪರಮಾವಧಿಯಲ್ಲವೆ?

ಸಾಹಿತ್ಯ, ಕಲೆ, ಸಂಸ್ಕೃತಿ–ಇವೆಲ್ಲ ಉಳಿಯುವುದು, ಬೆಳೆಯುವುದು ಶಾಂತಿಯ ವಾತಾವರಣದಲ್ಲಿ. ಯುದ್ಧ ಕಾಲದಲ್ಲಿ ಇವೆಲ್ಲ ಹಿಂದೆ ಸರಿಯುತ್ತವೆ. ಪಾಕಿಸ್ಥಾನದಲ್ಲಿ ಸಾಮಾನ್ಯ ಜನರಿಗೆ ಅನ್ನ–ನೀರು ಕೂಡ ದುರ್ಲಭವಾಗಿದೆ ಎಂದು ಕೇಳಿದ್ದೇವೆ. ಅವುಗಳ ಕಡೆ ಗಮನವನ್ನು ನೀಡದೆ ಅಣ್ವಸ್ತ್ರಗಳನ್ನು ಹೆಚ್ಚಿಸಿಕೊಳ್ಳುವ ಪ್ರವೃತ್ತಿಯನ್ನು ಅವಿವೇಕವೆಂದು ಕರೆಯಬೇಕೋ ಹುಚ್ಚು ಎನ್ನಬೇಕೋ ನಮಗೆ ತಿಳಿಯದು. ಈ ಶಸ್ತ್ರಾಸ್ತ್ರಗಳ ಸ್ಪರ್ಧೆಯ ಬೆಂಕಿಗೆ ಪ್ರಬಲ ರಾಷ್ಟ್ರಗಳು ತುಪ್ಪವನ್ನು ಸುರಿಯುತ್ತವೆ. ಶಸ್ತ್ರಾಸ್ತ್ರಗಳ ಮಾರಾಟದಿಂದ ಅವುಗಳಿಗೆ ಧನಲಾಭ.

ದುಃಖದ ಅಂಶವೆಂದರೆ ಸದಾ ಶಾಂತಿಯನ್ನೇ ಬಯಸುವ ರಾಷ್ಟ್ರವಾದ ಭಾರತವೂ ಅನ್ಯಾಯಕ್ಕೆ, ಅಧರ್ಮಕ್ಕೆ, ಮುಗ್ಧರ ಕೊಲೆಗೆ ಪ್ರೋತ್ಸಾಹವನ್ನು ನೀಡುವ ನೆರೆಹೊರೆಯವರ ಕಾರಣದಿಂದ ಅನಿವಾರ್ಯವಾಗಿ ಯುದ್ಧಕ್ಕೆ ಇಳಿಯಲೇ ಬೇಕಾಯಿತು ಎಂಬುದು. ನಮ್ಮ ವೀರ ಯೋಧರ ಸಾಹಸದಿಂದ, ಶಸ್ತ್ರ ಪ್ರಯೋಗ ಕೌಶಲದಿಂದ ಎರಡೇ ದಿನದಲ್ಲಿ ಶತ್ರುಗಳಿಗೆ ಬುದ್ಧಿ ಕಲಿಸುವುದು ಸಾಧ್ಯವಾಯಿತು. ಭಾರತಕ್ಕೆ ವಿರುದ್ಧವಾಗಿ ಬಾಲ ಬಿಚ್ಚಿದರೆ ಅದನ್ನು ಕತ್ತರಿಸಿ ಹಾಕುತ್ತಾರೆ ಎಂಬ ಜ್ಞಾನ ಈಗ ಶತ್ರುಗಳಲ್ಲಿ ಉದಿಸಿದೆ. ಮುಂದೆ ಇನ್ನೆಂದೂ ಅವರು ಉಪದ್ರವವನ್ನು ಕೊಡಲು ತೊಡಗುವುದಿಲ್ಲ ಎಂದು ಆಶಿಸೋಣ.

ಕೃಷ್ಣನು ಕೈಯಲ್ಲಿ ಸುದರ್ಶನ ಚಕ್ರವನ್ನು ಧರಿಸಿರುವುದು, ಶಿವನು ಕೈಯಲ್ಲಿ ತ್ರಿಶೂಲವನ್ನು ಹಿಡಿದಿರುವುದು ಕೇವಲ ಅಲಂಕಾರಕ್ಕಾಗಿ ಅಲ್ಲ, ಸಮಯ ಬಂದಾಗ ದುಷ್ಟರ ದಮನಕ್ಕಾಗಿ. ಭಾರತವು ಸೈನ್ಯವನ್ನಿಟ್ಟಿರುವುದು ಗಣರಾಜ್ಯೋತ್ಸವ ಮೆರವಣಿಗೆಗಾಗಿ ಮಾತ್ರವಲ್ಲ. ಉದ್ಧತರಾಗಿ ವರ್ತಿಸುವ ಶತ್ರುಗಳ ಮರ್ದನಕ್ಕಾಗಿ ಎಂಬುದನ್ನು ಆಪರೇಷನ್ ಸಿಂಧೂರ್ ಸ್ಪಷ್ಟವಾಗಿ ತೋರಿಸಿದೆ.

ಜೈ ಹಿಂದ್

ನಾಳೆ 'ರಾಗ ತರಂಗಿಣಿ' ಸುಗಮ ಸಂಗೀತ ಕಾರ್ಯಕ್ರಮ

ಮೈಸೂರು,ಮೇ 13(ಎಂಟಿವೈ)– ಮೈಸೂರಿನ ನಾದಬ್ರಹ್ಮ ಸಂಗೀತ ಸಭಾದಲ್ಲಿ ಮೇ 15ರಂದು ಸಂಜೆ 5ಕ್ಕೆ 'ರಾಗ ತರಂಗಿಣಿ' ಸುಗಮ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜು ವಿ. ಬೈರಿ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾ ಘಟಕ ಹಾಗೂ ಬ್ಲೂಮೈಂಡ್ ಸಲ್ಯೂಷನ್ಸ್ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ 'ರಾಗ ರಾಗಿಣಿ' ಸುಗಮ ಸಂಗೀತ–ಸಿತಾರ್ ವಾದನ ಮತ್ತು ದಾಸವಾಣಿ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಯಾಗಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕರ್ನಾಟಕ ಶಾಸ್ತ್ರೀಯ ಸಂಗೀತ ಕಲಾವಿದರಾದ ಎಂ.ಎಲ್.ಭಾರತಿ, ಸಮಾಜ ಸೇವಕ ಡಾ.ರಘುರಾವ್ ವಾಜಪೇಯಿ ಪಾಲ್ಗೊಳ್ಳಲಿದ್ದು, ಅಧ್ಯಕ್ಷತೆಯನ್ನು ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜು ವಿ. ಬೈರಿ ವಹಿಸಲಿದ್ದಾರೆ. ಸಿತಾರ್ ವಾದಕರಾದ ಸಿ.ಎಸ್. ವೇದಶ್ರೀ ಸಿತಾರ್ ವಾದ್ಯ ನುಡಿಸಲಿದ್ದಾರೆ.

ಉಕ್ಕುಂದ ರಾಜೇಶ್ ಪಡಿಯಾರ್, ಹಂಸಿನಿ ಗಾಯನ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ಪುರುಷೋತ್ತಮ್ ಕೀ–ಬೋರ್ಡ್, ವಿಶ್ವನಾಥ್ ಮ್ಯಾಂಡೋಲಿನ್, ರಮೇಶ್ ಧನ್ನೂರು, ಸುಜೇಂದ್ರ ತಬಲ ನುಡಿಸಿದರೆ, ವಿನಯ್ ರಂಗದೋಳ್ ರಿದಂ ಪ್ಯಾಡ್ ನುಡಿಸಲಿದ್ದಾರೆ. ಇದೇ ವೇಳೆ ಉದ್ಯಮಿ ಮಹೇಶ್ ಕಾಮತ್ ಹಾಗೂ ಗಾಯಕಿ ರಶ್ಮಿ ಚಿಕ್ಕಮಗಳೂರು ಅವರನ್ನು ಸನ್ಮಾನಿಸಲಾಗುವುದು ಎಂದು ಹೇಳಿದರು.

ಸಂಗೀತ ಶಿಬಿರ: ಪರಿಷತ್ ವತಿಯಿಂದ ಮೇ 17 ಮತ್ತು 18ರಂದು ಹೂಟಗಳ್ಳಿಯ ಕೆಹೆಚ್‌ಬಿ ಕಾಲೋನಿ ಅನಂಗೇಶ್ವರ ಭವನದಲ್ಲಿ ಸುಗಮ ಸಂಗೀತ ಶಿಬಿರ ನಡೆಯಲಿದೆ. ಎದೆತುಂಬಿ ಹಾಡುವೆನು ಖ್ಯಾತಿಯ ಬಿ.ವಿ.ಶ್ರೀನಿವಾಸ್ ಹಾಗೂ ಖ್ಯಾತ ಸುಗಮ ಸಂಗೀತ ಗಾಯಕಿ ನಾಗಚಂದ್ರಿಕಾ ಭಟ್ ನೇತೃತ್ವ ವಹಿಸುವರು. ಎರಡೂ ದಿನ ಬೆಳಗ್ಗೆ 10ರಿಂದ ಸಂಜೆ 4.30 ರವರೆಗೆ ಶಿಬಿರ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ದೂ. 98451 17878 ಅನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಿ.ಎಸ್. ವೇದಶ್ರೀ, ರಾಜೇಶ್ ಪಡಿಯಾರ್, ಬೆಟ್ಟೇಗೌಡ ಇದ್ದರು.

ಸಚಿವ ಡಾ.ಎಚ್.ಸಿ.ಮಹದೇವಪ್ಪಗೆ ಸನ್ಮಾನ...



ಮೈಸೂರಿನ ಹಿನಕಲ್‌ನ ಡಾ.ಬಿ.ಆರ್.ಅಂಬೇಡ್ಕರ್ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಸಂಘದ ಉಪಾಧ್ಯಕ್ಷ ಗಣೇಶ್, ಪ್ರಧಾನ ಕಾರ್ಯದರ್ಶಿ ಹಿನಕಲ್ ನಂಜುಂಡ, ಸಂಘಟನಾ ಕಾರ್ಯದರ್ಶಿ ಹಿನಕಲ್ ಮಂಜು, ನಿರ್ದೇಶಕರಾದ ರೇವಣ್ಣ, ಚೆಲುವರಾಜ್ ಹಾಗೂ ಗ್ರಾಮದ ಯುವ ಮುಖಂಡರು ಉಪಸ್ಥಿತರಿದ್ದರು.

ಪಿಎಫ್ ಬಡ್ಡಿದರ ಶೇ.7.1

ಮೈಸೂರು, ಮೇ. 13(ಎಸ್‌ಪಿಎನ್)– ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ವಂತಿಕೆದಾರರ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಜಮೆಯಾಗಿರುವ ಶಿಲ್ಕಿನ ಮೇಲಿನ ಬಡ್ಡಿದರವನ್ನು 2025ರ ಏ.1ರಿಂದ ಜೂ.30ರವರೆಗೆ ವಾರ್ಷಿಕ ಶೇ.7.1ಕ್ಕೆ ನಿಗಧಿಪಡಿಸಲಾಗಿದೆ ಎಂದು ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು) ಅಧೀನ ಕಾರ್ಯದರ್ಶಿ ನೇತ್ರಪ್ರಭಾ ಎಂ.ಧಾಯಪುಲೆ ಆದೇಶಿಸಿದ್ದಾರೆ.

ಮೇ 22ರಂದು ನಂ.ಗೂಡಲ್ಲಿ ಉಚಿತ ಸಾಮೂಹಿಕ ವಿವಾಹ

ಅರ್ಹ ಜೋಡಿಗಳು ಮೇ 15ರೊಳಗೆ ನೋಂದಾಯಿಸಿಕೊಳ್ಳಿ: ಎಡಿಸಿ ಡಾ.ಪಿ.ಶಿವರಾಜು



ಡಿಸಿ ಕಚೇರಿಯ ಸಭಾಂಗಣದಲ್ಲಿ 'ಮಾಂಗಲ್ಯ ಭಾಗ್ಯ' ಯೋಜನೆಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಎಡಿಸಿ ಡಾ.ಶಿವರಾಜು ಮಾತನಾಡಿದರು.

ಮೈಸೂರು,ಮೇ 13– ಮೇ 22ರಂದು ಉಚಿತ ಸಮೂಹಿಕ ವಿವಾಹವನ್ನು ನಂಜನಗೂಡಿನ ಶ್ರೀಕಂಠೇಶ್ವರ ದೇವಸ್ಥಾನದಲ್ಲಿ ಏರ್ಪಡಿಸಲಾಗಿದ್ದು, ಅರ್ಹ ಜೋಡಿಗಳು ಉಚಿತ ಸಾಮೂಹಿಕ ವಿವಾಹಕ್ಕೆ ಮೇ 15ರೊಳಗೆ ನೋಂದಾಯಿಸಿಕೊಳ್ಳಿ ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ತಿಳಿಸಿದರು.

ಸೋಮವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 'ಮಾಂಗಲ್ಯ ಭಾಗ್ಯ' ಯೋಜನೆಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರಳ ಹಾಗೂ ಸಾಮೂಹಿಕ ವಿವಾಹದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಆಡಂಬರ ರಹಿತವಾಗಿ ಉಚಿತ ಮಾಂಗಲ್ಯ ಭಾಗ್ಯ ಸರಳ ಸಾಮೂಹಿಕ ವಿವಾಹವನ್ನು ರಾಜ್ಯದ ಪ್ರಮುಖ ದೇವಾಲಯಗಳಲ್ಲಿ ನಡೆಸಲು ತೀರ್ಮಾನಿಸಲಾಗಿರುವುದರಿಂದ ಈ ಯೋಜನೆಯನ್ನು ಹೆಚ್ಚು ಜನರು ಉಪಯೋಗಿಸಿಕೊಳ್ಳಬೇಕೆಂದು ಹೇಳಿದರು.

ವಧುವಿಗೆ ಚಿನ್ನದ ತಾಳಿ ಮತ್ತು ಎರಡು ಚಿನ್ನದ ಗುಂಡು(ಅಂದಾಜು 8 ಗ್ರಾಂ ತೂಕ)ನೀಡಲಾಗುತ್ತದೆ. ಈ ಯೋಜನೆಯಡಿ ವಿವಾಹವಾಗಲು ಬಯಸುವವರು ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಾಲಯ, ನಂಜನಗೂಡಿನ ಶ್ರೀಕಂಠೇಶ್ವರ ಸ್ವಾಮಿ ದೇವಾಲಯ, ತಲಕಾಡಿನ ವೈದ್ಯನಾಥೇಶ್ವರಸ್ವಾಮಿ ಹಾಗೂ ಸಮೂಹ ದೇವಾಲಯಗಳು, ಜಿಲ್ಲಾಧಿಕಾರಿಗಳ ಕಚೇರಿಯ ಧಾರ್ಮಿಕ ದತ್ತಿ ತಹಶೀಲ್ದಾರ್ ಕಚೇರಿ, ಅರಮನೆ ಮುಜರಾಯಿ ದೇವಾಲಯಗಳ ವ್ಯವಸ್ಥಾಪಕರು ಹಾಗೂ ಮೈಸೂರು ಜಿಲ್ಲೆಯ ಎಲ್ಲಾ ತಾಲೂಕು ತಹಶೀಲ್ದಾರ್ ಕಚೇರಿಯಲ್ಲಿ ಅರ್ಜಿ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಅರ್ಜಿ ಪಡೆದ ವಧುವರರು ಅಗತ್ಯ ದಾಖಲೆಗಳನ್ನು ನೋಂದಾಯಿಸಿಕೊಳ್ಳಬೇಕು. ವಧು–ವರರ ತಂದೆ ತಾಯಿಯವರು ವಿವಾಹಕ್ಕೆ ಒಪ್ಪಿ ವಿವಾಹ ದಿನದಂದು ಉಪಸ್ಥಿತರಿರಬೇಕು, ಜೊತೆಗೆ ವರನ ಸಾಕ್ಷಿದಾರರು ಇದ್ದಲ್ಲಿ ಮಾತ್ರ ವಿವಾಹವನ್ನು ನಡೆಸಲಾಗುವುದು. ತಂದೆ ತಾಯಿ ನಿಧನರಾಗಿದ್ದಲ್ಲಿ ಅವರ ವಾರಸುದಾರರ ಸಂಪೂರ್ಣ ಒಪ್ಪಿಗೆ ಇದ್ದು ಅವರ ವಿವಾಹ ದಿನದಂದು ಕಡ್ಡಾಯವಾಗಿ ಹಾಜರಿರಬೇಕು ಹಾಗೂ ತಂದೆ ತಾಯಿ ನಿಧನದ ಬಗ್ಗೆ ಕಡ್ಡಾಯವಾಗಿ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕೆಂದು ಎಂದರು.

ಸರ್ಕಾರದ ನಿಯಮದಂತೆ ವರನಿಗೆ ಕನಿಷ್ಠ 21 ವರ್ಷ ವಧುವಿಗೆ ಕನಿಷ್ಠ 18 ವರ್ಷ ತುಂಬಿರಬೇಕು. ಮೊದಲನೇ ಮದುವೆಗೆ ಮಾತ್ರ ಅವಕಾಶವಿದ್ದು, 2ನೇ ಮದುವೆಗೆ ಅವಕಾಶವಿರುವುದಿಲ್ಲ. ಅಂತರ್ಜಾತಿಯವರಾಗಿದ್ದರೆ ದೃಢೀಕೃತ ಜಾತಿ ಪ್ರಮಾಣವನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು ಎಂದು ಎಡಿಸಿ ಡಾ.ಶಿವರಾಜು ಹೇಳಿದರು.

ವಧು–ವರರ ಕಡೆಯಿಂದ ಕಡ್ಡಾಯವಾಗಿ ಯಾವುದೇ ವರದಕ್ಷಿಣೆಯನ್ನು ಪಡೆಯುವಂತಿಲ್ಲ, ಸಾರ್ವಜನಿಕರಿಂದ ಯಾವುದೇ ದೂರು ಬಂದಲ್ಲಿ ಅಂತಹ ವಿವಾಹವಾಗುವ ವಧು–ವರರ ಬಗ್ಗೆ ಪುನರ್ ಪರಿಶೀಲಿಸಲಾಗುತ್ತದೆ ಹಾಗೂ ವಿವಾಹಕ್ಕೆ ಸಲ್ಲಿಸಿದ ದಾಖಲೆಗಳು ಸುಳ್ಳು ದಾಖಲೆಗಳೆಂದು ದೃಢಪಟ್ಟಲ್ಲಿ ಅಂತಹ ವರ ಮೇಲೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ನಂಜನಗೂಡು ಶ್ರೀಕಂಠೇಶ್ವರ ಸ್ವಾಮಿ ದೇವಾ ಲಯ ಕಾರ್ಯನಿರ್ವಾಹಕ ಅಧಿಕಾರಿ ಜಗದೀಶ್ ಕುಮಾರ್, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ಹರೀಶ್ ಟಿ.ಕೆ. ಸೇರಿದಂತೆ ತಹಶೀಲ್ದಾರರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಿಗೆ ತಂಪೆರೆದ ಮಳೆ; ವಿವಿಧೆಡೆ ಮರದ ಬೃಹತ್ ಕೊಂಬೆಗಳು ಧರೆಗೆ




ಮೈಸೂರಿನ ಜಗನ್ಮೋಹನ ಅರಮನೆ ಬಳಿಯ ಕೃಷ್ಣವಿಲಾಸ ರಸ್ತೆಯಲ್ಲಿ ಹರಿಯುತ್ತಿರುವ ಮಳೆ ನೀರಿನ ನಡುವೆ ಸಾಗುತ್ತಿರುವ ವಾಹನ ಸವಾರರು. ಮತ್ತೊಂದು ಚಿತ್ರದಲ್ಲಿ ಮೈಸೂರು ಪೊಲೀಸ್ ಆಯುಕ್ತರ ಕಚೇರಿ ಬಳಿಯ ರಸ್ತೆಯಲ್ಲಿ ಬಿದ್ದ ಮರದ ಕೊಂಬೆ ತೆರವು ಕಾರ್ಯಾಚರಣೆ ನಡೆಸುತ್ತಿರುವ ಅಭಯ ತಂಡದ ಸಿಬ್ಬಂದಿ.

ಮೈಸೂರು,ಮೇ 13(ಪಿಎಂ)– ಸಾಂಸ್ಕೃತಿಕ ನಗರಿ ಮೈಸೂರಿಗೆ ಮಳೆ ತಂಪೆರೆದಿದ್ದು, ನಗರದ ಅನೇಕ ಭಾಗಗಳಲ್ಲಿ ಮಂಗಳವಾರ ಸಂಜೆ ಧಾರಾಕಾರ ಮಳೆಯಾಗಿದ್ದರೆ, ಹಲವೆಡೆ ಸಾಧಾರಣ ಮಳೆಯಾಗಿದೆ. ಜೋರು ಗಾಳಿಯೊಂದಿಗೆ ಮಳೆಯಾದ ಹಿನ್ನೆಲೆಯಲ್ಲಿ ನಗರದ ವಿವಿಧ ಭಾಗಗಳಲ್ಲಿ ಮರಗಳ ಬೃಹತ್ ಕೊಂಬೆಗಳು ಧರೆಗುರುಳಿವೆ.

ಬಿಸಿಲಿನ ಭಾರೀ ತಾಪದಿಂದ ಕಂಗೆಟ್ಟಿದ್ದ ನಗರದ ಜನತೆಗೆ ಇಂದಿನ ಮಳೆ ಒಂದಿಷ್ಟು ತಂಪಿನ ಅನುಭವ ನೀಡಿದೆ. ಇಂದು ಬೆಳಗ್ಗೆಯಿಂದ ಬಿಸಿಲು ಜೋರಾಗಿದ್ದ ಹಿನ್ನೆಲೆಯಲ್ಲಿ ವಿಪರೀತ ಧಗೆ ನಾಗರಿಕರನ್ನು ಕಂಗಾಲಾಗಿಸಿತ್ತು. ಆದರೆ ಸಂಜೆ ಸುಮಾರು 5 ಗಂಟೆ ವೇಳೆ ಮೋಡ ಕವಿಯುವುದರೊಂದಿಗೆ ನಗರದಲ್ಲಿ ತಂಪಿನ ವಾತಾವರಣ ನಿರ್ಮಾಣವಾಯಿತು. ಇದಾದ ಕೆಲವೇ ನಿಮಿಷಗಳಲ್ಲಿ ಮಳೆ ಆರಂಭಗೊಂಡಿತು.

ನಗರದ ಹೃದಯಭಾಗ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಧಾರಾಕಾರ ಮಳೆ ಸುರಿದರೆ, ಕೆಲವೆಡೆ ಸಾಧಾರಣ ಮಳೆಯಾಗಿದೆ. ಜೋರು ಮಳೆಯಾದ ಹಿನ್ನೆಲೆಯಲ್ಲಿ ಕೆಆರ್ ವೃತ್ತ ಸೇರಿದಂತೆ ಪ್ರಮುಖ ವೃತ್ತ ಹಾಗೂ ರಸ್ತೆಗಳು ಜಲಾವೃತಗೊಂಡಿದ್ದವು. ರಸ್ತೆಯಲ್ಲಿ ಹರಿಯುತ್ತಿದ್ದ ಮಳೆ ನೀರಿನ ನಡುವೆ ವಾಹನ ಸವಾರರು ಸಂಚರಿಸಲು ಪರದಾಡುವ ಸನ್ನಿವೇಶ ಸೃಷ್ಟಿಯಾಗಿತ್ತು. ಜೊತೆಗೆ ಮಳೆ ನೀರಿನ ರಭಸಕ್ಕೆ ತರಾವರಿ ಕಸಕಡ್ಡಿಗಳು ರಸ್ತೆಯಲ್ಲಿ ಹರಿಯುತ್ತಿದ್ದ ನೀರಿನಲ್ಲಿ ಸಿಲುಕಿ ಸವಾರರಿಗೆ ಕಿರಿಕಿರಿ ಉಂಟು ಮಾಡಿದವು.

ಸುಮಾರು ಅರ್ಧ ತಾಸಿಗೂ ಹೆಚ್ಚು ಕಾಲ ಮಳೆಯಾಗಿದ್ದು, ಜೋರು ಗಾಳಿ ಹಿನ್ನೆಲೆಯಲ್ಲಿ ನಗರದ ವಿವಿಧ ಭಾಗಗಳಲ್ಲಿ ರಸ್ತೆ ಬದಿಯ ಮರಗಳ ರಂಬೆ ಕೊಂಬೆಗಳು ಮುರಿದು ರಸ್ತೆಗೆ ಬಿದ್ದಿದ್ದವು. ಈ ಪೈಕಿ ಅನೇಕ ಕೊಂಬೆಗಳು ಬೃಹತ್ ಗಾತ್ರ ಇದ್ದ ಹಿನ್ನೆಲೆಯಲ್ಲಿ ಅವುಗಳನ್ನು ತೆರವುಗೊಳಿಸುವ ತನಕ ಸಂಚಾರಕ್ಕೆ ಅಡಚಣೆ ಸಹ ಉಂಟಾಗಿತ್ತು. ಎಫ್‌ಕೆ ಇರಾನಿ ಸರ್ಕಲ್, ಚಾಮರಾಜಪುರಂ, ಲಕ್ಷ್ಮೀಪುರಂ, ಯಾದವಗಿರಿ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಸಣ್ಣ ಹಾಗೂ ಬೃಹತ್ ಗಾತ್ರದ ಮರದ ರಂಬೆಗಳು ನೆಲಕ್ಕುರುಳಿದ್ದವು. ಮೈಸೂರು ಮಹಾನಗರ ಪಾಲಿಕೆಯ ಅಭಯ ತಂಡವು ಆದಷ್ಟು ಶೀಘ್ರದಲ್ಲಿ ರಸ್ತೆಯಲ್ಲಿ ಬಿದ್ದಿದ್ದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟಿತು.

ಮೇ 18ರವರೆಗೆ ಮಳೆ ಸಾಧ್ಯತೆ...

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಮೈಸೂರು, ಕೊಡಗು, ಚಾಮರಾಜನಗರ, ಮಂಡ್ಯ ಜಿಲ್ಲೆಗಳಲ್ಲಿ ಮೇ 14ರಿಂದ 18ರವರೆಗೆ ಮೋಡ ಕವಿದ ವಾತಾವರಣದೊಂದಿಗೆ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಪ್ರಕಟಣೆ ತಿಳಿಸಿದೆ.

ಗ್ರಾಮ ಪಂಚಾಯ್ತಿಯಿಂದ ವಿತರಿಸಲಾದ ನಿವೇಶನಗಳಿಗೆ ನಮೂನೆ–9, 11ಎ ನೀಡಲು ಆದೇಶ

ಗೊಂದಲಗಳಿಗೆ ತೆರೆ ಎಳೆಯಲು ನಿರ್ಧಾರ

ಮೈಸೂರು, ಮೇ 13(ಎಸ್‌ಪಿಎನ್)– ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಿತರಿಸಲಾದ ನಿವೇಶನಗಳಿಗೆ ಹಕ್ಕುಪತ್ರಗಳನ್ನು ವಿತರಿಸಲಾಗಿದೆ. ಈ ನಿವೇಶನಗಳಿಗೆ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಅಡಿಯಲ್ಲಿ ಫಲಾನುಭವಿಗಳಿಗೆ ನಮೂನೆ–9 ಮತ್ತು 11ಎ ನೀಡಲು ಕೆಲ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಉಪ ಕಾರ್ಯದರ್ಶಿ ಡಾ.ಎನ್.ಸೋಮೇಶ್ ಕುಮಾರ್, ಸಂಬಂಧಪಟ್ಟ ಅಧಿಕಾರಿಗಳಿಗೆ ಮೇ 12ರಂದು ಆದೇಶಿಸಿದ್ದಾರೆ.

ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪ್ರಕರಣ 94–ಸಿ, 94 ಸಿಸಿ ಹಾಗೂ 94–ಡಿಯಲ್ಲಿ ನಿವೇಶನ ಮತ್ತು ಮನೆಗಳಿಗೆ ನೀಡುವ ಇ–ಸ್ವತ್ತು ತಂತ್ರಾಂಶದ ಮೂಲಕ ಕಂದಾಯ ಇಲಾಖೆಯಿಂದ ವಿತರಣೆ ಮಾಡಲಾದ ಹಕ್ಕು ಪತ್ರಗಳಿಗೆ ಗ್ರಾಪಂಗಳಲ್ಲಿ ಉಂಟಾದ ಗೊಂದಲಗಳಿಗೆ ಗ್ರಾಮೀಣಾಭಿವೃದ್ಧಿ ಆಯುಕ್ತರ ನೇತೃತ್ವದಲ್ಲಿ ಮೇ 2ರಂದು ನಡೆದ ತೀರ್ಮಾನದಂತೆ ಕ್ರಮವಹಿಸಲು ಸೂಚಿಸಲಾಗಿದೆ.

ತಹಸೀಲ್ದಾರ್ ಹಂತದಲ್ಲಿ: ಕಂದಾಯ ಇಲಾಖೆಯ ತಂತ್ರಾಂಶದ ಮೂಲಕ ತಹಶೀಲ್ದಾರರಿಂದ ಸ್ವೀಕರಿಸಲಾದ ಹಕ್ಕು ಪತ್ರಗಳಲ್ಲಿ ತಪ್ಪಾದ/ಅಪೂರ್ಣ (ವಿಸ್ತೀರ್ಣ, ಚಕ್ಕುಬಂದಿ ಇತ್ಯಾದಿ) ಮಾಹಿತಿ ಇದ್ದಲ್ಲಿ ಅಂತಹ ಹಕ್ಕು ಪತ್ರಗಳಿಗೆ ಇ–ಸ್ವತ್ತು ತಂತ್ರಾಂಶದಲ್ಲಿ ಪಿಐಡಿ ತಯಾರಿಸಿದ ಇ–ಸ್ವತ್ತು ತಂತ್ರಾಂಶದಲ್ಲಿ ತಿರಸ್ಕರಿಸುವುದು.

ಅಪೂರ್ಣ ಮಾಹಿತಿಯುಳ್ಳ ಹಕ್ಕು ಪತ್ರಗಳಿಗೆ ಗ್ರಾಪಂಗಳಲ್ಲಿ ಈಗಾಗಲೇ ಪಿಐಡಿಗಳನ್ನು ಸೃಜಿಸಿದ್ದರೆ ಎಕ್ಸ್‌ಎಂಎಲ್ ಕಡತಗಳನ್ನು ರಿಜೆಕ್ಟ್ ಮಾಡುವುದು. ಈಗಾಗಲೇ ಪಿಡಿಓ ಹಂತದಲ್ಲಿ ನೋಟೀಸ್ ಸೃಜಿಸಿ 15 ದಿನಗಳ ಮ್ಯುಟೇಷನ್ ಅವಧಿಯಲ್ಲಿ ಪಿಐಡಿಗಳು ಅನುಮೋದಿಸಿದ ಫಲಾನುಭವಿಗಳ ಮಾಹಿತಿಯನ್ನು ತಹಶೀಲ್ದಾರರಿಗೆ ಹಾಗೂ ತಾಲೂಕು ಇಓಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಶಿಫಾರಸ್ಸು ಮಾಡುವುದು.

ಹಳೆಯ ಪಿಐಡಿ ನಿಷ್ಕ್ರಿಯ ಹೇಗೆ?: ತಹಶೀಲ್ದಾರರಿಂದ ಸ್ವೀಕರಿಸಲಾದ ನಿವೇಶನದ ಹಕ್ಕುಪತ್ರಗಳ ವಿವರಗಳನ್ವಯ ಈಗಾಗಲೇ ಗ್ರಾಪಂನಲ್ಲಿ ಸ್ವೀಕರಿಸಲಾದ ಹಕ್ಕುಪತ್ರಗಳಿಗೆ, ಗ್ರಾಪಂ ಪಂಚತಂತ್ರ ತಂತ್ರಾಂಶದಲ್ಲಿ ಫಲಾನುಭವಿಯ ವಿವರಗಳಿದ್ದಲ್ಲಿ ತಹಶೀಲ್ದಾರರಿಂದ ಸ್ವೀಕರಿಸಲಾದ ಹಕ್ಕುಪತ್ರಗಳಿಗೆ ಹೊಸದಾಗಿ ಇ–ಸ್ವತ್ತು ತಂತ್ರಾಂಶದಲ್ಲಿ ಪಿಐಡಿ ಸೃಜಿಸದೆ, ಪಂಚತಂತ್ರ ತಂತ್ರಾಂಶದಲ್ಲಿನ ಆಸ್ತಿಯ ಪಿಐಡಿಗೆ ಹಕ್ಕುಪತ್ರದ ಮಾಹಿತಿಯನ್ನು ಜೋಡಣೆ ಮಾಡುವುದು. ಈ ಪ್ರಕರಣದಲ್ಲಿ ನೊಂದಣಿಯ ಅಗತ್ಯ ಇರುವುದಿಲ್ಲ. ಪಂಚತಂತ್ರ ತಂತ್ರಾಂಶದಲ್ಲಿನ ಮಾಹಿತಿಗೆ ಹಕ್ಕುಪತ್ರವನ್ನು ಹೊಸದಾಗಿ ಇ–ಸ್ವತ್ತು ತಂತ್ರಾಂಶಗಳಿಗೆ ಪಿಐಡಿ ಸೃಜಿಸಲಾಗಿದ್ದರೆ, ಪಂಚತಂತ್ರದಲ್ಲಿನ ಹಳೆಯ ಪಿಐಡಿ ನಿಷ್ಕ್ರಿಯಗೊಳಿಸುವುದು.

ಇ–ಸ್ವತ್ತು ಅನುಮೋದನೆ ಹೇಗೆ: ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪ್ರಕರಣ 94–ಡಿ ರಡಿಯಲ್ಲಿ ವಾಸದ ಮನೆಗಳಿಗೆ ಹಾಗೂ ಹೊಂದಿಕೊಂಡಿರುವ ಜಾಗಗಳಿಗೆ ಹಕ್ಕು ಪತ್ರಗಳನ್ನು ಈಗಾಗಲೇ ವಿತರಣೆ ಮಾಡಲಾಗಿರುತ್ತದೆ. ಈ ಹಕ್ಕು ಪತ್ರಗಳಲ್ಲಿ ನಿವೇಶನದ ಮಾಹಿತಿ ಮಾತ್ರ ಲಭ್ಯವಿರುವುದರಿಂದ ಕಾವೇರಿ ತಂತ್ರಾಂಶದಿಂದ ಗ್ರಾಪಂ ಫಲಾನುಭವಿ ಹೆಸರಿಗೆ ಸ್ವೀಕರಿಸುವ ಎಕ್ಸ್‌ಎಂಎಲ್ ಕಡತಗಳನ್ನು ಮ್ಯುಟೇಷನ್ ಪ್ರಕ್ರಿಯೆಗೆ ಒಳಪಡಿಸಬೇಕು. ಈ ಸಂಬಂಧ ಪಿಡಿಓ ಹೊರಡಿಸುವ 15 ದಿನಗಳ ನೋಟೀಸ್ ಅವಧಿಯಲ್ಲಿ ಹಕ್ಕು ಪತ್ರಗಳಲ್ಲಿನ ವಿವರಗಳಿಗೆ ಅನುಗುಣವಾಗಿ ಮನೆಗಳ ಸ್ಥಳ ಪರಿಶೀಲನೆ ಮಾಡಿ, ಆತನ ಹೆಸರನ್ನು ಇ–ಸ್ವತ್ತು ತಂತ್ರಾಂಶದಲ್ಲಿ ಅನುಮೋದನೆ ಮಾಡಬೇಕು. ನಂತರ, ಪುನಃ ಮ್ಯಾನ್ಯುಯಲ್ ಮ್ಯುಟೇಷನ್ ಮಾಡುವ ಮೂಲಕ (ಸ್ವತ್ತಿನ ಪ್ರಕಾರ) ನಿವೇಶನದ ವಿವರದೊಂದಿಗೆ ಕಟ್ಟಡದ ಮಾಹಿತಿಯನ್ನು ತಂತ್ರಾಂಶದಲ್ಲಿ ಇಂದೀಕರಿಸುವ ಮೂಲಕ ಫಲಾನುಭವಿಯ ಹೆಸರಿಗೆ ನಮೂನೆಗಳ ವಿತರಣೆಗೆ ಕ್ರಮವಹಿಸಬೇಕು ಎಂದು ಕೆಳಹಂತದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಪಿಟಿಸಿಎಲ್ ಕಲಂ ದೃಢಪಡಿಸಿಕೊಳ್ಳಬೇಕು: ಹಕ್ಕುಪತ್ರಗಳ ಷರತ್ತುಗಳನ್ವಯ ಫಲಾನುಭವಿಗಳು ಪಡೆದ ಆಸ್ತಿಯನ್ನು 15 ವರ್ಷಗಳ ಅವಧಿಯವರೆಗೆ ಪರಭಾರೆ ಮಾಡದ ಅಂಶವನ್ನು ಇ–ಸ್ವತ್ತು ತಂತ್ರಾಂಶದ ಹಕ್ಕುಗಳು ಮತ್ತು ಋಣಭಾರ ಕಲಂನಲ್ಲಿ ಸ್ವಯಂ ಚಾಲಿತವಾಗಿ ದಾಖಲಾಗಿರುವುದನ್ನು ಹಾಗೂ ಇ–ಸ್ವತ್ತು ನಮೂನೆಗಳಲ್ಲಿ ದಾಖಲಾಗಿರುವುದರ ಬಗ್ಗೆ ಪಿಡಿಓ ದೃಢೀಕರಿಸಿಕೊಳ್ಳುವುದು. ಅಂತೆಯೇ ಎಸ್ಸಿ–ಎಸ್ಟಿಗಳಿಗೆ ಸೇರಿದ ಕಟ್ಟಡ/ ನಿವೇಶನಗಳು ಪಿಟಿಸಿಎಲ್ ವ್ಯಾಪ್ತಿಗೆ ಒಳಪಡುವುದರಿಂದ ಪಿಟಿಸಿಎಲ್ ಕಾಯ್ದೆಯಂತೆ ವ್ಯವಹರಿಸಲು ಈ ಕಲಂ ದೃಢಪಡಿಸಿಕೊಳ್ಳಬೇಕು.

ಈ ಮೇಲಿನ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ರಾಜ್ಯದ ಎಲ್ಲಾ ಜಿಪಂ ಸಿಇಓ, ಉಪ ಕಾರ್ಯದರ್ಶಿ ಹಾಗು ಇತರೆ ಜಿಲ್ಲಾ ಮತ್ತು ತಾಲೂಕು ಹಂತದ ಅಧಿಕಾರಿಗಳು, ಪಿಡಿಓ, ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಡಾ.ಎನ್. ಸೋಮೇಶ್‌ಕುಮಾರ್ ಆದೇಶಿಸಿದ್ದಾರೆ.

ಗ್ರಾಪಂ ವ್ಯಾಪ್ತಿಯ ಸರ್ಕಾರ ಭೂಮಿಯಲ್ಲಿ ನಿವೇಶನಗಳನ್ನು ಹಂಚಲಾಗಿದ್ದು ಅದರ ಹಕ್ಕುಪತ್ರಗಳನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆ ಈ ಹಕ್ಕುಪತ್ರಗಳನ್ವಯ ಫಲಾನುಭವಿಗಳಿಗೆ ನಮೂನೆ 9 ಮತ್ತು 11ಎ ವಿತರಣೆಗೂ ಮೊದಲು ಕೆಲ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸರ್ಕಾರದಿಂದ ಅಧಿಕೃತ ಆದೇಶ ಸೋಮವಾರ ಹೊರಡಿಸಿದೆ.



-ಎಸ್.ಯುಕೇಶ್‌ಕುಮಾರ್,
ಸಿಇಓ, ಮೈಸೂರು ಜಿಲ್ಲಾ ಪಂಚಾಯತ್

ಸಾಮಾಜಿಕ ಜಾಲತಾಣದಲ್ಲಿ ಆಕ್ಷೇಪಾರ್ಹ ವಿಡಿಯೋ ಹಾಕಿದವನ ವಿರುದ್ಧ ಪ್ರಕರಣ ದಾಖಲು

ಮೈಸೂರು, ಮೇ 13– ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷ ಸಂಬಂಧ ಆಕ್ಷೇಪಾರ್ಹ ವಿಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡ ಆರೋಪದಡಿ ಮೈಸೂರಿನ ಮಂಡಿ ಪೊಲೀಸ್ ಠಾಣೆಯಲ್ಲಿ ವ್ಯಕ್ತಿಯೊಬ್ಬನ ವಿರುದ್ಧ ಪ್ರಕರಣ ದಾಖಲಾಗಿದೆ. ಮಂಡಿ ಪೊಲೀಸ್ ಠಾಣೆಯ ಗುಪ್ತಮಾಹಿತಿ ಸಂಗ್ರಹಣೆ ಹಾಗೂ ಸಾಮಾಜಿಕ ಮಾಧ್ಯಮದ ವಿಭಾಗದ ಸಿಬ್ಬಂದಿಗಳು, ಆಕ್ಷೇಪಾರ್ಹ ವಿಡಿಯೋಗಳನ್ನು ವೀಕ್ಷಿಸಿದ ಕೂಡಲೇ ಆರೋಪಿ ವಿರುದ್ಧ ಕಾನೂನು ಕ್ರಮ ಕೈಗೊಂಡಿದ್ದಾರೆ.

ಆರೋಪಿಯು ತಂತ್ರಜ್ಞಾನ ಬಳಸಿ ಸೃಷ್ಟಿಸಿದ್ದ ಮೂರು ಆಕ್ಷೇಪಾರ್ಹ ವಿಡಿಯೋಗಳನ್ನು ತನ್ನ ಫೇಸ್‌ಬುಕ್ ಖಾತೆಯಲ್ಲಿ ಹಂಚಿಕೊಂಡಿದ್ದ. ಪಾಕಿಸ್ತಾನದ ಧ್ವಜವಿರುವ ರಾಕೆಟ್ ಮುಂಭಾಗದಲ್ಲಿ ಭಾರತದ ತ್ರಿವರ್ಣ ಧ್ವಜವನ್ನು ಕಟ್ಟಿರುವಂತೆ, ತ್ರಿವರ್ಣ ಧ್ವಜ ಹೊದ್ದಿಸಿರುವ ಹಸುವನ್ನು ಪಾಕಿಸ್ತಾನದ ಧ್ವಜವಿರುವ ರಾಕೆಟ್‌ಗೆ ಕಟ್ಟಿಕೊಂಡು ಮೇಲಕ್ಕೆ ಹೊತ್ತುಕೊಂಡು ಹೋಗುತ್ತಿರುವಂತೆ ಹಾಗೂ ಪ್ರಧಾನಿ ಮೋದಿ ಯುದ್ಧ ವಿಮಾನದ ಅವಶೇಷವನ್ನು ಒಂದು ಕತ್ತೆ ಗಾಡಿಯಲ್ಲಿ ತುಂಬಿಕೊಂಡು ಹೋಗುವಂತಿರುವ ವಿಡಿಯೋಗಳನ್ನು ಶೇರ್ ಮಾಡಿದ್ದ. ಇದು ರಾಷ್ಟ್ರೀಯ ಐಕ್ಯತೆ, ಸಾರ್ವಭೌಮತೆ, ಏಕತೆ, ಅಖಂಡತೆಗೆ ಅಪಾಯವನ್ನುಂಟು ಮಾಡಬಹುದೆಂದು ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮೇ 17ರಂದು ಬೀಡಿ ಕಾರ್ಮಿಕರ ಆಸ್ಪತ್ರೆಯಲ್ಲಿ ಮೆಗಾ ರಕ್ತದಾನ ಶಿಬಿರ

ಮೈಸೂರು, ಮೇ 13(ಆರ್‌ಕೆ)– ಉದಯಗಿರಿಯ ಬೀಡಿ ಕಾರ್ಮಿಕರ ಆಸ್ಪತ್ರೆಯಲ್ಲಿ ಮೇ 17ರಂದು ಭಾರತೀಯ ಸೈನಿಕರಿಗೆ ಗೌರವ ಸಲ್ಲಿಸುವ ಸಲುವಾಗಿ ಮೆಗಾ ರಕ್ತದಾನ ಶಿಬಿರ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಸಂಯುಕ್ತಾಶ್ರಯದಲ್ಲಿ ಅಂದು ಬೆಳಗ್ಗೆ 9ರಿಂದ ಸಂಜೆ 4 ಗಂಟೆವರೆಗೆ ನಡೆಯಲಿರುವ ಶಿಬಿರದಲ್ಲಿ 1000ಕ್ಕೂ ಹೆಚ್ಚು ಯೂನಿಟ್ ರಕ್ತ ಸಂಗ್ರಹಿಸುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಹೆಚ್.ಕೆ. ಕುಮಾರಸ್ವಾಮಿ ತಿಳಿಸಿದ್ದಾರೆ.

ಎನ್‌ಆರ್ ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಮಾರ್ಗದರ್ಶನದಲ್ಲಿ ಮೆಗಾ ರಕ್ತದಾನ ಶಿಬಿರ ನಡೆಸುವ ಬಗ್ಗೆ ಇಂದು ಬೀಡಿ ಕಾರ್ಮಿಕರ ಆಸ್ಪತ್ರೆಯಲ್ಲಿ ಡಾ. ಕುಮಾರಸ್ವಾಮಿ ಪೂರ್ವಭಾವಿ ಸಭೆ ನಡೆಸಿದ್ದು, 'ಆಪರೇಷನ್ ಸಿಂಧೂರ' ಯಶಸ್ವಿಗೊಳಿಸಿರುವ ಸಲುವಾಗಿ ಭಾರತೀಯ ಸೈನಿಕರಿಗೆ ಗೌರವ ಸಮರ್ಪಿಸಲು ಶಿಬಿರ ಏರ್ಪಡಿಸಿದ್ದು, ಪ್ರತಿಯೊಬ್ಬರೂ ಕಾರ್ಯಕ್ರಮ ಯಶಸ್ಸಿಗೆ ಶ್ರಮಿಸಬೇಕು ಎಂದು ಸೂಚಿಸಿದರು. ಜಿಲ್ಲಾ ತಾಯಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ. ಶಿರಾಜ್ ಉದ್ದೀನ್, ಡಾ. ಜಯಂತ್, ಡಾ. ಲೀಲಾ ಕುಮಾರ್ ಸೇರಿದಂತೆ ಇತರರು ಸಭೆಯಲ್ಲಿ ಹಾಜರಿದ್ದರು.



ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತು ಗಳು ವಿಶ್ವಾಸಪೂರ್ಣವೇ ಆದರೂ ಅವು ಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಎಸ್‌ಟಿಜಿ ಶಾಲೆಗೆ ಶೇ.100ರಷ್ಟು ಫಲಿತಾಂಶ



ಧಾರಿಣಿ.ಎ.ಜೆ(96.4)



ಚಿನ್ಮಯ್. ವೈ(92.00)



ನಿಸರ್ಗ.ಕೆ.ಎಸ್(91.40)

ಚಿನಕುರಳಿ: ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯ ಫಲಿತಾಂಶ ಮಂಗಳವಾರ ಪ್ರಕಟವಾಗಿದ್ದು, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರ ಒಡೆತನದ ಚಿನಕುರಳಿಯ ಎಸ್‌ಟಿಜಿ ಶಾಲೆ ಶೇ.100 ಫಲಿತಾಂಶ ಪಡೆದುಕೊಂಡಿದೆ.

ಶಾಲೆಯ 91 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು ಎಲ್ಲಾ 91 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ. ಶಾಲೆಯ ವಿದ್ಯಾರ್ಥಿನಿ ಧಾರಿಣಿ.ಎ.ಜೆ ಶೇ 96.4 ಅಂಕದೊಂದಿಗೆ ಪ್ರಥಮ ಸ್ಥಾನಗಳಿಸಿದ್ದು, ಚಿನ್ಮಯ್.ವೈ (92.00) ದ್ವಿತೀಯ ಹಾಗೂ ನಿಸರ್ಗ.ಕೆ.ಎಸ್(91.40) ತೃತೀಯ ಸ್ಥಾನಗಳಿಸಿದ್ದಾರೆ. ಧಾರಿಣಿ.ಎ.ಜೆ ಹಾಗೂ ಚಿನ್ಮಯ್.ವೈ. ಅವರು ಕನ್ನಡ ವಿಷಯದಲ್ಲಿ 100ಕ್ಕೆ 100 ಅಂಕಗಳನ್ನುಗಳಿಸಿದ್ದಾರೆ. ಶಾಲೆಯ 17 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ, 54 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ ಹಾಗೂ 20 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ.

ಉತ್ತಮ ಫಲಿತಾಂಶದೊಂದಿಗೆ ಶಾಲೆಗೆ ಕೀರ್ತಿ ತಂದಿರುವ ಎಲ್ಲಾ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಸಂಸ್ಥೆಯ ಅಧ್ಯಕ್ಷರು ಹಾಗೂ ಮಾಜಿ ಸಚಿವರಾದ ಸಿ.ಎಸ್. ಪುಟ್ಟರಾಜು ಹಾಗೂ ಸಂಸ್ಥೆಯ ಸಿಇಓ ಸಿ.ಪಿ.ಶಿವರಾಜು, ಆಡಳಿತ ಮಂಡಳಿಯವರು, ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

ಮೇ 17ರಂದು ಮಹೇಶ್ ಜೋಶಿ ವಿರುದ್ಧ ವಿಭಾಗೀಯ ಮಟ್ಟದ ಜಾಗೃತಿ ಸಮಾವೇಶ



ಸುದ್ದಿಗೋಷ್ಠಿಯಲ್ಲಿ ಡಾ.ಮೀರಾಶಿವಲಿಂಗಯ್ಯ ಮಾತನಾಡುತ್ತಿರುವುದು.

ಮಂಡ್ಯ,ಮೇ 13– ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಶಿಯಿಂದ ಕನ್ನಡ ಭಾಷೆಯ ನಿರ್ಲಕ್ಷ್ಯ, ಪರಿಷತ್ತಿನಲ್ಲಿ ಆರ್ಥಿಕ ಅಶಿಸ್ತು, ಬೈಲಾ ತಿದ್ದುಪಡಿ, ಸರ್ವಾಧಿಕಾರಿ ಧೋರಣೆ ಸೇರಿದಂತೆ ಪರಿಷತ್ತಿನ ಘನತೆಗೆ ಧಕ್ಕೆ ತರುವ ಕೆಲಸದಲ್ಲಿ ತೊಡಗಿರುವ ಹಿನ್ನೆಲೆಯಲ್ಲಿ ಮೇ 17ರಂದು ಬೆಳಿಗ್ಗೆ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ವಿಭಾಗ ಮಟ್ಟದ ಜಾಗೃತಿ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಕರ್ನಾಟಕ ಸಂಘದ ಅಧ್ಯಕ್ಷ, ಪ್ರೊ.ಜಯಪ್ರಕಾಶ್ ಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹೇಶ್ ಜೋಶಿ ವಿಚಾರವಾಗಿ ವೈಯಕ್ತಿಕವಾಗಿ ಯಾವುದೇ ತಕರಾರಿಲ್ಲ, ಆದರೆ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಕ ಆಯ್ಕೆಯಾಗಿ ಪ್ರಜಾಪ್ರಭುತ್ವ ವಿರೋಧಿ ನೆಲೆಯಲ್ಲಿ ಅಧಿಕಾರ ನಡೆಸುತ್ತಿರುವುದು ಸರಿಯಲ್ಲ ಎಂಬ ಕಾರಣದಿಂದ ಈ ಹೋರಾಟ ಎಂದರು.

110 ವರ್ಷಗಳ ಹಾದಿಯಲ್ಲಿರುವ ಕಸಾಪದಲ್ಲಿನ ಅಧ್ಯಕ್ಷರ ಪಾತ್ರ ಕನ್ನಡ ಜಾಗೃತಿ ಬೆಳೆಸುವ ನಿಟ್ಟಿನಲ್ಲಿ ಸಮ್ಮೇಳನ ನಡೆಸುವುದು. ಆದರೆ ಸರ್ಕಾರದಿಂದ ಹಣ ನೀಡಲು ಪ್ರಾರಂಭವಾದಾಗಿನಿಂದ ಅಧ್ಯಕ್ಷರಾದವರ ಆಟಾಟೋಪಗಳು ಹೆಚ್ಚಾಗಿವೆ. ಈ ಸಂಬಂಧ ಆರೋಗ್ಯಕರ ಚರ್ಚೆ ಮಾಡುವವರ ವಿರುದ್ಧ ನೋಟೀಸ್ ನೀಡುವ ಕೆಲಸಕ್ಕೆ ಮುಂದಾದ ಜೋಶಿ, ಇದಕ್ಕೂ ಪರಿಷತ್ತಿನ ಹಣ ಬಳಕೆ ಮಾಡಿ, ಆರ್ಥಿಕ ಅಶಿಸ್ತಿನ ಮಟ್ಟವನ್ನು ಹೆಚ್ಚಿಸಿಕೊಂಡಿದ್ದಾರೆ ಎಂದು ಕಿಡಿ ಕಾರಿದರು.

ಮಹೇಶ್ ಜೋಶಿ ವಿರುದ್ಧ ಹೋರಾಟ ಮಾಡಲು ಸಿದ್ದರಿದ್ದೇವು, ಆದರೆ ಅವರನ್ನು ಜಗ್ಗಾಡಿ ಹೋರಾಟ ಮಾಡುವ ಅವಿವೇಕತನ ನಮ್ಮಲ್ಲಿಲ್ಲ, ಕಪ್ಪುಪಟ್ಟಿ ಪ್ರದರ್ಶಿಸುವ ಹಕ್ಕು ಹೋರಾಟ ಮಾಡುವವರಿಗಿಲ್ಲವೇ. ಇಷ್ಟಕ್ಕೆ ಮಂಡ್ಯ ಜಿಲ್ಲೆಯವನ್ನು ಕೊಲೆಗಟುಕರು ಎಂಬಂತೆ ಬಿಂಬಿಸಿ, ಕೊಲೆ ಬೆದರಿಕೆಯಿದೆಯೆಂದು ರಕ್ಷಣೆ ಪಡೆದಿದ್ದಾರೆ. ಈ ಸಂಬಂಧ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮುಚ್ಚಳಿಕೆ ಬರೆಸಿಕೊಂಡಿದ್ದಾರೆ ಎಂದರು.

ಮಂಡ್ಯ ಸಮ್ಮೇಳನದ ಖರ್ಚು ವೆಚ್ಚವನ್ನು ನೀಡದ ಹಾಲಿ ಅಧ್ಯಕ್ಷರು ಮುಂದಿನ ವರ್ಷ ಬಳ್ಳಾರಿಯಲ್ಲಿ ಜರುಗಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಖರ್ಚಿಗೆ ಸರ್ಕಾರದಿಂದ 40 ಕೋಟಿ ರೂ. ಬೃಹತ್ ಮೊತ್ತವನ್ನು ಕೇಳುತ್ತಿರುವುದು ಎಷ್ಟು ಸರಿ? ಎಂದು ಪ್ರಶ್ನಿಸಿದರು.

ಗೋಷ್ಠಿಯಲ್ಲಿ ಡಾ.ಮೀರಾಶಿವಲಿಂಗಯ್ಯ, ಪ್ರೊ.ಜಿಟಿವೀರಪ್ಪ ಸುನಂದ ಜಯರಾಂ, ಎಂ.ವಿ. ಧರಣೇಂದ್ರಯ್ಯ, ಡಿ.ಪಿ.ಸ್ವಾಮಿ ಹೆಚ್.ಕೆ. ಜಯರಾಂ, ಹೆಚ್.ವಿ.ಜಯರಾಂ ಇದ್ದರು.

ಸರ್ಕಾರದ ಐದು ಗ್ಯಾರಂಟಿಗಳು ಸಮರ್ಪಕವಾಗಿ ಜನರಿಗೆ ತಲುಪುತ್ತಿವೆ



ಜನತಾದರ್ಶನದಲ್ಲಿ ಅಹವಾಲು ಸ್ವೀಕರಿಸುತ್ತಿರುವ ಶಾಸಕ ರಮೇಶ್ ಬಂಡಿಸಿದ್ದೇಗೌಡ.

ಮಂಡ್ಯ, ಮೇ 13– ರಾಜ್ಯ ಕಾಂಗ್ರೆಸ್ ಸರ್ಕಾರ ಜನಪರವಾಗಿ ಕೆಲಸ ಮಾಡುತ್ತಿದ್ದು, ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಜನರಿಗೆ ತಲುಪುತ್ತಿವೆ ಎಂದು ಚೆಸ್ಕಾಂ ಅಧ್ಯಕ್ಷ ಹಾಗೂ ಶಾಸಕ ಎ.ಬಿ.ರಮೇಶ ಬಂಡಿಸಿದ್ದೇಗೌಡ ಹೇಳಿದರು.

ತಾಲೂಕಿನ ಮಂಗಲ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಆವರಣದಲ್ಲಿ ತಾಲೂಕು ಆಡಳಿತ ಮತ್ತು ತಾಲೂಕು ಪಂಚಾಯಿತಿ, ಕಂದಾಯ ಇಲಾಖೆ ವತಿಯಿಂದ ನಡೆದ ಮಂಗಲ ಗ್ರಾಮ ಪಂಚಾಯಿತಿ ಮಟ್ಟದ ಜನತಾದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ಕೊತ್ತಿ ಜನತಾ ದರ್ಶನ ಕಾರ್ಯಕ್ರಮಕ್ಕೆ ಆಯಾ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಿಗೆ ಸರ್ಕಾರ ಮಟ್ಟದ ಇಲಾಖೆ ಅಧಿಕಾರಿಗಳ ಜೊತೆ ಜನರ ಬಳಿಗೆ ತೆರಳಿ ಸಾರ್ವಜನಿಕರ ಅಹವಾಲು ಆಲಿಸಲಾಗುವುದು ಎಂದು ಹೇಳಿದರು.

21,500 ರೂಗಳನ್ನು ಪಾವತಿ ಮಾಡಿದರೆ ತಮ್ಮ ಜಮೀನುಗಳಿಗೆ ಟಿಸಿ ಅಳವಡಿಸಿ, ಆರ್‌ಆರ್ ನಂಬರ್ ಕೊಡಲಾಗುವುದು. ಆದ್ದರಿಂದ ರೈತರು ಬೋರ್ವೆಲ್‌ಗಳನ್ನು ರೆಗುಲೇಟ್ ಮಾಡಿಕೊಳ್ಳಿ. ಶೀಘ್ರ ವಿದ್ಯುತ್ ಸಂಪರ್ಕ ಯೋಜನೆಯನ್ನು ಜಾರಿಗೆ ತಂದಿದ್ದೇವೆ ಇಂತಹ ಯೋಜನೆಯನ್ನು ರೈತ ಬಾಂಧವರು ಉಪಯೋಗಿಸಿಕೊಳ್ಳಬಹುದು ಎಂದರು.

ಈ ಸಂದರ್ಭದಲ್ಲಿ ಎಸಿ ಶಿವಮೂರ್ತಿ, ತಹಸೀಲ್ದಾರ್ ಡಾ.ಶಿವಕುಮಾರ್ ಬಿರಾದಾರ್, ತಾಪಂ ಸಿಇಓ ವೀಣಾ, ಉಪತಹಸಿಲ್ದಾರ್ ಡಿ.ತಮ್ಮಣ್ಣಗೌಡ ಭಾಗವಹಿಸಿದ್ದರು.

ಗ್ರಾಪಂ ಸಮರ್ಪಕವಾಗಿ ಕಾರ್ಯ ನಿರ್ವಹಿಸಿದರೆ ತಾಪಂ, ಜಿಪಂ, ಶಾಸಕರಿಗೆ ಹೊರೆ ಕಡಿಮೆ



ಸಿಂಧುಘಟ್ಟ ಗ್ರಾಮದ ಕೆಡಿಪಿ ಸಭೆಯಲ್ಲಿ ಶಾಸಕ ಹೆಚ್.ಟಿ.ಮಂಜು ಮಾತನಾಡಿದರು.

ಕೆ.ಆರ್.ಪೇಟೆ,ಮೇ 13– ಗ್ರಾಮ ಮಟ್ಟದಲ್ಲಿ ಗ್ರಾಮ ಪಂಚಾಯಿತಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸಿದರೆ ತಾಲೂಕು ಪಂಚಾಯತಿ, ಜಿಲ್ಲಾ ಪಂಚಾಯಿತಿ ಹಾಗೂ ಶಾಸಕರಿಗೆ ಹೊರೆ ಕಡಿಮೆಯಾಗುತ್ತದೆ ಎಂದು ಶಾಸಕ ಹೆಚ್.ಟಿ. ಮಂಜು ಅಭಿಪ್ರಾಯಪಟ್ಟರು.

ತಾಲೂಕಿನ ಸಿಂಧುಘಟ್ಟ ಅಂಬೇಡ್ಕರ್ ಸಮುದಾಯ ಭವನದಲ್ಲಿ ಏರ್ಪಡಿಸಿದ್ದ ಶೀಳನೆರೆ ಹೋಬಳಿಯ ಸಿಂಧುಘಟ್ಟ ಗ್ರಾಮ ಪಂಚಾಯಿತಿ ಮಟ್ಟದ ಕೆಡಿಪಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮ ಮಟ್ಟದಲ್ಲಿ ನಡೆಯುವ ಗ್ರಾಮ ಪಂಚಾಯಿತಿಯ ಪ್ರಗತಿ ಪರಿಶೀಲನಾ ಸಭೆಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಜರಾಗುವುದು ಕಡ್ಡಾಯವಾಗಿದ್ದು, ತಮ್ಮ ತಮ್ಮ ಇಲಾಖೆಗಳ ಪ್ರಗತಿಯನ್ನು ಕಡ್ಡಾಯವಾಗಿ ಅಗತ್ಯ ಮಾಹಿತಿಗಳನ್ನು ಒದಗಿಸಿಕೊಡಬೇಕು. ಹಾಗೂ ಸರ್ಕಾರದ ಕಾರ್ಯಕ್ರಮಗಳು ಎಷ್ಟರ ಮಟ್ಟಿಗೆ ಅನುಷ್ಠಾನಗೊಂಡಿವೆ ಎಂಬುದನ್ನು ಪರಿಶೀಲನೆ ಮಾಡಿ ವಿಳಂಬವಾಗದಂತೆ ಅನುಷ್ಠಾನ ಮಾಡುವ ದೃಷ್ಟಿಯಿಂದ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಲಾಗುವುದು ಎಂದರು.

ಸಿಂಧಘಟ್ಟ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಾವಣ್ಯಕುಮಾರ್ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಪಿಡಿಓ ಕೆ.ಜೆ.ವಾಣಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಸಿಂಧುಘಟ್ಟ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಾವಣ್ಯ ಕುಮಾರ್, ತಾಪಂ ಇ.ಓ ಕೆ.ಸುಷ್ಮಾ, ಪಿಡಿಓ ಕೆ.ಜೆ.ವಾಣಿ, ತಾಲೂಕು ಪಂಚಾಯತ್ ಯೋಜನಾಧಿಕಾರಿ ಶ್ರೀನಿವಾಸ್, ಸೇರಿದಂತೆ ಗ್ರಾಪಂ ಸದಸ್ಯರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ನಾಳೆ ಕೆಲವೆಡೆ ವಿದ್ಯುತ್ ವ್ಯತ್ಯಯ

ಮಂಡ್ಯ, ಮೇ 13– ಕೆಐಎಡಿಬಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣೆ ಹಮ್ಮಿಕೊಂಡಿರುವುದರಿಂದ ಮೇ 15 ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ಕೆಲವೆಡೆ ವಿದ್ಯುತ್‌ನಲ್ಲಿ ವ್ಯತ್ಯವಾಗಲಿದೆ ಅಸಿಟೇಟ್ ಟೌನ್, ಡಿ.ಜಿ.ದೊಡ್ಡಿ ಫ್ಯಾಕ್ಟರಿ ವೃತ್ತ ಮತ್ತು ಬೆಂಗಳೂರು ಮುಖ್ಯ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ಗ್ರಾಮಾಂತರ ಪ್ರದೇಶಗಳಾದ ಮರಕಾಡು ದೊಡ್ಡಿ, ಶ್ರೀನಿವಾಸಪುರ ಗೇಟ್, ಮಲ್ಲಯ್ಯನದೊಡ್ಡಿ ಕಟ್ಟೆದೊಡ್ಡಿ, ಬಿ.ಗೌಡಗೆರೆ, ಹೊಸಬೂದನೂರು, ಹಳೇಬೂದನೂರು, ಹನಕೆರೆ ಐಪಿ ಮಾರ್ಗ, ಕೀಲಾರ ಐ.ಪಿ ಮಾರ್ಗ, ಬಸವನಪುರ ಐ.ಪಿ ಮಾರ್ಗ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ರಾಸುಗಳಿಗೆ ಉಚಿತ ಕಾಲು ಬಾಯಿ ಜ್ವರದ ಲಸಿಕೆ



ಚಿನಕುರಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ವ್ಯಾಪ್ತಿಯ ರಾಸುಗಳಿಗೆ ಉಚಿತ ಕಾಲು ಬಾಯಿ ಜ್ವರದ ಲಸಿಕೆಯನ್ನು ಮನ್‌ಮುಲ್ ನಿರ್ದೇಶಕ ಸಿ.ಶಿವಕುಮಾರ್ ನೀಡಿದರು. ಈ ವೇಳೆ ಉಪಾಧ್ಯಕ್ಷ ರಮೇಶ್, ಮಾಜಿ ಅಧ್ಯಕ್ಷ ವರದರಾಜು, ರಮೇಶ್, ಲೋಕೇಶ್, ಸದಸ್ಯ ಮಂಜುನಾಥ್ ಸೇರಿದಂತೆ ಎಲ್ಲಾ ನಿರ್ದೇಶಕರು ಹಾಗೂ ವೈದ್ಯಾಧಿಕಾರಿಗಳು, ಸಂಘದ ನೌಕರರು ಹಾಜರಿದ್ದರು.

ಶಿಕ್ಷಣ, ಆರೋಗ್ಯ, ಕೌಶಲ್ಯಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿ: ಪ್ರೊ.ಎಂ.ಗೋವಿಂದರಾವ್



ಜಿಲ್ಲಾ ಮಟ್ಟದ ಸಂವಾದ ಸಭೆಯಲ್ಲಿ ಭಾಗವಹಿಸಿರುವ ಗಣ್ಯರು.

ಮಂಡ್ಯ, ಮೇ.13– ಶಿಕ್ಷಣ, ಆರೋಗ್ಯ ಮತ್ತು ಕೌಶಲ್ಯ ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಿ ಯೋಜನೆಗಳನ್ನು ರೂಪಿಸಿ ಮಹತ್ತರವಾದ ಬದಲಾವಣೆ ತರುವುದರಿಂದ ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಬಹುದು ಎಂದು ಆರ್ಥಿಕ ತಜ್ಞರು ಹಾಗೂ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಅಧ್ಯಕ್ಷರಾದ ಪ್ರೊ.ಎಂ.ಗೋವಿಂದರಾವ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಸಮಿತಿಯ ಸದಸ್ಯರು, ಜಿಲ್ಲೆಯ ಅಧಿಕಾರಿಗಳು, ವಿವಿಧ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಜಿಲ್ಲಾ ಮಟ್ಟದ ಸಂವಾದ ಸಭೆ ನಡೆಸಿ ಮಾತನಾಡಿದರು.

ಸೇವಾ ವಲಯದಲ್ಲಿ ಜಿಲ್ಲೆಯಲ್ಲಿ ಉತ್ತಮವಾಗಿ ಅಭಿವೃದ್ಧಿ ಹೊಂದುತ್ತಿದೆ. ಆದರೆ ಮುಖ್ಯವಾಗಿ ಕೃಷಿ, ಕೈಗಾರಿಕೆ, ಶಿಕ್ಷಣ, ಆರೋಗ್ಯ ವಲಯದಲ್ಲಿ ಅಭಿವೃದ್ಧಿಯ ಸೂಚ್ಯಾಂಕ ಕಡಿಮೆ ಇದೆ. ಈ ವಲಯಗಳನ್ನು ಅಭಿವೃದ್ಧಿಗೊಳಿಸಲು ಉತ್ತಮ ಯೋಜನೆ ಹಾಗೂ ಸಲಹೆಗಳು ಬೇಕಿದೆ ಎಂದರು.

ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ವಿತ್ತೀಯ ಸುಧಾರಣೆ ಮತ್ತು ಯೋಜನಾ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ.ಆರ್.ವಿಶಾಲ್ ಅವರು ಮಾತನಾಡಿ ಮಂಡ್ಯ ಜಿಲ್ಲೆಯಲ್ಲಿ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಸೌಲಭ್ಯಗಳು ಬೇಕಿದೆ. ಮೊದಲಿಗೆ ಸೂಪರ್ ಸ್ಪೆಷಾಲಿಟಿ ಹಾಸ್ಪಿಟಲ್, ಟ್ರಾಮಾ ಸೆಂಟರ್, ನೆಫ್ರೋ ಮತ್ತು ನ್ಯೂರೋ ತಜ್ಞರ ಅವಶ್ಯಕತೆ ಕುರಿತು ಸಭೆಯಲ್ಲಿ ಚರ್ಚಿಸಿ ಆರೋಗ್ಯ ಕ್ಷೇತ್ರದ ಅವಶ್ಯಕತೆ ಕುರತು ವರದಿ ಸಲ್ಲಿಸುವುದಾಗಿ ತಿಳಿಸಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ ಮಂಡ್ಯ ಜಿಲ್ಲೆಯಲ್ಲಿ ಹೆಣ್ಣು ಮಕ್ಕಳಿಗೆ ಉನ್ನತ ವಿದ್ಯಾಭ್ಯಾಸಕ್ಕೆ ಹಾಸ್ಟಲ್ ಹಾಗೂ ಕಾಲೇಜುಗಳು ತಾಲೂಕು ಮಟ್ಟದಲ್ಲಿ ಹೆಚ್ಚಾಗಬೇಕು. ಇದರಿಂದ ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗು ಕಡಿಮೆಯಾಗುತ್ತದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಕೆ.ಆರ್.ನಂದಿನಿ ಅವರು ಮಾತನಾಡಿದರು.

ಸಭೆಯಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಉಪಾಧ್ಯಕ್ಷೆ ಮೀರಾ ಶಿವಲಿಂಗಯ್ಯ, ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಪ್ರಭಾಕರ್ ಅವರುಗಳು ಸಂವಾದದಲ್ಲಿ ಭಾಗವಹಿಸಿ ಸಲಹೆಗಳನ್ನು ನೀಡಿದರು. ಸಭೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸದಸ್ಯರಾದ ಸೂರ್ಯ ನಾರಾಯಣ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮೂರನೇ ಪುಟದಿಂದ

ಯೋಧರಿಗೆ ಮೋದಿ ಸಲ್ಯೂಟ್



ಭಾರತೀಯ ಸೇನೆಯ ಪಾರಮ್ಯ: ಪಾಕ್‌ನ ಅಣ್ವಸ್ತ್ರ ಬಳಕೆ ಬೆದರಿಕೆಗೆ ಭಾರತ ಎಂದೂ ಹೆದರುವುದಿಲ್ಲ. ಪಾಕ್ ಸೇನೆಯ ಕ್ಷಿಪಣಿ, ಡ್ರೋನ್, ಜೆಟ್‌ಗಳನ್ನು ಹೊಡೆದುರುಳಿಸುವ ಮೂಲಕ ನಮ್ಮ ಸೇನೆ ಪಾರಮ್ಯ ಮೆರೆದಿದೆ. ಪಾಕಿಸ್ತಾನವು ಭಾರತದ ಕಡೆಗೆ ತಲೆ ಎತ್ತಿ ನೋಡದಂತೆ ಮಾಡಿದ್ದೇವೆ. ನಮ್ಮ ಡ್ರೋನ್‌ಗಳು ಮತ್ತು ಕ್ಷಿಪಣಿಗಳ ಬಗ್ಗೆ ಯೋಚಿಸುತ್ತಾ ಪಾಕಿಸ್ತಾನಕ್ಕೆ ದೀರ್ಘಕಾಲ ನಿದ್ರೆ ಬರುವುದಿಲ್ಲ. 'ಆಪ ರೇಷನ್ ಸಿಂಧೂರ್' ಮೂಲಕ ನೀವು ದೇಶದ ಆತ್ಮವಿಶ್ವಾಸ ಹಾಗೂ ಜನರಲ್ಲಿನ ಏಕತೆಯನ್ನು ಹೆಚ್ಚಿಸಿದ್ದೀರಿ. ಈ ಕಾರ್ಯಾಚರಣೆಯ ಪ್ರತಿ ಕ್ಷಣವೂ ನಮ್ಮ ಸಶಸ್ತ್ರ ಪಡೆಗಳ ಶೌರ್ಯಕ್ಕೆ ಸಾಕ್ಷಿಯಾಗಿವೆ. ಜೊತೆಗೆ ನಮ್ಮ ಸೇನೆ, ವಾಯುಪಡೆ ಹಾಗೂ ನೌಕಾಪಡೆ ಶ್ರೇಷ್ಠತೆಯನ್ನು ಸಾಬೀತುಪಡಿಸುತ್ತದೆ ಎಂದು ಮೋದಿ ತಿಳಿಸಿದ್ದಾರೆ.

ಇದು ನಮ್ಮ ಸಂಪ್ರದಾಯ: ನೀವೆಲ್ಲರೂ (ಸೈನಿಕರು) ನಿಮ್ಮ ಗುರಿಯನ್ನು ಪರಿಪೂರ್ಣತೆಯಿಂದ ತಲುಪಿದ್ದೀರಿ ಎಂದು ನಾನು ಹೆಮ್ಮೆಯಿಂದ ಹೇಳುತ್ತೇನೆ. ಪಾಕಿಸ್ತಾನದಲ್ಲಿ, ಭಯೋತ್ಪಾದಕ ಶಿಬಿರಗಳು ಮತ್ತು ಅವರ ವಾಯುನೆಲೆಗಳನ್ನು ನಾಶ ಮಾಡಿದ್ದೀರಿ. ಭಾರತದ ಸೇನಾ ನೆಲೆಗಳನ್ನು ಗುರಿಯಾಗಿಸಿ ಪಾಕಿಸ್ತಾನ ಸೇನೆ ಎಷ್ಟು ಬಾರಿ ದಾಳಿಗೆ ಪ್ರಯತ್ನಿಸಿದರೂ ನಾವು ವಿಫಲಗೊಳಿಸಿದ್ದೇವೆ. ಪಾಕಿಸ್ತಾನದಲ್ಲಿ ಭಯೋತ್ಪಾದಕರಿಗೆ ಈಗ ಯಾವುದೇ ಸ್ಥಳವೂ ಸುರಕ್ಷಿತವಲ್ಲ ಎಂಬ ಸಂದೇಶವನ್ನು ಭಾರತ ರವಾನಿಸಿದೆ. ನಾವು ಅವರನ್ನು ಧೂಳೀಪಟ ಮಾಡಿದ್ದೇವೆ. ನಮ್ಮ ಧರ್ಮದ ರಕ್ಷಣೆಗಾಗಿ ಶಸ್ತ್ರಾಸ್ತ್ರಗಳನ್ನು ಹಿಡಿಯುವುದು ನಮ್ಮ ಸಂಪ್ರದಾಯ. ಆದ್ದರಿಂದ, ನಮ್ಮ ಸಹೋದರಿಯರ ಸಿಂಧೂರವನ್ನು ಕಸಿದುಕೊಂಡ ಭಯೋತ್ಪಾದಕರನ್ನು ಅವರ ಸ್ವಂತ ಮನೆಗಳಿಗೆ ನುಗ್ಗಿ ಹತ್ತಿಕ್ಕಿದ್ದೇವೆ ಎಂದು ಮೋದಿ ಹೇಳಿದ್ದಾರೆ.

ಪಾಕ್ ಸುಳ್ಳು ಬಯಲು: ಪಂಜಾಬ್‌ನ ಆದಂಪುರ ಭಾರತೀಯ ವಾಯುಪಡೆ ನೆಲೆಯ ರನ್‌ವೇಯನ್ನು ಧ್ವಂಸಗೊಳಿಸಿದ್ದೇವೆ ಎಂಬ ಪಾಕ್ ಆರೋಪ ಸುಳ್ಳು ಎಂಬುದು ಬಯಲಾಗಿದೆ. ಆದಂಪುರ್ ನೆಲೆಯಲ್ಲಿರುವ ಯುದ್ಧ ವಿಮಾನಗಳು ಹಾಗೂ ರಾಡಾರ್ ನೆಲೆಯನ್ನು ಧ್ವಂಸಗೊಳಿಸಿರುವುದಾಗಿ ಪಾಕ್ ತಿಳಿಸಿತ್ತು. ಅಷ್ಟೇ ಅಲ್ಲ ತಮ್ಮ ದಾಳಿಯಲ್ಲಿ 60 ಮಂದಿ ಭಾರತೀಯ ಸೈನಿಕರು ಸಾವನ್ನಪ್ಪಿರುವು ದಾಗಿ ಹೇಳಿತ್ತು ಆದರೆ ಈ ಎಲ್ಲಾ ಮಾಹಿತಿಯೂ ಸುಳ್ಳು ಎಂಬುದು ಜಗತ್ತಿಗೆ ಗೊತ್ತಾಗಿದೆ ಎಂದು ಪ್ರಧಾನಿ ಮೋದಿ ಯೋಧರ ಜೊತೆಗಿನ ಚರ್ಚೆ ವೇಳೆ ತಿಳಿಸಿದ್ದಾರೆ.

ನಮ್ಮ ಗುರಿ ಸ್ಪಷ್ಟವಾಗಿದೆ: ಭಯೋತ್ಪಾದನೆ ಕುರಿತು ಭಾರತದ ಗುರಿ ಏನೆಂಬುದು ಪಾಕಿಸ್ತಾನಕ್ಕೂ ಬಹಳ ಸ್ಪಷ್ಟವಾಗಿ ತಿಳಿದಿದೆ ವಿಶ್ವಕ್ಕೆ ಮಾರಕವಾಗಿರುವ ಭಯೋತ್ಪಾದನೆ ನಿರ್ನಾಮಕ್ಕೆ ನಾವು ಬದ್ಧರಾಗಿದ್ದೇವೆ ಭವಿಷ್ಯದಲ್ಲಿ ಯಾವುದೇ ಭಯೋತ್ಪಾದಕ ದಾಳಿಗೆ ನಮ್ಮದೇ ರೀತಿಯಲ್ಲಿ ತಕ್ಕ ಉತ್ತರ ನೀಡುತ್ತೇವೆ ಎಂದು ಇದೇ ವೇಳೆ ಎಚ್ಚರಿಕೆ ನೀಡಿದ್ದಾರೆ.

ಸಂತಸ ಹಂಚಿಕೊಂಡು ಪೋಸ್ಟ್: 'ಆಪರೇಷನ್ ಸಿಂಧೂರ' ಯಶಸ್ಸನ್ನು ಸೈನಿಕರೊಂದಿಗೆ ಸಂಭ್ರಮಿಸಿದ ಪ್ರಧಾನಿ ಮೋದಿ, ಭೇಟಿಯ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. 'ಇಂದು ಬೆಳಗ್ಗೆ ನಾನು ಆದಂಪುರ ಏರ್ ಬೇಸ್‌ಗೆ ಭೇಟಿ ನೀಡಿ, ನಮ್ಮ ವೈಮಾನಿಕ ಪಡೆಯ ಧೀರ ಯೋಧರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದೇನೆ. ಅವರ ಅಭೂತಪೂರ್ವ ಧೈರ್ಯ, ಸಾಹಸ ಹಾಗೂ ನಿರ್ಭಯದ ವಿವರಣೆ ಕೇಳಿದ ನಂತರ ನನಗೆ ತುಂಬಾ ವಿಶೇಷ ಅನುಭವವಾಗಿದೆ. ನಮ್ಮ ದೇಶಕ್ಕಾಗಿ ಹೋರಾಡಿದ ನಮ್ಮ ಸೇನಾಪಡೆಗೆ ಭಾರತ ಚಿರಋಣಿಯಾಗಿದೆ' ಎಂದು ಶ್ಲಾಘಿಸಿದ್ದಾರೆ.

ಮುಂಗಾರು ಪ್ರವೇಶ

ಮಳೆಯಾಗಬೇಕು. ಆದರೆ 121.4 ಮಿಲಿ ಮೀಟರ್ ಮಳೆಯಾಗಿದೆ. ಈ ತಿಂಗಳಾಂತ್ಯದಲ್ಲಿ ಈ ಕೊರತೆ ತುಂಬಲಿದೆ ಎಂದರು.

ನೈರುತ್ಯ ಮುಂಗಾರು ಮಳೆ ಸಾಮಾನ್ಯವಾಗಿ ಜೂನ್ 1 ರಿಂದ 4ರ ನಡುವೆ ಆರಂಭವಾಗಲಿದೆ. ಕೇರಳದ ಮೂಲಕ ಕರ್ನಾಟಕವನ್ನು ಪ್ರವೇಶಿಸುತ್ತದೆ. ಆದರೆ ಈ ಬಾರಿ ಮೇ 27ರಂದೇ ನೈರುತ್ಯ ಮುಂಗಾರು ಕರ್ನಾಟಕವನ್ನು ಪ್ರವೇಶಿಸಲಿದೆ. ಆ ಮೂಲಕ 16 ವರ್ಷದ ನಂತರ ನಿಗದಿತ ಸಮಯಕ್ಕೂ ಮುನ್ನ ಮುಂಗಾರು ಕರ್ನಾಟಕವನ್ನು ಪ್ರವೇಶಿಸುತ್ತಿದೆ.

ಮುಂಗಾರಿನಲ್ಲಿ ಈ ವರ್ಷ ಜೂನ್ ತಿಂಗಳಿನಲ್ಲಿ ವಾಡಿಕೆಯಷ್ಟು ಮಳೆ ಯಾದರೆ, ಜುಲೈನಲ್ಲಿ ಸಾಧಾರಣ ಮಳೆಯಾಗಲಿದೆ, ಆಗಸ್ಟ್‌ನಲ್ಲಿ ಹೆಚ್ಚಿನ ಮಳೆಯಾದರೆ, ಸೆಪ್ಟೆಂಬರ್‌ನಲ್ಲಿ ಸರಾಸರಿ ಮಳೆಯಾಗುತ್ತದೆ. ಮುಂಗಾರು, ಮಳೆ ಜುಲೈ 8ರ ವೇಳೆಗೆ ಇಡೀ ದೇಶವನ್ನು ಆವರಿಸುತ್ತದೆ ಸೆಪ್ಟೆಂಬರ್ 27ರ ಸುಮಾರಿಗೆ ವಾಯುವ್ಯ ಭಾರತದಿಂದ ಅಕ್ಟೋಬರ್ 15ರ ವೇಳೆಗೆ ಸಂಪೂರ್ಣವಾಗಿ ಹಿಮ್ಮೆಟ್ಟಲ್ಪಡುತ್ತದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಎಲ್‌ಇಟಿ ಉಗ್ರರು ಬಲಿ

ಅಡಗಿ ಕುಳಿತಿದ್ದ ಉಗ್ರರು ಏಕಾಏಕಿ ಯೋಧರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಈ ವೇಳೆ ಉಗ್ರರ ದಾಳಿಗೆ ಭದ್ರತಾ ಪಡೆಗಳು ದಿಟ್ಟ ಉತ್ತರ ನೀಡಿದ್ದು, ಕಾರ್ಯಾಚರಣೆಯನ್ನು ಎನ್‌ಕೌಂಟರ್ ಆಗಿ ಬದಲಾಯಿಸಿ, ಸ್ಥಳವನ್ನು ಸುತ್ತುವರೆದಿದ್ದಾರೆ.

ಈ ವೇಳೆ ಮೂವರು ಉಗ್ರರನ್ನು ಹತ್ಯೆ ಮಾಡಿದ್ದು, ಅವರನ್ನು ಶಾಹಿದ್ ಅಹ್ಮದ್ ಕುಟ್ಟೇ, ಅದ್ನಾನ್ ಶಾಫಿ ಎಂದು ಗುರುತಿಸಲಾಗಿದೆ. ಮತ್ತೊಬ್ಬ ಭಯೋತ್ಪಾದಕನನ್ನು ಗುರುತಿಸಲಾಗಿಲ್ಲ. ಭಯೋತ್ಪಾದಕರಿಂದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ. ಸ್ಥಳದಲ್ಲಿ ಕಾರ್ಯಾಚರಣೆ ಮುಂದುವರೆದಿದೆ.

ಪಂಜಾಬ್‌ನಲ್ಲಿ ಕಳ್ಳಭಟ್ಟಿ ಸೇವಿಸಿ ಕನಿಷ್ಠ 21 ಜನರು ಸಾವು

ಅಮೃತ ಸರ: ಪಂಜಾಬ್‌ನ ಅಮೃತಸರದ ಮಜಿತಾ ಪ್ರದೇಶದ ಐದು ಹಳ್ಳಿಗಳಲ್ಲಿ ನಕಲಿ ಮದ್ಯ ಸೇವಿಸಿ 21 ಜನರು ಸಾವನ್ನಪ್ಪಿದ್ದಾರೆ. 10 ಜನರ ಸ್ಥಿತಿ ಗಂಭೀರವಾಗಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಮುಖ ಸರಬರಾಜುದಾರ ಮತ್ತು ಆರೋಪಿ ಕಿಂಗ್‌ಪಿನ್ ಸೇರಿದಂತೆ ಹತ್ತು ಜನರನ್ನು ರಾಜ್ಯ ಪೊಲೀಸರು ಬಂಧಿಸಲಾಗಿದೆ. ನಾಲ್ವರು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ. ನಕಲಿ ಮದ್ಯದ ಮೂಲದ ಬಗ್ಗೆ ತನಿಖೆ ನಡೆಯುತ್ತಿದೆ.

ಗಂಭೀರ ಸ್ಥಿತಿಯಲ್ಲಿದ್ದವರನ್ನು ಅಮೃತಸರ ಸಿವಿಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಭಂಗಲಿ, ಪಾತಾಳಪುರಿ, ಮರಾರಿ ಕಲಾನ್, ಥೆರೆವಾಲ್ ಮತ್ತು ತಲ್ವಾಂಡಿ ಘುಮಾನ್ ಎಂಬ ಐದು ಗ್ರಾಮಗಳಲ್ಲಿ ಸಾವುಗಳು ಸಂಭವಿಸಿವೆ.

ಮದ್ಯ ವಿತರಣಾ ಜಾಲದ ಕಿಂಗ್‌ಪಿನ್ ಸಾಹಿಬ್ ಸಿಂಗ್ ಮತ್ತು ಮುಖ್ಯ ಪೂರೈಕೆದಾರ ಪ್ರಭ್ಜಿತ್ ಸಿಂಗ್ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಇತರ ಆರೋಪಿಗಳಾದ ಕುಲ್ಬೀರ್ ಸಿಂಗ್, ಗುರ್ಜಂತ್ ಸಿಂಗ್ ಮತ್ತು ನಿಂದರ್ ಕೌರ್ ಅವರನ್ನು ಸಹ ಬಂಧಿಸಲಾಗಿದೆ . ಅಮೃತಸರದ ರಾಜಸಾನ್ಸಿ ಪ್ರದೇಶದಿಂದ ಸಾಹಿಬ್ ಅವರನ್ನು ಬಂಧಿಸಲಾಗಿದೆ.

ಅಕ್ರಮ ಮದ್ಯ ಸರಬರಾಜು ಮಾಡುತ್ತಿರುವ ಶಂಕಿತ ಸಂಸ್ಥೆಗಳನ್ನು ಬಂಧಿಸಲು ಪೊಲೀಸ್ ತಂಡಗಳು ಈಗ ರಾಜ್ಯದಿಂದ ಹೊರಗೆ ಹೋಗಿ ತನಿಖೆ ನಡೆಸುತ್ತಿವೆ.

ನಿನ್ನೆ ರಾತ್ರಿ 9:30 ರ ಸುಮಾರಿಗೆ ನಕಲಿ ಮದ್ಯ ಸೇವಿಸಿದ ನಂತರ ಜನರು ಅಸ್ವಸ್ಥರಾಗಿದ್ದು ಹಲವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರಿಗೆ ಮಾಹಿತಿ ಸಿಕ್ಕಿದೆ ಎಂದು ಅಮೃತಸರ (ಗ್ರಾಮೀಣ) ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಮಣೀಂದರ್ ಸಿಂಗ್ ಹೇಳಿದ್ದಾರೆ.

CBSE 12ನೇ ತರಗತಿ ಫಲಿತಾಂಶ ಪ್ರಕಟ: ಶೇ.88.39 ವಿದ್ಯಾರ್ಥಿಗಳು ತೇರ್ಗಡೆ

ನವದೆಹಲಿ: ಸಿಬಿಎಸ್‌ಇ 12ನೇ ತರಗತಿಯ ವಾರ್ಷಿಕ ಪರೀಕ್ಷೆಯ ಫಲಿತಾಂಶ ಇಂದು ಪ್ರಕಟವಾಗಿದ್ದು, ವಿದ್ಯಾರ್ಥಿನಿಯರು ಶೇಕಡಾ 5ರಷ್ಟು ಹೆಚ್ಚಿನ ಅಂಕ ಗಳಿಸಿ ಮೇಲುಗೈ ಸಾಧಿಸಿದ್ದಾರೆ ಎಂದು ಪರೀಕ್ಷಾ ನಿಯಂತ್ರಕ ಸನ್ಯಾಮ್ ಭಾರದ್ವಾಜ್ ತಿಳಿಸಿದ್ದಾರೆ.

ಈ ವರ್ಷ, ಶೇಕಡಾ 88.39 ರಷ್ಟು ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ, ಕಳೆದ ವರ್ಷದ ಶೇಕಡಾ 87.98ಕ್ಕಿಂತ ಸ್ವಲ್ಪ ಹೆಚ್ಚಾಗಿದೆ. ವಿದ್ಯಾರ್ಥಿನಿಯರು ಶೇಕಡಾ 91.64 ರಷ್ಟು ಉತ್ತೀರ್ಣರಾಗಿದ್ದರೆ, ವಿದ್ಯಾರ್ಥಿಗಳ ತೇರ್ಗಡೆ ಪ್ರಮಾಣ ಶೇಕಡಾ 85.70.

ತೃತೀಯ ಲಿಂಗ ಅಭ್ಯರ್ಥಿಗಳು ಕಳೆದ ವರ್ಷದ ಶೇಕಡಾ 50 ಕ್ಕೆ ಹೋಲಿಸಿದರೆ ಈ ವರ್ಷ ಎಲ್ಲರೂ ಉತ್ತೀರ್ಣರಾಗಿದ್ದು, ಶೇಕಡಾ 100 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಒಟ್ಟು 1,11,544 ಅಭ್ಯರ್ಥಿಗಳು ಶೇಕಡಾ 90ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ್ದರೆ, 24,867 ಅಭ್ಯರ್ಥಿಗಳು ಶೇಕಡಾ 95ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ್ದಾರೆ. ಈ ವರ್ಷ ಒಟ್ಟು 16,92, 794 ಅಭ್ಯರ್ಥಿಗಳು 12 ನೇ ತರಗತಿಯ ಬೋರ್ಡ್ ಪರೀಕ್ಷೆಗೆ ಹಾಜರಾಗಿದ್ದರು.

1971ರಲ್ಲಿ ಶರಣಾದ ಪಾಕ್ ಸೈನಿಕರ 93 ಸಾವಿರ ಗನ್ ಕೊಡಿ 'ಪಾಕಿಸ್ತಾನ ಫಿನಿಶ್' ಮಾಡ್ತೇವೆ!

ಬಿಎಲ್‌ಎಫ್ ಕಮಾಂಡರ್ ಮನವಿ

ಇಸ್ಲಾಮಾಬಾದ್: ಪಾಕಿಸ್ತಾನ ಸೇನೆ ವಿರುದ್ಧ ಇನ್ನಿಲ್ಲದಂತೆ ದಾಳಿ ಮಾಡುತ್ತಿರುವ ಬಲೂಚಿಸ್ತಾನ ಬಂಡುಕೋರರು ಇದೀಗ 1971ರಲ್ಲಿ ಶರಣಾದ ಪಾಕಿಸ್ತಾನ ಸೈನಿಕರ 93 ಸಾವಿರ ಗನ್‌ಗಳನ್ನಾದರೂ ಕೊಡಿ. ಅವುಗಳಿಂದಲೇ ಪಾಕಿಸ್ತಾನದ ಅಂತ್ಯಕಾಣಿಸುತ್ತೇವೆ ಎಂದು ಭಾರತಕ್ಕೆ ಮನವಿ ಮಾಡಿದ್ದಾರೆ.

ಬಲೂಚಿಸ್ತಾನ್ ಲಿಬರೇಷನ್ ಆರ್ಮಿಯ ಕಮಾಂಡರ್ ಇನ್ ಚೀಫ್ ಅಲ್ಲಾ ನಜರ್ ಬಲೂಚ್ ಈ ಬಗ್ಗೆ ಮಾತನಾಡಿದ್ದು, ಫ್ಯಾಸಿಸ್ಟ್ ಪಾಕಿಸ್ತಾನವನ್ನು ನಾವು ಬಗ್ಗು ಬಡಿಯುತ್ತೇವೆ. ನಮಗೆ ನೀವು ಸಹಾಯ ಮಾಡಿ ಎಂದು ಭಾರತಕ್ಕೆ ಮನವಿ ಮಾಡಿರುವ ವಿಡಿಯೋವೊಂದು ವ್ಯಾಪಕ ವೈರಲ್ ಆಗುತ್ತಿದೆ.

ಸುಮಾರು 30 ನಿಮಿಷಗಳ ವಿಡಿಯೋ ಕ್ಲಿಪ್ ಇದೀಗ ವೈರಲ್ ಆಗುತ್ತಿದ್ದು, ವಿಡಿಯೋದಲ್ಲಿ ಬಿಎಲ್‌ಎಫ್ ಕಮಾಂಡರ್–ಇನ್–ಚೀಫ್ ಅಲ್ಲಾ ನಜರ್ ಬಲೂಚ್ ಜಾಗತಿಕ ಸಮುದಾಯ ಮತ್ತು ಭಾರತವನ್ನು ಉದ್ದೇಶಿಸಿ ಮಾತನಾಡಿರುವುದನ್ನು ಕಾಣಬಹುದು. ಆತ ಫ್ಯಾಸಿಸ್ಟ್ ಪಾಕಿಸ್ತಾನಿ ರಾಷ್ಟ್ರ ಎಂದು ಪದೇ ಪದೆ ಕರೆಯುವುದರ ವಿರುದ್ಧ ಬಲೂಚಿಸ್ತಾನದ ಹೋರಾಟಕ್ಕೆ ಬೆಂಬಲ ನೀಡುವಂತೆ ಒತ್ತಾಯಿಸಿದ್ದಾನೆ.

ಇತ್ತೀಚೆಗೆ ಅಂದರೆ ಮೇ 11 ರಂದು ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡ ಬಲೂಚಿಸ್ತಾನ್ ಲಿಬರೇಶನ್ ಫ್ರಂಟ್ (ಬಿಎಲ್‌ಎಫ್) ಕಮಾಂಡರ್–ಇನ್–ಚೀಫ್ ಅಲ್ಲಾ ನಜರ್ ಬಲೂಚ್ ಅವರ ವೀಡಿಯೊ ಪ್ರಸ್ತುತ ಇಂಟರ್ನೆಟ್‌ನಲ್ಲಿ ವ್ಯಾಪಕ ವೈರಲ್ ಆಗುತ್ತಿದೆ.

ಚಾಲಕ ಸಾವು; ಏಳು ಮಂದಿಗೆ ಗಾಯ

ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ತೇಜಕುಮಾರ್ ಕುಟುಂಬ ಸಮೇತರಾಗಿ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಇನ್ನೋವಾ ಹೈಬ್ರಿಡ್ ಕಾರಿನಲ್ಲಿ ಚಾಲಕ ದಿನೇಶ್ ಜೊತೆಗೂಡಿ ತೆರಳುತ್ತಿದ್ದ ಸಂದರ್ಭ ಮೈಸೂರು–ಊಟಿ ರಾಷ್ಟ್ರೀಯ ಹೆದ್ದಾರಿಯ ತಾಲೂಕಿನ ಸಿಂಧುವಳ್ಳಿಪುರ ಬಳಿ ಗುಂಡ್ಲುಪೇಟೆ ಕಡೆಯಿಂದ ನಂಜನಗೂಡು ಕಡೆಗೆ ಬರುತ್ತಿದ್ದ ಕಂಟೆನರ್ ಕಾರಿಗೆ ಡಿಕ್ಕಿ ಹೊಡೆದು, ಬಳಿಕ ಕಾರಿನ ಮೇಲೇ ಮಗುಚಿ ಬಿದ್ದಿದೆ. ಪರಿಣಾಮ ತೀವ್ರ ಗಾಯಗೊಂಡ ಚಾಲಕ ದಿನೇಶ್ ಸ್ಥಳದಲ್ಲೇ ಸಾವನ್ನಪ್ಪಿದರೆ, ಸ್ಥಳೀಯರು ಕಾರಿನ ಮೇಲೆ ಬಿದ್ದಿದ್ದ ಕಂಟೆನರ್ ಮೇಲೆತ್ತಿ ಉಳಿದ 7 ಮಂದಿಯನ್ನು ರಕ್ಷಿಸಿ, ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ನಂಜನಗೂಡು ಸಂಚಾರಿ ಠಾಣೆ ಪೊಲೀಸರು ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು, ಮುಂದಿನ ತನಿಖೆ ಕೈಗೊಂಡಿದ್ದಾರೆ.

20 ಲಕ್ಷ ರೂ. ಇನಾಮು!

ಭಯೋತ್ಪಾದಕರ ಚಿತ್ರವನ್ನು ಬಿಡುಗಡೆ ಮಾಡಲಾಗಿತ್ತು. ಅನಂತ್‌ನಾಗ್ ನಿವಾಸಿ ಆದಿಲ್ ಹುಸೇನ್ ಥೋಕರ್, ಪಾಕಿಸ್ತಾನಿ ಪ್ರಜೆ ಅಲಿ ಭಾಯ್ ಅಲಿಯಾಸ್ ತಲ್ಹಾ ಭಾಯ್ ಮತ್ತು ಹಾಶಿಮ್ ಮೂಸಾ ಅಲಿಯಾಸ್ ಸುಲೇಮಾನ್ ರೇಖಾಚಿತ್ರಗಳನ್ನು ಬಿಡುಗಡೆ ಮಾಡಲಾಗಿತ್ತು. ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆ ಮೇ 7ರಂದು 'ಆಪರೇಷನ್ ಸಿಂಧೂರ' ಹೆಸರಿನಲ್ಲಿ ಪಾಕ್‌ನ 9 ಭಯೋತ್ಪಾದಕರ ನೆಲೆಗಳ ಮೇಲೆ ದಾಳಿ ನಡೆಸಿತು. ಅದಾದ ಬಳಿಕ ಪಾಕಿಸ್ತಾನ ಹಲವು ಬಾರಿ ಅಪ್ರಚೋದಿತ ದಾಳಿ ನಡೆಸಿದ್ದು, ಮೇ 10ರಂದು ಭಾರತ–ಪಾಕಿಸ್ತಾನ ಕದನ ವಿರಾಮ ಘೋಷಿಸಿವೆ.

ಶ್ರೀನಗರ ವಿಮಾನ ನಿಲ್ದಾಣದಲ್ಲಿ ವಿಮಾನ ಸೇವೆ ಪುನರಾರಂಭ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ರಾಜಧಾನಿ ಶ್ರೀನಗರ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮಂಗಳವಾರ ಮಧ್ಯಾಹ್ನ ವಿಮಾನ ಸೇವೆ ಪುನರಾರಂಭಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆದಾಗ್ಯೂ, ಕಾಶ್ಮೀರ ಕಣಿವೆಗೆ ಆಗಮಿಸುವ ಮತ್ತು ಅಲ್ಲಿಂದ ತೆರಳುವ ಹಲವಾರು ವಿಮಾನಗಳು ವಿಳಂಬವಾಗಿವೆ ಎಂದು ಅವರು ಹೇಳಿದ್ದಾರೆ. ಆದರೆ ಕೆಲವು ವಿಮಾನಯಾನ ಸಂಸ್ಥೆಗಳು ಈಗಾಗಲೇ ದಿನದ ಸೇವೆಗಳನ್ನು ರದ್ದುಗೊಳಿಸುವುದಾಗಿ ಘೋಷಿಸಿವೆ. ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನ ಪರಿಸ್ಥಿತಿ ಉಂಟಾದ ಹಿನ್ನೆಲೆಯಲ್ಲಿ ಮೇ 9 ರಂದು ಶ್ರೀನಗರ ವಿಮಾನ ನಿಲ್ದಾಣ ಸೇರಿದಂತೆ ಗಡಿ ರಾಜ್ಯಗಳಾದ್ಯಂತ 31 ವಿಮಾನ ನಿಲ್ದಾಣಗಳನ್ನು ತಾತ್ಕಾಲಿಕವಾಗಿ ಬಂದ್ ಮಾಡಲಾಗಿತ್ತು. ಶ್ರೀನಗರ, ಲೇಹ್, ಜಮ್ಮು, ಅಮೃತಸರ, ಪಠಾಣ್‌ಕೋಟ್, ಚಂಡೀಗಢ, ಜೋಧ್‌ಪುರ, ಜೈಸಲ್ಮೇರ್, ಶಿಮ್ಲಾ, ಧರ್ಮಶಾಲಾ ಮತ್ತು ಜಾಮ್‌ನಗರ ಸೇರಿದಂತೆ 31 ವಿಮಾನ ನಿಲ್ದಾಣಗಳನ್ನು ಬಂದ್ ಮಾಡಲಾಗಿತ್ತು.

ವ್ಯಾಪಾರ್ ತಂತ್ರಾಂಶದ ಮುಖಾಂತರ ಮಾತ್ರ ಉದ್ದಿಮೆ ಪರವಾನಿಗೆಯನ್ನು ನಿರ್ವಹಿಸಲು ಸೂಚನೆ

ಮೈಸೂರು, ಮೇ13– ತಂಬಾಕು ಉತ್ಪನ್ನಗಳ ವ್ಯಾಪಾರಕ್ಕೆ ಪ್ರತ್ಯೇಕ ಪರವಾನಗಿ ನೀತಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ, The Karnataka Municipalities (Regulation and Inspection of places used for sale of Cigarettes and other tobacco products) Model Bye-Laws, 2020 ಅನ್ನು ಅನುಷ್ಠಾನಗೊಳಿಸಿ, ತಂಬಾಕು ಉತ್ಪನ್ನಗಳ ವ್ಯಾಪಾರಕ್ಕೆ ಪರವಾನಿಗಿ ನೀತಿಗಳೊಂದಿಗೆ ಉದ್ದಿಮೆ ಪರವಾನಿಗೆಯನ್ನು ನೀಡಲು ಈಗಾಗಲೇ ಉಲ್ಲೇಖಗಳನ್ವಯ ನಿರ್ದೇಶನ ನೀಡಲಾಗಿದೆ.

ಎಲ್ಲಾ ಉದ್ದಿಮೆ ಪರವಾನಿಗೆಗಳನ್ನು ವ್ಯಾಪಾರ್ ಆನ್‌ಲೈನ್ ತಂತ್ರಾಂಶದ ಮುಖಾಂತರವೇ ಕಡ್ಡಾಯವಾಗಿ ನಿರ್ವಹಿಸಲು ಈಗಾಗಲೇ ಸೂಚಿಸಲಾಗಿದ್ದು, ಅದರಂತೆ ನಗರ ಸ್ಥಳೀಯ ಸಂಸ್ಥೆಗಳೇ ಸಂಬಂಧಪಟ್ಟ ಉದ್ದಿಮೆಯನ್ನು ಸೃಜಿಸಿ ನಿರ್ವಹಿಸಬೇಕಾಗಿದೆ.

ಆದರೆ ಕೆಲವು ನಗರ ಸ್ಥಳೀಯ ಸಂಸ್ಥೆಗಳು ತಂಬಾಕು ಉತ್ಪನ್ನಗಳ ವ್ಯಾಪಾರಕ್ಕೆ ಪ್ರತ್ಯೇಕ ಪರವಾನಿಗೆಯನ್ನು ನೀಡದೇ ಇರುವುದು ಇಲ್ಲವೆ ಕೈಬರಹದ ಮೂಲಕ ನೀಡುತ್ತಿರುವುದು ಗಮನಕ್ಕೆ ಬಂದಿದ್ದು, ಸರ್ಕಾರದ ಹಂತದಲ್ಲಿ ಇದನ್ನು ಗಂಭೀರವಾಗಿ ಪರಿಗಣಿಸಲಾಗಿರುವುದರಿಂದ ಆನ್‌ಲೈನ್ ತಂತ್ರಾಂಶದಲ್ಲಿ ಇನ್ನಷ್ಟು ನಿಖರತೆಯನ್ನು ತರಲು ಸೂಕ್ತ ಮಾರ್ಪಾಡು ಮಾಡಿ ಅನುಷ್ಠಾನಗೊಳಿಸಲಾಗಿರುವುದರಿಂದ ಕಡ್ಡಾಯವಾಗಿ ವ್ಯಾಪಾರ್ ತಂತ್ರಾಂಶದ ಮುಖಾಂತರ ಮಾತ್ರ ಉದ್ದಿಮೆ ಪರವಾನಿಗೆಯನ್ನು ನಿರ್ವಹಿಸಲು ಕಟ್ಟುನಿಟ್ಟಾಗಿ ಸೂಚಿಸಿದೆ ಎಂದು ಪೌರಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

ಯುದ್ಧದ ಕ್ರೆಡಿಟ್ ಸೈನಿಕರು, ಪ್ರಧಾನಿ ಮೋದಿಗೆ ಸಲ್ಲಬೇಕು

ಸಂಸದ ಯದುವೀರ್ ಒಡೆಯರ್ ಕಾಂಗ್ರೆಸ್ ಟೀಕೆಗೆ ಪ್ರತ್ಯುತ್ತರ



ಮೈಸೂರು, ಮೇ13(ಜಿಎ)–ಯುದ್ಧದ ಕ್ರೆಡಿಟ್ ಸೈನಿಕರಿಗೆ ಮತ್ತು ಪ್ರಧಾನಿ ಮೋದಿಗೂ ಸಲ್ಲಬೇಕು. ಈ ಸಂದರ್ಭದಲ್ಲಿ ರಾಜಕೀಯ ಮಾಡೋದು ಸರಿಯಲ್ಲ. ರಾಜಕೀಯ ಮಾಡುವ ಅಗತ್ಯವಿಲ್ಲ ಎಂದು ಮೈಸೂರು ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಕಾಂಗ್ರೆಸ್ ಪಕ್ಷದ ಟೀಕೆಗೆ ಪ್ರತ್ಯುತ್ತರ ನೀಡಿದರು.

ಭಾರತ–ಪಾಕ್ ಕದನ ವಿರಾಮ ಘೋಷಣೆ ಬಗ್ಗೆ ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯುದ್ಧದ ಕ್ರೆಡಿಟ್ ಸೈನಿಕರಿಗೂ ಹಾಗೂ ಪ್ರಧಾನಿ ಮೋದಿಗೂ ಸಲ್ಲಬೇಕು. ಈ ಸಂದರ್ಭದಲ್ಲಿ ರಾಜಕೀಯ ಮಾಡೋದು ಸರಿಯಿಲ್ಲ. ರಾಜಕೀಯ ಮಾಡುವ ಅಗತ್ಯ ಇಲ್ಲ. ಕಾಂಗ್ರೆಸ್ ಅವರಿಗೆ ಸಂದೇಶ ಕೊಡೋ ಸ್ಥಾನದಲ್ಲೂ ನಾನಿಲ್ಲ..! ಇಂತಹ ಪರಿಸ್ಥಿತಿಯಲ್ಲಿ ಎಲ್ಲರೂ ಒಟ್ಟಾಗಿರಬೇಕು. ಕೇಂದ್ರ ಸರ್ಕಾರದ ನಿರ್ಧಾರಕ್ಕೆ ಕೈಜೋಡಿಸಿ ನಿಲ್ಲಬೇಕು. ಅಂದಿನ ಕಾಲಕ್ಕೆ ತಕ್ಕುತೆ ಇಂದಿರಾ ಗಾಂಧಿ ಕೆಲಸ ನಿರ್ವಹಿಸಿದ್ದಾರೆ. ಇಂದಿನ ಕಾಲಕ್ಕೆ ತಕ್ಕಂತೆ ಮೋದಿ ಉತ್ತಮ ನಿರ್ಧಾರದ ಕೆಲಸಗಳ ನಿರ್ವಹಿಸುತ್ತಿದ್ದಾರೆ ಎಂದರು.

ಪಹಲ್ಗಾಮ್‌ನಲ್ಲಿ ನಡೆದ ಘಟನೆಗೆ ಈಗಾಗಲೇ ಪ್ರಧಾನಿ ಮೋದಿ ಸೂಕ್ತ ಪ್ರತಿಕ್ರಿಯೆ ನೀಡಿದ್ದಾರೆ. 9 ಭಯೋತ್ಪಾದಕ ಶಿಬಿರವನ್ನು ಗುರುತಿಸಿ ದಾಳಿ ಮಾಡಿ ಪ್ರತೀಕಾರ ತೀರಿಸಿಕೊಂಡಿದ್ದಾರೆ. ಪಾಕಿಸ್ತಾನ ಏನೇ ಪ್ರಯತ್ನ ಮಾಡಿದರೂ ಅವರ ಪ್ರಯತ್ನಗಳನ್ನು ಮೊಟಕುಗೊಳಿಸುವ ಕೆಲಸ ಭಾರತ ಸರ್ಕಾರ ಮಾಡಿಯೇ ತೀರುತ್ತದೆ. ಪಾಕಿಸ್ತಾನದ ಎಲ್ಲಾ ಪ್ರಯತ್ನಗಳು ವಿಫಲವಾಗಿವೆ. ಭಯೋತ್ಪಾದನೆಗೆ ಅವಕಾಶ ಕೊಡದೆ ವಿಶ್ವಾದ್ಯಂತ ಉಗ್ರವಾದ ತೊಲಗಿಸಬೇಕು. ಪಾಕಿಸ್ತಾನಿಯರು ಅವರ ಕೃತ್ಯಗಳನ್ನು ನಿಲ್ಲಿಸಿದರೆ ಮಾತ್ರ ವಿಶ್ವದಲ್ಲಿ ಶಾಂತಿ ಕಾಣಬಹುದು ಎಂದರು.

ಪಹಲ್ಗಾಮ್‌ನಲ್ಲಿ ಹಿಂದೂಗಳನ್ನೇ ಗುರುತಿಸಿ ಕೊಂದಿದ್ದು ಬಹಳ ಖಂಡನೀಯ. ಅದಕ್ಕೆ ಸರಿಯಾದ ಉತ್ತರವನ್ನು ಭಾರತ ನೀಡಿದೆ. ನಾವೇನು ಸೇಡಿನ ಯುದ್ಧ ನಡೆಸಿಲ್ಲ. ಬದಲಾಗಿ ನಿಖರವಾಗಿ ಉಗ್ರರನ್ನೇ ಗುರುತಿಸಿ ದಾಳಿ ನಡೆಸಿದ್ದೇವೆ. ಭಾರತೀಯ ಸಂಸ್ಕೃತಿಗೆ ತಕ್ಕಂತ ಸರ್ಕಾರ ಉತ್ತರ ನೀಡಿದೆ. ಅಮಾಯಕರ ಸಾವಿಗೆ ನ್ಯಾಯ ಒದಗಿಸುವ ಕೆಲಸವನ್ನು ಭಾರತ ಸರ್ಕಾರ ಮಾಡಿದೆ ಎಂದು ತಿಳಿಸಿದರು.

ಸಾಧಕರಿಗೆ ಬಸವಣ್ಣ, ಅಂಬೇಡ್ಕರ್ ಕಾಯಕರತ್ನ ಪ್ರಶಸ್ತಿ ಪ್ರದಾನ

ಬುದ್ಧ, ಬಸವ, ಅಂಬೇಡ್ಕರ್ ಅವರ ಸಂದೇಶಗಳು ವಿಶ್ವಕ್ಕೆ ಮಾದರಿ

ಮೈಸೂರು, ಮೇ13(ಜಿಎ)–ಬಸವಣ್ಣ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಅಂಗವಾಗಿ ಕರ್ನಾಟಕ ಸೇನಾಪಡೆ ವತಿಯಿಂದ ಐಡಿಯಲ್ ಜಾವಾ ರೋಟರಿ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ಬಸವಣ್ಣ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಕಾಯಕರತ್ನ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಮಾಜಿ ಶಾಸಕ ಜಿ.ಎನ್.ನಂಜುಂಡಸ್ವಾಮಿ ಮಾತನಾಡಿ, ಬುದ್ಧ, ಬಸವ, ಡಾ.ಬಿ.ಆರ್.ಅಂಬೇಡ್ಕರ್ ಮೂವರು ಕೊಟ್ಟ ಸಂದೇಶಗಳು ವಿಶ್ವಕ್ಕೆ ಮಾದರಿಯಾಗಿದ್ದು, ಅವರ ಚರಿತ್ರೆಯನ್ನು ಇಂದಿನ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕಿದೆ ಎಂದರು.

ಪ್ರಸ್ತುತ ಇಡೀ ಪ್ರಪಂಚ ಶಾಂತಿಯನ್ನು ಕಳೆದುಕೊಳ್ಳುತ್ತಿದೆ. ಇಂತಹ ಕಾಲಘಟ್ಟದಲ್ಲಿ ಬುದ್ಧ ಹೆಚ್ಚು ಪ್ರಸ್ತುತರಾಗುತ್ತಾರೆ. ಅವರು ಬೋಧಿಸಿದ ಸಂದೇಶಗಳು ಮಾನವ ಕುಲದ ಏಳಿಗೆಗೆ ನಾಂದಿಯಾಗಿವೆ. ಇವುಗಳನ್ನು ಪಾಲಿಸುವ ಕೆಲಸಗಳು ಆಗುತ್ತಿಲ್ಲ. 12ನೇ ಶತಮಾನದಲ್ಲಿ ಬಸವಣ್ಣ ಅವರು ಲೋಕ ಕಲ್ಯಾಣಕ್ಕಾಗಿ ಮಾನವ ಮಾನವೀಯ ಮೌಲ್ಯಗಳೊಂದಿಗೆ ಬದುಕಬೇಕು. ಕ್ರೌರ್ಯ, ಹಿಂಸೆಯ ಹಿಂದೆ ಮನುಷ್ಯ ಹೋಗಬಾರದು ಎಂಬ ಸಂದೇಶ ನೀಡಿದರು. ಆಧುನೀಯಕ ಜಗತ್ತಿಗೆ ಡಾ.ಬಿ.ಆರ್.ಅಂಬೇಡ್ಕರ್ ಮಾದರಿಯಾಗಿದ್ದಾರೆ ಎಂದು ತಿಳಿಸಿದರು.

ಮಹನೀಯರ ಚರಿತ್ರೆ ಮತ್ತು ಜೀವನವನ್ನು ವಿದ್ಯಾರ್ಥಿಗಳು ಅರಿತುಕೊಂಡು ಸಮಾಜಕ್ಕೆ ಮಾದರಿಯಾಗುವಂತೆ ಜೀವಿಸಬೇಕು. ದುಶ್ಚಟಗಳಿಗೆ ಒಳಗಾಗಬಾರದು. ಪೋಷಕರು ತಮ್ಮ ಮಕ್ಕಳ ಬಗ್ಗೆ ಕನಸುಗಳನ್ನು ಕಟ್ಟಿಕೊಂಡಿರುತ್ತಾರೆ. ಹೀಗಾಗಿ ಸಿಕ್ಕಂತ ಅವಕಾಶಗಳನ್ನು ಬಳಸಿಕೊಂಡು ಸಾಧನೆಯೆಡೆಗೆ ಸಾಗಬೇಕು ಎಂದು ಸಲಹೆ ನೀಡಿದರು.



ಬಸವಣ್ಣ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಅಂಗವಾಗಿ ಕರ್ನಾಟಕ ಸೇನಾಪಡೆ ವತಿಯಿಂದ ಐಡಿಯಲ್ ಜಾವಾ ರೋಟರಿ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ಬಸವಣ್ಣ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಕಾಯಕರತ್ನ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಜಂಟಿ ನಿರ್ದೇಶಕರಾದ ಡಾ.ಲಕ್ಷ್ಮಮ್ಮ (ಸರ್ಕಾರಿ ಕ್ಷೇತ್ರ), ಮೈಸೂರು ಸಹಕಾರ ಬ್ಯಾಂಕ್‌ನ ನಿರ್ದೇಶಕ, ಸಹಕಾರ ರತ್ನ ಡಾ.ಎಂ.ಬಿ.ಮಂಜೇಗೌಡ (ಸಹಕಾರ ಕ್ಷೇತ್ರ), ಕೆಎಸ್‌ಆರ್‌ಟಿಸಿ ಮೈಸೂರು ವಿಭಾಗದ ಭದ್ರತ ಮತ್ತು ಜಾಗೃತ ಅಧಿಕಾರಿ ಎನ್.ಎಸ್.ಶಿವರಾಜೇಗೌಡ (ಸಾರಿಗೆ ಕ್ಷೇತ್ರ) ಸರ್.ಎಂ.ವಿಶ್ವೇಶ್ವರಯ್ಯ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ಜಿ.ಎಸ್.ಅಶೋಕ್‌ಕುಮಾರ್ (ನಿರ್ಮಾಣ ಕ್ಷೇತ್ರ), ವಿಷನ್ ಟೀಮ್‌ನ ಅಧ್ಯಕ್ಷ ಬಿ.ಆರ್.ನಂದೀಶ್‌ಕುಮಾರ್ (ಸಮಾಜ ಸೇವಾ ಕ್ಷೇತ್ರ), ಲಯನ್ಸ್ ಜೀವಧಾರ ರಕ್ತನಿಧಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಎಸ್.ಇ.ಗಿರೀಶ್ (ವೈದ್ಯಕೀಯ ಕ್ಷೇತ್ರ), ಶಿಕ್ಷಕ ಲೋಕೇಶ್ ಕಲ್ಕುಂದೆ (ಶಿಕ್ಷಣ ಕ್ಷೇತ್ರ), ಕನ್ನಡಪರ ಹೋರಾಟಗಾರ ಎಚ್.ಗೋವಿಂದರಾಜ್ ಮುತ್ತಿಗೆ (ಹೋರಾಟ ಕ್ಷೇತ್ರ) ಅವರಿಗೆ ಬಸವಣ್ಣ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಕಾಯಕರತ್ನ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ನಂತರ ರಾಜ್ಯ, ರಾಷ್ಟ್ರ, ಅಂತರ ವಿಶ್ವವಿದ್ಯಾನಿಲಯದ ಮಟ್ಟದಲ್ಲಿ ವಿವಿಧ ಕ್ರೀಡೆಗಳಲ್ಲಿ ಪದಕಗಳಿಸಿದ ಮಹಾರಾಣಿ ಕಲಾ ಕಾಲೇಜಿನ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ನಟರಾಜ ಪ್ರತಿಷ್ಠಾನದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಸಂಸ್ಕೃತಿ ಚಿಂತಕ ಕೆ.ರಘುರಾಂ ವಾಜಪೇಯಿ, ಬಿಜೆಪಿ ಮುಖಂಡ ಜಯಪ್ರಕಾಶ್ (ಜೆಪಿ), ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಡೀನ್ ಪ್ರೊ.ಎನ್.ಲಕ್ಷ್ಮೀ, ಕರ್ನಾಟಕ ಸೇನಾಪಡೆಯ ಜಿಲ್ಲಾಧ್ಯಕ್ಷ ತೇಜಸ್ ಲೋಕೇಶ್‌ಗೌಡ ಮತ್ತಿತರರು ಉಪಸ್ಥಿತರಿದ್ದರು.

ಕೃಷಿ ವಿಜ್ಞಾನಿ ಡಾ.ಅಯ್ಯಪ್ಪನ್ ನಿಧನಕ್ಕೆ ಸುತ್ತೂರು ಶ್ರೀಗಳ ಶ್ರದ್ಧಾಂಜಲಿ



ಪ್ರೊ.ಅಯ್ಯಪ್ಪನ್

ಮೈಸೂರು, ಮೇ 13– ಖ್ಯಾತ ಕೃಷಿ ವಿಜ್ಞಾನಿಗಳು, ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ನಿವೃತ್ತ ಮಹಾನಿರ್ದೇಶಕರು ಹಾಗೂ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರೂ ಆಗಿದ್ದ ಪ್ರೊ. ಎಸ್.ಅಯ್ಯಪ್ಪನ್ ಅವರು ಅಸಹಜವಾದ ರೀತಿಯಲ್ಲಿ ಅಗಲಿರುವುದು ದಿಗ್ಭ್ರಮೆಯನ್ನುಂಟುಮಾಡಿದೆ ಎಂದು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಪ್ರತಿಕ್ರಿಯಿಸಿದ್ದಾರೆ.

ಪ್ರೊ. ಅಯ್ಯಪ್ಪನ್‌ರವರು ಕೃಷಿ ಮತ್ತು ಮೀನುಗಾರಿಕೆಯಲ್ಲಿ ಎಂಎಫ್‌ಎಸ್‌ಸಿ ಪದವೀಧರರಾಗಿದ್ದರು. ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಿಂದ ಪಿಎಚ್.ಡಿ ಪಡೆದಿದ್ದರು. ಕೃಷಿ ಸಂಶೋಧನೆ ಮತ್ತು ಶಿಕ್ಷಣ ಇಲಾಖೆ ಕಾರ್ಯದರ್ಶಿಗಳಾಗಿ, ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮಹಾನಿರ್ದೇಶಕರಾಗಿ ಮತ್ತು ರಾಷ್ಟ್ರೀಯ ಕೃಷಿ ವಿಜ್ಞಾನ ಅಕಾಡೆಮಿ ಅಧ್ಯಕ್ಷರಾಗಿ ಸಮರ್ಥ ರೀತಿಯಲ್ಲಿ ಕಾರ್ಯನಿರ್ವಹಿಸಿದ್ದವರು. ಜೊತೆಗೆ ಕೃಷಿ ಮತ್ತು ಮೀನುಗಾರಿಕೆ ವಿಜ್ಞಾನಿಗಳಾಗಿ ದೆಹಲಿ ಮುಂಬೈ, ಭೋಪಾಲ್, ಬೆಂಗಳೂರಿನಲ್ಲಿ ಕೆಲಸ ಮಾಡಿ ತುಂಬಾ ಹೆಸರು ಪಡೆದಿದ್ದರು. ಇಂಫಾಲದಲ್ಲಿರುವ ಕೇಂದ್ರೀಯ ಕೃಷಿ ವಿವಿಯ ಕುಲಾಧಿಪತಿಗಳೂ ಆಗಿದ್ದರು.

ಪ್ರೊ.ಅಯ್ಯಪ್ಪನ್‌ರವರು ಶ್ರೀಮಠಕ್ಕೂ ಆಪ್ತರಾಗಿದ್ದು, ಹಲವಾರು ಬಾರಿ ಶ್ರೀಕ್ಷೇತ್ರಕ್ಕೆ ಭೇಟಿ ನೀಡಿದ್ದರು. ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರಕ್ಕೆ ಸಲಹೆ ಸೂಚನೆ ಮಾರ್ಗದರ್ಶನಗಳನ್ನು ನೀಡುತ್ತಿದ್ದರು. ಗ್ರಾಮಾಂತರ ಪ್ರದೇಶದ ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು. ಅವರು ಐಸಿಎಆರ್ ಮಹಾನಿರ್ದೇಶಕರಾಗಿದ್ದಾಗ ಸುತ್ತೂರು ಶ್ರೀಕ್ಷೇತ್ರದಲ್ಲಿ ರೈತರಿಗಾಗಿ ರಾಷ್ಟ್ರೀಯ ಮಟ್ಟದ ಇನ್ನೋವೇಟಿವ್ ಫಾರ್ಮರ್ಸ್ ಮೀಟ್ ಕಾರ್ಯಕ್ರಮ ಏರ್ಪಡಿಸಿ, ರೈತರು ಸ್ವಾನುಭವದಿಂದ ಕೃಷಿಗೆ ಅಗತ್ಯವಾದ ಯಂತ್ರೋಪಕರಣ ಹಾಗೂ ಉಪಕರಣಗಳ ಪ್ರದರ್ಶನ ಏರ್ಪಡಿಸಿ, ಅವುಗಳನ್ನು ಹೇಗೆ ವಾಸ್ತವವಾಗಿ ಬಳಸಬಹುದೆಂಬುದನ್ನು ತಿಳಿಸಿಕೊಟ್ಟಿದ್ದರು. ಅವರ ಆಕಾಲಿಕ ನಿಧನ ವಿಜ್ಞಾನ ಕ್ಷೇತ್ರಕ್ಕೆ ಕೊರತೆಯಾಗಿದೆ.

ಪ್ರೊ. ಅಯ್ಯಪ್ಪನ್‌ರವರ ಆತ್ಮಕ್ಕೆ ಶಾಂತಿಯನ್ನು, ಅವರ ಕುಟುಂಬವರ್ಗಕ್ಕೂ ಅಭಿಮಾನಿಗಳಿಗೂ ಈ ಅಗಲಿಕೆಯನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಪ್ರಾರ್ಥಿಸಿದ್ದಾರೆ.

ಭಾರತೀಯ ಜೈನ್ ಸಂಘಟನೆಯಿಂದ ತಾಯಂದಿರ ದಿನಾಚರಣೆ



ಭಾರತೀಯ ಜೈನ್ ಸಂಘಟನೆ, ಮೈಸೂರು ಚಾಪ್ಟರ್ ವತಿಯಿಂದ ತಾಯಂದಿರ ದಿನ ಆಚರಿಸಲಾಯಿತು.

ಮೈಸೂರು, ಮೇ 13– ಭಾರತೀಯ ಜೈನ್ ಸಂಘಟನೆ, ಮೈಸೂರು ಚಾಪ್ಟರ್ ವತಿಯಿಂದ ತಾಯಂದಿರ ದಿನ ಆಚರಿಸಲಾಯಿತು. ಕಾರ್ಯಕ್ರಮ ನವಕಾರ್ ಮಂತ್ರ ಪಠಿಸುವ ಮೂಲಕ ಆರಂಭವಾಯಿತು. ಈ ವೇಳೆ ಅಧ್ಯಕ್ಷೆ ಶರ್ಮಿಳಾ ಧೋಕಾ ಮಾತನಾಡಿ, ತಾಯಿಯ ಶಕ್ತಿಗಿಂತ ದೊಡ್ಡ ಶಕ್ತಿ ಇನ್ನೊಂದಿಲ್ಲ. ಮಾತೃತ್ವವು ಶತಿ ಮತ್ತು ಭಕ್ತಿಯ ಶಕ್ತಿಯನ್ನು ಹೊಂದಿದೆ. ಮಾತಾ ಮರುದೇವಿಯು ಮೊದಲ ತೀರ್ಥಂಕರರಿಗೆ ಜನ್ಮ ನೀಡಿ ಜೈನ ಧರ್ಮವನ್ನು ಜ್ಞಾನೋದಯಗೊಳಿಸಿದಳು ಎಂದರು.

ಭಾರತೀಯ ಜೈನ್ ಸಂಘಟನೆಯ ಕಾರ್ಯದರ್ಶಿ ದೀಪಕ್ ಬೋಹ್ರಾ ತಾಯಿ ಬಗ್ಗೆ ಮಾತನಾಡಿ, "ಮಾ" ಎಂಬ ಪದವು ಇಡೀ ಜಗತ್ತನ್ನು ಸೂಚಿಸುತ್ತದೆ. ನಿಮ್ಮ ಮಗುವನ್ನು ಮಾತ್ರ ರಕ್ಷಿಸುವುದಿಲ್ಲ, ಇಡೀ ಜಗತ್ತಿಗೆ ಅದರ ಆಶೀರ್ವಾದವಿದೆ ಎಂದರು. ಬಿಜೆಎಸ್ ಮೈಸೂರು ಸಂಘಟನೆ ಖಜಾಂಚಿ ಮನೋಹರ್ ಸಂಕ್ಲಾ, ನವರತನ್ ಪಿಟಾಲಿಟಾ, ಸಂತೋಷ್ ಸಲೇಚಾ, ಅಂಚಲ್ ದೇಸರಿಯಾಲ, ಅನಿತಾ ಗಡಿಯಾ ಮತ್ತಿತರರು ಈ ವೇಳೆ ಉಪಸ್ಥಿತರಿದ್ದರು.

ಪವರ್ ಲಿಫ್ಟಿಂಗ್‌ನಲ್ಲಿ ಚಿನ್ನದ ಪದಕ



ಇತ್ತೀಚೆಗೆ ಬೆಂಗಳೂರಲ್ಲಿ ನಡೆದ ರಾಜ್ಯ ಮಟ್ಟದ ಪವರ್ ಲಿಫ್ಟಿಂಗ್ ಸ್ಪರ್ಧೆಯಲ್ಲಿ ಮೈಸೂರಿನ ಬಾಡಿಲೂಕ್ ಜಿಮ್, ಏರೋಬಿಕ್ಸ್, ಯೋಗ ಶಾಲೆಯ ಎಂ.ಜೆ. ಸುರೇಶ್ ಮಾಸ್ಟರ್ ಟಟ ವಿಭಾಗದಲ್ಲಿ ಸ್ಪರ್ಧಿಸಿ ಚಿನ್ನದ ಪದಕ ಹಾಗೂ ಸ್ಟ್ರಾಂಗ್ ಮೆನ್, ಬೆಸ್ಟ್ ಲಿಫ್ಟರ್–2025 ಪ್ರಶಸ್ತಿಗೆ ಭಾಜನರಾಗಿದ್ದಾರೆ. ಕೇರಳದಲ್ಲಿ ನಡೆದ ರಾಷ್ಟ್ರಮಟ್ಟದ ವೈಟ್ ಲಿಫ್ಟ್‌ನಲ್ಲಿ ಮೂರು ಬೆಳ್ಳಿ ಪದಕಗಳನ್ನು ಸಹ ಪಡೆದಿದ್ದಾರೆ.

2025–26ನೇ ಸಾಲಿನಲ್ಲಿ ಡಿಇಎಲ್‌ಇಡಿ ಪ್ರವೇಶಾತಿಗೆ ದಾಖಲಾತಿ ಪ್ರಾರಂಭ

ಮೈಸೂರು,ಮೇ 13– ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)ಯ ವತಿಯಿಂದ 2025–26ನೇ ಸಾಲಿನ ಡಿ.ಇ.ಎಲ್.ಇ.ಡಿ (ಟಿ.ಸಿ.ಹೆಚ್–ಪ್ರಾಥಮಿಕ ಶಾಲಾ ಶಿಕ್ಷಕರ ತರಬೇತಿ)ಗೆ ದಾಖಲಾತಿ ಪ್ರಕ್ರಿಯೆ ಪ್ರಾರಂಭಗೊಂಡಿದೆ.

ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಲ್ಲಿ ಸಾಮಾನ್ಯ ಅಭ್ಯರ್ಥಿಗಳು ಶೇ.50ರಷ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಶೇ.45ರಷ್ಟು ಅಂಕಗಳು ಪಡೆದಿರಬೇಕು. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ಇರುವುದಿಲ್ಲ. ಆಸಕ್ತರು ನೋಡಲ್ ಅಧಿಕಾರಿ ಚಂದ್ರಶೇಖರ ಅವರ ಮೊ.ಸಂ. 8050033244 ಅನ್ನು ಸಂಪರ್ಕಿಸಬಹುದು ಎಂದು ವಸಂತ ಮಹಲ್, ಡಯಟ್‌ನ ಪ್ರಾಂಶುಪಾಲರು, ಉಪನಿರ್ದೇಶಕರು ತಿಳಿಸಿದ್ದಾರೆ.

ಮೈಸಿರಿ–2025 ಸಮಾಗಮ ವಾರ್ಷಿಕೋತ್ಸವ

ಮೈಸೂರು, ಮೇ 13– ಮೈಸೂರ್ ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್ ವತಿಯಿಂದ ಕಾಲೇಜಿನಲ್ಲಿ ಮೈಸಿರಿ–2025 ಸಮಾಗಮ ವಾರ್ಷಿಕೋತ್ಸವ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು 5 ರೂ. ವೈದ್ಯರೆಂದೇ ಜನಪ್ರಿಯರಾದ ಡಾ.ಶಂಕರೇಗೌಡ ಅವರು ಉದ್ಘಾಟಿಸಿದರು. ಜ್ಞಾನವಾಹಿನಿ ಸಂಸ್ಥೆ ಅಧ್ಯಕ್ಷ ಶಿವಪ್ಪ, ಮಾಜಿ ಜಿಲ್ಲಾ ಪರಿಷತ್ ಅಧ್ಯಕ್ಷ ಕೆ.ಎನ್.ಪುಟ್ಟಬುದ್ದಿ, ಖಜಾಂಚಿ ಪೂರ್ಣಿಮಾ ಕಿರಣ್, ಕಾರ್ಯದರ್ಶಿ ಪ್ರೊ. ಎಂ.ಮಂಜುನಾಥ್, ಪ್ರಾಂಶುಪಾಲ ಡಾ.ಎಂ.ಎಸ್.ಪ್ರಭುಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಎಂಐಟಿ ಪ್ರಥಮ ದರ್ಜೆ ಕಾಲೇಜಿನ 17ನೇ ವಾರ್ಷಿಕೋತ್ಸವ



ಎಂಐಟಿ ಪ್ರಥಮ ದರ್ಜೆ ಕಾಲೇಜಿನ 17ನೇ ವಾರ್ಷಿಕೋತ್ಸವ ನಡೆಯಿತು.

ಮೈಸೂರು, ಮೇ 13 – ಮೈಸೂರಿನ ಎಂಐಟಿ ಪ್ರಥಮ ದರ್ಜೆ ಕಾಲೇಜಿನ ಹದಿನೇಳನೇ ವಾರ್ಷಿಕೋತ್ಸವ ಕಲಾಮಂದಿರದಲ್ಲಿ ಆಯೋಜಿಸಲಾಗಿತ್ತು.

ವಾರ್ಷಿಕೋತ್ಸವದ ಅಧ್ಯಕ್ಷತೆಯನ್ನು ಎಂಇಟಿ ಸಂಸ್ಥೆಯ ಅಧ್ಯಕ್ಷ ಡಾ. ಬಿ.ಜಿ. ನರೇಶ್‌ಕುಮಾರ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಇಆರ್‌ಎಸ್‌ಸಿ ಸಂಸ್ಥೆಯ ಸ್ಥಾಪಕರಾದ ಎಸ್ತರ್ ಪ್ರಸನ್ನ ಬರ್ನಾಡ್, ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಹಾಗೂ ಎಂಇಟಿ ಸಂಸ್ಥೆಯ ಉಪಾಧ್ಯಕ್ಷ ಡಾ.ಜಿ.ಹೇಮಂತ್‌ಕುಮಾರ್, ಮೈಸೂರು ವಿಶ್ವವಿದ್ಯಾನಿಲಯದ ಸಿಡಿಸಿ ಅಧ್ಯಕ್ಷ ಡಾ.ಕೆ.ಮಂಟೇಲಿಂಗು ಹಾಗೂ ಸಂಸ್ಥೆಯ ಕಾರ್ಯದರ್ಶಿ ಡಾ.ವೈ.ಟಿ.ಕೃಷ್ಣೇಗೌಡ ಭಾಗವಹಿಸಿದ್ದರು. ಎಂಇಟಿ ಸಂಸ್ಥೆಯ ಸಹ ಕಾರ್ಯದರ್ಶಿ ಡಾ.ಹೆಚ್.ಕೆ. ಚೇತನ್, ಪ್ರಾಂಶುಪಾಲ ಡಾ.ಎಂ. ಚಂದ್ರಜಿತ್ ಮೋಹನ್ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಕಾಲೇಜು ವಾರ್ಷಿಕ ಸಂಚಿಕೆ 'ನಿನಾದ 2023–24' ಹಾಗೂ ಇಂಗ್ಲೀಷ್ ವಿಭಾಗದ 'Words of Winged Minds' ಪುಸ್ತಕಗಳನ್ನು ಬಿಡುಗಡೆ ಮಾಡಲಾಯಿತು.

ಪದವಿ ಮುಗಿಸಿದ ವಿದ್ಯಾರ್ಥಿಗಳು ಸ್ವಾವಲಂಬನೆ ಜೀವನ ನಡೆಸುವಂತಾಗಬೇಕು

ಸಾಂಸ್ಕೃತಿಕ ವೇದಿಕೆ ಸಮಾರೋಪ ಸಮಾರಂಭದಲ್ಲಿ ಪ್ರಾಂಶುಪಾಲ ಪ್ರೊ.ಸೋಮಣ್ಣ ಸಲಹೆ

ಮೈಸೂರು, ಮೇ13(ಜಿಎ)–ಪದವಿ ಮುಗಿದ ವಿದ್ಯಾರ್ಥಿಗಳು ತಂದೆ ತಾಯಿಯರಿಗೆ ಹೊರೆ ಆಗಬಾರದು. ಪ್ರತಿಯೊಬ್ಬರೂ ಸ್ವಾಭಿಮಾನ ಮತ್ತು ಸ್ವಾವಲಂಬನೆಯಿಂದ ಬದುಕುವುದನ್ನು ರೂಢಿಸಿಕೊಳ್ಳಬೇಕು ಎಂದು ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ಪ್ರಾಂಶುಪಾಲ ಪ್ರೊ.ಸೋಮಣ್ಣ ಇಂದಿಲ್ಲಿ ಸಲಹೆ ನೀಡಿದರು.

ಕಾಲೇಜು ಶಿಕ್ಷಣ ಇಲಾಖೆ, ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಸಹಯೋಗದಲ್ಲಿ ಮೈಸೂರಿನ ಕಲಾಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ ಸಾಂಸ್ಕೃತಿಕ ವೇದಿಕೆ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಉನ್ನತ ವ್ಯಾಸಂಗದ ಸಂದರ್ಭದಲ್ಲಿ ಮತ್ತು ಪದವಿ ಮುಗಿದ ನಂತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೆಚ್ಚಿನ ಆದ್ಯತೆ ನೀಡಿ, ತೇರ್ಗಡೆ ಹೊಂದುವ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದರು.

ಇಂದು ಶಿಕ್ಷಣ ಪಡೆದ ಪ್ರತಿಯೊಬ್ಬರಿಗೂ ಹೆಚ್ಚಿನ ಅವಕಾಶವಿದೆ. ವಿದ್ಯಾರ್ಥಿಗಳು ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಜೀವನದಲ್ಲಿ ಮುಂದೆ ಬರಬೇಕು. ಶಿಕ್ಷಣದ ಸಹಾಯದಿಂದ ಜೀವನದಲ್ಲಿ ಯಾವ ಸಾಧನೆಬೇಕಾದರೂ ಮಾಡಬಹುದು. ಇಂದು ಸರ್ಕಾರಿ ಉದ್ಯೋಗಕ್ಕೂ ವಿದ್ಯಾರ್ಥಿಗಳು ಪ್ರಯತ್ನ ಪಡಬೇಕು. ಐಎಎಸ್, ಕೆಎಎಸ್ ನಂತರ ಹುದ್ದೆಗಳನ್ನು ಪಡೆದುಕೊಳ್ಳಲು ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.



ಕಾಲೇಜು ಶಿಕ್ಷಣ ಇಲಾಖೆ, ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಸಹಯೋಗದಲ್ಲಿ ಮೈಸೂರಿನ ಕಲಾಮಂದಿರದಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ವೇದಿಕೆ ಸಮಾರೋಪ ಸಮಾರಂಭವನ್ನು ನಟ ಚೇತನ್‌ಚಂದ್ರ ಉದ್ಘಾಟಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ನಟ ಚೇತನ್‌ಚಂದ್ರ ಮಾತನಾಡಿ, ಸ್ಟುಡೆಂಟ್ ಲೈಫ್ ಗೋಲ್ಡನ್ ಲೈಫ್ ಎಂದು ಹೇಳುತ್ತಾರೆ. ಅದನ್ನು ವಿದ್ಯಾರ್ಥಿಗಳು ಹಾಳು ಮಾಡಿಕೊಳ್ಳಬೇಡಿ. ಆದ್ದರಿಂದ ವಿದ್ಯಾರ್ಥಿಗಳು ಸಮಯವನ್ನು ವ್ಯರ್ಥ ಮಾಡದೆ ಓದಿಗೆ ಮೀಸಲಿಡಬೇಕು. ಆಗ ಪ್ರಪಂಚವೇ ನಮ್ಮದಾಗಲಿದೆ ಎಂದು ತಿಳಿಸಿದರು.

ಸಿನಿಮಾ ಕ್ಷೇತ್ರಕ್ಕೆ ಕಾಲಿಟ್ಟ ತಕ್ಷಣ ಗೆಲುವು ಸಾಧಿಸಲು ಸಾಧ್ಯವಿಲ್ಲ. ಆದ್ದರಿಂದ ಸಿನಿಮಾ ರಂಗದಲ್ಲಿ ತಾಳ್ಮೆ ಬಹಳ ಮುಖ್ಯವಾಗುತ್ತದೆ. ಸಿನಿಮಾ ಪ್ರತಿಕ್ಷಣದಲ್ಲೂ ಹೊಸ ವಿಚಾರವನ್ನು ಕಲಿಸುತ್ತದೆ. ಹೊಸ ರೀತಿಯ ಅನುಭವವನ್ನು ನೀಡುತ್ತದೆ. ಸಿನಿಮಾ ಮತ್ತಿತರ ಕಲಾ ಮಾಧ್ಯಮಗಳಲ್ಲಿ ಪರಸ್ಪರ ಸುಖ–ದುಃಖಗಳನ್ನು ಹಂಚಿಕೊಳ್ಳಲು, ಭಾವನೆಗಳನ್ನು ಅರ್ಥಮಾಡಿಕೊಳ್ಳಲು ಸಾಧ್ಯವಿದೆ ಎಂದರು.

ಐಕ್ಯುಎಸಿ ಸಂಚಾಲಕ ಡಾ.ಎಸ್. ಮುತ್ತುರಾಜ, ಸಾಂಸ್ಕೃತಿಕ ವೇದಿಕೆ ಕಾರ್ಯದರ್ಶಿ ಪ್ರೊ.ಹೆಚ್.ಎಸ್.ಧನಲಕ್ಷ್ಮಿ, ಖಜಾಂಚಿ ಪ್ರೊ.ಎನ್.ವನಿತ, ಕಚೇರಿ ಅಧೀಕ್ಷಕ ಎಂ.ಎನ್.ಪ್ರಭು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮಾರಾಟವಾಗದೇ ಉಳಿದ ಮದ್ಯ, ಬಿಯರ್ ನಾಶ

ಮೈಸೂರು,ಮೇ 13– ಕೆ.ಎಸ್.ಬಿ.ಸಿ.ಎಲ್. ಲಿಕ್ಕರ್ ಡಿಪೋ, ಕೂರ್ಗಳ್ಳಿಯಲ್ಲಿ ಮಾರಾಟವಾಗದೇ ಉಳಿದಿದ್ದ ಒಟ್ಟು 18.320 ಲೀಟರ್ ಮದ್ಯ ಮತ್ತು 1903.680 ಲೀಟರ್ ಬಿಯರ್ ಅನ್ನು ಮೈಸೂರು ನಗರ ಜಿಲ್ಲೆಯ ಅಬಕಾರಿ ಉಪ ಆಯುಕ್ತರ ಆದೇಶದ ಮೇರೆಗೆ ಮೈಸೂರು ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರಾದ ಹೆಚ್.ಕೆ.ರಮೇಶ್ ನೇತೃತ್ವದಲ್ಲಿ, ಕೆ.ಎಸ್.ಬಿ.ಸಿ.ಎಲ್. ಕೂರ್ಗಳ್ಳಿ ಡಿಪೋನ ಅಬಕಾರಿ ಉಪ ಅಧೀಕ್ಷಕರಾದ ವಿಕ್ರಮ್.ಎಲ್.ಬಿ. ಮತ್ತು ಅಬಕಾರಿ ನಿರೀಕ್ಷಕರು ಹಾಗೂ ಡಿಪೋನ ವ್ಯವಸ್ಥಾಪಕರು, ಮತ್ತು ಇಲಾಖಾ ಸಿಬ್ಬಂದಿ ನಾಶಪಡಿಸಿದರು.



ದೇಶ – ವಿದೇಶ

ಅಮೆರಿಕದಲ್ಲಿ ಕಾರು ಅಪಘಾತ: ಇಬ್ಬರು ಭಾರತೀಯ ವಿದ್ಯಾರ್ಥಿಗಳು ಸಾವು

ವಾಷಿಂಗ್ಟನ್: ಅಮೆರಿಕದ ಪೆನ್ಸಿಲ್ವೇನಿಯಾದಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಇಬ್ಬರು ಭಾರತೀಯ ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ. ಓರ್ವ ಗಾಯಗೊಂಡಿದ್ದಾರೆ. ಸೌರವ್ ಪ್ರಭಾಕರ್ (23) ಮತ್ತು ಮಾನವ್ ಪಟೇಲ್(20) ಮೃತರು. ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದ ಕಾರು ಮರಕ್ಕೆ ಡಿಕ್ಕಿ ಹೊಡೆದು ನಂತರ ಸೇತುವೆಗೆ ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಇಬ್ಬರು ವಿದ್ಯಾರ್ಥಿಗಳು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ವಾಹನದ ಮುಂಭಾಗದ ಸೀಟಿನಲ್ಲಿದ್ದ ಮತ್ತೋರ್ವ ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೆನ್ಸಿಲ್ವೇನಿಯಾ ಪೊಲೀಸರು ತಿಳಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ನ್ಯೂಯಾರ್ಕ್‌ನಲ್ಲಿರುವ ಭಾರತೀಯ ರಾಯಭಾರಿ ಕಚೇರಿ, ಕ್ಲೀವ್ಲ್ಯಾಂಡ್ ಸ್ಟೇಟ್ ಯೂನಿವರ್ಸಿಟಿಯ ಭಾರತೀಯ ವಿದ್ಯಾರ್ಥಿಗಳಾದ ಮಾನವ್ ಪಟೇಲ್‌ಮತ್ತು ಸೌರವ್ ಪ್ರಭಾಕರ್ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದಾರೆ ಎಂದು ತಿಳಿದು ತೀವ್ರ ದುಃಖವಾಗಿದೆ. ಈ ಸಂದರ್ಭದಲ್ಲಿ ಮೃತ ವಿದ್ಯಾರ್ಥಿಗಳ ಕುಟುಂಬಕ್ಕೆ ಬೇಕಿರುವ ಎಲ್ಲಾ ಸಹಕಾರವನ್ನು ನೀಡುವುದಾಗಿ ಹೇಳಿದೆ.



ಪಾಕ್ ದಾಳಿಯಲ್ಲಿ ಗಾಯಗೊಂಡಿದ್ದ ಪಂಜಾಬ್ ಮಹಿಳೆ ಸಾವು

ಲುಧಿಯಾನ: ಪಂಜಾಬ್‌ನ ಫಿರೋಜ್‌ಪುರದಲ್ಲಿ ಪಾಕಿಸ್ತಾನ ನಡೆಸಿದ ವೈಮಾನಿಕ ದಾಳಿಯಲ್ಲಿ ತೀವ್ರವಾಗಿ ಗಾಯಗೊಂಡಿದ್ದ 50 ವರ್ಷದ ಮಹಿಳೆಯೊಬ್ಬರು ಖಾಸಗಿ ಆಸ್ಪತ್ರೆಯಲ್ಲಿ ಮಂಗಳವಾರ ನಿಧನರಾಗಿದ್ದಾರೆ.



ಪಾಕಿಸ್ತಾನ ವೈಮಾನಿಕ ದಾಳಿ ನಡೆಸಿದ ಸಂದರ್ಭದಲ್ಲಿ ಸುಖ್ವಿಂದರ್ ಕೌರ್ ಎಂಬುವರ ಮನೆಯ ಮೇಲೆ ಕೆಲವು ಅವಶೇಷಗಳು ಬಿದ್ದಿದ್ದವು. ಇದರ ಪರಿಣಾಮವಾಗಿ ಮನೆ ಮತ್ತು ಕಾರಿಗೆ ಬೆಂಕಿ ಹೊತ್ತಿಕೊಂಡಿತ್ತು. ಇದೇ ವೇಳೆ ಕೌರ್ ಸೇರಿದಂತೆ ಅವರ ಪತಿ ಲಖ್ವಿಂದರ್ ಸಿಂಗ್ (55) ಮತ್ತು ಅವರ ಮಗ ಮೋನು ಸಿಂಗ್ (24) ಗಂಭೀರವಾಗಿ ಗಾಯಗೊಂಡಿದ್ದರು. ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಅವರು ಸುಖ್ವಿಂದರ್ ಕೌರ್ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ಜತೆಗೆ, ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 5 ಲಕ್ಷ ಪರಿಹಾರ ನೀಡುವುದಾಗಿ ಘೋಷಿಸಿದ್ದಾರೆ. ರಾಜ್ಯಸಭಾ ಸಂಸದ ಸಂಜೀವ್ ಅರೋರಾ ಅವರು, ಕೌರ್ ಕುಟುಂಬಕ್ಕೆ 2 ಲಕ್ಷ ಪರಿಹಾರ ಘೋಷಿಸಿದ್ದಾರೆ. ಏಪ್ರಿಲ್ 22ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ 26 ಪ್ರವಾಸಿಗರು ಮೃತಪಟ್ಟಿದ್ದರು.

584 ದಿನಗಳ ನಂತರ ಹಮಾಸ್ ಉಗ್ರರಿಂದ ಯುವಕ ರಿಲೀಸ್

ಗಾಜಾ: ಗಾಜಾದಲ್ಲಿ 19 ತಿಂಗಳ ಕಾಲ ಒತ್ತೆಯಾಳಾಗಿ ಬಂಧನದಲ್ಲಿದ್ದ 21 ವರ್ಷದ ಇಸ್ರೇಲ್–ಅಮೆರಿಕನ್ ಯುವಕ ಎಡನ್ ಅಲೆಕ್ಸಾಂಡರ್ ಬಿಡುಗಡೆಯಾಗಿದ್ದಾರೆ. ಯುದ್ಧದಲ್ಲಿನ ತಾತ್ಕಾಲಿಕ ವಿರಾಮದ ನಡುವೆ ಅಲೆಕ್ಸಾಂಡರ್ ಮತ್ತೆ ತಮ್ಮ ಕುಟುಂಬ ಸೇರಿದ್ದಾರೆ. 2023ರ ಕೊನೆಯಲ್ಲಿ ಉಗ್ರಗಾಮಿಗಳಿಂದ ಒತ್ತೆಯಾಳಾಗಿ ಸೆರೆಸಿಕ್ಕಿದ್ದ ಅಲೆಕ್ಸಾಂಡರ್, ಬಿಡುಗಡೆ ನಂತರ ಇಸ್ರೇಲ್‌ನ ಸೇನಾ ಕೇಂದ್ರಕ್ಕೆ ವರ್ಗಾವಣೆಯಾಗಿದ್ದಾರೆ. ಅವರನ್ನು ಬರಮಾಡಿಕೊಳ್ಳಲು ಕುಟುಂಬ ಕಾಯುತ್ತಿತ್ತು, ಅಲೆಕ್ಸಾಂಡರ್ ಹಲವು ತಿಂಗಳ ನಂತರ ತನ್ನವರನ್ನು ಕಂಡ ಸಂತೋಷದಲ್ಲಿ ಭಾವುಕರಾಗಿದ್ದಾರೆ. ಈ ಸಂತೋಷದ ಕ್ಷಣವನ್ನು ಸೆರೆಹಿಡಿದ ವಿಡಿಯೋ ಸೋಷಿಯಲ್ ಮೀಡಿಯಾಗಳಲ್ಲಿ ವೈರಲ್ ಆಗಿದೆ. ವಿಡಿಯೋದಲ್ಲಿ, ಅಲೆಕ್ಸಾಂಡರ್‌ರ ತಾಯಿ ಅವರತ್ತ ಓಡಿಬಂದು, ಕಣ್ಣೀರು ಸುರಿಸುತ್ತಾ ಅವರನ್ನು ತಬ್ಬಿಕೊಳ್ಳುವ ದೃಶ್ಯ ಕಾಣಿಸುತ್ತದೆ. "ನೀನು ಎಷ್ಟು ಶಕ್ತಿಶಾಲಿಯಾಗಿದ್ದೀಯಾ! ಎಡನ್, ನಮಗೆ ತುಂಬಾ ಚಿಂತೆಯಾಗಿತ್ತು" ಎಂದು ಅವರು ಹೇಳುತ್ತಾರೆ.



ನಕಲಿ ಮದ್ಯ ಸೇವನೆ: 14 ಮಂದಿ ಸಾವು

ಚಂಡೀಗಢ: ಪಂಜಾಬ್‌ನ ಅಮೃತಸರದ ಐದು ಹಳ್ಳಿಗಳಲ್ಲಿ ನಕಲಿ ಮದ್ಯ ಸೇವಿಸಿ ಕನಿಷ್ಠ 14 ಜನ ಮೃತಪಟ್ಟಿದ್ದಾರೆ. ಈ ಘಟನೆ ಸಂಬಂಧ ಐವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.



ಭಂಗಲಿ, ಪಾತಾಳಪುರಿ, ಮರಾರಿ ಕಲಾನ್, ಥೆರೆವಾಲ್ ಮತ್ತು ತಲ್ವಾಂಡಿ ಘುಮಾನ್ ಎಂಬ ಐದು ಗ್ರಾಮಗಳಲ್ಲಿ ಈ ಸಾವುಗಳು ಸಂಭವಿಸಿವೆ. 6 ಜನರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

14 ಜನ ಮೃತಪಟ್ಟಿರುವುದಾಗಿ ಅಮೃತಸರ ಉಪ ಆಯುಕ್ತರಾದ ಸಾಕ್ಷಿ ಸಾಹ್ನಿ ದೃಢಪಡಿಸಿದ್ದಾರೆ. ಪರಿಸ್ಥಿತಿಯನ್ನು ಅವಲೋಕಿಸಲು ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಮಣಿಂದರ್ ಸಿಂಗ್ ಘಟನಾ ಸ್ಥಳಕ್ಕೆ ತೆರಳಿದ್ದಾರೆ ಎಂದು ವರದಿಯಾಗಿದೆ. ಬಂಧಿತರನ್ನು ಪ್ರಬ್ಜಿತ್ ಸಿಂಗ್, ಕುಲ್ಬೀರ್ ಸಿಂಗ್, ಸಾಹಿಬ್ ಸಿಂಗ್, ಗುರ್ಜಂತ್ ಸಿಂಗ್ ಮತ್ತು ನಿಂದರ್ ಕೌರ್ ಎಂದು ಗುರುತಿಸಲಾಗಿದೆ. ಆರೋಪಿಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಮತ್ತು ಅಬಕಾರಿ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಲಸೆ ನಿರ್ಬಂಧಿಸಲು ವೀಸಾ ನಿಯಮಗಳ ಬದಲಾವಣೆಗೆ ಮುಂದಾದ ಬ್ರಿಟನ್

ಲಂಡನ್: ಬ್ರಿಟನ್‌ನಲ್ಲಿ ವಾಸಿಸುವ ಮತ್ತು ಕೆಲಸ ಮಾಡುವ ವಲಸಿಗ ಕಾರ್ಮಿಕರ ಸಂಖ್ಯೆಯನ್ನು ತಗ್ಗಿಸುವ ಕ್ರಮವಾಗಿ ವೀಸಾ ಮತ್ತು ವಲಸೆ ಕಾನೂನುಗಳಿಗೆ ಮಹತ್ವದ ಬದಲಾವಣೆಗಳನ್ನು ತರಲು ಬ್ರಿಟಿಷ್ ಸರಕಾರ ಯೋಚಿಸುತ್ತಿದೆ. ಪ್ರಸ್ತಾವಿತ ಬದಲಾವಣೆಗಳು ಜಾರಿಗೆ ಬಂದರೆ ಭಾರತೀಯರು ಸೇರಿದಂತೆ ಬ್ರಿಟನ್‌ನಲ್ಲಿ ಕೆಲಸ ಮಾಡುವ ಮತ್ತು ಅಲ್ಲಿ ಶಾಶ್ವತವಾಗಿ ನೆಲೆಸುವ ಕನಸು ಕಂಡಿರುವ ವಲಸಿಗರಿಗೆ ಅದನ್ನು ಈಡೇರಿಸುವುದು ತುಂಬಾ ಕಷ್ಟವಾಗಲಿದೆ. ವಲಸೆ ಕುರಿತ ಶ್ವೇತಪತ್ರವನ್ನು ಸಂಸತ್‌ನಲ್ಲಿ ಮಂಡಿಸುವ ಮುನ್ನ, ಕೀರ್ ಸ್ಟಾರ್ಮರ್ ನೇತೃತ್ವದ ಬ್ರಿಟನ್ ಸರಕಾರವು ವಲಸಿಗರ ಸಂಖ್ಯೆಯನ್ನು ಕಡಿಮೆ ಮಾಡುವ ಉದ್ದೇಶದ ಬದಲಾವಣೆಗಳನ್ನು ಜಾರಿಗೆ ತರುವುದಾಗಿ ಪ್ರಕಟಿಸಿದೆ. ಬ್ರಿಟನ್‌ನಲ್ಲಿ 2024 ಜೂನ್‌ವರೆಗಿನ 12 ತಿಂಗಳ ಅವಧಿಯಲ್ಲಿ 7,28,000 ವಲಸಿಗರು ಬ್ರಿಟನ್‌ಗೆ ಆಗಮಿಸಿದ್ದರು. ಹೊಸ ನಿಯಮಗಳು ಜಾರಿಗೆ ಬಂದರೆ ವಲಸೆ ವ್ಯವಸ್ಥೆಯ ಮೇಲಿನ ಸರಕಾರದ ನಿಯಂತ್ರಣವು ಬಲಗೊಳ್ಳುತ್ತದೆ ಎಂದು ಪ್ರಧಾನಿ ಸ್ಟಾರ್ಮರ್ ಹೇಳಿದ್ದಾರೆ.



ಮೈಸೂರು ಮಿತ್ರ ಬುಧವಾರ 14 ಮೇ 2025

ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಜಾತಿ ಗಣತಿ ಬಹಿಷ್ಕಾರ: ಎಚ್ಚರಿಕೆ

ಮಡಿಕೇರಿ, ಮೇ 13– ಜಾತಿ ಗಣತಿ ಸಮೀಕ್ಷೆಯ ಸಂದರ್ಭ ಆದಿ ದ್ರಾವಿಡ ಸಮುದಾಯದವರನ್ನು 'ಪರಿಶಿಷ್ಟ ಜಾತಿ ಆದಿ ದ್ರಾವಿಡ ತುಳು ಭಾಷಿಕರು' ಎಂದು ನಮೂದಿಸಬೇಕು. ಸಮೀಕ್ಷಾ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ರಾಜ್ಯದಲ್ಲಿರುವ 12 ಲಕ್ಷದಷ್ಟು ಆದಿ ದ್ರಾವಿಡ ಸಮುದಾಯದವರು ಜಾತಿ ಗಣತಿಯನ್ನು ಬಹಿಷ್ಕರಿಸಲಿದ್ದಾರೆ ಎಂದು ಆದಿ ದ್ರಾವಿಡ ಸಮಾಜ ಸೇವಾ ಸಂಘ ಎಚ್ಚರಿಕೆ ನೀಡಿದೆ.

ಮೂಲತಃ ನಾವು ಆದಿ ದ್ರಾವಿಡ ತುಳು ಭಾಷಿಕರು ಆಗಿರುವುದರಿಂದ ಸಮೀಕ್ಷೆ ಕಾರ್ಯದಲ್ಲಿ ಪರಿಶಿಷ್ಟ ಜಾತಿಯಲ್ಲಿ ಆದಿ ದ್ರಾವಿಡ ಉಪ ಜಾತಿ(ತುಳು ಭಾಷಿಕರು) ಎಂದು ಮಾಹಿತಿ ನೀಡಬೇಕು ಮತ್ತು ಇದನ್ನು ಯಥಾವತ್ತಾಗಿ ದಾಖಲಿಸಬೇಕು. ಇದಲ್ಲದೆ ಬೇರೆ ಯಾವುದೇ ಇಲ್ಲದ ವಿಚಾರವನ್ನು ದಾಖಲು ಮಾಡಬಾರದೆಂದು ಹೆಚ್.ಎಂ.ಸೋಮಪ್ಪ ಮನವಿ ಮಾಡಿದರು. ಪರಿಶಿಷ್ಟ ಜಾತಿ ಆದಿ ದ್ರಾವಿಡ ತುಳು ಭಾಷಿಕರು ಎಂದು ನಮೂದಿಸದೆ ಇದ್ದರೆ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಅವಿಭಾಜ್ಯ ಉಡುಪಿ, ಮಲೆನಾಡು ಜಿಲ್ಲೆಗಳಲ್ಲಿನ ಕೊಡಗು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ ಹಾಗೂ ಚದುರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಸುಮಾರು 12 ಲಕ್ಷದಷ್ಟು ಆದಿದ್ರಾವಿಡ ಸಮುದಾಯದವರು ಅವೈಜ್ಞಾನಿಕ ಜಾತಿ ಗಣತಿ ಸಮೀಕ್ಷಾ ಕಾರ್ಯವನ್ನು ಬಹಿಷ್ಕರಿಸಲಿದ್ದಾರೆ ಎಂದರು. ಮನವಿ ಸಲ್ಲಿಸುವ ಸಂದರ್ಭ ಸಂಘದ ಜಿಲ್ಲಾಧ್ಯಕ್ಷ ಪಿ.ಎಲ್. ಸುರೇಶ, ಪ್ರಧಾನ ಕಾರ್ಯದರ್ಶಿ ಹೆಚ್.ಎಸ್.ಮಧು, ಸದಸ್ಯರಾದ ಎ. ಉಮೇಶ್ ಮಾದಾಪುರ, ಹೆಚ್.ಎಸ್. ಮನು, ರವಿ ಹೊನ್ನವಳ್ಳಿ, ಕುಮಾರ ಬಿಟಿಕಟ್ಟೆ ಮತ್ತಿತರರು ಹಾಜರಿದ್ದರು.


ಪರಿಶಿಷ್ಟ ಜಾತಿ ಆದಿ ದ್ರಾವಿಡ ತುಳು ಭಾಷಿಕರು ಎಂದು ನಮೂದಿಸುವಂತೆ ಒತ್ತಾಯಿಸಿ ಆದಿ ದ್ರಾವಿಡ ಸಮಾಜ ಸೇವಾ ಸಂಘ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

ಮೇ 16, ಮಿನಿ ಉದ್ಯೋಗ ಮೇಳ

ಮಡಿಕೇರಿ ಮೇ 13– ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮೇ, 16 ರ ಬೆಳಗ್ಗೆ 10.30 ರಿಂದ 3 ಗಂಟೆಯ ವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಿನಿ ಉದ್ಯೋಗ ಮೇಳ ನಡೆಯಲಿದೆ. ಈ ಉದ್ಯೋಗ ಮೇಳದಲ್ಲಿ ಕಲ್ಯಾಣಿ ಮೋಟಾರ್ಸ್, ಪೆಂಟಾಟೆಕ್, ಇಬ್ಬನಿ ರೆಸಾರ್ಟ್ಸ್, ಮಡಿಕೇರಿ ಹಾಗೂ ಕ್ಲಬ್ ಮಹೀಂದ್ರ ರೆಸಾರ್ಟ್ಸ್ ಕಂಪನಿಗಳು ತಮ್ಮ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ಈ ಮೇಳದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಈ ಉದ್ಯೋಗಮೇಳದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮ ಪದವಿ ಹಾಗೂ ಸ್ನಾತಕೋತರ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಿ ಉದ್ಯೋಗದ ನೆರವನ್ನು ಪಡೆಯಬಹುದು. ಮಾಹಿತಿಗೆ ಜಾಬ್ ಕೋಆರ್ಡಿನೇಟರ್–8296020826 ನ್ನು ಸಂಪರ್ಕಿಸಬಹುದಾಗಿದೆ.

ದೋಣಿಕಡವು ದೋಣಿ ದುರಂತ: ಇಂದು ಇನ್ನೊಂದು ಶವ ಪತ್ತೆ


ಮಂಗಳವಾರ ದೋಣಿ ದುರಂತದಲ್ಲಿ ಮೃತಪಟ್ಟಿದ್ದ ಅಯ್ಯಪ್ಪ ಮೃತದೇಹವನ್ನು ನೀರಿನಿಂದ ಹೊರ ತೆಗೆದರು.


ಅಯ್ಯಪ್ಪ

ಮಡಿಕೇರಿ/ನಾಪೋಕ್ಲು, ಮೇ 13– ಇಲ್ಲಿಗೆ ಸಮೀಪದ ಕಡಿಯತ್ತೂರಿನ ಬಳಿಯ ದೋಣಿ ಕಡವು ಕಾವೇರಿ ನದಿ ನೀರಲ್ಲಿ ಮುಳುಗಿ ಕಣ್ಮರೆಯಾಗಿದ್ದ ಅಯ್ಯಪ್ಪ (18) ಮೃತ ದೇಹ ಮಂಗಳವಾರ ಪತ್ತೆ ಆಗಿದೆ.

ಎಮ್ಮೆಮಾಡು ಕೂರುಳಿ ಬಳಿಯ ಕಡಿಯತ್ತೂರು ದೋಣಿ ಕಡುವು ಎಂಬಲ್ಲಿ ಸ್ನೇಹಿತರೊಂದಿಗೆ ಕಾವೇರಿ ನದಿಗೆ ಸ್ನಾನಕ್ಕೆ ತೆರಳಿದ್ದ ಯುವಕರು ದೋಣಿಯಲ್ಲಿ ತೆರಳುವ ಸಂದರ್ಭ ದೋಣಿ ಮಗುಚಿ ದುರ್ಘಟನೆ ಜರುಗಿತ್ತು. ಐವತ್ತೋಕ್ಲು ಗ್ರಾಮದ ಚಾರಂಡ ಕಾಲೋನಿ ನಿವಾಸಿ ಪರಮೇಶ (ಪುಟ್ಟ) ಮತ್ತು ವಿಮಲಾ ದಂಪತಿಗಳ ಪುತ್ರ ಗಿರೀಶ್ (16) ಹಾಗೂ ಚೇರಂಬಾಣೆ ಬಳಿಯ ಪಾಕ ನಿವಾಸಿ ವಿಠಲ ಹಾಗೂ ವೀಣಾ ದಂಪತಿಗಳ ಪುತ್ರ ಅಯ್ಯಪ್ಪ (18) ಇಬ್ಬರೂ ನೀರಲ್ಲಿ ಮುಳುಗಿ ಕಾಣೆಯಾಗಿದ್ದರು.

ಸ್ಥಳದಲ್ಲಿ ಪೊಲೀಸ್, ಅಗ್ನಿಶಾಮಕ ಹಾಗೂ ಗೃಹ ರಕ್ಷಕ ಸಿಬ್ಬಂದಿಗಳು ನಿನ್ನೆ ಗಿರೀಶ್ (16) ಮೃತದೇಹ ನೀರಿನಿಂದ ಹೊರ ತೆಗೆದಿದ್ದು ಅಯ್ಯಪ್ಪ (18) ಯುವಕನ ಮೃತದೇಹಕ್ಕೆ ನದಿಯಲ್ಲಿ ಶೋಧ ಕಾರ್ಯಕ್ಕೆ ಪ್ರತಿಕೂಲ ಹವಾಮಾನ ಉಂಟಾದ ಹಿನ್ನೆಲೆ ಸ್ಥಗಿತಗೊಳಿಸಲಾಗಿತ್ತು. ನಾಪೋಕ್ಲು ಪೊಲೀಸರು ಅಗ್ನಿಶಾಮಕದಳ ಹಾಗೂ ಸ್ಥಳೀಯರು ಮೃತದೇಹ ಪತ್ತೆಗಾಗಿ ಬೆಳಗ್ಗಿನಿಂದಲೇ ಶೋಧನಾ ಕಾರ್ಯ ಮುಂದುವರಿಸಿದ್ದರು.

ಕಾವೇರಿನದಿಯ ಸುಮಾರು 15 ಅಡಿ ಆಳದಲ್ಲಿ ಮೃತ ಯುವಕ ಅಯ್ಯಪ್ಪನ ಮೃತ ದೇಹವನ್ನು ಪೊಲೀಸರು, ಅಗ್ನಿಶಾಮಕ ದಳ ಮತ್ತು ಗ್ರಾಮ ಪಂಚಾಯಿತಿ ಸದಸ್ಯ ಇಸ್ಮಾಯಿಲ್, ಉಬೈದ್, ಮತ್ತು ಮುಳುಗು ತಜ್ಞ ಮೂರ್ನಾಡು ನಿವಾಸಿ ಎಂ. ಆರ್. ಬಿಪಿನ್, ಜುಬೇರ್, ಇಬ್ರಾಹಿಂ, ಅಬ್ದುಲ್, ಅಬ್ದುಲ್ ರೆಹಮಾನ್ , ಮುತ್ತಪ್ಪ ಇನ್ನಿತರರ ನೆರವಿನಿಂದ ಶವಗಳನ್ನು ಪತ್ತೆ ಹಚ್ಚಿ ಮೇಲೆ ತೆಗೆಯುವಲ್ಲಿ ಯಶಸ್ವಿಯಾಗಿದ್ದಾರೆ. ಪೊಲೀಸ್ ಠಾಣಾಧಿಕಾರಿ ಮಂಜುನಾಥ ಹಾಗೂ ಸಿಬ್ಬಂದಿಗಳು ಕೇಸು ದಾಖಲಿಸಿಕೊಂಡು ಕಾನೂನಿನ ಕ್ರಮ ಕೈಗೊಂಡಿದ್ದಾರೆ.

ಅರಳಿ ಗಿಡ ನೆಟ್ಟು ಬುದ್ಧ ಪೂರ್ಣಿಮೆ ಆಚರಣೆ


ಮಹಾಮೈತ್ರಿ ಬುದ್ಧ ವಿಹಾರದ ಪದಾಧಿಕಾರಿಗಳು ಅರಳಿ ಗಿಡ ನೆಟ್ಟು ಬುದ್ಧ ಪೂರ್ಣಿಮೆಯನ್ನು ಆಚರಿಸಿದರು.

ಮಡಿಕೇರಿ, ಮೇ 13– ಮಹಾಮೈತ್ರಿ ಬುದ್ಧ ವಿಹಾರದ ಪದಾಧಿಕಾರಿಗಳು ಹಾಗೂ ದಲಿತ ಸಂಘರ್ಷ ಸಮಿತಿಯ ಪ್ರಮುಖರು ಸೋಮವಾರಪೇಟೆ ತಾಲೂಕಿನ ಶನಿವಾರ ಸಂತೆ ಬಳಿಯ ದಂಡಳ್ಳಿ ಮಾದ್ರೆ ಗ್ರಾಮದಲ್ಲಿ ಅರಳಿ ಗಿಡ ನೆಟ್ಟು ಬುದ್ಧ ಪೂರ್ಣಿಮೆಯನ್ನು ಅರ್ಥಪೂರ್ಣವಾಗಿ ಆಚರಿಸಿದರು. ಮಹಾಮೈತ್ರಿ ಬುದ್ಧ ವಿಹಾರ ನಿರ್ಮಾಣ ಮಾಡಲು ಹೊರಟಿರುವ ಮಾದ್ರೆ ಗ್ರಾಮದ ಜಾಗದಲ್ಲಿ ಭಗವಾನ್ ಗೌತಮ ಬುದ್ಧರ ಜನ್ಮ ದಿನದ ಅಂಗವಾಗಿ ಬೋದಿ ವೃಕ್ಷದ ಸಂಕೇತವಾದ ಅರಳಿ ಗಿಡ ನೆಟ್ಟು ಬುದ್ಧ ಸಂದೇಶವನ್ನು ಸ್ಮರಿಸಿದರು.

ಮಹಾಮೈತ್ರಿ ಬುದ್ಧ ವಿಹಾರದ ಸಂಯೋಜಕರು ಹಾಗೂ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಜೆ.ಆರ್.ಪಾಲಾಕ್ಷ ಮಾತನಾಡಿ, ಭಗವಾನ್ ಬುದ್ಧ ಮಹಾಮೈತ್ರಿ ಟ್ರಸ್ಟ್ ವತಿಯಿಂದ ಈ ಜಾಗದಲ್ಲಿ ಅಂಬೇಡ್ಕರ್ ಭವನ ಹಾಗೂ ಬುದ್ಧ ವಿಹಾರ ಧ್ಯಾನ ಮಂದಿರ, ವೃದ್ಧಾಶ್ರಮವನ್ನು ನಿರ್ಮಿಸಿ ಸಮಾಜಕ್ಕೆ ಜನಸೇವೆಯ ಸಂದೇಶವನ್ನು ನೀಡಲಾಗುವುದು. ಜನಪರ ಕಾರ್ಯಕ್ರಮ ಹಾಗೂ ಶೈಕ್ಷಣಿಕ ಪ್ರಗತಿಯ ಚಟುವಟಿಕೆಗಳನ್ನು ನಡೆಸಲಾಗುವುದು. ಜ್ಞಾನ ಕೇಂದ್ರದ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುವುದು. ಈ ಕಾರ್ಯಗಳಿಗೆ ಸರ್ವರೂ ಸಹಕರಿಸಬೇಕೆಂದು ಮನವಿ ಮಾಡಿದರು. ಮಹಾಮೈತ್ರಿ ಬುದ್ಧವಿಹಾರ ಟ್ರಸ್ಟ್‌ನ ಕಾರ್ಯದರ್ಶಿ ಎಂ.ಎಸ್ ವೀರೇಂದ್ರ, ಶಿಕ್ಷಕ ಶಿವಣ್ಣ, ದುಂಡಳ್ಳಿ ಗ್ರಾ.ಪಂ ಮಾಜಿ ಅಧ್ಯಕ್ಷ ಸಿ.ಬಿ.ಅಬ್ಬಾಸ್, ದಲಿತ ಮುಖಂಡರುಗಳಾದ ರಾಮು, ಮುತ್ತಣ್ಣ, ವಸಂತ, ಮಾದ್ರೆ ಗ್ರಾಮದ ಮಂಜುನಾಥ್, ಹೊನ್ನಪ್ಪ, ಕುಮಾರಸ್ವಾಮಿ, ಪೃಥ್ವಿರಾಜ ಹಾಗೂ ಕಾರ್ಯಕರ್ತರು ಹಾಜರಿದ್ದರು.

ಧರಣಿನಿರತರೊಂದಿಗೆ ಶಾಸಕ ಪೊನ್ನಣ್ಣ ಮಾತುಕತೆ


ಕೊಲ್ಲಿ ಹಾಡಿಗೆ ಭೇಟಿ ನೀಡಿದ ಶಾಸಕ ಎ.ಎಸ್.ಪೊನ್ನಣ್ಣ ಧರಣಿ ನಿರತರ ಜೊತೆ ಸಮಾಲೋಚನೆ ನಡೆಸಿದರು.

ಮಡಿಕೇರಿ, ಮೇ 13– ಪೊನ್ನಂಪೇಟೆ ತಾಲೂಕಿನ ಕೆ.ಬಾಡಗ ಗ್ರಾಮ ಪಂಚಾಯಿತಿ ನಾಗರಹೊಳೆ ಅರಣ್ಯ ಪ್ರದೇಶದಲ್ಲಿರುವ ಅತ್ತೂರು ಕೊಲ್ಲಿ ಹಾಡಿಗೆ ಶಾಸಕ ಎ.ಎಸ್. ಪೊನ್ನಣ್ಣ ಭೇಟಿ ನೀಡಿ ಧರಣಿ ನಿರತರ ಜೊತೆ ಸಮಾಲೋಚನೆ ನಡೆಸಿದರು.

ತಾವುಗಳು ಶತಮಾನಗಳಿಂದ ಇಲ್ಲಿ ವಾಸವಾಗಿದ್ದು ತಮಗೆ ಅರಣ್ಯ ರಕ್ಷಣೆ ಹಕ್ಕಿನಡಿ ಹಕ್ಕುಪತ್ರ ನೀಡಬೇಕೆಂದು ಅರಣ್ಯ ವ್ಯಾಪ್ತಿ ನಿವಾಸಿಗಳು, ಬೇಡಿಕೆ ಇಟ್ಟರೆ, ಸೂಕ್ತ ರೀತಿಯ ಕಾನೂನು ಪ್ರಕ್ರಿಯೆ ಆಗಬೇಕೆಂದು ಅರಣ್ಯಾಧಿಕಾರಿಗಳು ವಾದ ಮಂಡಿಸಿದರು.

ಎರಡೂ ಕಡೆಯವರ ವಾದವನ್ನು ಆಲಿಸಿದ ಶಾಸಕರು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ತಮ್ಮ ಪ್ರಕ್ರಿಯೆ ಪೂರ್ಣಗೊಳಿಸುವುದರೊಂದಿಗೆ ಅರಣ್ಯ ನಿವಾಸಿಗಳಿಗೆ ತೊಂದರೆ ಮಾಡಬಾರದು ಹಾಗೂ ಅವರ ದಿನನಿತ್ಯದ ಕೆಲಸಗಳಿಗೆ ಯಾವುದೇ ರೀತಿಯ ಅಡತಡೆಗಳಾಗಬಾರದು ಎಂದು ಸೂಚಿಸಿದರು. ಅದೇ ರೀತಿ ಅರಣ್ಯ ನಿವಾಸಿಗಳು ತಮ್ಮ ಹಕ್ಕಿಗಾಗಿ ಹೋರಾಟ ಮಾಡುವುದರಲ್ಲಿ ಯಾವುದೇ ತಪ್ಪಿಲ್ಲ. ಆದರೆ ಎಲ್ಲರೂ ಕಾನೂನಾತ್ಮಕವಾಗಿ ಮಾಡಬೇಕು ಮತ್ತು ಹೊರಗಿನವರು ಬಂದು ಇವರ ಹೋರಾಟದ ಹಾದಿ ತಪ್ಪಿಸುವ ಕೆಲಸ ಆಗಬಾರದು ಎಂದು ಸಲಹೆ ನೀಡಿದರು. ತಾವು ಮುಖ್ಯಮಂತ್ರಿಗಳೊಂದಿಗೆ ಹಾಗೂ ಅರಣ್ಯ ಸಚಿವರೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಇದೇ ಸಂದರ್ಭದಲ್ಲಿ ಹೋರಾಟ ನಿರತರಿಗೆ ಶಾಸಕರು ಭರವಸೆ ನೀಡಿದರು.

ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ, ಪೊನ್ನಂಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಿದೇರಿರ ನವೀನ್, ಕೆ.ಬಾಡಗ ವಲಯ ಅಧ್ಯಕ್ಷ ಚಿಮಣ್ಣಮಾಡ ರವಿ, ಕಾಂಗ್ರೆಸ್ ಮುಖಂಡರು, ಅರಣ್ಯ ಇಲಾಖೆಯ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳು, ಹಾಡಿ ಮುಖಂಡರು ಮತ್ತಿತರ ಪ್ರಮುಖರು ಉಪಸ್ಥಿತರಿದ್ದರು.

ಇಂದು ತಲಕಾವೇರಿ ದೇವಾಲಯದಲ್ಲಿ ಸ್ವಚ್ಛತಾ ಕಾರ್ಯ

ಮಡಿಕೇರಿ ಮೇ 13– ತಲಕಾವೇರಿಯ ಶ್ರೀ ತಲಕಾವೇರಿ ದೇವಾಲಯದಲ್ಲಿ ಸ್ವಚ್ಛತಾ ಕಾರ್ಯದ ಪ್ರಯುಕ್ತ ಮೇ 14 ರ ಮಧ್ಯಾಹ್ನ 2 ಗಂಟೆಯ ನಂತರ ಶ್ರೀ ತಲಕಾವೇರಿ ದೇವಾಲಯಕ್ಕೆ ಪ್ರವೇಶ ಇರುವುದಿಲ್ಲ. ಆದ್ದರಿಂದ ಸಾರ್ವಜನಿಕ ಭಕ್ತಾದಿಗಳು ಸಹಕರಿಸುವಂತೆ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್ ಎನ್.ಜಿ ಅವರು ಕೋರಿದ್ದಾರೆ.

ಲೋಕಾಯುಕ್ತರಿಂದ ಇಂದು ದೂರು ಅರ್ಜಿ ಸ್ವೀಕಾರ

ಮಡಿಕೇರಿ ಮೇ 13–ಕರ್ನಾಟಕ ಲೋಕಾಯುಕ್ತ, ಮಡಿಕೇರಿಯ ಲೋಕಾಯುಕ್ತ ಅಧಿಕಾರಿಗಳು ಮೇ 14 ರ ಬೆಳಗ್ಗೆ 11 ಗಂಟೆಯಿಂದ 1 ಗಂಟೆಯವರೆಗೆ ವಿರಾಜಪೇಟೆ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯಿದೆಯಡಿ ದೂರು ಅರ್ಜಿ ವಿತರಿಸಲಿದ್ದಾರೆ. ಭರ್ತಿ ಮಾಡಿದ ಮತ್ತು ನೋಟರಿಯಿಂದ ಆಫಿಡವಿಟ್ ಮಾಡಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಸರ್ಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳಲ್ಲಿ ವಿಳಂಬ ಹಾಗೂ ಇನ್ನಿತರೆ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗದಿತ ಪತ್ರದಲ್ಲಿ ನೀಡಬಹುದಾಗಿದೆ.

ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ಕೋರಿದೆ. ಹೆಚ್ಚಿನ ವಿವರಗಳಿಗೆ ಮಡಿಕೇರಿ ಲೋಕಾಯುಕ್ತ ಪೊಲೀಸ್ ಕಚೇರಿ, ಗೌಳಿಬೀದಿ ಮಡಿಕೇರಿಯ ದೂ.ಸಂ.08272–295297 ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.


ದಸಂಸ ಮುಖಂಡ ಹೆಚ್.ಕೆ.ಸಣ್ಣಯ್ಯ ನಿಧನ



ವಿರಾಜಪೇಟೆ, ಮೇ 13– ದಲಿತ ಸಂಘರ್ಷ ಸಮಿತಿಯ ವಿರಾಜಪೇಟೆ ತಾಲೂಕಿನ ಹಿರಿಯ ಮುಖಂಡ ಹಾಗೂ ಹೋರಾಟಗಾರ ಹೆಚ್.ಕೆ.ಸಣ್ಣಯ್ಯ (84) ನಿಧನರಾಗಿದ್ದಾರೆ. ಬೆಂಗಳೂರಿನ ಪುತ್ರನ ಮನೆಯಲ್ಲಿದ್ದ ಸಣ್ಣಯ್ಯರವರನ್ನು ಕೆಲ ದಿನಗಳ ಹಿಂದೆ ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿದ್ದು, ನಿಧನರಾಗಿದ್ದಾರೆ. ಸೋಮವಾರ ರಾತ್ರಿ ವಿರಾಜಪೇಟೆಯ ಹೆಗ್ಗಳ ಗ್ರಾಮದಲ್ಲಿರುವ ನಿವಾಸದಲ್ಲಿ ಪಾರ್ಥಿವ ಶರೀರವನ್ನು ಸಾರ್ವಜನಿಕರ ಅಂತಿಮ ದರ್ಶನಕ್ಕೆ ಇಡಲಾಗಿತ್ತು. ಬಳಿಕ ಮಂಗಳವಾರ ಸ್ವಗ್ರಾಮ ಹಾಸನ ಜಿಲ್ಲಾ ಬೇಳವಾಡಿ ಗ್ರಾಮದಲ್ಲಿ ಅವರ ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಮೃತರು ಮೂವರು ಪುತ್ರರು ಮತ್ತು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ದಲಿತ ಸಂಘರ್ಷ ಸಮಿತಿಯ ಕೊಡಗು ಜಿಲ್ಲಾ ಮತ್ತು ವಿರಾಜಪೇಟೆ ತಾಲೂಕಿನ ಮುಖಂಡರು, ಸ್ಥಳೀಯ ರಾಜಕೀಯ ಮುಖಂಡರು ಅಂತಿಮ ದರ್ಶನದಲ್ಲಿ ಪಾಲ್ಗೊಂಡು ಸಂತಾಪ ಸೂಚಿಸಿದರು.

ಇಂದು ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



ಚಾಮರಾಜನಗರ, ಮೇ 13– ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರು ಮೇ 14ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಬೆಳಿಗ್ಗೆ 10.30 ಗಂಟೆಗೆ ಚಾಮರಾಜನಗರಕ್ಕೆ ಆಗಮಿಸಿ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಹವಾಮಾನ, ಕುಡಿಯುವ ನೀರು ನಿರ್ವಹಣೆ, ಜಾನುವಾರುಗಳ ಮೇವು ಹಾಗೂ ಅರಣ್ಯ ಇಲಾಖೆಗೆ ಸಂಬಂಧಿಸಿದ ಮತ್ತು ಇತರೆ ಇಲಾಖೆ ವಿಷಯಗಳ ಕುರಿತು ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಗೆ ಬಿಳಿಗಿರಿರಂಗನಬೆಟ್ಟಕ್ಕೆ ಆಗಮಿಸಿ ರೇಷ್ಮೆ ಇಲಾಖೆಯ ಕರ್ನಾಟಕ ರೇಷ್ಮೆ ಸಂಶೋಧನಾ ಸಂಸ್ಥೆ ಉಪಕೇಂದ್ರಕ್ಕೆ ಭೇಟಿ ನೀಡುವರು. ಸಂಜೆ 4 ಗಂಟೆಗೆ ಬೆಂಗಳೂರಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

ಉದ್ಘಾಟನೆಗೊಂಡರೂ ಕಾರ್ಯಾರಂಭಗೊಳ್ಳದ ನಮ್ಮ ಕ್ಲಿನಿಕ್



ಗುಂಡ್ಲುಪೇಟೆಯ ಅಶ್ವಿನಿ ಬಡಾವಣೆಯಲ್ಲಿ ಆರೋಗ್ಯ ಇಲಾಖೆ ಆರಂಭಿಸಿದ ನಮ್ಮ ಕ್ಲಿನಿಕ್ ಬಾಗಿಲು ಮುಚ್ಚಿದೆ.

ಗುಂಡ್ಲುಪೇಟೆ, ಮೇ 13– ಎರಡು ತಿಂಗಳ ಹಿಂದೆ ಉದ್ಘಾಟನೆಗೊಂಡ ನಮ್ಮ ಕ್ಲಿನಿಕ್ ಕಾರ್ಯಾರಂಭ ಮಾಡದೆ ಬಾಗಿಲು ಮುಚ್ಚಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಆರು ತಿಂಗಳ ಹಿಂದೆ ಒಕ್ಕಲಿಗೇರಿಯಲ್ಲಿ ನಮ್ಮ ಕ್ಲಿನಿಕ್ ತೆರೆದ ಕ್ಲಿನಿಕ್ ಕಾರ್ಯಾರಂಭ ಮಾಡಿದ್ದರೆ ಮಾ 23 ರಂದು ಪಟ್ಟಣದ ಅಶ್ವಿನಿ ಬಡಾವಣೆ (ದ.ರಾ.ಬೇಂದ್ರೆ ನಗರ)ದಲ್ಲಿ ನಮ್ಮ ಕ್ಲಿನಿಕ್ ಆರಂಭಿಸಿದೆ. ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಕ್ಲಿನಿಕ್ ಎರಡನ್ನು ಉದ್ಘಾಟಿಸಿದ್ದರು. ಆದರೆ ಉದ್ಘಾಟನೆಯಾಗಿ ಎರಡು ತಿಂಗಳಾದರೂ ಕ್ಲಿನಿಕ್‌ಗೆ ಅಗತ್ಯವಾದ ಸಿಬ್ಬಂದಿಯನ್ನು ನಿಯೋಜಿಸದ ಪರಿಣಾಮ ಅಂದಿನಿಂದಲೂ ಬಾಗಿಲು ಮುಚ್ಚಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಆರೋಗ್ಯ ಇಲಾಖೆ ಬಡಾವಣೆಯಲ್ಲಿ ನಮ್ಮ ಕ್ಲಿನಿಕ್ ಆರಂಭಿಸಿದ್ದರೂ ಸಿಬ್ಬಂದಿಗಳನ್ನು ನಿಯೋಜಿಸದ ಪರಿಣಾಮ ಸರ್ಕಾರದ ಉದ್ದೇಶ ವಿಫಲವಾಗುತ್ತಿದೆ. ಆರೋಗ್ಯಕ್ಕೆ ಸಂಬಂಧಿಸಿದ ಸಣ್ಣ ಪುಟ್ಟ ಸಮಸ್ಯೆಗಳಿಗೂ ದುಬಾರಿ ಆಟೋ ಬಾಡಿಗೆ ತೆತ್ತು ಆಸ್ಪತ್ರೆಗೆ ಹೋಗಬೇಕಾಗಿದೆ. ಪ್ರತಿ ತಿಂಗಳೂ ಕಟ್ಟಡಕ್ಕೆ ದುಬಾರಿ ಬಾಡಿಗೆ ನೀಡುವ ಮೂಲಕ ಬಡ ತೆರಿಗೆದಾರರ ಹಣ ನಿರುಪಯುಕ್ತವಾಗುತ್ತಿದೆ. ಆದ್ದರಿಂದ ಆರೋಗ್ಯ ಇಲಾಖೆ ಕೂಡಲೇ ಕ್ಲಿನಿಕ್‌ಗೆ ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಿ ಸಾರ್ವಜನಿಕರ ಬಳಕೆಗೆ ತರಬೇಕು ಎಂದು ಇಲ್ಲಿನ ವಾಸಿಗಳು ಒತ್ತಾಯಿಸಿದ್ದಾರೆ.

ತಾಲೂಕು ಆಸ್ಪತ್ರೆಯೂ ಆಗಿರುವ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಪ್ರತಿ ದಿನವೂ 800ಕ್ಕೂ ಹೆಚ್ಚಿನ ರೋಗಿಗಳು ಆಗಮಿಸುತ್ತಿದ್ದಾರೆ. ಕಾಡಂಚಿನ ಗ್ರಾಮಗಳಲ್ಲಿ ಒಂದಲ್ಲಾ ಒಂದುಕಡೆ ವನ್ಯಜೀವಿ ದಾಳಿ, ಹಾವು ಕಡಿತ ಪಟ್ಟಣದ ಮಾರ್ಗವಾಗಿ ಎರಡು ರಾಷ್ಟ್ರೀಯ ಹೆದ್ದಾರಿಗಳು ಹಾದುಹೋಗಿರುವುದರಿಂದ ಅಲ್ಲಲ್ಲಿ ಸಂಭವಿಸುವ ಅಪಘಾತಗಳಿಂದ ಆಸ್ಪತ್ರೆಯು ಸದಾ ಕಾಲ ಗಿಜಿಗುಡುತ್ತಿದ್ದು ವೈದ್ಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಸದಾಕಾಲ ಒತ್ತಡದಲ್ಲಿಯೇ ಕೆಲಸ ಮಾಡುವಂತಾಗಿದೆ. ಇದರಿಂದ ಸಣ್ಣ ಪುಟ್ಟ ಸಮಸ್ಯೆಗಳಿಗೆ ಆಸ್ಪತ್ರೆಗೆ ಹೋಗುವ ಪಟ್ಟಣದ ರೋಗಿಗಳು ಸಹಾ ವೈದ್ಯರಿಗಾಗಿ ಗಂಟೆಗಟ್ಟಲೆ ಕಾದು ಚಿಕಿತ್ಸೆ ಪಡೆದುಕೊಳ್ಳಬೇಕಾಗಿದೆ.

ಅಗತ್ಯ ಕ್ರಮ : ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಪ್ರತಿ ದಿನವೂ 800ಕ್ಕೂ ಹೆಚ್ಚಿನ ರೋಗಿಗಳು ಬರುತ್ತಿರುವುದರಿಂದ ಹೆಚ್ಚಿನ ಒತ್ತಡವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜನರ ಅನುಕೂಲಕ್ಕಾಗಿ ಪಟ್ಟಣದಲ್ಲಿ ಎರಡು ನಮ್ಮ ಕ್ಲಿನಿಕ್ ತೆರೆಯಲಾಗಿದೆ. ಇದರಲ್ಲಿ ಒಂದು ಮಾತ್ರ ಕಾರ್ಯನಿರ್ವಹಿಸುತ್ತಿದೆ. ಮತ್ತೊಂದಕ್ಕೆ ವೈದ್ಯರು ಹಾಗೂ ಸಿಬ್ಬಂದಿಯ ಕೊರತೆಯಿಂದ ಇನ್ನೂ ಕಾರ್ಯಾರಂಭ ಮಾಡಿಲ್ಲ. ಸದ್ಯದಲ್ಲಿಯೇ ಆರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಅಲೀಂಪಾಷ ಮೈಸೂರುಮಿತ್ರಗೆ ತಿಳಿಸಿದ್ದಾರೆ.

> **"ನಮ್ಮ ಕ್ಲಿನಿಕ್ ಯೋಜನೆಯು ಬಡವರಿಗೆ ವರದಾನವಾಗಿದೆ. ಸರ್ಕಾರ ಉತ್ತಮವಾದ ಆರೋಗ್ಯವನ್ನು ಪ್ರತಿಯೊಬ್ಬರಿಗೂ ಕೊಡಬೇಕೆಂಬ ದೃಷ್ಟಿಯಿಂದ ಈ ಯೋಜನೆಯನ್ನು ಅನುಷ್ಠಾನಕ್ಕೆ ತಂದಿದೆ. ಈ ನಿಟ್ಟಿನಲ್ಲಿ ಪಟ್ಟಣದ ವ್ಯಾಪ್ತಿಗೆ ಎರಡು ನಮ್ಮ ಕ್ಲಿನಿಕ್‌ಗಳನ್ನು ಮಾಡಲಾಗಿದೆ ತಕ್ಷಣವೇ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ ಕಾರ್ಯಾರಂಭ ಮಾಡಿಸಲು ಕ್ರಮ ಕೈಗೊಳ್ಳುತ್ತೇನೆ.**
> *-ಹೆಚ್.ಎಂ. ಗಣೇಶ್‌ಪ್ರಸಾದ್, ಶಾಸಕರು, ಗುಂಡ್ಲುಪೇಟೆ ಕ್ಷೇತ್ರ*

ಗಣ್ಯರಿಂದ ಚಾಮರಾಜು ಅಂತಿಮ ದರ್ಶನ


ಸಚಿವ ಎಚ್.ಸಿ.ಮಹದೇವಪ್ಪ ಮಂಗಳವಾರ ಶಾಸಕ ಸಿ.ಪುಟ್ಟರಂಗಶೆಟ್ಟಿ ಪುತ್ರ ಚಾಮರಾಜು ಅಂತಿಮ ದರ್ಶನ ಪಡೆದರು.

ಯಳಂದೂರು, ಮೇ 13– ಶಾಸಕ ಸಿ.ಪುಟ್ಟರಂಗಶೆಟ್ಟಿ ಹಿರಿಯ ಪುತ್ರ ಪಿ.ಚಾಮರಾಜು ಅಂತ್ಯಕ್ರಿಯೆ ಸ್ವಗ್ರಾಮವಾದ ಯಳಂದೂರು ತಾಲೂಕಿನ ಉಪ್ಪಿನಮೋಳೆ ಗ್ರಾಮದಲ್ಲಿ ಇಂದು ನೆರವೇರಿತು.

ಮೃತರ ಸ್ವಗ್ರಾಮವಾದ ಉಪ್ಪಿನಮೋಳೆಯ ತೋಟದಲ್ಲಿ ತಾತ ಚಾಮಶೆಟ್ಟಿ ಅಜ್ಜಿ ನಂಜಮ್ಮ ಸಮಾಧಿಯ ಸಮೀಪವೇ ಮೊಮ್ಮಗ ಚಾಮರಾಜು ಅಂತ್ಯಕ್ರಿಯೆ ಜರುಗಿತು. ಅಂತ್ಯಕ್ರಿಯೆಯಲ್ಲಿ ಅಪಾರ ಜನಸ್ತೋಮ ನೆರೆದಿತ್ತು.

ಗಣ್ಯರಿಂದ ಅಂತಿಮ ದರ್ಶನ: ಹೊಸದುರ್ಗ ಭಗೀರಥ ಪೀಠದ ಪುರುಷೋತ್ತಮಾನಂದ ಪುರಿಸ್ವಾಮೀಜಿ ಹಾಗೂ ಕ್ರಿಶ್ಚಿಯನ್ ಧರ್ಮಗುರುಗಳು, ಮುಸ್ಲಿಂ ಧರ್ಮದ ಗುರುಗಳು ಸಚಿವರಾದ ಕೆ.ವೆಂಕಟೇಶ್, ಹೆಚ್.ಸಿ.ಮಹದೇವಪ್ಪ, ಸಂಸದ ಸುನೀಲ್ ಬೋಸ್, ಶಾಸಕರಾದ ಯತೀಂದ್ರ ಸಿದ್ದರಾಮಯ್ಯ, ಎ.ಆರ್. ಕೃಷ್ಣಮೂರ್ತಿ, ಗಣೇಶ್ ಪ್ರಸಾದ್, ಎಂ.ಆರ್.ಮಂಜುನಾಥ್, ಡಾ.ತಿಮ್ಮಯ್ಯ, ದರ್ಶನ್ ಧ್ರುವನಾರಾಯಣ್, ಅನಿಲ್ ಚಿಕ್ಕಮಾದು, ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಮತ್ತಿತರರು ಉಪ್ಪಿನಮೋಳೆಯ ನಿವಾಸಕ್ಕೆ ಭೇಟಿ ನೀಡಿ ಅಂತಿಮ ದರ್ಶನ ಪಡೆದರು.

ಕಾಡಾಧ್ಯಕ್ಷ ಪಿ.ಮರಿಸ್ವಾಮಿ, ಮಾಜಿ ಸಚಿವರಾದ ಎಂ.ಶಿವಣ್ಣ, ಎನ್.ಮಹೇಶ್, ಮಾಜಿ ಶಾಸಕರಾದ ಜಿ.ಎನ್.ನಂಜುಂಡಸ್ವಾಮಿ, ಎಸ್.ಬಾಲರಾಜ್, ಸಿ.ಎನ್. ನಿರಂಜನ್‌ಕುಮಾರ್, ಆರ್.ನರೇಂದ್ರ, ಜಿ.ಪಂ.ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಶೈಲಜಾಮಲ್ಲೇಶ್, ಉಪಾಧ್ಯಕ್ಷರಾದ ಜೆ.ಯೋಗೇಶ್, ಕಿನಕಹಳ್ಳಿ ಸಿದ್ದರಾಜು, ಮುಖಂಡರಾದ ಕೆಲ್ಲಂಬಳ್ಳಿ ಸೋಮನಾಯಕ, ವೆಂಕಟರಮಣಸ್ವಾಮಿ (ಪಾಪು), ಮಂಗಲ ಶಿವಕುಮಾರ್, ಮಾಂಬಳ್ಳಿ ನಂಜುಂಡಸ್ವಾಮಿ, ದುಗ್ಗಹಟ್ಟಿ ಡಿ.ಪಿ.ಪ್ರಭು ಸ್ವಾಮಿ, ಮಧುವನಹಳ್ಳಿ ಶಿವಕುಮಾರ್, ಕಿನಕಹಳ್ಳಿ ರಾಚಯ್ಯ ಅಂತಿಮ ದರ್ಶನ ಪಡೆದರು.

ಸಂತಾಪ

ಚಾಮರಾಜನಗರ, ಮೇ 13 – ಕಾಂಗ್ರೆಸ್ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರ ಪುತ್ರ ಪಿ. ಚಾಮರಾಜ್ (42) ನಿಧನಕ್ಕೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸಂತಾಪ ಸೂಚಿಸಿದ್ದಾರೆ. ಸಹೃದಯಿ ಪುಟ್ಟರಂಗಶೆಟ್ಟಿ ಅವರ ಹಿರಿಯ ಮಗ ಚಾಮರಾಜ್ ನಿಧನದ ಸುದ್ದಿ ತಿಳಿದು ತೀವ್ರ ದುಃಖವಾಯಿತು. ಪುತ್ರ ಶೋಕವನ್ನು ತಾಳಿಕೊಳ್ಳುವ ಶಕ್ತಿಯನ್ನು ಭಗವಂತ ಪುಟ್ಟರಂಗಶೆಟ್ಟಿ ಅವರಿಗೆ ಕರುಣಿಸಲಿ. ಮೃತ ಚಾಮರಾಜ್ ಆತ್ಮಕ್ಕೆ ಚಿರಶಾಂತಿ ನೀಡಲಿ ಎಂದು ಪ್ರಾರ್ಥಿಸುವುದಾಗಿ ಅವರು ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

ರಾಮಸಮುದ್ರ: ಬಸವೇಶ್ವರರ ಭಾವಚಿತ್ರದ ಮೆರವಣಿಗೆ


ರಾಮಸಮುದ್ರ ಹಳ್ಳದಬೀದಿಯಲ್ಲಿ ಬಸವೇಶ್ವರರ ಭಾವಚಿತ್ರದ ಕಲಾತಂಡಗಳ ಮೆರವಣಿಗೆಗೆ ಸಿದ್ದಮಲ್ಲೇಶ್ವರವಿರಕ್ತಮಠದ ಚನ್ನಬಸವಸ್ವಾಮೀಜಿ ಚಾಲನೆ ನೀಡಿದರು.

ಚಾಮರಾಜನಗರ, ಮೇ 13–ನಗರಸಭೆ ವ್ಯಾಪ್ತಿಯ ರಾಮಸಮುದ್ರ ಹಳ್ಳದಬೀದಿಯಲ್ಲಿ ಕಾಯಕಯೋಗಿ, ಮಹಾನ್ ಮಾನವತಾವಾದಿ ಬಸವೇಶ್ವರರ ಜಯಂತಿಯನ್ನು ಆಚರಿಸಲಾಯಿತು. ಬಸವೇಶ್ವರರ ಭಾವಚಿತ್ರದ ಮೆರವಣಿಗೆಗೆ ಚಾಮರಾಜನಗರ ಸಿದ್ದಮಲ್ಲೇಶ್ವರ ವಿರಕ್ತಮಠದ ಚನ್ನಬಸವ ಸ್ವಾಮೀಜಿ ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ವೀರಗಾಸೆ, ಕರಡಿ ಮೇಳ ಸೇರಿದಂತೆ ಇತರೇ ಕಲಾತಂಡಗಳು ಭಾಗವಹಿಸಿದ್ದು, ಮೆರವಣಿಗೆಗೆ ಕಲಾತಂಡಗಳು ಮೆರುಗು ನೀಡಿದವು. ಬಡಾವಣೆಯ ಪ್ರಮುಖಬೀದಿಗಳಲ್ಲಿ ಬಸವೇಶ್ವರರ ಭಾವಚಿತ್ರದ ಮೆರವಣಿಗೆ ವಿಜೃಂಭಣೆಯಿಂದ ಸಾಗಿತು. ಇದೇ ವೇಳೆ ಅಖಿಲ ಭಾರತ ವೀರಶೈವಮಹಾಸಭೆ ಜಿಲ್ಲಾಧ್ಯಕ್ಷ ಮೂಡ್ಲುಪುರ ನಂದೀಶ್ ಅವರನ್ನು ಸನ್ಮಾನಿಸಲಾಯಿತು. ಇದೇವೇಳೆ ಸಾರ್ವಜನಿಕರಿಗೆ ಪ್ರಸಾದ ವಿನಿಯೋಗ ನಡೆಯಿತು. ರಾಮಸಮುದ್ರ ಗುರು ಕಂಬಳೀಶ್ವರ ಭಿಕ್ಷದ ಮಠದ ಮಹದೇವ ಸ್ವಾಮೀಜಿ ಸೇರಿದಂತೆ ಹಳ್ಳದಬೀದಿ ನಿವಾಸಿಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಜೆಎಸ್‌ಎಸ್ ಪಬ್ಲಿಕ್ ಶಾಲೆಗೆ ಶೇ. 100 ರಷ್ಟು ಫಲಿತಾಂಶ


ಹರ್ಷಿತಾ ಎನ್.


ಅಭಿಷೇಕ್ ಎನ್.


ಅನರ್ಘ್ಯ ಎಂ


ತನುಶ್ರೀ


ಸೃಜನಾ ಎನ್

ಚಾಮರಾಜನಗರ, ಮೇ 13– ಶೈಕ್ಷಣಿಕ ಸಾಲಿನ ಸಿಬಿಎಸ್‌ಇ 10ನೇ ತರಗತಿ ಫಲಿತಾಂಶ ಪ್ರಕಟಗೊಂಡಿದ್ದು, ಪಟ್ಟಣದ ಜೆಎಸ್‌ಎಸ್ ಪಬ್ಲಿಕ್ ಶಾಲೆಯು ಸತತವಾಗಿ 6ನೇ ಬಾರಿಗೆ ಶೇ. 100 ರಷ್ಟು ಫಲಿತಾಂಶವನ್ನು ಪಡೆದುಕೊಂಡಿದೆ.

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಪರೀಕ್ಷೆ ಬರೆದಿದ್ದ ಎಲ್ಲಾ 22 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.100 ರಷ್ಟು ಫಲಿತಾಂಶವನ್ನು ತಂದುಕೊಟ್ಟಿವೆ. ಶಾಲೆಯ ವಿದ್ಯಾರ್ಥಿನಿ ಹರ್ಷಿತಾ ಎನ್. ಶೇ.97.4 ಅಂಕಗಳಿಸಿ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಕ್ರಮವಾಗಿ ಅಭಿಷೇಕ್ ಎನ್. (ಶೇ.97.2) ಅನರ್ಘ್ಯ ಎಂ (ಶೇ.95.2) ತನುಶ್ರೀ ಬಸವರಾಜು (ಶೇ.95) ಮತ್ತು ಸೃಜನಾ ಎನ್ (ಶೇ.93.2) ಅಂಕಗಳನ್ನು ಪಡೆದು ಮೊದಲ 5 ಸ್ಥಾನಗಳನ್ನು ಗಳಿಸಿದ್ದಾರೆ. ಶಾಲೆಯ ಪ್ರಾಂಶುಪಾಲ ಹೆಚ್.ಎಂ. ಉಮೇಶ್ ವಿದ್ಯಾರ್ಥಿಗಳ ಸಾಧನೆಗೆ ಸಂತಸ ವ್ಯಕ್ತಪಡಿಸಿದ್ದಾರೆ.

ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಪ್ರಥಮ ಡಿಪ್ಲೋಮಾಗೆ ಅರ್ಜಿ ಆಹ್ವಾನ

ಚಾಮರಾಜನಗರ, ಮೇ 13– ಚಾಮರಾಜನಗರ ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025–26ನೇ ಸಾಲಿಗೆ ವಿವಿಧ ಎಂಜಿನಿಯರಿಂಗ್ ಕೋರ್ಸ್‌ಗಳ ಪ್ರಥಮ ಡಿಪ್ಲೋಮೊ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಮೆರಿಟ್ ಆಧಾರಿತ ಪ್ರವೇಶಾತಿ ನಡೆಯಲಿದ್ದು, ವ್ಯಾಸಂಗ ಮಾಡಲು ಇಚ್ಛಿಸುವ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಖುದ್ದಾಗಿ ಮೇ 15ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಾಲೇಜು ಕಚೇರಿ ಸಂಪರ್ಕಿಸಬಹುದು ಹಾಗೂ ಪ್ರಾಂಶುಪಾಲ ಹೆಚ್.ಜಿ. ಲೋಕೇಶ್ ಮೊ.ಸಂ 9880451356 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಜನೌಷಧ್ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನ

ಚಾಮರಾಜನಗರ, ಮೇ 13 – ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಜಿಲ್ಲೆ ಹಾಗೂ ತಾಲೂಕುಗಳಲ್ಲಿ ಜನೌಷಧ್ ಕೇಂದ್ರಗಳ ಸ್ಥಾಪನೆ ಮಾಡಲಿದ್ದು, ಸದರಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ಪ್ರಮಾಣಪತ್ರದ ಪ್ರತಿ ಸಲ್ಲಿಸಲು ಸಹಕಾರ ಸಂಘ ತಿಳಿಸಿದೆ.

ಡಿ ಫಾರ್ಮ ಅಥವಾ ಬಿ ಫಾರ್ಮ ಪದವಿಧರರು ಪ್ರಮಾಣಪತ್ರದ ಸ್ವವಿವರಗಳೊಂದಿಗೆ ಜಿಲ್ಲಾಡಳಿತ ಭವನದ 3ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 330ರ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಮೇ 31 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಚಾಮರಾಜನಗರ ಸಹಕಾರ ಸಂಘಗಳ ಉಪ ನಿಬಂಧಕರು ಜಿ.ಸಿ ಜ್ಯೋತಿ ಅರಸ್ (ಮೊ.ಸಂ 9008139232) ಉಪ ವಿಭಾಗ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪಿ. ಶೋಭಾ (ಮೊ.ಸಂ 9448750427), ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯ ಮಾರಾಟಾಧಿಕಾರಿ ಸುರೇಶ್ (ಮೊಸಂ 9845649541), ಗುಂಡ್ಲುಪೇಟೆ ತಾಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಎಂ.ಪಿ ಪದ್ಮನಾಭ (ಮೊ.ಸಂ 8073184202), ಕೊಳ್ಳೇಗಾಲ ತಾಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಮಹಮದ್ ನದೀಂ (ಮೊ.ಸಂ 9986986892), ಯಳಂದೂರು ತಾಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಸುಭಾಷಿಣಿ (ಮೊ.ಸಂ 9900685310) ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಟನ್ ಕಬ್ಬಿಗೆ 4,500 ನೀಡುವಂತೆ ಆಗ್ರಹ



ಮೈಸೂರು, ಮೇ 13– ಟನ್ ಕಬ್ಬಿಗೆ 4,500 ರೂಪಾಯಿ ನೀಡಬೇಕೆಂದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದವರು ಸೋಮವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕಳೆದ ಬಾರಿ ಟನ್ ಕಬ್ಬಿಗೆ 3,200 ರಿಂದ 3,350 ರೂಪಾಯಿಗೆ ಏರಿಕೆ ಮಾಡಲಾಯಿತು. ಕೇವಲ 150 ರೂ. ಹೆಚ್ಚಳ ಮಾಡಲಾಗಿದ್ದು, ಇದು ರೈತರಿಗೆ ನ್ಯಾಯಸಮ್ಮತವಾಗಿಲ್ಲ. ಈ ಹಿನ್ನೆಲೆಯಲ್ಲಿ ಅಕ್ಟೋಬರ್ ತಿಂಗಳಿನಿಂದ ಆರಂಭವಾಗುವ ಕಬ್ಬು ಅರೆಯುವ ಸಮಯದಲ್ಲಿ ಟನ್ ಕಬ್ಬಿಗೆ 4,500 ರೂಪಾಯಿ ನೀಡಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ಕಬ್ಬು ಬೆಳೆಯಲು ಕೂಲಿ ಕಾರ್ಮಿಕರ ವೆಚ್ಚ, ರಸಗೊಬ್ಬರ ಸೇರಿದಂತೆ ಇತರೆ ಖರ್ಚು ಹೆಚ್ಚಳವಾಗಿರುವ ಹಿನ್ನೆಲೆಯಲ್ಲಿ ಟನ್ ಕಬ್ಬಿನ ಬೆಲೆ ಕೂಡ ನ್ಯಾಯ ಸಮ್ಮತವಾಗಿ ಏರಿಕೆ ಮಾಡಬೇಕೆಂದು ಒತ್ತಾಯಿಸಿದರು. ರಾಜ್ಯದಿಂದ ಆಯ್ಕೆಯಾಗಿರುವ ಲೋಕಸಭಾ ಸದಸ್ಯರು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಿ ಎಫ್‌ಆರ್‌ಪಿ ದರವನ್ನು ಪುನರ್ ಪರಿಶೀಲನೆ ಮಾಡಿಸಬೇಕೆಂದು ಆಗ್ರಹಿಸಿದರು.

ಕಬ್ಬು ಬೆಳೆಗಾರರ 950 ಕೋಟಿ ರೂ. ಬಾಕಿಯನ್ನು ಇನ್ನು ನೀಡದೆ ರೈತರನ್ನು ಆರ್ಥಿಕ ಸಂಕಷ್ಟಕ್ಕೆ ದೂಡಲಾಗಿದೆ. ಈ ಹಣವನ್ನು ಕೂಡಲೇ ರೈತರ ಖಾತೆಗೆ ಜಮಾ ಮಾಡಿಸಬೇಕು ಎಂದು ಕೋರಿದರು. ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್ ಅವರು ರೈತರಿಂದ ಮನವಿ ಸ್ವೀಕರಿಸಿದರು.

ಈ ವೇಳೆ ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆ ಹುಂಡಿ ಭಾಗ್ಯರಾಜ್, ಖಜಾಂಚಿ ಕೆರೆಹುಂಡಿ ರಾಜಣ್ಣ ಜಿಲ್ಲಾಧ್ಯಕ್ಷ ವಳಗೆರೆ ಗಣೇಶ್, ಹನುಮಯ್ಯ, ಚಾಮರಾಜನಗರ ಜಿಲ್ಲಾಧ್ಯಕ್ಷ ನಾಗರಾಜ್, ಮೈಸೂರು ಗೌರವಾಧ್ಯಕ್ಷ ಶಿವರುದ್ರಪ್ಪ, ನಗಾರಾಧ್ಯಕ್ಷ ದೇವೇಂದ್ರ ಕುಮಾರ್, ಮದ್ದಳ್ಳಿ ಸುರಪತಿ, ನಾಗಣ್ಣ, ಗೌಡಿಕೆ ಶಿವಣ್ಣ, ಮಧುಸೂದನ್, ಸೋಮಪ್ಪ ಸೇರಿದಂತೆ ಹಲವರು ಈ ವೇಳೆ ಹಾಜರಿದ್ದರು.

ಶಾಸಕ ಟಿ.ಎಸ್.ಶ್ರೀವತ್ಸಗೆ ಅಭಿನಂದನೆ...



ಕೃಷ್ಣರಾಜ ವಿಧಾನಸಭಾ ಕ್ಷೇತ್ರದಲ್ಲಿ 2 ವರ್ಷ ಉತ್ತಮವಾಗಿ ಕಾರ್ಯನಿರ್ವಹಿಸಿದ ಶಾಸಕ ಟಿ.ಎಸ್.ಶ್ರೀವತ್ಸ ಅವರನ್ನು ವಕೀಲ, ನೈರುತ್ಯ ರೈಲ್ವೆ ಸದಸ್ಯ ಶಿವರಾಜ್ ಆತ್ಮೀಯವಾಗಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ನಗರಪಾಲಿಕೆ ಮಾಜಿ ಸದಸ್ಯ ಜಯರಾಮ್, ಆದಿತ್ಯ ಕಿಶೋರ್, ಪದ್ಮನಾಥ್, ಶಿವಕುಮಾರ್ ಉಪಸ್ಥಿತರಿದ್ದರು.

ಅತ್ಯುತ್ತಮ ಶುಶ್ರೂಷಕ ಸೇವಾ ಪ್ರಶಸ್ತಿ ಪ್ರದಾನ...



ಆಧುನಿಕ ನರ್ಸಿಂಗ್‌ನ ಪ್ರವರ್ತಕರಾದ ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮ ವಾರ್ಷಿಕೋತ್ಸವದ ಪ್ರಯುಕ್ತ ಅಂತರರಾಷ್ಟ್ರೀಯ ದಾದಿಯರ ದಿನ ಆಚರಿಸಲಾಯಿತು. ಈ ವೇಳೆ ಬೆಂಗಳೂರಿನ ಆರ್‌ವಿ ಕಾಲೇಜ್ ಆಫ್ ನರ್ಸಿಂಗ್ ವತಿಯಿಂದ ಕಣ್ಣೂರು ವಿ.ಗೋವಿಂದಾಚಾರಿ ಅವರಿಗೆ ಅತ್ಯುತ್ತಮ ಶುಶ್ರೂಷಕ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇವರು ಬಾಬಾ ಅಣುಶಕ್ತಿ ಸಂಶೋಧನಾ ಕೇಂದ್ರದ ಮೈಸೂರಿನ ಘಟಕದಲ್ಲಿ 30 ವರ್ಷ ಶುಶ್ರೂಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ.

ಪರಿಶಿಷ್ಟ ಜಾತಿ ಗಣತಿಯಲ್ಲಿ ಬಹಳಷ್ಟು ಗೊಂದಲ

ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಭಾಸ್ಕರ್ ಅಸಮಾಧಾನ

ಮೈಸೂರು, ಮೇ 13(ಬಿಎಲ್‌ಯು)– ರಾಜ್ಯಾದ್ಯಂತ ನಡೆಯುತ್ತಿರುವ ಪರಿಶಿಷ್ಟ ಜಾತಿ ಗಣತಿಯಲ್ಲಿ ಬಹಳಷ್ಟು ಗೊಂದಲಗಳು ಎದುರಾಗಿವೆ ಎಂದು ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದಡಿ ರಾಜ್ಯಾದ್ಯಂತ ಪರಿಶಿಷ್ಟ ಜಾತಿಯ ಗಣತಿ ಕಾರ್ಯ ಆರಂಭಿಸಿದೆ.

ಆದರೆ ಗಣತಿ ಕಾರ್ಯದಲ್ಲಿ ಹಲವು ಸಮಸ್ಯೆ ಎದುರಾಗಿದೆ. ಗ್ರಾಮೀಣ ಭಾಗದಲ್ಲಿ ನೆಟ್‌ವರ್ಕ್ ಸಮಸ್ಯೆ ಇದೆ, ಆ್ಯಪ್‌ನಲ್ಲಿ ಮಾಹಿತಿ ನಮೂದಿಸಿ ಓಟಿಪಿ ಪಡೆಯಲು ಸರ್ವರ್ ಸಮಸ್ಯೆ ಎದುರಾಗಿದೆ. ಜೀವಂತ ಇರುವವರನ್ನು ಅಪ್‌ಡೇಟ್ ಮಾಡಿದರೆ ಮರಣ ಹೊಂದಿದವರ ಹೆಸರು ತೋರಿಸುತ್ತದೆ. ರೇಷನ್ ಕಾರ್ಡ್ ಸಂಖ್ಯೆ ನಮೂದಿಸಿದರೆ ಮಾಹಿತಿ ಲಭ್ಯವಾಗುತ್ತಿಲ್ಲ, ಆಧಾರ್ ಕಾರ್ಡ್ ಸಂಖ್ಯೆ ನಮೂದಿಸಿದರೆ ತಪ್ಪು ವಿವರ ತೋರಿಸುತ್ತಿದೆ ಎಂದು ತಿಳಿಸಿದ್ದಾರೆ. ಗಣತಿದಾರರಿಗೆ ನಿಖರವಾದ ಮಾಹಿತಿ ಇಲ್ಲದಾಗಿದ್ದು, ಆ್ಯಪ್ ಅಪ್‌ಡೇಟ್ ಮಾಡಲು ಅವರಿಗೆ ಬರುತ್ತಿಲ್ಲ. ಕರ್ನಾಟಕದ 6.5 ಕೋಟಿ ಜನರನ್ನು ಗಣತಿ ಮಾಡಲು ಒಂದು ತಿಂಗಳ ಕಾಲಾವಕಾಶ ಬಹಳ ಕಡಿಮೆಯಾಗಿದೆ. ಈ ಎಲ್ಲಾ ಸಮಸ್ಯೆಗಳನ್ನು ಕೂಡಲೇ ಪರಿಹಾರ ಮಾಡಿ ಗಣತಿ ಕಾರ್ಯ ಮಾಡಬೇಕೆಂದು ಭಾಸ್ಕರ್ ಒತ್ತಾಯಿಸಿದ್ದಾರೆ.

ಜೀರ್ಣೋದ್ಧಾರದ ಸಂಪ್ರೋಕ್ಷಣ ಕಾರ್ಯಕ್ರಮ....



ಮೈಸೂರಿನ 23ನೇ ವಾರ್ಡಿನಲ್ಲಿರುವ ಪುಸ್ತಕಂ ಶ್ರೀ ಸಂತಾನ ಗೋಪಾಲ ಕೃಷ್ಣಸ್ವಾಮಿ ದೇವಸ್ಥಾನದ ವಿಮಾನ ಶಿಬಿರ ಜೀರ್ಣೋದ್ಧಾರದ ಸಂಪ್ರೋಕ್ಷಣದ ಕಾರ್ಯಕ್ರಮದಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ, ಉದ್ಯಮಿ ಗಿರೀಶ್‌ಗೌಡ ಪಾಲ್ಗೊಂಡಿದ್ದರು.

ಎಸ್‌ಎಸ್‌ಎಲ್‌ಸಿ, ಪಿಯು ಪ್ರತಿಭಾನ್ವಿತ ನಾಯಕ ಸಮುದಾಯದ ಮಕ್ಕಳಿಗೆ ಪುರಸ್ಕಾರ

ಮೈಸೂರು,ಮೇ 13(ಎಂಟಿವೈ)– ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ನಾಯಕ ಸಮುದಾಯ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲು ಉದ್ದೇಶಿಸಲಾಗಿದ್ದು, ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಮೈಸೂರು ತಾಲೂಕು ನಾಯಕರ ಸಂಘದ ಅಧ್ಯಕ್ಷ ಉದ್ಬೂರು ಮಹಾದೇವಸ್ವಾಮಿ ತಿಳಿಸಿದ್ದಾರೆ.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ತಾಲೂಕು ನಾಯಕರ ಸಂಘವು ನಗರ ಮತ್ತು ತಾಲೂಕು ವ್ಯಾಪ್ತಿಯಲ್ಲಿ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಶೇ.80ಕ್ಕೂ ಹೆಚ್ಚು ಅಂಕ ಪಡೆದ ಸಮುದಾಯದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಿದೆ. ಅರ್ಹ ವಿದ್ಯಾರ್ಥಿಗಳು ಅಂಕಪಟ್ಟಿ, ಜಾತಿ ದೃಢೀಕರಣ ಪತ್ರ, ಆಧಾರ್ ಕಾರ್ಡ್ ಹಾಗೂ ಭಾವಚಿತ್ರವನ್ನು ಮೇ 21ರೊಳಗೆ ಮೊ.ಸಂ. 98866 66787, 99018 02106 ಸಂಪರ್ಕಿಸಿ, ಕಳುಹಿಸಿಕೊಡಬೇಕು. ನಗದು ಪುರಸ್ಕಾರವಿದ್ದು, ಕಾರ್ಯಕ್ರಮದ ದಿನಾಂಕವನ್ನು ಶೀಘ್ರದಲ್ಲಿಯೇ ತಿಳಿಸಲಾಗುವುದು ಎಂದರು.

ಗೋಷ್ಠಿಯಲ್ಲಿ ಗೌರವಾಧ್ಯಕ್ಷ ಎಚ್.ಕೃಷ್ಣ, ಕಾರ್ಯಾಧ್ಯಕ್ಷ ಶಂಭುಲಿಂಗ ನಾಯಕ್, ಉಪಾಧ್ಯಕ್ಷ ವೆಂಕಟಯ್ಯ, ಪ್ರಧಾನ ಕಾರ್ಯದರ್ಶಿ ಕುಮಾರಸ್ವಾಮಿ, ಖಜಾಂಚಿ ಮರಿಸ್ವಾಮಿನಾಯಕ್, ವೆಂಕಟೇಶ್ ಇದ್ದರು.

ಪರಿಶಿಷ್ಟ ಜಾತಿಯ ಗಣತಿಯಲ್ಲಿ ಹತ್ತು ಹಲವು ಅವಾಂತರ

ಒಂದೆಡೆ ಜನರ ಅಸಹಕಾರ; ಇತ್ತ ಆ್ಯಪ್ ಸರ್ವರ್, ಮೊಬೈಲ್ ನೆಟ್‌ವರ್ಕ್ ಸಮಸ್ಯೆ





ಮೈಸೂರು, ಮೇ 13(ಬಿಎಲ್‌ಯು)– ಪರಿಶಿಷ್ಟ ಜಾತಿ ಗಣತಿಯಲ್ಲಿ ಮಾಹಿತಿ ಸಂಗ್ರಹಿಸುವ ಆ್ಯಪ್‌ನ ಸರ್ವರ್ ಸಮಸ್ಯೆ, ಮೊಬೈಲ್ ನೆಟ್‌ವರ್ಕ್ ಸಮಸ್ಯೆ ಹಾಗೂ ಜನರ ಅಸಹಕಾರದಿಂದ ಗಣತಿ ಕಾರ್ಯ ನಿಧಾನಗತಿಯಲ್ಲಿ ಸಾಗುತ್ತಿದೆ.

ಪರಿಶಿಷ್ಟ ಜಾತಿ ಗಣತಿ ಕಾರ್ಯ ಈಗಾಗಲೇ ಆರಂಭವಾಗಿ ಕೆಲವು ಕಡೆ ಭರದಿಂದ ಸಾಗುತ್ತಿದ್ದರೆ, ಮತ್ತೆ ಕೆಲವು ಸ್ಥಳದಲ್ಲಿ ನಿಧಾನಗತಿಯಲ್ಲಿ ತೆವಳುತ್ತಿದೆ.

ಪರಿಶಿಷ್ಟ ಜಾತಿ ಕುಟುಂಬದ ಮಾಹಿತಿ ಸಂಗ್ರಹಿಸಲು 42 ಪ್ರಶ್ನಾವಳಿಯನ್ನು ಕೇಳಬೇಕಿದೆ. ಪ್ರತಿಯೊಂದಕ್ಕೂ ಕಡ್ಡಾಯವಾಗಿ ಉತ್ತರ ಕೇಳಿ ನಮೂದಿಸಬೇಕಿದೆ. ಜೊತೆಗೆ ಭಾವಚಿತ್ರವನ್ನು ಕೂಡ ಆ್ಯಪ್‌ನಲ್ಲಿ ಡೌನ್‌ಲೋಡ್ ಮಾಡಬೇಕಿದೆ. ಒಂದು ಪ್ರಶ್ನೆಗೆ ಉತ್ತರ ಇಲ್ಲವೆಂದರೂ ಅಪ್‌ಲೋಡ್ ಮಾಡಲು ಸಾಧ್ಯವಿಲ್ಲ. ಇದರಿಂದ ಒಂದು ಮನೆಯಲ್ಲಿ ಮಾಹಿತಿ ಪಡೆಯಲು ಕನಿಷ್ಠ 25ರಿಂದ 30 ನಿಮಿಷ ಸಮಯಾವಕಾಶ ಬೇಕಾಗುತ್ತದೆ. ಇಷ್ಟು ಸಮಯ ನಿಂತು ಗಣತಿದಾರರಿಗೆ ಮಾಹಿತಿ ನೀಡಲು ಕುಟುಂಬಸ್ಥರು ಅಸಹಕಾರ ನೀಡುತ್ತಿದ್ದಾರೆ.

ಆ ಕುಟುಂಬದವರ ಮಾಹಿತಿ ಪಡೆಯದೆ ಮತ್ತೊಂದು ಮನೆಗೆ ಹೋಗುವಂತಿಲ್ಲ. ಇದರಿಂದ ಗಣತಿದಾರರು ಗೋಗರೆದು ಮಾಹಿತಿ ಪಡೆಯುವ ಪರಿಸ್ಥಿತಿ ಎದುರಾಗಿದೆ. ಹಾಗೂ ಹೀಗೂ ಮಾಡಿ ಎಲ್ಲಾ ಮಾಹಿತಿ ಪಡೆದು ಆ್ಯಪ್‌ನಲ್ಲಿ ಮಾಹಿತಿ ಸಂಗ್ರಹಿಸಿ ಅಪ್‌ಲೋಡ್ ಮಾಡಿದರೆ ನೆಟ್ ವರ್ಕ್ ಸಿಗುವುದಿಲ್ಲ. ಒಂದು ವೇಳೆ ನೆಟ್‌ವರ್ಕ್ ಸಿಕ್ಕಿದರೆ ಆ್ಯಪ್‌ನ ಕಂಟ್ರೋಲ್‌ರೂಂನಲ್ಲಿ ಸರ್ವರ್ ಸಮಸ್ಯೆ ಎದುರಾಗುತ್ತದೆ. ಈ ಎಲ್ಲಾ ಕಾರಣದಿಂದ ಪರಿಶಿಷ್ಟ ಗಣತಿ ಕಾರ್ಯ ತೀರಾ ವಿಳಂಬವಾಗಿ ಸಾಗುತ್ತಿದೆ.

ಇದರಿಂದ ದಿನಕ್ಕೆ ಕೇವಲ 10 ಮನೆಯನ್ನು ಗಣತಿ ಮಾಡಲು ಸಾಧ್ಯವಾಗದ ಪರಿಸ್ಥಿತಿ ಗಣತಿದಾರರಿಗೆ ಎದುರಾಗಿದೆ.

ಮೈಸೂರಿನ ಯಾದವಗಿರಿಯಲ್ಲಿ ಗಣತಿ ಮಾಡಲು ಹೋದ ಗಣತಿದಾರರು ಮನೆ ಒಳಗೆ ಹೋಗಿ ಮಾಹಿತಿ ಪಡೆಯಲು ಮುಂದಾಗಿದ್ದಾರೆ. ಗುರುತು ಪರಿಚಯ ಇಲ್ಲದ ನಿಮ್ಮನ್ನು ಮನೆಯೊಳಗೆ ಸೇರಿಸುವುದಿಲ್ಲ ಎಂದು ಮನೆಯಲ್ಲಿದ್ದ ಒಂಟಿ ಮಹಿಳೆಯೊಬ್ಬರು ಸ್ಪಷ್ಟಪಡಿಸಿದ್ದಾರೆ.

ನಾವು ಸರ್ಕಾರದಿಂದ ನೇಮಕವಾದ ಗಣತಿದಾರರು ಎಂದು ಗುರುತಿನ ಚೀಟಿ ತೋರಿಸಿದ್ದಾರೆ. ಆದರೆ ಗುರುತಿನ ಚೀಟಿಯಲ್ಲಿ ಸರ್ಕಾರ ನೀಡಿದ್ದ ಹೆಸರು ಅಳಿಸಿ ಬೇರೆ ಹೆಸರು ಬರೆಯಲಾಗಿದೆ. ಇದರಿಂದ ಮತ್ತಷ್ಟು ಸಂಶಯದಿಂದ ನೋಡಿದ ಮಹಿಳೆ ಗಣತಿದಾರರಿಗೆ ಯಾವುದೇ ಮಾಹಿತಿ ನೀಡದೆ ಮನೆಯಿಂದ ವಾಪಸ್ಸು ಕಳುಹಿಸಿದ್ದಾರೆ. ಈ ಬಗ್ಗೆ ಸಮಾಜ ಕಲ್ಯಾಣ ಇಲಾಖೆ ಜಿಲ್ಲಾ ವ್ಯವಸ್ಥಾಪಕ ರಂಗೇಗೌಡ ಅವರನ್ನು ಸಂಪರ್ಕಿಸಿದಾಗ, ಗುರುತಿನ ಚೀಟಿಯಲ್ಲಿನ ಹೆಸರು ಅಳಿಸಿ ಬೇರೆ ಹೆಸರು ಬರೆದುಕೊಳ್ಳಲು ಅವಕಾಶ ಇಲ್ಲ. ಪ್ರಾಯಶಃ ಗೈರು ಹಾಜರಾದವರ ಹೆಸರು ಅಳಿಸಿ ಗಣತಿದಾರರು ತಮ್ಮ ಹೆಸರು ಬರೆದುಕೊಂಡಿರಬೇಕು. ಈ ಬಗ್ಗೆ ಪರಿಶೀಲಿಸುತ್ತೇನೆ ಎಂದರು.

ಕೆಲವು ಕಡೆ ಆ್ಯಪ್‌ನಲ್ಲಿ ಸರ್ವರ್ ಸಮಸ್ಯೆ ಎದುರಾದರೆ, ಕೆಲವು ಕಡೆ ಮೊಬೈಲ್ ನೆಟ್‌ವರ್ಕ್ ಸಮಸ್ಯೆ ಎದುರಾಗಿದೆ. ಈಗ ಈ ಸಮಸ್ಯೆಯನ್ನು ಪರಿಹರಿಸಲಾಗಿದೆ ಎಂದು ರಂಗೇಗೌಡರು ತಿಳಿಸಿದರು. ಒಟ್ಟಾರೆ ನಿಧಾನಗತಿಯಲ್ಲಿ ಸಾಗುತ್ತಿರುವ ಪರಿಶಿಷ್ಟ ಜಾತಿಯ ಗಣತಿ ಕಾರ್ಯದ ಈಗಿನ ವಿಳಂಬ ಗಮನಿಸಿದರೆ ಮೇ 23 ರೊಳಗೆ ಗಣತಿ ಮುಗಿಸುವುದು ಅನುಮಾನವಾಗಿದೆ.

ಭಾರತ–ಪಾಕ್ ಯುದ್ಧದ ವಿಚಾರದಲ್ಲೂ ಕಾಂಗ್ರೆಸ್ ರಾಜಕೀಯ!

ಸೇನೆಗೆ ಯುದ್ಧದ ಯಶಸ್ಸು ದೊರಕಬೇಕು, ರಾಜಕೀಯ ಬೇಡ: ಶಾಸಕ ಟಿ.ಎಸ್.ಶ್ರೀವತ್ಸ



ಮೈಸೂರು, ಮೇ13(ಜಿಎ)–ಭಾರತ–ಪಾಕಿಸ್ತಾನ ನಡುವಿನ ಕದನ ವಿಚಾರವನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳಬಾರದು. ನಾವು ಕೂಡ ಯುದ್ಧದ ಯಶಸ್ಸು ಸೇನೆಗೆ ಸಲ್ಲಬೇಕು ಎಂದು ಹೇಳಿದ್ದೇವೆ. ಆದರೆ ಕಾಂಗ್ರೆಸ್ ನಾಯಕರು ರಾಜಕೀಯ ಮಾಡುತ್ತಿದ್ದಾರೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಕಿಡಿಕಾರಿದರು.

ಭಾರತ–ಪಾಕಿಸ್ತಾನದ ನಡುವಿನ ಕದನದಲ್ಲಿ ಕೈ–ಕಮಲ ನಡುವೆ ಕ್ರೆಡಿಟ್ ವಾರ್ ವಿಚಾರ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಕ್ರೆಡಿಟ್ ಯಾರಿಗೆ ಸಲ್ಲಬೇಕು?. ಅದರಲ್ಲಿ ಸರ್ಕಾರದ ಪಾತ್ರವೇನಿದೆ? ಎಂದು ನಾವು ಸಿಎಂ ಅವರನ್ನು ಕೇಳಬೇಕಾಗುತ್ತದೆ. ಗ್ಯಾರಂಟಿ ಯೋಜನೆಯ ಶ್ರೇಯಸ್ಸು ಅಧಿಕಾರಿಗಳಿಗೆ ಸಲ್ಲಬೇಕು. ಭಾರತ–ಪಾಕಿಸ್ತಾನ ನಡುವಿನ ಕದನ ವಿಚಾರವನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳಬಾರದು. ನಾವು ಕೂಡ ಯುದ್ಧದ ಯಶಸ್ಸು ಸೇನೆಗೆ ಸಲ್ಲಬೇಕು ಎಂದು ಹೇಳಿದ್ದೇವೆ. ಆದರೆ ಕಾಂಗ್ರೆಸ್ ನಾಯಕರು ರಾಜಕೀಯ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಭಾರತ–ಪಾಕಿಸ್ತಾನದ ನಡುವೆ ಕದನ ವಿರಾಮ ಘೋಷಣೆ ಕುರಿತು ಮಾತನಾಡಿ, ಕದನ ವಿರಾಮ ಘೋಷಣೆ ಆಗಿದೆ. ಮುಂದೇನಾದರೂ ಉಲ್ಲಂಘನೆ ಆದರೆ ಸುಮ್ಮನೆ ಬಿಡೋದಿಲ್ಲ ಎಂಬ ಎಚ್ಚರಿಕೆಯ ಸ್ಪಷ್ಟ ಸಂದೇಶವನ್ನು ಪ್ರಧಾನಿ ಮೋದಿ ಕೊಟ್ಟಿದ್ದಾರೆ. ಪಾಕಿಸ್ತಾನ ಯಾವುದೇ ಹೋರಾಟ ಮಾಡದೇ ಹುಟ್ಟಿರುವ ರಾಷ್ಟ್ರ. ನಾವು ಸಾವಿರಾರು ವರ್ಷಗಳಿಂದ ಪರಕೀಯರ ವಿರುದ್ಧ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಈ ನೆಲದ ಮಹತ್ವವೇ ಹೋರಾಟದ ಮನೋಭಾವದಿಂದ ಕೂಡಿದೆ ಎಂದರು.

ನಾವು ಪಾಕಿಸ್ತಾನದಂತೆ ಯಾರೋ ಕೊಟ್ಟಿರುವ ಭಿಕ್ಷೆಯಲ್ಲಿ ಬದುಕುತ್ತಿಲ್ಲ. 75 ವರ್ಷದ ಹಿಂದೆ ದೇಶ ತುಂಡಾದಾಗ ಉದಯವಾದ ಪಾಕಿಸ್ತಾನ ಉಗ್ರವಾದಕ್ಕೆ ಬೆಂಬಲ ಕೊಡುತ್ತಾ ಬಂದಿದೆ. ಹುಡುಕಿ ಹುಡುಕಿ ಹಿಂದೂಗಳನ್ನು ಕೊಲ್ಲುವ ಮಟ್ಟಕ್ಕೆ ಉಗ್ರವಾದ ಬೆಳೆದಿದೆ. ಪಾಕಿಸ್ತಾನದ ಕುತಂತ್ರಕ್ಕೆ ಭಾರತ ತಕ್ಕ ಉತ್ತರ ನೀಡಿದೆ. ಪಾಕಿಸ್ತಾನದ ವಾಯು ನೆಲೆಗಳನ್ನು ಧ್ವಂಸಗೊಳಿಸಲಾಗಿದೆ. ಇದಕ್ಕೆ ಕಾರಣವಾದ ಭಾರತೀಯ ಸೇನೆ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ನಾಯಕತ್ವ ಬದಲಾವಣೆ ಬಗ್ಗೆ ಪ್ರತಿಕ್ರಿಯಿಸಿ, ಬಿಜೆಪಿಯಲ್ಲಿ ನಾಯಕತ್ವಕ್ಕೇನು ಕೊರತೆ ಇಲ್ಲ. ನರೇಂದ್ರಮೋದಿ ಅವರಿಗೆ ಬದಲಾಗಿ ಪರ್ಯಾಯ ನಾಯಕರು ಬಿಜೆಪಿಯಲ್ಲಿ ಬಹಳಷ್ಟು ಮಂದಿ ಇದ್ದಾರೆ. ಉಮಾಭಾರತಿ ಪಾರ್ಟಿ ಬಿಟ್ಟಾಗಲೂ ಏನು ಆಗಲಿಲ್ಲ. ಗುಜರಾತ್‌ನಲ್ಲಿ ಕೇಶುಭಾಯಿ ಪಟೇಲ್ ಪಕ್ಷ ತೊರೆದರು. ಆಗ ನರೇಂದ್ರ ಮೋದಿಯವರಿಗೆ ನಾಯಕತ್ವ ನೀಡಲಾಯಿತು. ವ್ಯಕ್ತಿಗಿಂತ ಪಕ್ಷ ಮುಖ್ಯ, ಪಕ್ಷಕ್ಕಿಂತ ದೊಡ್ಡವರು ಯಾರು ಇಲ್ಲ. ಯಾರೇ ಪಕ್ಷ ತೊರೆದರೂ ಮತ್ಯಾರಾದರು ನಾಯಕರಾಗಿ ಉದಯಿಸುತ್ತಾರೆ. ಪ್ರಧಾನಿ ನರೇಂದ್ರ ಮೋದಿಯವರ ಸ್ಥಾನಕ್ಕೆ ಮತ್ತೊಬ್ಬರನ್ನು ತರುವ ವಿಚಾರದ ಬಗ್ಗೆ ಗೊತ್ತಿಲ್ಲ. ಈ ಬಗ್ಗೆ ಪಕ್ಷ ನಿರ್ಧಾರ ಕೈಗೊಳ್ಳುತ್ತದೆ. ಪಕ್ಷದ ನಿರ್ಧಾರವೇ ಅಂತಿಮ. ಪಕ್ಷದ ನಿರ್ಧಾರಕ್ಕೆ ಎಲ್ಲ ನಾಯಕರೂ ಬದ್ಧರಾಗಿರುತ್ತಾರೆ ಎಂದು ತಿಳಿಸಿದರು.

ಅನುರಾಗ್ ಬಸವರಾಜುಗೆ ಚಿನ್ನದ ಪದಕ



ಮೈಸೂರು, ಮೇ 13– ಮೈಸೂರಿನ ಅಂತಾರಾಷ್ಟ್ರೀಯ ವನ್ಯಜೀವಿ ಹಾಗೂ ಪತ್ರಿಕಾ ಛಾಯಾಗ್ರಾಹಕ ಅನುರಾಗ್ ಬಸವರಾಜ್ (ಎಂ.ಎಸ್.ಬಸವಣ್ಣ) ಅವರಿಗೆ ಪಶ್ಚಿಮಬಂಗಾಳ ರಾಜ್ಯದ ಅಲ್ತಮಿರ ನ್ಯಾಷನಲ್ ಸಲೂನ್– 2025 ಸ್ಪರ್ಧೆಯಲ್ಲಿ ಚಿನ್ನದ ಪದಕ ಲಭಿಸಿದೆ.

ಪತ್ರಿಕಾ ಛಾಯಾಗ್ರಹಣ ವಿಭಾಗದಲ್ಲಿ ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಸಂಭವಿಸಿದ ಬೆಂಕಿಯ ವೇಳೆ ಜನ ಭಯಭೀತರಾಗಿ ಓಡಿದ ಫೋಟೋಗೆ ಜೆಎಸ್‌ಪಿ ಚಿನ್ನದ ಪದಕ ಲಭಿಸಿದೆ. ಈವರೆಗೂ ಅನುರಾಗ್ ಬಸವರಾಜ್ ಅವರ ಛಾಯಾಚಿತ್ರಗಳಿಗೆ ಅಂತಾರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಮಟ್ಟ ಹಾಗೂ 85 ಹೆಚ್ಚೂ ಚಿನ್ನದ ಪದಕ, ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

ನಾಳೆ ಹಲವೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಮೇ 13–ಮೇ 15ರಂದು ಬೆಳಗ್ಗೆ 10ರಿಂದ ಸಂಜೆ 6 ಗಂಟೆಯವರೆಗೆ ಬೆಲವತ್ತ, ನಾಗನಹಳ್ಳಿ ಹೊಸ ಬಡಾವಣೆ, ಸಾದನಹಳ್ಳಿ ಗ್ರಾಮಗಳಲ್ಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಭೈರವಿ ಗೌಡ್ತಿಯರ ಬಳಗದ ವತಿಯಿಂದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ...



ಭೈರವಿ ಗೌಡ್ತಿಯರ ಬಳಗದ ವತಿಯಿಂದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಮಕ್ಕಳನ್ನು ಸನ್ಮಾನಿಸಲಾಯಿತು. ಇದೇ ವೇಳೆ ಅಂತರ ರಾಷ್ಟ್ರೀಯ ಮಹಿಳಾ ದಿನ, ಕಾರ್ಮಿಕರ ದಿನವನ್ನೂ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷೆ ಪ್ರೇಮಾಶಂಕರೇಗೌಡ, ಕೋಮಲ ವೆಂಕಟೇಶ್, ಉಮಾ ನಾಗೇಶ್, ರಾಧಾ ಲಂಕೇಗೌಡ, ರೇಣುಕಾ ಜಗದೀಶ್, ರಾಧಾ ಜಯರಾಮ್, ಹೇಮಾ ನಂದೀಶ್ ಹಾಗೂ ಬಳಗದ ಪದಾಧಿಕಾರಿಗಳನ್ನು ಕಾಣಬಹುದು.

ಜೂ.9, ಬೆಂಗಳೂರಲ್ಲಿ ಭಾರಿ ಸಮಾವೇಶ

ಮೈಸೂರು, ಮೇ 13(ಬಿಎಲ್‌ಯು)– ಪರಿಶಿಷ್ಟ ಜಾತಿ ಗಣತಿ ಹಿನ್ನೆಲೆಯಲ್ಲಿ ನಡೆಯುತ್ತಿರುವ, ಒಳ ಮೀಸಲಾತಿಗಾಗಿ ರಥಯಾತ್ರೆ ರಾಜ್ಯಾದ್ಯಂತ ಸಂಚರಿಸಿ ಬೆಂಗಳೂರಿನಲ್ಲಿ ಸಮಾರೋಪಗೊಳ್ಳಲಿದೆ. ಬೆಂಗಳೂರಿನಲ್ಲಿ ಜೂನ್ 9ರಂದು ನಡೆಯುವ ಸಮಾವೇಶದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಜನರು ಸೇರುತ್ತಾರೆ ಎಂದು ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷ ಎಸ್.ಅರುಣ್ ಕುಮಾರ್ ತಿಳಿಸಿದ್ದಾರೆ.

ಈಗಾಗಲೇ ರಥಯಾತ್ರೆ ಕರ್ನಾಟಕದಾದ್ಯಂತ ಸಂಚಾರ ಮಾಡುತ್ತಿದ್ದು, ನಮ್ಮ ಸಮುದಾಯಕ್ಕೆ ಒಳ ಮೀಸಲಾತಿ ಕಲ್ಪಿಸುವ ವಿಚಾರದಲ್ಲಿ ಯಾವ ರೀತಿಯ ಕುತಂತ್ರ ರೂಪಿಸಲಾಗುತ್ತಿದೆ ಎಂಬುದನ್ನು ಮನದಟ್ಟು ಮಾಡಲಾಗುತ್ತಿದೆ ಎಂದು ರಥಯಾತ್ರೆ ವೇಳೆ ತಿಳಿಹೇಳಲಾಗುತ್ತಿದೆ ಎಂದು ಅರುಣ್‌ಕುಮಾರ್ ಹೇಳಿದ್ದಾರೆ.

ಪ್ರವೇಶಾತಿ ಪ್ರಾರಂಭ

ಮೈಸೂರು, ಮೇ 13– ಮೈಸೂರು ವಿಶ್ವವಿದ್ಯಾನಿಲಯ ಸಂಜೆ ಕಾಲೇಜಿನಲ್ಲಿ 2025–26ನೇ ಸಾಲಿಗೆ ಬಿ.ಎ., ಬಿ.ಕಾಂ. ಮತ್ತು ಬಿಬಿಎ ಪದವಿ ತರಗತಿಗಳಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು, ಆನ್‌ಲೈನ್ ಮೂಲಕ ಯುಯುಸಿಎಂಎಸ್ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗೆ ದೂ. 0821–2422932 ಸಂಪರ್ಕಿಸಬಹುದು.

ನಾಳೆ ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್ ವಿತರಣಾ ಕಾರ್ಯಕ್ರಮ

ಮೈಸೂರು: ಮೈಸೂರಿನ ಜಲಪುರಿಯಲ್ಲಿರುವ ನಿವೃತ್ತ ಪೊಲೀಸ್ ಅಧಿಕಾರಿಗಳ ಸಂಘ ಮತ್ತು ವಯೋ ವಿಕಾಸ್ ಸಂಸ್ಥೆ, ಬೆಂಗಳೂರು ಸಂಯುಕ್ತ ಆಶ್ರಯದಲ್ಲಿ ಮೇ 15ರಂದು ಬೆಳಗ್ಗೆ 9ರಿಂದ ಸಂಜೆ 4ರವರೆಗೆ 70 ವರ್ಷ ಮೇಲ್ಪಟ್ಟ ನಿವೃತ್ತ ಪೊಲೀಸ್ ಅಧಿಕಾರಿಗಳು, ಸಾರ್ವಜನಿಕರಿಗೆ ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್ ಅನ್ನು ಉಚಿತವಾಗಿ ಮಾಡಿಕೊಡಲಾಗುವುದು. ಹಾಗೂ ಮರೆಗುಳಿತನ (ಜ್ಞಾಪಕಶಕ್ತಿ ಕಡಿಮೆ ಇರುವವರು) ಇರುವವರಿಗೆ ತಜ್ಞ ವೈದ್ಯರಿಂದ ಮಾರ್ಗದರ್ಶನ, ಉಚಿತ ಚಿಕಿತ್ಸೆ ಕೊಡಿಸಲಾಗುತ್ತದೆ. ಇದರ ಪ್ರಯೋಜನ ಪಡೆಯಲಿಚ್ಛಿಸುವವರು ಮೊಬೈಲ್ ನಂಬರ್ ಇರುವ ಆಧಾರ್ ಕಾರ್ಡ್, ಮೊಬೈಲ್ ಫೋನ್, 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ತರತಕ್ಕದ್ದು. ಮಾಹಿತಿಗೆ ಮೊ.9900745246 ಸಂಪರ್ಕಿಸಬಹುದು.

ಕಾರ್ಮಿಕರ ದಿನಾಚರಣೆ...



ಮೈಸೂರಿನ ವಿಜಯನಗರ ಎರಡನೇ ಹಂತದ ನಾಗರಿಕ ಹಿತರಕ್ಷಣಾ ಸಮಿತಿ ವತಿಯಿಂದ ಕಾರ್ಮಿಕರ ದಿನಾಚರಣೆ ಆಚರಿಸಲಾಯಿತು. ಸಮಿತಿ ಅಧ್ಯಕ್ಷ ಶ್ರೀಕಾಂತ ಬಡಿಗೇರ, ಪದಾಧಿಕಾರಿಗಳು ಹಾಗೂ ಬಡಾವಣೆ ನಿವಾಸಿಗಳು ಉಪಸ್ಥಿತರಿದ್ದರು.

ಜಾನಪದ ವಿದ್ವಾಂಸ ಯು.ಎಸ್.ರಾಮಣ್ಣ ದಂಪತಿಗೆ ಅಭಿನಂದನೆ

75ನೇ ಹುಟ್ಟುಹಬ್ಬದ ಅಂಗವಾಗಿ ಬದುಕಿನ ಹಾದಿ ಮೆಲುಕು; ಚಿತ್ರಗಳ ಪ್ರದರ್ಶನ, ಸನ್ಮಾನ



ಮೈಸೂರಿನ ವಿಜಯನಗರದ ಶ್ರೀ ಕಲಾನಿಕೇತನ ಕಲಾಶಾಲೆಯಲ್ಲಿ ಮಂಗಳವಾರ ರಂಗಭೂಮಿ ಕಲಾವಿದ, ಜಾನಪದ ವಿದ್ವಾಂಸ ಯು.ಎಸ್. ರಾಮಣ್ಣ ಹಾಗೂ ಡಾ.ವೈ.ಸಿ.ಭಾನುಮತಿ ದಂಪತಿಯನ್ನು ಸನ್ಮಾನಿಸಲಾಯಿತು. ಡಾ.ಡಿ.ಕೆ.ರಾಜೇಂದ್ರ, ಪ್ರೊ.ಎಚ್.ಎಸ್.ಉಮೇಶ್, ಅಂಶಿ ಪ್ರಸನ್ನಕುಮಾರ್, ರಾಜಶೇಖರ ಕದಂಬ, ಕೆ.ಸಿ.ಮಹದೇವಶೆಟ್ಟಿ, ನಾಗೇಂದ್ರಕುಮಾರ್, ಅಶ್ವತ್ಥ್ ಕದಂಬ ಇದ್ದಾರೆ.

ಮೈಸೂರು, ಮೇ 13– ಯು.ಎಸ್. ರಾಮಣ್ಣ ಅವರ ನಟನೆಗಿಂತ ಜಾನಪದ ವಸ್ತುಗಳ ಸಂಗ್ರಹ ಕಾರ್ಯ ದೊಡ್ಡದು ಎಂದು ರಂಗಕರ್ಮಿ ಪ್ರೊ.ಎಚ್.ಎಸ್. ಉಮೇಶ್ ಬಣ್ಣಿಸಿದರು.

ಯು.ಎಸ್. ರಾಮಣ್ಣ ಅವರ 75ನೇ ವರ್ಷದ ಅಂಗವಾಗಿ ಕದಂಬ ರಂಗ ವೇದಿಕೆಯು ವಿಜಯನಗರದ ಶ್ರೀ ಕಲಾನಿಕೇತನ ಕಲಾಶಾಲೆಯಲ್ಲಿ ಮಂಗಳವಾರ ಏರ್ಪಡಿಸಿದ್ದ ಸನ್ಮಾನ ಸಮಾರಂಭದಲ್ಲಿ ಅಭಿನಂದನಾ ಭಾಷಣ ಮಾಡಿದ ಅವರು, ಖ್ಯಾತ ಕಲಾವಿದ ಪಿ.ಆರ್. ತಿಪ್ಪೇಸ್ವಾಮಿ ಅವರ ನಂತರ ಮಾನಸ ಗಂಗೋತ್ರಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ಜಾನಪದ ವಸ್ತುಸಂಗ್ರಹಾಲಯದ ಕ್ಯೂರೇಟರ್ ಆದ ರಾಮಣ್ಣ ಅವರು ನಾಡಿನಾದ್ಯಂತ ಸಂಚರಿಸಿ, ಜಾನಪದ ವಸ್ತುಗಳನ್ನು ಸಂಗ್ರಹಿಸುವ ಮೂಲಕ ಮುಂದಿನ ಪೀಳಿಗೆಗೆ ದಾಟಿಸುವ ಕೆಲಸ ಮಾಡಿದ್ದಾರೆ ಎಂದು ಶ್ಲಾಘಿಸಿದರು.

ಜಾನಪದ ವಸ್ತುಗಳ ಸಂಗ್ರಹಕ್ಕಾಗಿ ಮನೆ ಮನೆಗೆ ಅಲೆದಿದ್ದಾರೆ. ಅವರು ತಾವೊಬ್ಬರೇ ಬೆಳೆಯದೇ ಜೊತೆಯಲ್ಲಿರುವವರನ್ನು ಒಟ್ಟಿಗೆ ಬೆಳೆಸುವ ಗುಣ ಇದೆ ಎಂದರು.

ನಟನಾದವನು ಪಾತ್ರದ ಹಿಂದೆ ಇರುತ್ತಾನೆ. ಪಾತ್ರಕ್ಕೆ ಜೀವ ತುಂಬುತ್ತಾನೆ. ಅದೇ ರೀತಿ ರಾಮಣ್ಣ ಅವರು ತಮ್ಮ ಪತ್ನಿ ಡಾ.ವೈ.ಸಿ. ಭಾನುಮತಿ ಅವರ ಹಿಂದೆ ನಿಂತು ಸಾಧನೆಗೆ ಕಾರಣಕರ್ತರಾಗಿದ್ದಾರೆ. ರಾಮಣ್ಣ ಅವರು ಹೆಚ್ಚು ಬರೆಯಲಿಲ್ಲ. ಆದರೆ ಭಾನುಮತಿ ಅವರ ಬರಹದ ಹಿಂದೆ ರಾಮಣ್ಣ ಅವರ ಸಹಕಾರ ಇದೆ ಎಂದು ಅವರು ಹೇಳಿದರು.

ರಾಮಣ್ಣ ಅಭಿನಯದ ಪಾತ್ರಗಳ ಚಿತ್ರ ಪ್ರದರ್ಶನ ಉದ್ಘಾಟಿಸಿದ ಜಾನಪದ ವಿದ್ವಾಂಸ ಡಾ.ಡಿ.ಕೆ.ರಾಜೇಂದ್ರ ಮಾತನಾಡಿ, ಜಾನಪದ ಕ್ಷೇತ್ರದಲ್ಲಿ ಉತ್ತಮ ಕೆಲಸ ಮಾಡಿರುವ ಯು.ಎಸ್.ರಾಮಣ್ಣನವರದು ಶಿಸ್ತಿನ ಜೀವನ. ಧ್ಯಾನ, ವ್ಯಾಯಾಮ, ನಟನೆ, ನಿಯತ್ತು, ಬಂದಿದ್ದನ್ನು ಒಪ್ಪಿಕೊಳ್ಳುವಿಕೆಯ ಜೊತೆಗೆ ಮಾತು ಕಡಿಮೆ ಎಂದರು.

ರಾಮಣ್ಣ ದಂಪತಿಯನ್ನು ಸನ್ಮಾನಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಜಾನಪದ ಹಾಗೂ ರಂಗಭೂಮಿ ಕ್ಷೇತ್ರದಲ್ಲಿ ಸದ್ದಿಲ್ಲದೇ ಅಪಾರವಾದ ಸಾಧನೆ ಮಾಡಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶ್ರೀ ಕಲಾನಿಕೇತನ ಕಲಾಶಾಲೆಯ ಪ್ರಾಂಶುಪಾಲ ಕೆ.ಸಿ. ಮಹದೇವಶೆಟ್ಟಿ ಮಾತನಾಡಿ, ನಾಟಕಕ್ಕೂ ಚಿತ್ರಕಲೆಗೂ ಪರಸ್ಪರ ಪೂರಕವಾದ ಅವಿನಾಭಾವ ಸಂಬಂಧವಿದೆ ತೊಗಲುಗೊಂಬೆ, ಸೂತ್ರದ ಗೊಂಬೆ, ಮುಖವರ್ಣಿಕೆ ಮೊದಲಾದವನ್ನು ಗಮನಿಸಬಹುದು ಎಂದರು.

ಸನ್ಮಾನಕ್ಕೆ ಕೃತಜ್ಞತೆ ಸಲ್ಲಿಸಿ ರಾಮಣ್ಣ ಮಾತನಾಡಿ, ಕಳೆದ 53 ವರ್ಷಗಳಿಂದ ರಂಗಭೂಮಿ ಹಾಗೂ ಜಾನಪದ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದೇನೆ. ರಂಗಾಯಣ ನಿರ್ದೇಶಕರಾಗಿದ್ದ ಬಿ.ವಿ. ಕಾರಂತರು ಕಂಸಾಳೆ ಹಾಗೂ ಯೋಗಕ್ಕೆ ನೀಡಿದ ಪ್ರೋತ್ಸಾಹ ದೊಡ್ಡದು ಎಂದು ಸ್ಮರಿಸಿದರು. ಯು.ಎಸ್. ರಾಮಣ್ಣ ಅವರ ಶಿಷ್ಯಂದಿರಾದ ಕಾರ್ತಿಕ್ ಉಪಮನ್ಯು ಹಾಗೂ ವಿಶಾಲ್ ಕಂಸಾಳೆ ಕಲೆ ಪ್ರದರ್ಶಿಸಿ, ಸಭಿಕರನ್ನು ರಂಜಿಸಿದರು.

ಮೈಸೂರು ಮಿತ್ರ ಬುಧವಾರ 14 ಮೇ 2025

ಬಸವಣ್ಣನ ತತ್ವಗಳು ಸಮಸಮಾಜ ನಿರ್ಮಾಣಕ್ಕೆ ಸಹಕಾರಿ

ಸಂಸದ ಯದುವೀರ್



ಬಸವ ಜಯಂತಿಯನ್ನು ಸಂಸದ ಯದುವೀರ್ ಒಡೆಯರ್ ಉದ್ಘಾಟಿಸಿದರು.

ಹುಣಸೂರು, ಮೇ 13– ಜಗಜ್ಯೋತಿ ಬಸವಣ್ಣನವರ ತತ್ವಗಳು ಸಮಸಮಾಜ ನಿರ್ಮಾಣಕ್ಕೆ ಸಹಕಾರಿಯಾಗಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಬಣ್ಣಿಸಿದರು.

ನಗರದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ಬಸವ ಬಳಗ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಾತಿ ಪದ್ಧತಿ ವಿಜೃಂಭಿಸುತ್ತಿದ್ದ 12ನೇ ಶತಮಾನದಲ್ಲಿ ಬಸವಣ್ಣನವರು ಸಮ ಸಮಾಜಕ್ಕಾಗಿ ಸಾಮಾಜಿಕ ಕಾಂತಿ ನಡೆಸಿದರು. ಅವರ ವಚನಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು.

ಪ್ರಧಾನ ಭಾಷಣ ಮಾಡಿದ ಡಿ.ಡಿ.ಅರಸ್ ಕಾಲೇಜಿನ ಪ್ರೊ.ಬಿ.ವಿ.ವಸಂತಕುಮಾರ್, ಜಗತ್ತಿಗೆ ಮೌಲ್ಯ ಕಟ್ಟಿ ಕೊಟ್ಟವರು ಬಸವಣ್ಣ. ಅವರ ಅಂಕಿತ ನಾಮ ಕೂಡಲಸಂಗಮದೇವ ಎಂಬುದಾಗಿದೆ. ಅಸಮಾನತೆ, ಜಾತೀಯತೆ, ಅಸ್ಪೃಶ್ಯತೆ, ಅಜ್ಞಾನದ ಪರಮಾ ವಧಿ ತೊಡೆದು ಹಾಕಲು ಅರಿವು ಮೂಡಿಸಿದ ಬಸವಣ್ಣನವರು ನಡೆಸಿದ ಶರಣರ ಕ್ರಾಂತಿಯನ್ನು ಪ್ರತಿಯೊಬ್ಬರೂ ಅನುಸರಿಸಿದರೆ ಅದುವೇ ಬಸವಣ್ಣನಿಗೆ ನೀಡುವ ಗೌರವ ಎಂದರು.

ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ಧಗಂಗೆಯ ಡಾ.ಶಿವಕುಮಾರ ಸ್ವಾಮೀಜಿಗಳ ಕುರಿತು ಸಿದ್ದನಕೊಪ್ಪಲಿನ ಬರಹಗಾರ ಪೂರ್ಣಚಂದ್ರ ರಚಿಸಿರುವ ಕವನ ಸಂಕಲನ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿ, 12ನೇ ಶತಮಾನದಲ್ಲಿ ಮೇಲು–ಕೀಳೆಂಬ ಭಾವನೆ ಉತ್ತುಂಗ ಸ್ಥಿತಿಯಲ್ಲಿದ್ದುದ್ದನ್ನು ಕಂಡು ಸರ್ವರಿಗೂ ಸಮಾನತೆ ಕಲ್ಪಿಸುವ ನಿಟ್ಟಿನಲ್ಲಿ ಮಾಡಿದ ಇಷ್ಟ ಲಿಂಗಧಾರಣೆ, ಅಂತರ್ಜಾತಿ ವಿವಾಹದಂತಹ ಸಾಮಾಜಿಕ ಕ್ರಾಂತಿ ವಿಶ್ವದಲ್ಲೇ ವಿಶಿಷ್ಟವಾದುದು ಎಂದರು.

ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಮಾತನಾಡಿ, ಬುದ್ಧ, ಬಸವ, ಅಂಬೇಡ್ಕರ್ ಅವರ ಸಾಮಾಜಿಕ ಕ್ರಾಂತಿ ಅನನ್ಯವಾದುದು. ಅವರ ಆದರ್ಶಗಳನ್ನು ಸಿದ್ಧಗಂಗಾ ಸ್ವಾಮೀಜಿ, ಸಿದ್ದೇಶ್ವರ ಸ್ವಾಮೀಜಿ ಸೇರಿದಂತೆ ಅನೇಕರು ಅನುಸರಿಸಿದ್ದಾರೆ. ನಾವೆಲ್ಲಾ ಅವರ ಹಾದಿಯಲ್ಲಿ ನಡೆಯದಿರುವುದು ನೋವಿನ ಸಂಗತಿ ಎಂದು ಬೇಸರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಜಿ.ಡಿ.ಹರೀಶ್‌ಗೌಡ, ಬಸವಣ್ಣನವರ ಅನುಭವ ಮಂಟಪದ ಪರಿಕಲ್ಪನೆ ಪ್ರಜಾಪ್ರಭುತ್ವ ವ್ಯವಸ್ಥೆಗೆ ಅಡಿಗಲ್ಲಾಗಿದೆ. ಅವರ ವಚನ ಸಾಹಿತ್ಯ ಎಂದೆಂದಿಗೂ ಪ್ರಸ್ತುತವಾಗಿದೆ. ಸಮಾಜದವರ ಬೇಡಿಕೆಯಂತೆ ಬಸವ ಭವನ ನಿರ್ಮಿಸಲು ಭೂಮಿ ಕೊಡಿಸುವೆ. ಡಾ.ಯತೀಂದ್ರ ಅವರು ಸರ್ಕಾರದಿಂದ ಅನುದಾನ ಕೊಡಿಸಲಿ ಎಂದರು.

ಕಾರ್ಯಕ್ರಮಕ್ಕೂ ಮುನ್ನಾ ನಗರದ ಮಂಜುನಾಥ ದೇಗುಲದಿಂದ ಹೊರಟ ಕಲಾ ತಂಡಗಳ ಮೆರವಣಿಗೆ, ಬಸವಣ್ಣನವರ ಪ್ರತಿಮೆಗೆ ಮಾಜಿ ಶಾಸಕ ಮಂಜುನಾಥ್, ನಟರಾಜ ಸ್ವಾಮೀಜಿ, ಸಾಂಬ ಸದಾಶಿವ ಸ್ವಾಮೀಜಿ ಹಾಗೂ ಗಣ್ಯರು ಚಾಲನೆ ನೀಡಿದರು.

ಸಿದ್ಧಗಂಗಾಮಠದ ಶ್ರೀಸಿದ್ಧಲಿಂಗ ಸ್ವಾಮೀಜಿ, ಕನಕಪುರ ಮಠದ ಡಾ.ಚನ್ನವಸವ ಸ್ವಾಮೀಜಿ, ಶ್ರೀ ನಟರಾಜ ಸ್ವಾಮೀಜಿ, ಸದಾಶಿವ ಸ್ವಾಮೀಜಿ, ಆಶೀರ್ವಚನ ನೀಡಿದರು. ಮಹಾಸಭಾ ಅಧ್ಯಕ್ಷ ಸೋಮಶೇಖರ್, ಬಸವ ಬಳಗದ ಅಧ್ಯಕ್ಷ ವೀರಭದ್ರಪ್ಪ, ಚನ್ನವೀರಪ್ಪ, ಮಾತನಾಡಿದರು. ನಗರಸಭೆ ಅಧ್ಯಕ್ಷ ಗಣೇಶ್ ಕುಮಾರಸ್ವಾಮಿ, ವೀರಶೈವ ಮಹಾಸಭಾ ಜಿಲ್ಲಾ ಯುವ ಅಧ್ಯಕ್ಷ ಅರ್ಜುನ್ ಪಾರ್ಥ, ಮಹದೇವ್, ವಕೀಲ ಮೂರ್ತಿ, ಬಸಮ್ಮಣ್ಣಿ, ಮುಖಂಡರಾದ ಡಾ.ವೃಷಭೇಂದ್ರಸ್ವಾಮಿ, ರಮೇಶ್ ಕುಮಾರ್, ಶ್ರೀಧರ್, ಕುಮಾರ್, ಕಸಾಪ ಅಧ್ಯಕ್ಷ ಮಹದೇವ್, ನಿಂಗರಾಜ ಮಲ್ಲಾಡಿ, ಗಣೇಶ್ ಗೌಡ ಸೇರಿದಂತೆ ಇತರರಿದ್ದರು. ಇದೇ ವೇಳೆ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಶ್ರೀಕೀರ್ತಿ ನಾರಾಯಣಸ್ವಾಮಿ ಮುತ್ತಿನ ಪಲ್ಲಕ್ಕಿ ಉತ್ಸವ



ತಲಕಾಡಿನಲ್ಲಿ ಶ್ರೀಕೀರ್ತಿನಾರಾಯಣಸ್ವಾಮಿ ಮುತ್ತಿನ ಪಲ್ಲಕ್ಕಿ ಉತ್ಸವ ನಡೆಯಿತು.

ತಲಕಾಡು, ಮೇ 13– ಶ್ರೀಕೀರ್ತಿ ನಾರಾಯಣಸ್ವಾಮಿ ಬ್ರಹ್ಮ ರಥೋತ್ಸವದ 9ನೇ ದಿನದ ವಸಂತೋತ್ಸವ ಅಂಗವಾಗಿ ತೀರ್ಥ ಸ್ನಾನೋತ್ಸವ, ತೆಪ್ಪೋತ್ಸವ, ಮುತ್ತಿನ ಪಲ್ಲಕ್ಕಿ ಉತ್ಸವ ಭಕ್ತಿ ಸಡಗರದಿಂದ ನೆರವೇರಿತು.

ಬೆಳಗ್ಗೆ ಇಲ್ಲಿನ ದೇಗುಲದಲ್ಲಿ ನಿತ್ಯ ಪೂಜೆ ಬಳಿಕ ಕಳಸ ವಿಸರ್ಜನೆಗೆ ಮುಂದಾದ ಅರ್ಚಕರು, ಉತ್ಸವ ಪ್ರಾರಂಭವಾದ 2ನೇ ದಿನ ಮೊಳಕೆಗೆ ಕಾಳುಗಳನ್ನು ಕಟ್ಟಿದ ಮಡಕೆ ಕುಂಭವನ್ನು ಭಗವಂತನ ಪಾದದ ಬಳಿ ಇಟ್ಟು, ನಿತ್ಯ ಅರಿಶಿನ ಕುಂಕುಮ ನೀರಿನ ಪೂಜೆಯೊಂದಿಗೆ ದೇವರಿಗೆ ಸಮರ್ಪಿಸಿದ್ದ ಬಣ್ಣದ ನೀರನ್ನು, ಉತ್ಸವ ಮೂರ್ತಿ ತೀರ್ಥ ಸ್ನಾನಕ್ಕೆ ನದಿ ಬಳಿಗೆ ತೆರಳುವ ಮುನ್ನ, ಧಾರ್ಮಿಕ ಪದ್ಧತಿಯಂತೆ ದೇಗುಲದ ಶಾನುಭೋಗರಿಗೆ (ವಾಸುದೇವ್ ಪರ್ಯಾಯ) ದೇಗುಲದ ಮುಖ್ಯ ಅರ್ಚಕ ವಿದ್ವಾನ್ ಶ್ರೀನಿವಾಸ ರಂಗಾಚಾರ್ಯರ ನೇತೃತ್ವದಲ್ಲಿ ವಿದ್ವಾಂಸರು ತೀರ್ಥ ಸಂಪ್ರೋಕ್ಷಣೆ ನೆರವೇರಿಸಿದರು.

ಓಕುಳಿಯಾಟ ಮೆರವಣಿಗೆ: ದೇಗುಲದಿಂದ ನದಿವರೆಗೆ ರಸ್ತೆ ಉದ್ದಕ್ಕೂ ಬಣ್ಣದ ನೀರಿನ ಓಕುಳಿಯಾಟ ಮೆರವಣಿಗೆ ನಾರಾಯಣನ ನಾಮಸ್ಮರಣೆಯಲ್ಲಿ ತೆರಳಿ, ಇಲ್ಲಿ ಉತ್ಸವ ಮೂರ್ತಿಗೆ ತೀರ್ಥಸ್ನಾನ, ಜಲಕ್ರೀಡೆ ಉತ್ಸವ (ತೆಪ್ಪೋತ್ಸವ) ನೆರವೇರಿಸಿದರು. ಈ ವೇಳೆ ಹಾಜರಿದ್ದ ಭಕ್ತರು ಇಲ್ಲಿ ನಡೆದ ಉತ್ಸವವನ್ನು ಭಕ್ತಿ ಭಾವದಿಂದ ಕಣ್ತುಂಬಿಕೊಂಡರು.

ಮನೆ ಏಳಿಗೆ, ಕಂಕಣ ಭಾಗ್ಯ, ಸಂತಾನ ಭಾಗ್ಯ ಪ್ರಾಪ್ತಿಗೆ ಇಲ್ಲಿ ಹರಸಿಕೊಂಡಿದ್ದ ಭಕ್ತರನ್ನು ಸಾಲಾಗಿಸಿ, ಉತ್ಸವ ಮೂರ್ತಿ ತೀರ್ಥ ಸ್ನಾನದ ಬಳಿಕ, ಅರಶಿನ ಕುಂಕಮದ ತೀರ್ಥವನ್ನು ಭಕ್ತರಿಗೆ ಸಂಪ್ರೋಕ್ಷಿಸಲಾಯಿತು. ಇಲ್ಲಿನ ನದಿಯಲ್ಲಿ ಉತ್ಸವಮೂರ್ತಿ ತೆಪ್ಪೋತ್ಸವ ನಂತರ ಮೂಲ ದೇಗುಲಕ್ಕೆ ಉತ್ಸವಮೂರ್ತಿ ತಂದು ವಿಶೇಷವಾಗಿ ಅಲಂಕರಿಸಿ, ರಾತ್ರಿ ಮುತ್ತಿನ ಪಲ್ಲಕ್ಕಿ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಚುನಾವಣೆಗೆ ಬಾರದ ಚುನಾವಣಾಧಿಕಾರಿ ವಿರುದ್ಧ ಪ್ರತಿಭಟನೆ



ಚುನಾವಣೆಗೆ ಬಾರದ ಚುನಾವಣಾಧಿಕಾರಿ ವಿರುದ್ಧ ನಿರ್ದೇಶಕರು ಪ್ರತಿಭಟನೆ ನಡೆಸಿದರು.

ಹುಣಸೂರು, ಮೇ 13– ಸಹಕಾರ ಸಂಘದ ವರಿಷ್ಠರ ಚುನಾವಣೆಗೆ ದಿನಾಂಕ ನಿಗದಿಗೊಳಿಸಿ ಕಾಣದ ಕೈಗಳ ಒತ್ತಡಕ್ಕೆ ಮಣಿದು ಚುನಾವಣೆ ನಡೆಸಲು ಸಹಕಾರ ಸಂಘಕ್ಕೆ ಬಾರದ ಚುನಾವಣಾಧಿಕಾರಿ ವಿರುದ್ಧ ನಗರದ ಮಹಾಬೋಧಿ ಡಾ.ಬಿ.ಆರ್.ಅಂಬೇಡ್ಕರ್ ವಿವಿಧೋದ್ದೇಶ ಸಹಕಾರ ಸಂಘದ ನಿರ್ದೇಶಕರು ಪ್ರತಿಭಟನೆ ನಡೆಸಿದರು.

ನಗರದ ಮಹಾಬೋಧಿ ಡಾ.ಬಿ.ಆರ್. ಅಂಬೇಡ್ಕರ್ ವಿವಿಧೋದ್ದೇಶ ಸಹಕಾರ ಸಂಘಕ್ಕೆ ಮೇ 5ರಂದು ಚುನಾವಣೆ ನಡೆದು 13 ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದರು. ಚುನಾವಣೆಯನ್ನು ಹುಣಸೂರಿನ ಸಹಕಾರಿ ಅಧಿಕಾರಿ ರಾಜಣ್ಣ ನಡೆಸಿ, ಮೇ 13ಕ್ಕೆ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆಗೆ ದಿನಾಂಕ ನಿಗದಿಗೊಳಿಸಿ ಎಲ್ಲರೂ ಭಾಗವಹಿಸುವಂತೆ ಪತ್ರ ಕಳುಹಿಸಿದ್ದರು. ಅದರಂತೆ ಇಂದು ಬೆಳಗ್ಗೆ 10 ರಿಂದ 11 ಗಂಟೆಗೆ ನಾಮಪತ್ರ ಸಲ್ಲಿಕೆ. 11 ರಿಂದ 11.30ರವರೆಗೆ ನಾಮಪತ್ರ ವಾಪಸ್ ಪಡೆಯಲು ಅವಕಾಶ ಹಾಗೂ 11.30ರಿಂದ 12ರವರೆಗೆ ವರಿಷ್ಠರ ಆಯ್ಕೆ, ನಂತರ 1 ರಿಂದ 2 ಗಂಟೆವರೆಗೆ ಸಭೆ ನಿಗದಿಯಾಗಿತ್ತು. ಆದರೆ ಚುನಾವಣಾಧಿಕಾರಿ ರಾಜಣ್ಣ ಚುನಾವಣೆ ನಡೆಸಲು ಸಂಘಕ್ಕೆ ಬಾರದೇ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡಿದ್ದರು.

ಇಂದು ಬೆಳಿಗ್ಗೆಯೇ ನಿರ್ದೇಶಕರಾದ ಪುಟ್ಟರಾಜು, ನಾಗರಾಜು, ಶಿವಯ್ಯ, ಪುಟ್ಟಮಾದಯ್ಯ, ಹೆಚ್.ಬಿ.ನಾಗರಾಜು, ಮಹದೇವಸ್ವಾಮಿ.ಸಿ, ದಯಾನಂದ, ಹಾಗೂ ಶಿವಣ್ಣ ಚುನಾವಣಾಧಿಕಾರಿಗಾಗಿ ಕಾಯ್ದರೂ ಚುನಾವಣಾಧಿಕಾರಿ ಬಾರದ ಹಿನ್ನಲೆಯಲ್ಲಿ ರೊಚ್ಚಿಗೆದ್ದ ನಿರ್ದೇಶಕರು ವಿಷಯವನ್ನು ಎಆರ್, ಡಿಆರ್, ಎಸಿ, ಡಿಸಿ ಹಾಗೂ ಸಹಕಾರ ಇಲಾಖೆ ಜಂಟಿ ರಿಜಿಸ್ಟಾರ್ ಅವರಿಗೆ ತಿಳಿಸಿದಾಗ ಜಂಟಿ ರಿಜಿಸ್ಟಾರ್ ಅವರು ಸಂಘದ ಕಾರ್ಯದರ್ಶಿಗೆ ಸೂಚಿಸಿ ಎಷ್ಟು ನಿರ್ದೇಶಕರು ಬಂದಿದ್ದಾರೆ ಎಂದು ಮಾಹಿತಿ ಪಡೆದು ಆಕಾಂಕ್ಷಿಗಳಿಂದ ನಾಮಪತ್ರ ಸ್ವೀಕರಿಸಿ. ನಾನು ಮಧ್ಯಾಹ್ನ 1 ಗಂಟೆಗೆ ಏನು ಮಾಡಬೇಕು ಎಂದು ಸೂಚಿಸಿದ್ದರು. ಅದರಂತೆ ಕಾರ್ಯದರ್ಶಿ ಶಶಿಕಲಾ ನಾಮಪತ್ರ ಸ್ವೀಕರಿಸಿದರಾದರೂ, 1 ಗಂಟೆ ಬಳಿಕ ಜಂಟಿ ರಿಜಿಸ್ಟಾರ್‌ಸಹ ಫೋನ್ ತೆಗೆಯಲಿಲ್ಲ. ಇದರಿಂದ ಬೇಸತ್ತ ನಿರ್ದೇಶಕರು ಅಧಿಕಾರಿಗಳ ಅನ್ಯಾಯ ಖಂಡಿಸಿ ಪ್ರತಿಭಟನೆ ನಡೆಸಿದರು.

ಬಳಿಕ ಸಹಕಾರ ಇಲಾಖೆ ಜಂಟಿ ರಿಜಿಸ್ಟಾರ್ ಅವರಿಗೆ ಮನವಿ ನೀಡಿ ಚುನಾವಣಾಧಿಕಾರಿ ರಾಜಣ್ಣ ಅವರನ್ನು ಅಮಾನತ್ತು ಮಾಡಿ ನ್ಯಾಯ ಒದಗಿಸಿ ಕೊಡಬೇಕೆಂದು ಮನವಿ ಮಾಡಿದರು. ಇಂದಿನ ಚುನಾವಣೆಗೆ ಮಾಜಿ ಅಧ್ಯಕ್ಷ ಕೃಷ್ಣ.ಎನ್, ಬಸವರಾಜು, ದೇವರಾಜು.ಯು.ಡಿ, ಕುಮಾರ. ಹೆಚ್. ಎಸ್ ಹಾಗೂ ಹೇಮಾವತಿ ಗೈರಾಗಿದ್ದರು.

ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಭೂಮಿ ಪೂಜೆ ನೆರವೇರಿಸಿದರು.

ನಂಜನಗೂಡು, ಮೇ 13– ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಅವರು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಗತಿ ಕಾಲೋನಿ ಅಭಿವೃದ್ಧಿ ಯೋಜನೆಗೆ 7 ಕೋಟಿ ಅನುದಾನ ನೀಡಿದ್ದು, ಬದನವಾಳು, ವೀರೇಗೌಡನ ಹುಂಡಿ ಗ್ರಾಮಗಳಲ್ಲಿ ಎಸಿಪಿ ಕಾಂಕ್ರೀಟ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ತಾಲೂಕಿನ ಬದನವಾಳು ಗ್ರಾಮದಲ್ಲಿ ಮಂಗಳವಾರ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಸುದ್ದಿಗಾರರೊಂದಿಗೆ ಮಾತ ನಾಡಿದ ಅವರು, ಕ್ಷೇತ್ರಕ್ಕೆ ಬಿಡುಗಡೆಯಾಗಿರುವ ಎಸ್‌ಇಪಿ ಅನುದಾನದಲ್ಲಿ ತಾಲೂಕಿನ ವೀರೇಗೌಡನಹುಂಡಿ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ರಸ್ತೆ, ಚರಂಡಿ ಸೇರಿದಂತೆ ಇನ್ನಿತರ ಮೂಲ ಸೌಲಭ್ಯ ಅಭಿವೃದ್ಧಿ ಪಡಿಸಲಾಗುವುದು. ಗ್ರಾಮದ ಮತ್ತೊಂದು ಬೀದಿಯನ್ನು 40 ಲಕ್ಷ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿಪಡಿಸಲಾಗುವುದು. ಅಲ್ಲದೇ ಬದನವಾಳು ಗ್ರಾಮದ ಮುಸ್ಲಿಂ ಜನಾಂಗದ ಬೀದಿಯನ್ನು 25 ಲಕ್ಷ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿಪಡಿಸಲಾಗುವುದು. ವೀರೇಗೌಡನಹುಂಡಿ ಗ್ರಾಮದ ಕನಕ ಭವನದ ಮುಂದುವರೆದ ಕಾಮಗಾರಿಗೆ ಗ್ರಾಮಸ್ಥರು ಬೇಡಿಕೆ ಸಲ್ಲಿಸಿದ್ದಾರೆ. ಶೀಘ್ರ ಅನುದಾನ ನೀಡಲಾಗುವುದು. ಜೊತೆಗೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಕ್ಷೇತ್ರಕ್ಕೆ ಭೇಟಿ ನೀಡಿದ ಸಂದರ್ಭ ಗ್ರಾಮಗಳಲ್ಲಿ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಿಗೆ ಹೆಚ್ಚಿನ ಅನುದಾನ ಹಾಗೂ ನಗರದ ಅಂಬೇಡ್ಕರ್ ಭವನದ ಅಭಿವೃದ್ಧಿಗೆ ಅನುದಾನದ ಬೇಡಿಕೆ ಸಲ್ಲಿಸಿದ್ದು, ಸಚಿವರು ನಮ್ಮ ಮನವಿಗೆ ಸ್ಪಂದಿಸಿದ್ದಾರೆ. ದೇವನೂರು ಏತ ನೀರಾವರಿ ಯೋಜನೆ ಕಾಮಗಾರಿಗೆ ಶೀಘ್ರ ಚಾಲನೆ ನೀಡುವ ಮೂಲಕ ಈ ಭಾಗವನ್ನು ಹಸಿರೀಕರಣಗೊಳಿಸಲಾಗುವುದು ಎಂದರು.

ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಎಸ್ಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಣ್ಣ, ತಾಪಂ ಮಾಜಿ ಸದಸ್ಯರಾದ ಬಿ.ಎಸ್.ರಾಮು, ವೀರೇಶ್ ಮುಖಂಡರಾದ ವಿಜಯ್ ಕುಮಾರ್, ರಂಗದಾಸು, ಶಿವಸ್ವಾಮಿ, ವಾಲೆ ನಾಗರಾಜು, ಪ್ರಭುಸ್ವಾಮಿ, ಮಹೇಶ್, ಬಸವಣ್ಣ, ಹುಚ್ಚೇಗೌಡ, ಸೋಮು, ಸುರೇಶ್, ದೊರೆಸ್ವಾಮಿ ಉಪಸ್ಥಿತರಿದ್ದರು.

ಕೋಟೆಯಲ್ಲಿ ಅಂತರರಾಷ್ಟ್ರೀಯ ಶುಶ್ರೂಷಕಿಯರ ದಿನಾಚರಣೆ



ಶುಶ್ರೂಷಕಿಯರ ದಿನಾಚರಣೆಯಲ್ಲಿ ಪರಮೇಶ್ ಹಾಗೂ ಅಂಬಿಕಾ ಅವರನ್ನು ಸನ್ಮಾನಿಸಲಾಯಿತು.

ಹೆಚ್.ಡಿ.ಕೋಟೆ, ಮೇ 13– ಖ್ಯಾತ ಶುಶ್ರೂಷಕಿ ಫ್ಲಾರೆನ್ಸ್ ನೈಟಿಂಗೇಲ್ ಅವರ ಆದರ್ಶವನ್ನು ಎಲ್ಲಾ ಶುಶ್ರೂಷಕಿಯರು ಜೀವನದಲ್ಲಿ ಅವಡಿಸಿಕೊಂಡು ರೋಗಿಗಳ ಸೇವೆಯಲ್ಲಿ ತೊಡಗಬೇಕು ಎಂದು ಲಯನ್ಸ್ ಅಧ್ಯಕ್ಷ ಬೀಚನಹಳ್ಳಿ ಭಾಸ್ಕರ್ ತಿಳಿಸಿದರು.

ಪಟ್ಟಣದ ಆರೋಗ್ಯಾಧಿಕಾರಿಗಳ ಕಚೇರಿ ಆವರಣದಲ್ಲಿ ನಡೆದ ಹೆಚ್.ಡಿ. ಕೋಟೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಲಯನ್ಸ್ ಸಂಸ್ಥೆ ಹೆಚ್.ಡಿ.ಕೋಟೆ ಸಂಯುಕ್ತಾಶ್ರಯದಲ್ಲಿ ನಡೆದ ಅಂತರರಾಷ್ಟ್ರೀಯ ಶುಶ್ರೂಷಕಿಯರ ದಿನಾಚರಣೆ ಅಂಗವಾಗಿ ಶುಶ್ರೂಷಕಿಯರಿಗೆ ಗುಲಾಬಿ ಹೂ ನೀಡಿ ಅವರು ಮಾತನಾಡಿದರು.

ರೋಗಿಗಳ ಆರೈಕೆಯಲ್ಲಿ ಶುಶ್ರೂಷಕಿಯರು ಹೆಚ್ಚಿನ ಕಾಳಜಿ ವಹಿಸಿ ರೋಗಿಯನ್ನು ಗುಣಪಡಿಸುವಲ್ಲಿ ಮುಖ್ಯ ಪಾತ್ರ ವಹಿಸುತ್ತಾರೆ. ರೋಗಿಗಳನ್ನು ಕರುಣೆ ಮತ್ತು ಅನುಕಂಪದಿಂದ ಗುಣಪಡಿಸುವ ನಿಮ್ಮನ್ನು 2ನೇ ತಾಯಿ ಎಂದು ಸಮಾಜದಲ್ಲಿ ಗುರುತಿಸುತ್ತಾರೆ ಎಂದರು.

ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್ ಮಾತನಾಡಿ, ಶುಶ್ರೂಷಕಿ ಫ್ಲಾರೆನ್ಸ್ ನೈಟಿಂಗೇಲ್ ಅವರು ವೈದ್ಯಕೀಯ ಕ್ಷೇತ್ರದಲ್ಲಿ ಸಮರ್ಪಕ ವೈದ್ಯಕೀಯ ಸೇವೆ ಇಲ್ಲದ ಸಂದರ್ಭ ಗಾಯಗೊಂಡ ಸೈನಿಕರಿಗೆ ನೀಡಿದಂತಹ ಚಿಕಿತ್ಸೆ ಹಾಗೂ ಅವರ ಸೇವೆಯನ್ನು ಪರಿಗಣಿಸಿ ಅವರ ಹುಟ್ಟುಹಬ್ಬವನ್ನು ಅಂತರರಾಷ್ಟ್ರೀಯ ಶುಶ್ರೂಷಕಿಯರ ದಿನಾಚರಣೆಯಾಗಿ ಆಚರಿಸಲಾಗುತ್ತಿದೆ. ರೋಗಿಗಳನ್ನು ಗುಣಪಡಿಸುವಲ್ಲಿ ವೈದ್ಯರಷ್ಟೆ ಶುಶ್ರೂಷಕಿಯರ ಪಾತ್ರ ಮುಖ್ಯ ಎಂದರು.

ಇದೇ ವೇಳೆ ಶುಶ್ರೂಷಕರಾದ ಪರಮೇಶ್ ಹಾಗೂ ಅಂಬಿಕಾ ಅವರನ್ನು ಸನ್ಮಾನಿಸಲಾಯಿತು. ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಶ್ರೀನಿವಾಸ್, ಡಾ.ಸೋಮಣ್ಣ, ವಕೀಲ ನಾರಯಣ ಗೌಡ, ವರ್ತಕರ ಸಂಘದ ಅಧ್ಯಕ್ಷ ವಿನಯ್, ತಾಲೂಕು ಕಸಾಪ ಅಧ್ಯಕ್ಷ ಪ್ರಮೋದ್, ಶುಶ್ರೂಷಕಿಯರಾದ ಮಧು ಮಾಲತಿ, ಪರಿಮಳ ಗಾಳಂಕಿ, ಮೀನಾಕ್ಷಿ, ಶೃತಿ, ಮಮತಾ, ರೋಜಾ, ಸೌಮ್ಯ, ಮಾಯಮ್ಮ, ಮಂಜುಳಾ, ಜ್ಯೋತಿ, ಸರೋಜಿನಿ, ಕವಿತಾ, ಸಿಬ್ಬಂದಿಗಳಾದ ನಾಗೇಂದ್ರ, ಪ್ರಶಾಂತ್, ವನಸಿರಿ ಉಮೇಶ್, ರವಿರಾಜ್, ಸೇರಿದಂತೆ ಇನ್ನಿತರರಿದ್ದರು.

ನಂಜನಗೂಡು ನಗರಸಭೆ ಸಾಮಾನ್ಯ ಸಭೆ

13 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಅನುಮೋದನೆ



ನಂಜನಗೂಡಿನ ನಗರಸಭೆಯಲ್ಲಿ ಸಾಮಾನ್ಯ ಸಭೆ ನಡೆಯಿತು.

ನಂಜನಗೂಡು, ಮೇ 13– ನಗರದ ನಗರಸಭೆ ಸಭಾಂಗಣದಲ್ಲಿ ಮಂಗಳವಾರ ನಗರಸಭಾಧ್ಯಕ್ಷ ಶ್ರೀಕಂಠಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ 46 ವಿಷಯಗಳ ಬಗ್ಗೆ ತೀವ್ರ ಚರ್ಚೆ ನಡೆದು, ಹಲವು ನಿರ್ಣಯಗಳನ್ನು ಕೈಗೊಳ್ಳಲಾಯಿತು.

ನಗರದ 31 ವಾರ್ಡ್‌ಗಳ ಅಭಿವೃದ್ಧಿ ಮತ್ತು ಸಮಸ್ಯೆಗಳ ಬಗ್ಗೆ ಸದಸ್ಯರು ತೀವ್ರ ಚರ್ಚೆ ನಡೆಸಿ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಅನುಮೋದನೆ ಪಡೆದುಕೊಂಡರು. ಪ್ರತಿ ವಾರ್ಡ್‌ಗಳ ಮೂಲ ಸೌಕರ್ಯ ಅಭಿವೃದ್ಧಿಗಾಗಿ ತಲಾ 10 ಲಕ್ಷ ಅನುದಾನ ನೀಡಲು ತೀರ್ಮಾನಿಸಲಾಯಿತು.

ನಗರದ ಅಭಿವೃದ್ಧಿ ಕಾಮಗಾರಿಗಳಿಗಾಗಿ ನಗರಸಭಾ ನಿಧಿಯಿಂದ 7.5 ಕೋಟಿ, 15ನೇ ಹಣಕಾಸು ನಿಧಿಯಿಂದ 3 ಕೋಟಿ, ಎಸ್‌ಎಫ್‌ಸಿ ನಿಧಿಯಿಂದ 50 ಲಕ್ಷ ಹಾಗೂ ಇತರೆ ಉಳಿಕೆ ಅನುದಾನದಿಂದ 1 ಕೋಟಿ, ಒಟ್ಟಾರೆ ಅಂದಾಜು 13 ಕೋಟಿ ರೂ.ಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ನಗರಸಭಾ ಸದಸ್ಯರು ಅನುಮೋದನೆ ನೀಡಿದರು.

ಸದಸ್ಯ ಹೆಚ್.ಎಸ್.ಮಹದೇವಸ್ವಾಮಿ ಮಾತನಾಡಿ, ನಗರದ ನ್ಯಾಯಾಲಯ, ದೇವಿರಮ್ಮನಹಳ್ಳಿ ವೃತ್ತ, ಚಿಂತಾಮಣಿ ಗಣಪತಿ ದೇವಾಲಯದ ಬಸ್ ನಿಲ್ದಾಣದ ಶೆಲ್ಟರ್‌ಗಳ ಬಳಿ ಅನಧಿಕೃತವಾಗಿ ಹಾಲಿನ ಬೂತ್‌ಗಳು ನಿರ್ಮಾಣವಾಗಿವೆ. ಬೂತ್ ನಿರ್ಮಾಣಕ್ಕೆ ನಗರಸಭೆಗೆ ಅರ್ಜಿ ಸಲ್ಲಿಸಿದ ದಾಖಲೆ ಇಲ್ಲ. ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು. ಈ ವೇಳೆ ಸದಸ್ಯರಾದ ಸಿದ್ದರಾಜು, ಖಾಲೀದ್ ಅಹಮ್ಮದ್ ಸಭೆಯ ಬಾವಿಗೆ ಇಳಿದು ಪ್ರತಿಭಟನೆ ನಡೆಸಿದರು.

ಆಯುಕ್ತ ವಿಜಯ್ ಕುಮಾರ್ ಮಾತನಾಡಿ, ಸಭೆಯಲ್ಲಿ ಅಧ್ಯಕ್ಷ ಶ್ರೀಕಂಠಸ್ವಾಮಿ, ಉಪಾಧ್ಯಕ್ಷೆ ರಿಹಾನ ಬಾನು ಹಾಗೂ ಸದಸ್ಯರು ಅಭಿವೃದ್ಧಿ ಕಾಮಗಾರಿಗಳಿಗೆ ಒಪ್ಪಿಗೆ ನೀಡಿದ್ದು, ಟೆಂಡರ್ ಪ್ರಕ್ರಿಯೆ ಕೈಗೊಂಡು ಕಾಮಗಾರಿ ಆರಂಭಿಸಲಾಗುವುದು. ಶಾಸಕ ದರ್ಶನ್ ಅವರ ಮಾರ್ಗ ದರ್ಶನದಂತೆ ನಗರದ ಅಭಿವೃದ್ಧಿಗೆ ಹಲವಾರು ಯೋಜನೆಗಳಿಗೆ ಒಪ್ಪಿಗೆ ಪಡೆಯಲಾಗಿದೆ ಎಂದರು.

ನಗರದ ರಾಷ್ಟ್ರಪತಿ ರಸ್ತೆಯ ಭಾರ್ಗವಿ ಚಿತ್ರಮಂದಿರದ ಬಳಿ ರೈಲ್ವೆ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ಬಗ್ಗೆ ಮಾತನಾಡಿ ಮೇಲ್ಸೇತುವೆ ವಿಚಾರವು ಬಹಳ ಸೂಕ್ಷ್ಮವಾಗಿದ್ದು, ರೈಲ್ವೆ ಇಲಾಖೆಯಿಂದ ಹೆಚ್ಚಿನ ಮಾಹಿತಿ ಪಡೆದು, ಮುಂದಿನ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದು. ನಗರದ ಆರ್‌ಪಿ ಮತ್ತು ಎಂಜಿಎಸ್ ರಸ್ತೆಗಳಲ್ಲಿ ಫುಟ್‌ಪಾತ್ ತೆರವು ಕಾರ್ಯವನ್ನು ಕೈಗೊಂಡು ಪಾದಚಾರಿಗಳ ಸುಗಮ ಸಂಚಾರಕ್ಕೆ ಸುಪ್ರೀಂ ಕೋರ್ಟ್ ಆದೇಶದಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ಸದಸ್ಯರಾದ ಮೀನಾಕ್ಷಿ ವಿಜಯ್ ಕುಮಾರ್, ಮಂಗಳಮ್ಮ ಮಹದೇವ ಪ್ರಸಾದ್, ಕಪಿಲೇಶ್, ಗಂಗಾಧರ್, ಮಹೇಶ್, ಯೋಗೇಶ್, ಶ್ವೇತ ಲಕ್ಷ್ಮಿ, ಸಿದ್ದಿಕ್, ಕೆ.ಎಂ.ಬಸವರಾಜು, ರವಿ, ಪ್ರದೀಪ್, ನಗರಸಭೆ ವ್ಯವಸ್ಥಾಪಕ ಹೇಮಕುಮಾರ್, ಅಧಿಕಾರಿಗಳಾದ ಮೈತ್ರಾದೇವಿ, ಜೆಸ್‌ಪಾಲ್ ಸಿಂಗ್, ಎಇಇ ಶಮಂತ್ ಉಪಸ್ಥಿತರಿದ್ದರು.

ಸನ್ಮಾನ



ಸರಗೂರಿನ ವಿವೇಕಾನಂದ ಸ್ಮಾರಕ ಆಸ್ಪತ್ರೆಯಲ್ಲಿ ನಡೆದ ಅಂತರರಾಷ್ಟ್ರೀಯ ಶುಶ್ರೂಷಕ ದಿನಾಚರಣೆಯಲ್ಲಿ ಶುಶ್ರೂಷಕರಾದ ಶ್ರೀಪಾಲ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಸ್ವಾಮಿ ವಿವೇಕನಂದ ಯೂತ್ ಮೂವ್‌ಮೆಂಟ್‌ನ ಮುಖ್ಯಸ್ಥರಾದ ಡಾ.ಕುಮಾರ್, ಶುಶ್ರೂಷಕ ಅಧಿಕಾರಿ ಮಧುಶ್ರೀ, ಆಸ್ಪತ್ರೆ ಉಪನಿರ್ದೇಶಕ ಡಾ.ಶಂಕರ್ ಎಚ್.ಕೆ, ಆಸ್ಪತ್ರೆ ವ್ಯವಸ್ಥಾಪಕಿ ಸಂಧ್ಯಾ ಬಿ.ಜಿ, ಆಸ್ಪತ್ರೆ ವೈದ್ಯ ವೃಂದ, ಶುಶ್ರೂಷಕರು ಮತ್ತು ಸಿಬ್ಬಂದಿ ಇದ್ದರು.

ಎಲ್ಲರನ್ನೂ ಲಿಂಗವಂತರನ್ನಾಗಿ ಮಾಡಿದ ಮಹಾಪುರುಷ ಬಸವಣ್ಣ

ಅಲ್ಲಮ ಮಹಾಪ್ರಭು ಶೂನ್ಯ ಪೀಠಾಧ್ಯಕ್ಷ ಶ್ರೀಗೌರಿಶಂಕರ ಸ್ವಾಮೀಜಿ



ಬಸವ ಬಳಗದ ಅಧ್ಯಕ್ಷ ಜ್ಯೋತಿ ಪರಮೇಶ್ ಪಟೇಲ್ ಅವರನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ಮೇ 13– ಬಸವಾದಿ ಶರಣರು ಅನುಭವ ಮಂಟಪ ಕಟ್ಟಿ ಎಲ್ಲರನ್ನೂ ಒಗ್ಗೂಡಿಸಿ ಲಿಂಗವಂತರನ್ನಾಗಿ ಮಾಡಿದ ಮಹಾಪುರುಷ ಬಸವಣ್ಣ ಅವರಿಗೆ ಯಾರು ಕಿರುಕುಳ ಕೊಟ್ಟರೋ ಅದೇ ಮತೀಯವಾದಿಗಳು ವಚನ ದರ್ಶನ ಪುಸ್ತಕ ಹೊರ ತಂದಿದ್ದಾರೆ ಎಂದು ತಾಲೂಕಿನ ಮದ್ಗಾರಲಿಂಗಯ್ಯನ ಹುಂಡಿ ಅಲ್ಲಮ ಮಹಾಪ್ರಭು ಶೂನ್ಯ ಪೀಠಾಧ್ಯಕ್ಷ ಶ್ರೀಗೌರಿಶಂಕರ ಸ್ವಾಮೀಜಿ ಆರೋಪಿಸಿದರು.

ಪಟ್ಟಣದ ಎಪಿಎಂಸಿ ಎದುರಿನ ಜೆಎಎಲ್‌ಎಂ ಕಚೇರಿ ಆವರಣದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾದಿಂದ ಹಮ್ಮಿಕೊಳ್ಳಲಾಗಿದ್ದ ಬಸವ ಜಯಂತಿ ಹಾಗೂ ವಚನ ದರ್ಶನ ಮಿಥ್ಯ ಗಿ/ಖ ಸತ್ಯ ಗ್ರಂಥ ಬಿಡುಗಡೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಬಸವಾದಿ ಶರಣ ವಚನ ಸಾಹಿತ್ಯಕ್ಕೆ ಇತ್ತೀಚಿನ ದಿನಗಳಲ್ಲಿ ಎಲ್ಲಾ ಧರ್ಮೀಯರು ಮಾರು ಹೋಗಿದ್ದಾರೆ. ಸಾಮಾಜಿಕ, ರಾಜಕೀಯ ಸೇರಿದಂತೆ ಯಾವುದೇ ಕಾರ್ಯಕ್ರಮದಲ್ಲಿ ಯಾರೊಬ್ಬರೂ ವಚನ ಹೇಳದೇ ತಮ್ಮ ಮಾತನ್ನು ಮುಗಿಸುವುದಿಲ್ಲ. ವಚನ ಅಷ್ಟರ ಮಟ್ಟಿಗೆ ಪ್ರಾಮುಖ್ಯತೆ ಪಡೆದುಕೊಂ ಡಿದೆ. ಬಸವಣ್ಣರವರ ಕಾಲದಲ್ಲಿ ವಿದ್ಯಾವಂತರ ಸಂಖ್ಯೆ ಕಡಿಮೆ ಇತ್ತು. ಅಂದು ಬಸವಣ್ಣರವರು ಮಾಡಿದ ಮಹತ್ತರ ಕೆಲಸದಿಂದ ವಯಸ್ಕರು ಸಹ ಶಿಕ್ಷಣ ಪಡೆಯುವಂತಾಯಿತು. ಅಂದು ಅವರು ಹಾಕಿಕೊಟ್ಟ ಭದ್ರ ಬುನಾದಿಯಿಂದ ದೇಶದಲ್ಲಿ ಶಿಕ್ಷಿತ ಸಮೂಹ ಹೆಚ್ಚಿದೆ. ಅಲ್ಲದೇ ಶಿಕ್ಷಣದಿಂದಾಗಿ ಎಲ್ಲಾ ಜಾತಿ, ಧರ್ಮದವರಿಗೂ ಕನಿಷ್ಟ ತಿಳುವಳಿಕೆ ಬರುವಂತಾಯಿತು. ಹಾಗಾಗಿ ಎಲ್ಲಾ ಜಾತಿ ಧರ್ಮಕ್ಕೂ ನೆಲೆಗಟ್ಟು ಕಲ್ಪಿಸಿಕೊಟ್ಟ ವಿಶ್ವಗುರು ಬಸವಣ್ಣನವರು ಜಾಗತಿಕ ನಾಯಕರಾಗಿ ಹೊರ ಹೊಮ್ಮಲು ಸಾಧ್ಯವಾಯಿತು ಎಂದರು.

ಧೈರ್ಯವಿದ್ದರೆ ನೇರವಾಗಿ ಪ್ರಶ್ನೆ ಮಾಡಿ: ಶೂನ್ಯ ಪೀಠದ ಶ್ರೀಗಳು ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದಾರೆ ಎಂದು ಕೆಲವು ಅವಿವೇಕಿಗಳು, ಮೂರ್ಖರು ಹೋಟೆಲ್‌ನಲ್ಲಿ ಕುಳಿತು ಚರ್ಚೆ ಮಾಡುತ್ತಿದ್ದಾರೆ. ನಾನೇನು ಸಮಾಜ ಒಡೆಯುವ ಕೆಲಸ ಮಾಡಿಲ್ಲ. ನಿಮಗೆ ಧೈರ್ಯ, ತಾಕತ್ ಇದ್ದರೆ ಬೇರೆಲ್ಲೂ ಚರ್ಚೆ ಮಾಡದೇ ನೇರವಾಗಿ ನಮ್ಮನ್ನೇ ಪ್ರಶ್ನೆ ಮಾಡಿ ಎಂದು ಗರಂ ಆದ ಸ್ವಾಮೀಜಿ, ನಮ್ಮದು ವಿರಕ್ತ ಮಠ, ಶರಣ ಪರಂಪರೆಯ ಮಠ, ಬಸವಣ್ಣನವರ ಕಾಲದಲ್ಲಿ ಅನುಭವ ಮಂಟಪದ ಕ್ರಾಂತಿಯಾದಾಗ ಜಯತೀರ್ಥ ಸ್ವಾಮಿಗಳು ಉತ್ತರದಿಂದ, ದಕ್ಷಿಣಾಭಿಮುಖವಾಗಿ ಬಂದು ಮಠ ಸ್ಥಾಪನೆ ಮಾಡಿದರು. ಶರಣ ಪರಂಪರೆಯಲ್ಲಿ ನಾನಿದ್ದೇನೆ. ಮೌಢ್ಯ ಪರಂಪರೆಯಲ್ಲಿ ನಾನು ಬಂದಿಲ್ಲ. ಚಿಕ್ಕ ವಯಸ್ಸಿನಿಂದಲೇ ಆಚಾರ ವಿಚಾರ ಕಲಿತಿರುವುದರಿಂದ ಶರಣ ಪರಂಪರೆ ಬಗ್ಗೆ, ಮೌಢ್ಯಗಳ ವಿರುದ್ಧವೇ ಮಾತನಾಡಬೇಕಾಗುತ್ತದೆ. ಮೌಢ್ಯಗಳ ವಿರುದ್ಧ ಮಾತನಾಡಿ ಲಿಂಗಾಯತ ಧರ್ಮದ ಪರವಾಗಿ ಮಾತನಾಡಿದರೆ, ತಿ.ನರಸೀಪುರಕ್ಕೆ ಬಂದು ಗೌರಿಶಂಕರ ಶ್ರೀಗಳು ಲಿಂಗಾಯತರನ್ನು 2 ಬಣ ಮಾಡಿದರು ಎಂದು ಮಾತನಾಡುತ್ತಾರೆ. ವೀರಶೈವ ಲಿಂಗಾಯತ ಮಹಾಸಭಾ 2 ಬಣವಾಯ್ತು. ಹಾಗಾಗಿ ಈಗ ಜಾಗತಿಕ ಲಿಂಗಾಯತ ಮಹಾಸಭಾಗೆ ಬಂದಿದ್ದಾರೆ ಎಂದು ಹೇಳುತ್ತಾರೆ. ಇದಕ್ಕೆಲ್ಲಾ ಉತ್ತರ ಕೊಡುತ್ತೇನೆ. ನಾನು ಮಹಾಸಭೆಗೆ ಬರಬೇಕೆಂದು ಬಂದಿಲ್ಲ. ಬಸವಣ್ಣರ ಆದರ್ಶ, ತತ್ವ, ಸಿದ್ಧಾಂತವನ್ನು ಒಪ್ಪಿ ಶರಣ ಪರಂಪರೆಯಿಂದ ಬೆಳೆದು ಬಂದಿರುವುದರಿಂದ ನೀವು ಬರಬೇಕೆಂದು ಬಲವಂತವಾಗಿ ಕರೆದುಕೊಂಡು ಬಂದಿದ್ದಾರೆ. ಜಾಗತಿಕ ಲಿಂಗಾಯತ ಮಹಾಸಭಾ ಕಳೆದ 3 ವರ್ಷಗಳಿಂದ ಕಾರ್ಯೋನ್ಮುಖವಾಗಿ ಕೆಲಸ ಮಾಡುತ್ತಿದೆ. ಲಿಂಗಾಯತ ಸಮಾಜ ಹಾಳಾಗಬಾರದೆಂದು ನಾನು ಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ವೀರಶೈವ ಮಹಾಸಭಾವನ್ನು ಒಗ್ಗೂಡಿಸಿ ಒಟ್ಟಾಗಿ ತೆಗೆದುಕೊಂಡು ಹೋಗುವ ಕೆಲಸ ಮಾಡಿದ್ದೇನೆ. ಇಲ್ಲಿರುವವರು ಅಲ್ಲಿ, ಅಲ್ಲಿರುವವರು ಇಲ್ಲಿ ಡೈರೆಕ್ಟರ್‌ಗಳಾಗಿದ್ದಾರೆ. ಹಾಗಾಗಿ ಇಲ್ಲಿ 2 ಬಣಗಳಾಗಿಲ್ಲ. ಎರಡೂ ಸಂಘಗಳೂ ಪ್ರತ್ಯೇಕವಾಗಿ ತಮ್ಮ ಕೆಲಸದಲ್ಲಿ ನಿರತವಾಗಿವೆ ಎಂದರು.

ಆದರೆ ಅಲ್ಲಿ ಮೌಢ್ಯಗಳಿವೆ. ಇಲ್ಲಿ ಮೌಢ್ಯಗಳಿಲ್ಲ. ಇಲ್ಲಿ ಬಸವ ಅನುಯಾಯಿಗಳು, ಬಸವಾದಿ ಶರಣರ ಚಿಂತನೆಗಳು ಮಾತ್ರವೇ ಪಕ್ವವಾಗಿವೆ ಇದರಲ್ಲಿ ತಪ್ಪೇನು ಎಂದು ಪ್ರಶ್ನಿಸಿದರು. ಜಾಗತಿಕ ಲಿಂಗಾಯತ ಮಹಾಸಭಾ ಮೈಸೂರು ಜಿಲ್ಲಾಧ್ಯಕ್ಷ ಶರಣ ಮಹದೇವಪ್ಪ, ತಾಲೂಕು ಅಧ್ಯಕ್ಷ ತೊಟ್ಟವಾಡಿ ರವಿ ಮಾತಾಡಿದರು. ಮಹಾಸಭಾ ಕಾರ್ಯದರ್ಶಿ ಟಿ.ಎನ್. ನಾಗರಾಜು, ಅಕ್ಕಮಹಾದೇವಿ ಅಭಿವೃದ್ಧಿ ಸಂಘದ ಅಧ್ಯಕ್ಷ ಕೆ.ಜಿ.ಶಿವಪ್ರಸಾದ್, ಕಾರ್ಯದರ್ಶಿ ಬಿ.ಎಂ. ಮರಪ್ಪ, ಬಸವ ತತ್ವದ ಪ್ರಚಾರಕ ಚೌಹಳ್ಳಿ ಲಿಂಗರಾಜು, ಬಸವ ಬಳಗದ ಜ್ಯೋತಿ ಪರಮೇಶ್ ಪಟೇಲ್, ಡೈರಿ ಅಧ್ಯಕ್ಷ ಮಹದೇವ ಸ್ವಾಮಿ, ಕುಮಾರ್, ಕುರುಬೂರು ಜಗದೀಶ್, ಕು.ಶಿ ಬೈಂಗೇಶ್, ಡಿ.ಎಲ್. ಮಹದೇವಪ್ಪ, ಬೆನಕನಹಳ್ಳಿ ವಿಜಯಕುಮಾರ್, ಲತಾ, ವಕೀಲ ಜ್ಞಾನೇಂದ್ರ ಮೂರ್ತಿ, ಕೆಬ್ಬೆಹುಂಡಿ ಸೋಮಶೇಖರ್ ಸೇರಿದಂತೆ ಮತ್ತಿತರರಿದ್ದರು

ಹಣಕ್ಕಾಗಿ ಮಹಿಳೆಯನ್ನು ಪೀಡಿಸುತ್ತಿದ್ದ ವ್ಯಕ್ತಿ ಬಂಧನ



ಹುಣಸೂರು, ಮೇ 13– ಹಣಕ್ಕಾಗಿ ಮಹಿಳೆಯನ್ನು ಪೀಡಿಸುತ್ತಿದ್ದ ವ್ಯಕ್ತಿಯನ್ನು ಹುಣಸೂರು ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ವಿಜಯನಗರದ ಹೊಸಪೇಟೆಯ ಹೂವಿನ ಹಡಗಲಿ ತಾಲೂಕಿನ ಸೋಗಿ ಗ್ರಾಮದ ನಿವಾಸಿ, ಗದಗ್ ಎಪಿಎಂಸಿ ಯಾರ್ಡ್ ಹೋಟೆಲ್ ಕಾರ್ಮಿಕ ವೀರೇಶ್‌ಕುಮಾರ್(38) ಬಂಧಿತ ಆರೋಪಿ. ಈತ ಕೆಲ ದಿನಗಳ ಹಿಂದೆ ಫೋನ್ ಮೂಲಕ ಹುಣಸೂರಿನ ಮಹಿಳೆಯನ್ನು ಪರಿಚಯ ಮಾಡಿಕೊಂಡಿದ್ದಾನೆ ಎನ್ನಲಾಗಿದೆ. ಬಳಿಕ ಮಹಿಳೆಯ ಸ್ನೇಹ ಸಂಪಾದಿಸಿ ಆಕೆಯ ಕುಟುಂಬದವರ ಸಂಪೂರ್ಣ ಮಾಹಿತಿ ಹಾಗೂ ಫೋಟೋ ಪಡೆದಿದ್ದಾನೆ. ನಂತರ 1.5 ಲಕ್ಷ ನೀಡುವಂತೆ ಒತ್ತಾಯಿಸಿ, ಕೊಡದಿದ್ದರೇ ನಿಮ್ಮ ಮನೆಯವರ ಫೋಟೋ ಸೇರಿದಂತೆ ಮಾಹಿತಿಯನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಯ ಬಿಡುವುದಾಗಿ ಬೆದರಿಕೆ ಹಾಕಿ ಮಾನಸಿಕ ಹಿಂಸೆ ನೀಡಿದ್ದಾನೆ. ಇದರಿಂದ ಬೇಸತ್ತ ಮಹಿಳೆ ಹುಣಸೂರು ಗ್ರಾಮಾಂತರ ಠಾಣೆಗೆ ದೂರು ನೀಡಿದ ಹಿನ್ನೆಲೆಯಲ್ಲಿ ಸಿಪಿಐ ಮುನಿಯಪ್ಪ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿ ವೀರೇಶ್ ಕುಮಾರ್ ಮೊಬೈಲ್ ಜಾಡು ಹಿಡಿದು ಗದಗ್‌ನಲ್ಲಿ ಆರೋಪಿಯನ್ನು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಈ ಸಂಬಂಧ ಹುಣಸೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಎ.ಎಸ್.ಮಧು ನಿಧನ



ಚುಂಚನಕಟ್ಟೆ, ಮೇ 13– ಸಾಲಿಗ್ರಾಮ ತಾಲೂಕಿನ ಅಂಕನಹಳ್ಳಿ ಗ್ರಾಮದ ಎ.ಎಸ್.ಮಧು(43) ಸೋಮವಾರ ಸಂಜೆ ನಿಧನರಾದರು.

ಮೃತರು ಪತ್ನಿ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸೇವಾ ಪ್ರತಿನಿಧಿ ಕೆ.ಪಿ.ಮೈನಾವತಿ ಮತ್ತು ಪುತ್ರಿ ಎಂ.ವಿದ್ಯಾದರೆ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮದ ಮೃತರ ಜಮೀನಿನಲ್ಲಿ ಮಂಗಳವಾರ ಮಧ್ಯಾಹ್ನ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಐ ತಂತ್ರಜ್ಞಾನದ ಸಮರ್ಥ ಬಳಕೆಯು ಸಿಎಫ್‌ಟಿಆರ್‌ಐ ಆದ್ಯತೆಯಾಗಲಿ

ಸಂಸ್ಥೆಯಲ್ಲಿ ರಾಷ್ಟ್ರೀಯ ತಂತ್ರಜ್ಞಾನ ದಿನಾಚರಣೆ ಉದ್ಘಾಟಿಸಿದ ಟೈ ಮೈಸೂರು ಅಧ್ಯಕ್ಷ ಭಾಸ್ಕರ್ ಕಳಲೆ ಆಶಯ

ಮೈಸೂರು,ಮೇ 13(ಪಿಎಂ)– ಪ್ರಸ್ತುತದಲ್ಲಿ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನವು ಪ್ರತಿಯೊಂದು ಉದ್ಯಮವನ್ನು ಮರು ರೂಪಿಸುತ್ತಿದೆ. ಆಹಾರ ಉದ್ಯಮವೂ ಇದರಿಂದ ಹೊರತಾಗಿಲ್ಲ. ಆಹಾರ ತಂತ್ರಜ್ಞಾನದಲ್ಲೂ ಇದು ಮಹತ್ತರ ಪಾತ್ರ ವಹಿಸುತ್ತದೆ. ಹೀಗಾಗಿ ಸಿಎಫ್‌ಟಿಆರ್‌ಐ ಸಹ ಎಐ ತಂತ್ರಜ್ಞಾನ ಸಮರ್ಥ ಬಳಕೆಗೆ ಆದ್ಯತೆ ನೀಡಬೇಕು ಎಂದು ಟೈ ಮೈಸೂರು (ದಿ ಇಂಡಸ್ ಎಂಟ್ರೆಪ್ರೆನರ್ಸ್) ಅಧ್ಯಕ್ಷ ಭಾಸ್ಕರ್ ಕಳಲೆ ಹೇಳಿದರು.

ಮೈಸೂರಿನ ಸಿಎಸ್‌ಐಆರ್–ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾಲಯ (ಸಿಎಫ್‌ಟಿಆರ್‌ಐ) ವತಿಯಿಂದ ಸಂಸ್ಥೆಯ ಚೆಲುವಾಂಬ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ತಂತ್ರಜ್ಞಾನ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸಿಎಫ್‌ಟಿಆರ್‌ಐನಲ್ಲಿ ಎಐ ತಂತ್ರಜ್ಞಾನವನ್ನು ಸಮರ್ಥವಾಗಿ ಬಳಸಿಕೊಳ್ಳುವ ನಿಟ್ಟಿನಲ್ಲಿ ಸಂಬಂಧಿಸಿದ ತಂತ್ರಜ್ಞಾನ ಸಂಸ್ಥೆಗಳ ಸಹಕಾರ ಪಡೆದುಕೊಳ್ಳಬೇಕು. ದತ್ತಾಂಶ ವಿಜ್ಞಾನಿಗಳನ್ನು ಬಳಸಿಕೊಳ್ಳಬೇಕು. ಜೊತೆಗೆ ಎಐ ಪ್ರಯೋಗಾಲಯಗಳನ್ನು ಆರಂಭಿಸಬೇಕು ಎಂದು ಸಲಹೆ ನೀಡಿದರು.

ಕೃತಕ ಬುದ್ಧಿಮತ್ತೆ ಆಧಾರಿತ ಆಹಾರ ಆವಿಷ್ಕಾರಗಳನ್ನು ಕೈಗೊಳ್ಳಲು ಸಿಎಫ್‌ಟಿಆರ್‌ಐ ಸಮರ್ಥವಾಗಿದೆ. ಏಕೆಂದರೆ ಅಗತ್ಯವಾದ ಸೌಕರ್ಯ, ದತ್ತಾಂಶ ಹಾಗೂ ವಿಜ್ಞಾನಿಗಳೂ ಸಂಸ್ಥೆಯಲ್ಲಿದ್ದಾರೆ. ಆಹಾರ ಸುರಕ್ಷತೆ, ಪೌಷ್ಟಿಕಾಂಶ ಸಂಶೋಧನೆ, ಆಹಾರ ಮಾದರಿಗಳ ವಿಶ್ಲೇಷಣೆ, ಆಹಾರ ತ್ಯಾಜ್ಯ ತಗ್ಗಿಸುವ ಪ್ರಕ್ರಿಯೆಗಳ ಸಂಬಂಧ ಎಐ ತಂತ್ರಜ್ಞಾನವನ್ನು ಬಳಸಿಕೊಳ್ಳಲು ಅವಕಾಶಗಳಿವೆ. ಪ್ರಸ್ತುತ ನಾವು ಆವಿಷ್ಕಾರ, ಉದ್ಯಮಶೀಲತೆ ಹಾಗೂ ಕೃತಕಬುದ್ಧಿಮತ್ತೆ ಅಗತ್ಯತೆಯ ಕಾಲಘಟ್ಟದಲ್ಲಿದ್ದೇವೆ ಎಂದರು.

ಏಳು ದಶಕಗಳಿಗೂ ಹೆಚ್ಚು ಕಾಲದಿಂದ ಆಹಾರ ಆವಿಷ್ಕಾರದಲ್ಲಿ ಸಿಎಫ್‌ಟಿಆರ್‌ಐ ಮಹತ್ವದ ಪಾತ್ರ ವಹಿಸುತ್ತಿದೆ. ಸಿಎಫ್‌ಟಿಆರ್‌ಐ ಒಂದು ಸಂಶೋಧನಾ ಸಂಸ್ಥೆಯಾಗಿ ರಾಷ್ಟ್ರದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡುತ್ತಿದೆ. ಆರಂಭದಿಂದಲೂ ಇದು ದೇಶದಲ್ಲಿ ಉಂಟಾಗುವ ಆಹಾರ ಸಂಬಂಧಿತ ಸಮಸ್ಯೆಗಳನ್ನು ಪರಿಹರಿಸಿದೆ. ಗ್ರಾಮೀಣ ಉದ್ಯಮಿಗಳಿಗೆ ಮೌಲ್ಯವರ್ಧಿತ ಉತ್ಪನ್ನಗಳನ್ನು ಕಲ್ಪಿಸುವುದರಿಂದ ಹಿಡಿದು ಅಪೌಷ್ಟಿಕತೆ ನಿವಾರಿಸುವವರೆಗೆ ಅಗಾಧವಾದ ಕೆಲಸಗಳನ್ನು ಮಾಡಿದೆ. ಪ್ರಸ್ತುತದ ಬದಲಾದ ಕಾಲಘಟ್ಟದಲ್ಲಿ ಹೆಚ್ಚುತ್ತಿರುವ ಜನಸಂಖ್ಯೆಗೆ ಆಹಾರ ಪೂರೈಸಲು ಸೂಕ್ತ ಪ್ರಯತ್ನಗಳು ನಡೆಯುತ್ತಿಲ್ಲ. ಇದು ವಿಜ್ಞಾನಕ್ಕಿಂತಲೂ ಹೆಚ್ಚಾಗಿ ಕಾರ್ಯತಂತ್ರದ ಆವಿಷ್ಕಾರವನ್ನು ಅಪೇಕ್ಷಿಸುತ್ತದೆ ಎಂದು ತಿಳಿಸಿದರು.

ರಾಷ್ಟ್ರೀಯ ತಂತ್ರಜ್ಞಾನ ದಿನವನ್ನು ಆಚರಿಸುವ ಸಂದರ್ಭದಲ್ಲಿ ಹೊಸ ತಂತ್ರಜ್ಞಾನಗಳ ಅಳವಡಿಕೆಗಾಗಿ ಹೊಸ ಸಹಯೋಗ ರೂಪಿಸುವ ಹಾಗೂ ಭಾರತವನ್ನು ಸ್ಮಾರ್ಟ್ ಆಹಾರ ವ್ಯವಸ್ಥೆಗಳ ಹೊಸ ಯುಗಕ್ಕೆ ಕೊಂಡೊಯ್ಯಲು ಸಿಎಫ್‌ಟಿಆರ್‌ಐ ಸನ್ನದ್ಧವಾಗಬೇಕಿದೆ. ಜಾಗತಿಕವಾಗಿ ಆಹಾರ ಉದ್ಯಮವು ಪ್ರಮುಖ ಬೆಳವಣಿಗೆ ಕಂಡಿದ್ದು, ಗ್ರಾಹಕರು ಪಾರದರ್ಶಕತೆ, ಸುಸ್ಥಿರತೆ ಬಯಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಆವಿಷ್ಕಾರ ಮಹತ್ವ ಪಡೆದಿದ್ದು, ಹಾಗಾಗಿ ಸಿಎಫ್‌ಟಿಆರ್‌ಐ ಸುಸ್ಥಿರ ಪ್ಯಾಕೇಜಿಂಗ್, ಸಸ್ಯ ಆಧಾರಿತ ಪರ್ಯಾಯಗಳು ಹಾಗೂ ಪೌಷ್ಟಿಕಾಂಶ ವಿಜ್ಞಾನದಲ್ಲಿ ಸಂಶೋಧನೆಯನ್ನು ವೇಗಗೊಳಿಸಲು ಮುಂದಾಗಬೇಕಿದೆ ಎಂದು ಹೇಳಿದರು.

ಕೃಷಿ, ಎಐ ತಂತ್ರಜ್ಞಾನ ಹಾಗೂ ವಿಜ್ಞಾನ ಸಂಸ್ಥೆಗಳೊಂದಿಗೆ ಸಹಯೋಗ ಹೊಂದಬೇಕಿದೆ. ವಿದ್ಯಾರ್ಥಿಗಳು ಹಾಗೂ ಉದ್ಯಮಿಗಳು ತಮ್ಮ ಆಲೋಚನೆಗಳನ್ನು ವ್ಯಕ್ತಪಡಿಸಲು ಮುಕ್ತ ವೇದಿಕೆಗಳನ್ನು ಕಲ್ಪಿಸಿಕೊಡಬೇಕಿದೆ. ಶೈಕ್ಷಣಿಕ, ನವೋದ್ಯಮಗಳು, ಕಾರ್ಪೋರೇಟ್‌ಗಳು ರೈತರು ಮತ್ತು ಗ್ರಾಹಕರು ಒಟ್ಟಾಗಿ ಪರಿಹಾರಗಳನ್ನು ಕಂಡುಕೊಳ್ಳುವ ಸಹಯೋಗಕ್ಕೆ ಭವಿಷ್ಯದಲ್ಲಿ ಮಹತ್ವ ದೊರೆಯಲಿದೆ. ಆಹಾರ ತಂತ್ರಜ್ಞಾನ ಸಂಬಂಧ ಟೈ ಸಂಸ್ಥೆಯ ಸ್ಟಾರ್ಟ್‌ಅಪ್‌ಗಳಿಗೆ ತಂತ್ರಜ್ಞಾನ ಪಾಲುದಾರರಾಗಲು ಸಿಎಫ್‌ಟಿಆರ್‌ಐ ಮುಂದಾಗಬಹುದು ಎಂದರು.

ಇದಕ್ಕೂ ಮುನ್ನ ಸಿಎಫ್‌ಟಿಆರ್‌ಐ ಟಿಟಿಬಿಡಿ ಮುಖ್ಯಸ್ಥ ಡಾ.ಅಶಿತೋಷ್ ಎ.ಇನಾಮ್‌ದಾರ್ ಮಾತನಾಡಿ, ಸಿಎಫ್‌ಟಿಆರ್‌ಐನಲ್ಲಿ 2024–2025ನೇ ಸಾಲಿನಲ್ಲಿ 82 ತಂತ್ರಜ್ಞಾನ ವರ್ಗಾವಣೆ ಪ್ರಕ್ರಿಯೆ ನಡೆದಿದೆ. ಈ ತಂತ್ರಜ್ಞಾನಗಳನ್ನು 144 ಕಂಪನಿಗಳು ಪರವಾಗಿ ಪಡೆದಿವೆ. ಇದರಿಂದ 14 ಕೋಟಿ ಆದಾಯವು ಸಂಸ್ಥೆಗೆ ಲಭ್ಯವಾಗಿದೆ ಎಂದು ಮಾಹಿತಿ ನೀಡಿದರು. ಸಿಎಫ್‌ಟಿಆರ್‌ಐ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್ ಸೇರಿದಂತೆ ಮತ್ತಿತರರು ಹಾಜರಿದ್ದರು.



ಮೈಸೂರಿನ ಸಿಎಫ್‌ಟಿಆರ್‌ಐ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ತಂತ್ರಜ್ಞಾನ ದಿನಾಚರಣೆಯಲ್ಲಿ ಸಿಎಫ್‌ಟಿಆರ್‌ಐ ಮತ್ತು ಮೂರು ಸಂಸ್ಥೆಗಳ ನಡುವೆ ವಿವಿಧ ಯೋಜನೆ ಸಂಬಂಧ ಒಡಂಬಡಿಕೆ ಮಾಡಿಕೊಳ್ಳಲಾಯಿತು.

ವಿವಿಧ ಒಡಂಬಡಿಕೆಗೆ ಸಹಿ

ಇದೇ ವೇಳೆ ಸಿಎಫ್‌ಟಿಆರ್‌ಐನೊಂದಿಗೆ ಮೂರು ಕಂಪನಿಗಳು ವಿವಿಧ ಯೋಜನೆಗಳ ಸಂಬಂಧ ಒಡಂಬಡಿಕೆ ಮಾಡಿಕೊಂಡವು. ಕೇರಳದ ವಯನಾಡ್‌ನ ಮಿಲ್ಮಾ ಡೈರಿ ಜೊತೆಗೆ ಯೋಜನೆ ಸಹಯೋಗ, 94 ತಂತ್ರಜ್ಞಾನಗಳಿಗಾಗಿ ಕೇರಳ ರಾಜ್ಯ ಕುಟುಂಬಶ್ರೀ ಜೊತೆಗೆ ತಂತ್ರಜ್ಞಾನ ವರ್ಗಾವಣೆ ಒಪ್ಪಂದ ಹಾಗೂ ಕರ್ನಾಟಕದ ಬೆಂಗಳೂರಿನ ತತ್ವ ನ್ಯೂಟ್ರಿ ಫುಡ್ಸ್ ಪ್ರೈ.ಲಿಮಿಟೆಡ್ ಜೊತೆಗೆ ಯೋಜನಾ ಒಪ್ಪಂದ ಸಂಬಂಧ ಸಹಿ ಪ್ರಕ್ರಿಯೆ ನಡೆಯಿತು. ಅಲ್ಲದೆ, ವಿವಿಧ ಸಂಶೋಧನೆಗಳಿಗಾಗಿ ಸಂಸ್ಥೆಯ ವಿಜ್ಞಾನಿಗಳು ಹಾಗೂ ಅವರ ತಂಡಕ್ಕೆ ಪ್ರಮಾಣ ಪತ್ರಗಳನ್ನು ವಿತರಣೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಸಿಎಫ್‌ಟಿಆರ್‌ಐನ ಇಂಡಸ್ಟ್ರಿ ಮತ್ತು ಬಿಸಿನೆಸ್ ಕನೆಕ್ಟ್ ಪೋರ್ಟಲ್ ಅನ್ನು ಅನಾವರಣ ಮಾಡಲಾಯಿತು.

ದೇಶದ ರಕ್ಷಣಾ ಪಡೆಗಳಿಂದ ತಾಂತ್ರಿಕ ಪರಾಕ್ರಮ ಪ್ರದರ್ಶನ

ನಮ್ಮ ದೇಶದ ರಕ್ಷಣಾ ಪಡೆಗಳು ಯುದ್ಧಭೂಮಿಯಲ್ಲಿ ತಮ್ಮ ತಾಂತ್ರಿಕ ಪರಾಕ್ರಮ ಪ್ರದರ್ಶಿಸಿದ ಕೆಲವೇ ದಿನಗಳಲ್ಲಿ ರಾಷ್ಟ್ರೀಯ ತಂತ್ರಜ್ಞಾನ ದಿನ ಆಚರಿಸುತ್ತಿರುವುದು ಸೂಕ್ತ ಎಂದೇ ಭಾವಿಸಿದ್ದೇನೆ. ಭಯೋತ್ಪಾದಕರ ದಾಳಿಯ ಪ್ರತೀಕಾರಕ್ಕೆ ನಡೆದ ಕಾರ್ಯಾಚರಣೆಯು ಭವಿಷ್ಯದ ಎಲ್ಲಾ ಯುದ್ಧಗಳು ಸುಧಾರಿತ ತಂತ್ರಜ್ಞಾನದೊಂದಿಗೆ ದೂರದಿಂದಲೇ ನಡೆಸಲು ಸದೃಢವಾಗಿರುವುದನ್ನು ಸಾಬೀತುಪಡಿಸಿದೆ.

-ಭಾಸ್ಕರ್ ಕಳಲೆ,
ಅಧ್ಯಕ್ಷರು, ಟೈ ಮೈಸೂರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಯುದ್ಧಕಾಂಡ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಹಿಟ್ (ಕ) + ಹಿಟ್ (ತೆ)	2+2 ಪ್ರದರ್ಶನಗಳು
ಬಾಲಾಜಿ	(ದೂ: 2497199)
ದಿ ಭೂತ್‌ನಿ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ರೆಟ್ರೋ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರೆಟ್ರೋ (ತ)	4 ಪ್ರದರ್ಶನಗಳು
ರಾಜಕಮಲ್	
ಟೂರಿಸ್ಟ್ ಫ್ಯಾಮಿಲಿ (ತ)	4 ಪ್ರದರ್ಶನಗಳು
ಸಂಗಂ	
ರೆಟ್ರೋ (ತ)	4 ಪ್ರದರ್ಶನಗಳು
ಲಿಡೋ	
ಯುದ್ಧಕಾಂಡ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಜಿಲ್ಲಾಸ್ಪತ್ರೆಗಳಲ್ಲಿ ಅಂಗಾಂಗ ಸಂಗ್ರಹ ಕೇಂದ್ರ

ಸರ್ಕಾರದ ಮಾರ್ಗಸೂಚಿ ಬಂದ ನಂತರ ಕ್ರಮ: ಡಾ. ಕುಮಾರಸ್ವಾಮಿ

ಮೈಸೂರು, ಮೇ 13(ಆರ್‌ಕೆ)– ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಅಂಗಾಂಗ ಸಂಗ್ರಹ ಕೇಂದ್ರ (Orgon Collection Centre) ಸ್ಥಾಪಿಸಲು ಸರ್ಕಾರ ಸಿದ್ಧತೆ ನಡೆಸಿದೆ.

ಬೆಂಗಳೂರಿನ ಆರೋಗ್ಯಸೌಧದಲ್ಲಿ ಸೋಮವಾರ ಜೀವ ಸಾರ್ಥಕತೆ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಮೆದುಳು ನಿಷ್ಕ್ರಿಯಗೊಂಡು ಮೃತಪಟ್ಟವರಿಂದ ಅಂಗಾಂಗಗಳನ್ನು ದಾನ ಪಡೆದು ಅಗತ್ಯವಿರುವ ರೋಗಿಗಳಿಗೆ ಅಳವಡಿಸಿ ಜೀವ ಉಳಿಸುವಂತಾಗಬೇಕು ಎಂದು ಸೂಚನೆ ನೀಡಿದ್ದಾರೆ.


ಅದಕ್ಕಾಗಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿರುವ ಜಿಲ್ಲಾಸ್ಪತ್ರೆಗಳಲ್ಲಿ ಕಣ್ಣು, ಲಂಗ್ಸ್, ಚರ್ಮ, ಕಿಡ್ನಿ, ಹೃದಯ, ಲಿವರ್‌ನಂತಹ ಅಂಗಾಂಗಗಳನ್ನು ಪಡೆದು ಸಂಗ್ರಹಿಸಲು ಅಗತ್ಯವಿರುವ ಮೂಲ ಸೌಲಭ್ಯವನ್ನು ಕಲ್ಪಿಸಿಕೊಳ್ಳುವಂತೆಯೂ ಸಚಿವರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಈ ಸಂಬಂಧ ಸರ್ಕಾರವು ಪ್ರತ್ಯೇಕ ಆದೇಶ ಹೊರಡಿಸಲಿದ್ದು, ಅಂಗಾಂಗ ದಾನ ಮಾಡುವವರ ನೋಂದಣಿ ಮಾಡಿಕೊಂಡು ಅಪಘಾತ, ಹೃದಯಾಘಾತ ಅಥವಾ ತೀವ್ರ ರೋಗಗಳಿಂದ ಬಳಲಿ ಮೆದುಳು ನಿಷ್ಕ್ರಿಯವಾದ ವಿಷಯ ತಿಳಿಯುತ್ತಿದ್ದಂತೆಯೇ ನಿಗದಿತ ಅವಧಿಯೊಳಗಾಗಿ ಅಧಿಕೃತ ಪ್ರಕ್ರಿಯೆ ಪೂರ್ಣಗೊಳಿಸಿ ಅಂಗಾಂಗ ಪಡೆದು ಸಂಗ್ರಹಣೆ ಮಾಡುವ ಮತ್ತು ಅಗತ್ಯವಿರುವ ರೋಗಿಗಳಿಗೆ ಟ್ರಾನ್ಸ್‌ಪ್ಲಾಂಟೇಷನ್ ಮಾಡುವ ಸೌಲಭ್ಯ ಮಾಡಿಕೊಳ್ಳುವಂತೆಯೂ ಸಚಿವರು ತಿಳಿಸಿದ್ದಾರೆ.

ಈ ಸಂಬಂಧ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಹೆಚ್.ಕೆ. ಕುಮಾರಸ್ವಾಮಿ, ಮೈಸೂರಿನ ಕೆಆರ್‌ಎಸ್ ರಸ್ತೆಯಲ್ಲಿರುವ ಜಿಲ್ಲಾಸ್ಪತ್ರೆಯಲ್ಲಿ ಆರ್ಗನ್ ಕಲೆಕ್ಷನ್ ಸೆಂಟರ್‌ಗೆ ಎಲ್ಲಾ ಸೌಲಭ್ಯಗಳಿರುವುದರಿಂದ ಈ ಕುರಿತು ಸರ್ಕಾರದಿಂದ ಸ್ಪಷ್ಟ ಮಾರ್ಗಸೂಚಿ ಬಂದ ತಕ್ಷಣ ಸೆಂಟರ್ ಅನ್ನು ವ್ಯವಸ್ಥೆ ಮಾಡಲಾಗುವುದು ಎಂದರು.

ಇತ್ತೀಚೆಗೆ ಡಯಾಲಿಸಿಸ್‌ನಂತಹ ರೋಗಿಗಳು ಜಾಸ್ತಿಯಾಗುತ್ತಿದ್ದು, ದಾನಿಗಳಿಂದ ಸಂಗ್ರಹಿಸಿದ ಅಂಗಾಂಗಗಳನ್ನು ನಿಗದಿತ ಅವಧಿಯೊಳಗೆ ಜೋಡಣೆ ಮಾಡಿ ಪ್ರಾಣ ರಕ್ಷಿಸುವ ಕೆಲಸವನ್ನು ಮಾಡುತ್ತೇವೆ ಎಂದರು.

ಆಂಧ್ರಪ್ರದೇಶ ಅಬಕಾರಿ ಹಗರಣ: ಮೈಸೂರಿನಲ್ಲಿ ಆರೋಪಿ ಬಾಲಾಜಿ ಗೋವಿಂದಪ್ಪ ಬಂಧನ



ಗೋವಿಂದಪ್ಪ

ಅಮರಾವತಿ: ಆಂಧ್ರ ಪ್ರದೇಶದಲ್ಲಿ ಹಿಂದಿನ ವೈಎಸ್‌ಆರ್‌ಸಿಪಿ ಆಡಳಿತದ ಅವಧಿಯಲ್ಲಿ ನಡೆದಿದೆ ಎನ್ನಲಾದ 3,200 ಕೋಟಿ ರೂ. ಅಬಕಾರಿ ಹಗರಣದ ಆರೋಪಗಳ ತನಿಖೆಗಾಗಿ ರಚಿಸಲಾದ ಆಂಧ್ರ ಪ್ರದೇಶ ಪೊಲೀಸ್ ವಿಶೇಷ ತನಿಖಾ ತಂಡ (ಎಸ್‌ಐಟಿ) ಪ್ರಕರಣದ ಆರೋಪಿ ಬಾಲಾಜಿ ಗೋವಿಂದಪ್ಪ ಅವರನ್ನು ಮಂಗಳವಾರ ಮೈಸೂರಿನಲ್ಲಿ ಬಂಧಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಕರಣದ ಹಲವಾರು ಆರೋಪಿಗಳಲ್ಲಿ ಗೋವಿಂದಪ್ಪ ಕೂಡ ಒಬ್ಬರು. ಅವರು ಭಾರತಿ ಸಿಮೆಂಟ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರಾಗಿದ್ದಾರೆ.

ಗೋವಿಂದಪ್ಪ ಅವರನ್ನು ಇಂದು ಮೈಸೂರಿನಲ್ಲಿ ಬಂಧಿಸಲಾಗಿದೆ ಎಂದು ಅಧಿಕಾರಿ ಪಿಟಿಐಗೆ ದೃಢಪಡಿಸಿದ್ದಾರೆ. ಒಂದು ಮೂಲದ ಪ್ರಕಾರ, ಎಸ್‌ಐಟಿ ಅಧಿಕಾರಿಗಳು ಮೂರು ದಿನಗಳ ಹಿಂದೆ ಹೈದರಾಬಾದ್‌ನಲ್ಲಿರುವ ಗೋವಿಂದಪ್ಪ ಅವರ ನಿವಾಸವನ್ನು ಶೋಧಿಸಿದ್ದರು. ನಂತರ ಇಂದು ಅವರನ್ನು ಬಂಧಿಸಲಾಯಿತು. ಅಬಕಾರಿ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಪೊಲೀಸರ ಆರ್ಥಿಕ ಅಪರಾಧಗಳ ಸಿಐಡಿ ಸೆಪ್ಟೆಂಬರ್ 2024ರಂದು ಎಫ್‌ಐಆರ್ ದಾಖಲಿಸಿದ ಬೆನ್ನಲ್ಲೇ, ಇತ್ತೀಚೆಗೆ ಜಾರಿ ನಿರ್ದೇಶನಾಲಯವು ಹಣ ಅಕ್ರಮ ವರ್ಗಾವಣೆ ಪ್ರಕರಣವನ್ನು ದಾಖಲಿಸಿದೆ.

ಅಬಕಾರಿ ಹಗರಣದ ಪ್ರಮುಖ ಆರೋಪಿ ಕಾಸಿರೆಡ್ಡಿ ರಾಜ ಶೇಖರ್ ರೆಡ್ಡಿಯ ಇತ್ತೀಚಿನ ರಿಮಾಂಡ್ ವರದಿಯಲ್ಲಿ, ಎಸ್‌ಐಟಿ 2019 ಮತ್ತು 2024 ರ ನಡುವೆ ಪ್ರಮುಖ ಪಾತ್ರ ವಹಿಸಿದ್ದಾರೆ ಎನ್ನಲಾದ ಹಲವಾರು ಜನರನ್ನು ಹೆಸರಿಸಿದೆ. ವಾಸುದೇವ ರೆಡ್ಡಿ, ಸತ್ಯ ಪ್ರಸಾದ್, ರಾಜಂಪೇಟೆ ಸಂಸದ ಪಿವಿ ಮಿಥುನ್ ರೆಡ್ಡಿ, ವೈಎಸ್‌ಆರ್‌ಸಿಪಿ ಮಾಜಿ ಸಂಸದ ವಿ ವಿಜಯಸಾಯಿ ರೆಡ್ಡಿ, ಸಜ್ಜಲ ಶ್ರೀಧರ್ ರೆಡ್ಡಿ, ನಿವೃತ್ತ ಐಎಎಸ್ ಅಧಿಕಾರಿ ಧನುಂಜಯ ರೆಡ್ಡಿ, ಕೃಷ್ಣ ಮೋಹನ್ ರೆಡ್ಡಿ ಮತ್ತು ಗೋವಿಂದಪ್ಪ ಅವರ ಹೆಸರುಗಳು ಪಟ್ಟಿಯಲ್ಲಿವೆ.

ಅಕ್ಟೋಬರ್‌ನಲ್ಲಿ ಅಂಗನವಾಡಿ ಸುವರ್ಣ ಮಹೋತ್ಸವ ಆಚರಿಸಲು ನಿರ್ಧಾರ



ಬೆಂಗಳೂರು: ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳು ಆರಂಭಗೊಂಡು ಅಕ್ಟೋಬರ್‌ಗೆ 50 ವರ್ಷಗಳು ತುಂಬಲಿವೆ. ಈ ಹಿನ್ನೆಲೆಯಲ್ಲಿ ಸುವರ್ಣ ಮಹೋತ್ಸವ ಆಚರಣೆಗೆ ನಿರ್ಧರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾಹಿತಿ ನೀಡಿದ್ದಾರೆ.

ವಿಧಾನಸೌಧ ಸಮ್ಮೇಳನ ಸಭಾಂಗಣದಲ್ಲಿ ಏರ್ಪಡಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಶಿಶು ವಿಕಾಸ ಯೋಜನೆ ಬೆಂಗಳೂರು ಮತ್ತು ಮೈಸೂರು ವಿಭಾಗದ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅರಮನೆ ಮೈದಾನದಲ್ಲಿ ಕಾರ್ಯಕ್ರಮ ಆಯೋಜಿಸಲು ತೀರ್ಮಾನಿಸಿದ್ದೇವೆ. ಕೇಂದ್ರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಅನ್ನಪೂರ್ಣ ದೇವಿಯವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಈ ಸಂಬಂಧ ನಾವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿದ್ದೇವೆ ಎಂದರು

ಸಾಮಾಜಿಕ ಜಾಲತಾಣದಲ್ಲಿ ಪ್ರತೀಕಾರದ ಹೇಳಿಕೆ; ಹತ್ತು ಮಂದಿ ವಿರುದ್ಧ ಕೇಸ್


ಮೈಸೂರು, ಮೇ 13– ನಗರದ ಕ್ಯಾತಮಾರನಹಳ್ಳಿ ಕಾರ್ತಿಕ್ ಹತ್ಯೆಗೆ ಪ್ರತೀಕಾರದ ಹೇಳಿಕೆಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದ ಹತ್ತು ಮಂದಿ ವಿರುದ್ಧ ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಇಂದು ನಾಲ್ವರು ಹಾಗೂ ನಿನ್ನೆ ಆರು ಮಂದಿಯನ್ನು ವಶಕ್ಕೆ ಪಡೆದು, ಅವರ ವಿರುದ್ಧ ಪ್ರಕರಣ ದಾಖಲಿಸಿರುವ ಪೊಲೀಸರು, ಸಮಾಜದ ಶಾಂತಿ ಹಾಗೂ ಕಾನೂನು–ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಪ್ರಚೋದನಕಾರಿ ಪೋಸ್ಟ್‌ಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡರೂ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಇತ್ತೀಚೆಗೆ ಮೈಸೂರು ತಾಲೂಕು ವರುಣ ಗ್ರಾಮದ ಹೊರವಲಯದಲ್ಲಿ ಕ್ಯಾತಮಾರನಹಳ್ಳಿಯ ರೌಡಿಶೀಟರ್ ಕಾರ್ತಿಕ್‌ನನ್ನು ಗುಂಪೊಂದು ಬರ್ಬರವಾಗಿ ಹತ್ಯೆ ಮಾಡಿ, ಪರಾರಿಯಾಗಿತ್ತು. ತಕ್ಷಣ ಪೊಲೀಸರು ಕಾರ್ಯಾಚರಣೆ ಆರಂಭಿಸಿ, ಆರೋಪಿಗಳಾದ ಪ್ರವೀಣ್ ಹಾಗೂ ಸಹಚರರನ್ನು ಬಂಧಿಸಿದರು.

ಆದರೂ ಕಾರ್ತಿಕ್ ಸಹಚರರು ಪ್ರತೀಕಾರಕ್ಕೆ ಹವಣಿಸುತ್ತಿದ್ದಾರೆಂದು ಪೊಲೀಸರಿಗೆ ಮಾಹಿತಿ ತಿಳಿದಿದೆ. ಇದನ್ನು ಪುಷ್ಟೀಕರಿಸುವಂತೆ ಸಾಮಾಜಿಕ ಜಾಲತಾಣದಲ್ಲಿ 'ಕಾರ್ತಿಕ್ ಕೊಲೆ ಆರೋಪಿಗಳನ್ನು ಹೊಡೆದೇ ಹೊಡೆಯುತ್ತೇವೆ. ನಿಮಗೂ ಬಂತು ಕೇಡುಗಾಲ' ಎಂಬ ಪೋಸ್ಟ್ ವೈರಲ್ ಆಗಿದೆ ಈ ಹಿನ್ನೆಲೆಯಲ್ಲಿ ಪೊಲೀಸರು ಕಾರ್ಯಾಚರಣೆ ಆರಂಭಿಸಿ, ಪ್ರಚೋದನಕಾರಿ ಪೋಸ್ಟ್‌ಗಳನ್ನು ಹಂಚಿಕೊಳ್ಳುವವರನ್ನು ಪತ್ತೆ ಮಾಡಿ, ಅವರ ವಿರುದ್ಧ ಶಿಸ್ತು ಕ್ರಮಕ್ಕೆ ಮುಂದಾಗಿದ್ದಾರೆ.

ಸಿಬಿಎಸ್‌ಇನಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು, ಮೇ 13– ಹತ್ತನೇ ತರಗತಿ ಸಿಬಿಎಸ್‌ಸಿ ಪರೀಕ್ಷೆಯಲ್ಲಿ ಸಿದ್ಧಾರ್ಥನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆ ವಿದ್ಯಾರ್ಥಿ ನಿತಿನ್ ಮಾಲಂಗಿ ಶೇ.91.6ರಷ್ಟು ಅಂಕ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾನೆ. ಈತ ಮೈಸೂರು ತಾಲೂಕು ಕೀಳನಪುರ ಸರ್ಕಾರಿ ಶಾಲೆ ಮುಖ್ಯ ಶಿಕ್ಷಕ ಮಾಲಂಗಿ ಸುರೇಶ್ ಹಾಗೂ ಜೆಎಸ್‌ಎಸ್ ಬಾಲಜಗತ್ ಶಾಲೆಯ ಮುಖ್ಯ ಶಿಕ್ಷಕಿ ಮಂಜುಳಾ ಸುರೇಶ್ ದಂಪತಿ ಪುತ್ರ.

ಅಖಿಲೇಶ್‌ಗೆ 596 ಅಂಕ



ಮೈಸೂರು, ಮೇ 13– ಮೈಸೂರಿನ ಭಾರತೀಯ ವಿದ್ಯಾ ಭವನ ಶಾಲೆಯ ವಿದ್ಯಾರ್ಥಿ ಅಖಿಲೇಶ್, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 596(ಶೇ.95.36) ಅಂಕ ಗಳಿಸಿದ್ದಾನೆ. ಈತ ಮಂಜುನಾಥ ವೈ.ಟಿ ಹಾಗೂ ಅಶ್ವಿನಿ ಅವರ ಪುತ್ರ.

ಸಿಬಿಎಸ್‌ಇನಲ್ಲಿ ಅತ್ಯುನ್ನತ ಶ್ರೇಣಿ



ಮೈಸೂರು, ಮೇ 13– ಮೈಸೂರು ವೆಸ್ಟ್ ಲಯನ್ಸ್ ಸೇವಾ ನಿಕೇತನ ಶಾಲೆಯ ವಿದ್ಯಾರ್ಥಿನಿ ಸಿಂಚನ ಆರ್., ಸಿಬಿಎಸ್‌ಇ ಹತ್ತನೇ ತರಗತಿ ಪರೀಕ್ಷೆಯಲ್ಲಿ ಶೇ.91.5 ಅಂಕಗಳೊಂದಿಗೆ ಅತ್ಯುನ್ನತ ಶ್ರೇಣಿ ಪಡೆದಿದ್ದಾಳೆ. ಈಕೆ ರವಿಚಂದ್ರ ಹಾಗೂ ಮಹೇಶ್ವರಿ ದಂಪತಿ ಪುತ್ರಿ.

ಲಿಖಿತಾಗೆ 596 ಅಂಕ



ಮೈಸೂರು, ಮೇ 13– ಮೈಸೂರಿನ ಸದ್ವಿದ್ಯಾ ಶಾಲೆಯ ವಿದ್ಯಾರ್ಥಿನಿ ಲಿಖಿತಾ.ಡಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 596 ಅಂಕ ಪಡೆದಿದ್ದಾಳೆ. ಈಕೆ ಎನ್.ಆರ್.ಮೊಹಲ್ಲಾ ನಿವಾಸಿ ದಯಾನಂದ ಹಾಗೂ ಛಾಯಾ ದಂಪತಿ ಪುತ್ರಿ.

ಪುನೀತ್ ಕೆರೆಹಳ್ಳಿಗೆ ಬೆದರಿಕೆ; ವ್ಯಕ್ತಿ ವಿರುದ್ಧ ಪ್ರಕರಣ

ಮೈಸೂರು, ಮೇ 13– ಹಿಂದೂ ಕಾರ್ಯಕರ್ತ ಪುನೀತ್ ಕೆರೆಹಳ್ಳಿಗೆ ಜೀವ ಬೆದರಿಕೆ ಹಾಕಿದ ಆರೋಪದಡಿ ವ್ಯಕ್ತಿಯೊಬ್ಬನ ವಿರುದ್ಧ ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಉದಯಗಿರಿ ನಿವಾಸಿ ಅಕ್ರಂ ಖಾನ್ ವಿರುದ್ಧ ಪ್ರಕರಣ ದಾಖಲಾಗಿದ್ದು, ಈತನನ್ನು ಪೊಲೀಸರು ಬಂಧಿಸಿದ ನಂತರ ಜಾಮೀನಿನ ಮೇಲೆ ಬಿಡುಗಡೆಗೊಂಡಿರುವುದಾಗಿ ತಿಳಿದುಬಂದಿದೆ. ಪುನೀತ್ ಕೆರೆಹಳ್ಳಿಗೆ ವಾಟ್ಸಆಪ್ ಮೂಲಕ ಕರೆ ಮಾಡಿ ಇನ್ನು ಎರಡು ತಿಂಗಳಲ್ಲಿ ಇದ್ರಿಶ್ ಪಾಷಾ ಸಾವಿಗೆ ಪ್ರತೀಕಾರವಾಗಿ ನಿನ್ನ ಮುಗಿಸುತ್ತೇವೆ ಎಂದು ಅಕ್ರಂ ಖಾನ್ ಜೀವ ಬೆದರಿಕೆ ಹಾಕಿದ್ದ. ಅಲ್ಲದೆ ಸಾಮಾಜಿಕ ಜಾಲತಾಣದಲ್ಲೂ 'next you' (ನೆಕ್ಸ್ಟ್ ಯೂ) ಎಂದು ಪೋಸ್ಟ್ ಹಂಚಿಕೊಂಡಿದ್ದ. ಇದನ್ನು ಗಮನಿಸಿದ ಉದಯಗಿರಿ ಠಾಣೆ ಸಾಮಾಜಿಕ ಮಾಧ್ಯಮಗಳ ನಿಗಾ ವಿಭಾಗದ ಸಿಬ್ಬಂದಿ, ಅಕ್ರಂ ಖಾನ್ ತಮ್ಮ ಠಾಣೆ ವ್ಯಾಪ್ತಿಯ ನಿವಾಸಿ ಎಂಬುದನ್ನು ಖಚಿತಪಡಿಸಿಕೊಂಡು ಕ್ರಮ ಕೈಗೊಂಡಿದ್ದಾರೆ.

ಶಿಕ್ಷಣ ಕ್ಷೇತ್ರ ಖಾಸಗೀಕರಣಕ್ಕೆ ಪರೋಕ್ಷ ಬೆಂಬಲ ಆರೋಪ

ಮೈಸೂರಲ್ಲಿ ಎಐಡಿಎಸ್‌ಓನಿಂದ ಸಹಿ ಸಂಗ್ರಹ ಅಭಿಯಾನ

ಮೈಸೂರು, ಮೇ 13(ಎಸ್‌ಪಿಎನ್)– ಶಿಕ್ಷಣ ಕ್ಷೇತ್ರದ ಖಾಸಗೀಕರಣಕ್ಕೆ ರಾಜ್ಯ ಸರ್ಕಾರ ಪರೋಕ್ಷವಾಗಿ ಬೆಂಬಲ ನೀಡುತ್ತಿದೆ ಎಂದು ಆರೋಪಿಸಿ ಮೈಸೂರು ರೈಲ್ವೆ ನಿಲ್ದಾಣದ ಮುಂಭಾಗ ಎಐಡಿಎಸ್‌ಓ ಮೈಸೂರು ಜಿಲ್ಲಾ ಸಮಿತಿ ಪದಾಧಿಕಾರಿಗಳು ಸಹಿಸಂಗ್ರಹ ಅಭಿಯಾನ ನಡೆಸಿದರು.

ಸಹಿ ಸಂಗ್ರಹ ಅಭಿಯಾನದ ನೇತೃತ್ವ ವಹಿಸಿದ್ದ ಎಐಡಿಎಸ್‌ಓ ರಾಜ್ಯ ಖಜಾಂಚಿ ಸುಭಾಷ್ ಬೆಟ್ಟದಕೊಪ್ಪ ಮಾತನಾಡಿ, ರಾಜ್ಯ ಸರ್ಕಾರ ಕಡಿಮೆ ದಾಖಲಾತಿಯ ನೆಪವೊಡ್ಡಿ 6,200 ಕ್ಕಿಂತ ಹೆಚ್ಚು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ಈ ಸಾಲಿನಿಂದ ಮುಚ್ಚಲು ಮುಂದಾಗಿದೆ. ಈ ನಡುವೆಯೇ ಈ ಶೈಕ್ಷಣಿಕ ವರ್ಷ 473 ಖಾಸಗಿ ಶಾಲೆಗಳಿಗೆ ಶಿಕ್ಷಣ ಇಲಾಖೆ ಅನುಮತಿ ನೀಡಿರುವುದು ಹಲವು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ ಎಂದು ತಿಳಿಸಿದರು.

ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯ ಸತ್ಯಶೋಧನಾ ಸಮಿತಿ ರಚಿಸಿ, ಈ ಸಮಿತಿ ಮೂಲಕ ಮೈಸೂರು ಜಿಲ್ಲೆಯಲ್ಲಿ ಕಡಿಮೆ ದಾಖಲಾತಿಯಿರುವ 30 ಸರ್ಕಾರಿ ಶಾಲೆಗಳಿಗೆ ಪರಿಶೀಲಿಸಿದಾಗ ಸರ್ಕಾರಿ ಶಾಲೆಯ ಪರಿಸ್ಥಿತಿ ತುಂಬಾ ಕೆಟ್ಟದಾಗಿದೆ. ಈ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದ್ದರೂ ಅದನ್ನು ಮುಚ್ಚಲು ಹೊರಟಿದೆ ಎಂದು ದೂರಿದರು.

ಪೋಷಕರಲ್ಲಿ ಇಂಗ್ಲಿಷ್ ಪ್ರೇಮದ ಮನಸ್ಥಿತಿಯಿಂದಾಗಿ ಖಾಸಗಿ ಶಾಲೆಗಳ ಆರಂಭಕ್ಕೆ ಅನುಮತಿ ನೀಡುವುದು ಅನಿವಾರ್ಯ ಎಂಬ ನಿಲುವು ರಾಜ್ಯ ಸರ್ಕಾರದ್ದು. ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಕುಸಿತಕ್ಕೆ ಪೋಷಕರನ್ನೇ ಹೊಣೆಗಾರರನ್ನಾಗಿ ಮಾಡುತ್ತಿರುವುದು ಎಷ್ಟು ಸರಿ?. ಮೂಲ ಸೌಕರ್ಯ ಉತ್ತಮವಾಗಬೇಕೆಂದು ತಜ್ಞರು ರಾಜ್ಯ ಸರ್ಕಾರಕ್ಕೆ ಮನವರಿಕೆ ಮಾಡಿಕೊಟ್ಟರೂ ಇದರ ಬಗ್ಗೆ ಆಲೋಚನೆ ಮಾಡುತ್ತಿಲ್ಲ ಎಂದು ಆರೋಪಿಸಿದರು.

ಈ ವೇಳೆ ಎಐಡಿಎಸ್‌ಓ ಮೈಸೂರು ಜಿಲ್ಲಾ ಸಮಿತಿ ಅಧ್ಯಕ್ಷೆ ಚಂದ್ರಕಲಾ, ಕಾರ್ಯದರ್ಶಿ ನಿತಿನ್, ಉಪಾಧ್ಯಕ್ಷೆ ಸ್ವಾತಿ, ಪದಾಧಿಕಾರಿಗಳಾದ ಚಂದನ, ಚಂದ್ರಿಕಾ, ಹೇಮಾ, ದಿಶಾ, ಅಂಜಲಿ ಹಾಗೂ ಕಾರ್ಯಕರ್ತರುಗಳಾದ ದೀಕ್ಷಾ, ಆರ್ತಿ, ಪ್ರಿಯಾಂಕ, ಚೈತ್ರಾ, ಆರತಿ ಸೇರಿದಂತೆ ಹಲವು ಭಾಗವಹಿಸಿದ್ದರು.



ಶಿಕ್ಷಣಕ್ಷೇತ್ರ ಖಾಸಗೀಕರಣಕ್ಕೆ ರಾಜ್ಯಸರ್ಕಾರ ಪರೋಕ್ಷ ಬೆಂಬಲಿಸುತ್ತಿದೆ ಎಂದು ಆರೋಪಿಸಿ ಎಐಡಿಎಸ್‌ಓ ಪದಾಧಿಕಾರಿಗಳು ಸಹಿಸಂಗ್ರಹ ಅಭಿಯಾನ ನಡೆಸಿದರು.

10ನೇ ತರಗತಿ ಸಿಬಿಎಸ್‌ಇ ಪರೀಕ್ಷೆ ಫಲಿತಾಂಶ

ಮೈಸೂರಿನ ಸಿದ್ಧಾರ್ಥನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆಗೆ ಶೇ.100ರಷ್ಟು ಫಲಿತಾಂಶ



ಪುನರ್ವಿ, ಶರಣ್ಯಾ, ಲೇಕಿಶಾ, ನಿಶಾಂತ್, ಮೇನಜಾ
ಪ್ರಹ್ಲಾದ್, ಸಾನ್ವಿ, ದಿಶಾ, ಜಾಗೃತಿ, ಹಾಸಿನಿ

ಮೈಸೂರು, ಮೇ13(ಜಿಎ)–10ನೇ ತರಗತಿ ಸಿಬಿಎಸ್‌ಇ ಪರೀಕ್ಷಾ ಫಲಿತಾಂಶ ಮಂಗಳವಾರ ಪ್ರಕಟವಾಗಿದ್ದು, ಮೈಸೂರಿನ ಸಿದ್ಧಾರ್ಥನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆಯು ಶೇ.100ರಷ್ಟು ಫಲಿತಾಂಶ ಗಳಿಸಿದೆ.

ಜೆಎಸ್‌ಎಸ್ ಪಬ್ಲಿಕ್ ಶಾಲೆಯು ನಿರಂತರವಾಗಿ 33 ವರ್ಷಗಳಿಂದ ಪ್ರತಿಶತ ಶೇ.100 ರಷ್ಟು ಫಲಿತಾಂಶವನ್ನು ಪಡೆದುಕೊಂಡು ಬರುತ್ತಿದ್ದು, ಈ ವರ್ಷವೂ ಶಾಲೆಯ 100 ವಿದ್ಯಾರ್ಥಿಗಳಲ್ಲಿ 53 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿ, 44 ವಿದ್ಯಾರ್ಥಿಗಳು ಪ್ರಥಮ ದರ್ಜೆ, 3 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ 24 ವಿದ್ಯಾರ್ಥಿಗಳು ಗರಿಷ್ಠ ಶೇ.90ಕ್ಕಿಂತ ಅಧಿಕ ಅಂಕಗಳನ್ನು ಪಡೆದುಕೊಂಡಿದ್ದಾರೆ.

ವಿದ್ಯಾರ್ಥಿಗಳ ನಿರಂತರ ಪರಿಶ್ರಮ, ಶ್ರದ್ಧೆ, ಆಸಕ್ತಿಯ ಕಲಿಕೆಯಿಂದ ಹಾಗೂ ಶಿಕ್ಷಕರ ಅತ್ಯುತ್ತಮ ಮಾರ್ಗದರ್ಶನದಿಂದ ಈ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಸಂದಿದೆ. ಸಾಧನೆಗೈದ ಎಲ್ಲಾ ವಿದ್ಯಾರ್ಥಿಗಳನ್ನು ಹಾಗೂ ಸಹಕಾರ ನೀಡಿದ ಪೋಷಕರನ್ನು, ಜೆಎಸ್‌ಎಸ್ ಮಹಾವಿದ್ಯಾಪೀಠ, ಶಾಲೆಯ ಪ್ರಾಂಶುಪಾಲರು, ಉಪ ಪ್ರಾಂಶುಪಾಲರು ಮತ್ತು ಬೋಧಕ ವರ್ಗದವರು ಅಭಿನಂದಿಸಿದ್ದಾರೆ.

10ನೇ ತರಗತಿ ಸಿಬಿಎಸ್‌ಇನಲ್ಲಿ ಧ್ರುಪಧ್ ಉನ್ನತ ಶ್ರೇಣಿ



ಮೈಸೂರು: ಮೈಸೂರಿನ ಶ್ರೀರಾಂಪುರ ಬಡಾವಣೆಯಲ್ಲಿರುವ ಚೈತ್ರ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿ ಎಂ.ಬಿ.ಧ್ರುಪಧ್ ಮಂಗಳವಾರ ಪ್ರಕಟವಾದ 10ನೇ ತರಗತಿ ಸಿಬಿಎಸ್‌ಇ ಪರೀಕ್ಷೆ ಫಲಿತಾಂಶದಲ್ಲಿ ಶೇ.95.5 ರಷ್ಟು ಅಂಕ ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ಇಂಗ್ಲಿಷ್‌ನಲ್ಲಿ–96, ಹಿಂದಿ–96, ಗಣಿತ–94, ವಿಜ್ಞಾನ–98, ಸಮಾಜ ಶಾಸ್ತ್ರ–93 ಹಾಗೂ ಇನ್ಫರ್ಮೇಷನ್ ಟೆಕ್ನಾಲಜಿಯಲ್ಲಿ 96 ಅಂಕ ಪಡೆದಿರುವ ಈತ ಮೈಸೂರಿನ ಕೇರ್ಗಳ್ಳಿಯ ರಿಷಭ್ ಸಿದ್ದಿ ಬಡಾವಣೆಯ ನಿವಾಸಿ ಎಂ.ಎಸ್.ಬಾಲಕೃಷ್ಣ ರಾವ್ ಮತ್ತು ಎ.ಲಾವಣ್ಯ ದಂಪತಿಯ ಪುತ್ರ.